ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

43

ಏಪ್ರಿಲ್ 13 ಗುರುವಾರ 2023

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 43 | ಸಂಚಿಕೆ: 353 | ಪುಟಗಳು: 12
ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಬಸ್‌ಗೆ ಬೈಕ್ ಡಿಕ್ಕಿ: ಓರ್ವ ಸಾವು

ಕ್ರೈಂ ಬಾಕ್ಸ್

ಮೈಸೂರು,ಏ.12–ನಿಂತಿದ್ದ ಬಸ್‌ಗೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಓರ್ವ ಸಾವನ್ನಪ್ಪಿ, ಇಬ್ಬರು ಗಾಯಗೊಂಡ ಘಟನೆ ಮೈಸೂರು ತಾಲೂಕು ಮರಟಿಕ್ಯಾತನಹಳ್ಳಿ ಗೇಟ್ ಬಳಿ ಸಂಭವಿಸಿದೆ. ಹೆಚ್.ಡಿ.ಕೋಟೆ ತಾಲೂಕು ಗೂಳಿಕಟ್ಟೆ ಗ್ರಾಮದ ನವೀನ್(19) ಅಪಘಾತದಲ್ಲಿ ಸಾವನ್ನಪ್ಪಿದ್ದು, ಹಿಂಬದಿ ಸವಾರರಾದ ಮನು(20) ಮತ್ತು ಅರುಣ್(20) ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಮೂವರು ಏಪ್ರಿಲ್ 10ರಂದು ಮಧ್ಯಾಹ್ನ ತಮ್ಮ ಗ್ರಾಮದಿಂದ ಹೀರೋ ಸ್ಪ್ಲೆಂಡರ್ ಪ್ಲಸ್ ಬೈಕ್ (ಕೆಎ 45–ಇಬಿ 4494)ನಲ್ಲಿ ಚಾಮುಂಡಿಬೆಟ್ಟಕ್ಕೆ ಬಂದು ತಮ್ಮ ಗ್ರಾಮಕ್ಕೆ ಹಿಂತಿರುಗುತ್ತಿದ್ದ ವೇಳೆ ಮೈಸೂರು–ಗದ್ದಿಗೆ ರಸ್ತೆಯ ಮರಟಿಕ್ಯಾತನಹಳ್ಳಿ ಗೇಟ್ ಬಳಿ ರಸ್ತೆಯಂಚಿನಲ್ಲಿ ನಿಂತಿದ್ದ ಖಾಸಗಿ ಬಸ್ (ಕೆಎ 51–ಸಿ 4867)ಗೆ ಬೈಕ್ ಡಿಕ್ಕಿ ಹೊಡೆದಿದೆ. ಈ ಅಪಘಾತದಲ್ಲಿ ಬೈಕ್ ಚಾಲನೆ ಮಾಡುತ್ತಿದ್ದ ನವೀನ್ ಸ್ಥಳದಲ್ಲೇ ಮೃತಪಟ್ಟಿದ್ದು, ಮತ್ತಿಬ್ಬರು ಹಿಂಬದಿ ಸವಾರರು ಕೆ.ಆರ್. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಜಯಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೂರು ಕೆಜಿ ಗಾಂಜಾ ವಶ: ಪ್ರಕರಣ ದಾಖಲು

ಮೈಸೂರು, ಏ. 12– ಇಬ್ಬರು ಗಾಂಜಾ ಮಾರಾಟಗಾರರನ್ನು ಬಂಧಿಸಿರುವ ಸಿಸಿಬಿ ಪೊಲೀಸರು ಒಟ್ಟು 3 ಕೆಜಿ 570 ಗ್ರಾಂ ಗಾಂಜಾ ಹಾಗೂ ಬೈಕ್ ವಶಪಡಿಸಿಕೊಂಡು ಮೂವರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ಮೈಸೂರಿನ ಮಂಡಿಮೊಹಲ್ಲಾ ನಿವಾಸಿ ಮುರಾದ್ ಸೇಟ್(23) ಮತ್ತು ಗೌಸಿಯಾನಗರದ ಮಹಮ್ಮದ್ ಅಫ್ತಾಬ್(21) ಎಂಬುವರು ಅನುಮಾನಾಸ್ಪದವಾಗಿ ಶೇಷಾದ್ರಿ ಐಯ್ಯರ್ ರಸ್ತೆಯಲ್ಲಿರುವ ನರ್ಸ್ ಕ್ವಾರ್ಟರ್ಸ್ ಆವರಣದ ಖಾಲಿ ಜಾಗದಲ್ಲಿ ಏಪ್ರಿಲ್ 10ರಂದು ಮಧ್ಯಾಹ್ನ 2 ಗಂಟೆಯಲ್ಲಿ ನಿಂತಿದ್ದಾಗ ದಾಳಿ ನಡೆಸಿದ ಸಿಸಿಬಿ ಇನ್ಸ್‌ಪೆಕ್ಟರ್ ಅನೂಪ್ ಮಾದಪ್ಪ ನೇತೃತ್ವದ ತಂಡ ಇವರಿಬ್ಬರನ್ನು ತಪಾಸಣೆ ಮಾಡಿದಾಗ ಒಟ್ಟು 3 ಕೆಜಿ 570 ಗ್ರಾಂ ಗಾಂಜಾ ದೊರೆತಿದೆ. ಇದರೊಂದಿಗೆ ಅವರ ಬಳಿ ಇದ್ದ ಟಿವಿಎಸ್ ಸ್ಟಾರ್ ಸಿಟಿ ಬೈಕ್ (ಕೆಎ 55–ಇ 4463) ವಶಪಡಿಸಿಕೊಂಡು ಇಬ್ಬರನ್ನೂ ಬಂಧಿಸಿದ್ದಾರೆ. ಇವರುಗಳು ಮಹಮ್ಮದ್ ನಿಜಾಮುದ್ದೀನ್ ಅಲಿಯಾಸ್ ನಿಜಾಮ್ ಎಂಬಾತನಿಂದ ಗಾಂಜಾ ಖರೀದಿಸಿರುವುದಾಗಿ ವಿಚಾರಣೆ ವೇಳೆ ತಿಳಿಸಿದ ಹಿನ್ನೆಲೆಯಲ್ಲಿ ಈ ಮೂವರ ವಿರುದ್ಧ ಅನೂಪ್ ಮಾದಪ್ಪ ಮಂಡಿ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಆನ್‌ಲೈನ್‌ನಲ್ಲಿ 3.23 ಲಕ್ಷ ರೂ. ವಂಚನೆ

ಮೈಸೂರು, ಏ. 12– ಬ್ಯಾಂಕ್ ಖಾತೆಗೆ ಕೆವೈಸಿ ಅಪ್‌ಲೋಡ್ ಮಾಡುವಂತೆ ಮೆಸೇಜ್ ರವಾನಿಸಿ ವ್ಯಕ್ತಿಯೋರ್ವರ ಖಾತೆಯಿಂದ 3.23 ಲಕ್ಷ ರೂ. ಅಕ್ರಮವಾಗಿ ವರ್ಗಾವಣೆ ಮಾಡಿಕೊಂಡಿರುವ ಬಗ್ಗೆ ವರದಿಯಾಗಿದೆ.



ಮೈಸೂರಿನ ಕುವೆಂಪುನಗರ ನಿವಾಸಿ ಟಿ.ಆರ್. ದೊರೆಸ್ವಾಮಿ(83) ಎಂಬುವರ ಮೊಬೈಲ್‌ಗೆ ಕೆವೈಸಿ ಅಪ್‌ಡೇಟ್ ಮಾಡುವಂತೆಯೂ ಇಲ್ಲದಿದ್ದರೆ ಬ್ಯಾಂಕ್ ಖಾತೆ ಬ್ಲಾಕ್ ಆಗುತ್ತದೆ ಎಂದು 9901843278 ನಂಬರ್‌ನಿಂದ ಸಂದೇಶ ರವಾನೆಯಾಗಿದೆ. ಸದರಿ ಸಂದೇಶದಲ್ಲಿದ್ದ ಸಂಖ್ಯೆಗೆ ದೊರೆಸ್ವಾಮಿಯವರು ಕರೆ ಮಾಡಿ ಕೆವೈಸಿ ಮಾಹಿತಿಗಳನ್ನು ನೀಡುತ್ತಿದ್ದಂತೆಯೇ ಅವರ 3 ಬ್ಯಾಂಕ್ ಖಾತೆಗಳಿಂದ ಒಟ್ಟು 3.23 ಲಕ್ಷ ರೂ. ಕಡಿತಗೊಂಡಿದೆ. ಈ ಸಂಬಂಧ ಮೈಸೂರು ನಗರ ಸೆನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಿಟಿ ಬಸ್‌ನಲ್ಲಿ ಚಿನ್ನಾಭರಣ ಕಳವು

ಮೈಸೂರು,ಏ.12–ಸಿಟಿ ಬಸ್‌ನಲ್ಲಿ ಗೃಹಿಣಿಯ ವ್ಯಾನಿಟಿ ಬ್ಯಾಗ್‌ನಿಂದ ಚಿನ್ನಾಭರಣ ಕಳವು ಮಾಡಿರುವ ಘಟನೆ ವರದಿಯಾಗಿದೆ.



ರಾಘವೇಂದ್ರನಗರ ನಿವಾಸಿ ಭಾಗ್ಯ (45) ಎಂಬುವರು ತಮ್ಮ ಮಗಳೊಂದಿಗೆ ಹೆಚ್.ಡಿ.ಕೋಟೆಯಿಂದ ಏ.10ರಂದು ಸಂಜೆ ಮೈಸೂರಿಗೆ ಬಂದಿದ್ದು, 6.45ರ ಸುಮಾರಿನಲ್ಲಿ ಸಿಟಿ ಬಸ್ ಸಂಖ್ಯೆ 161ರಲ್ಲಿ ಗ್ರಾಮಾಂತರ ಬಸ್ ನಿಲ್ದಾಣದ ಬಳಿಯಿಂದ ಪ್ರಯಾಣಿಸಿದ್ದಾರೆ. ರಾಘವೇಂದ್ರನಗರದ ಕೇಂದ್ರೀಯ ವಿದ್ಯಾಲಯ ಬಳಿ ಬಸ್ ಇಳಿದು ನೋಡಿದಾಗ ಅವರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 24 ಗ್ರಾಂ ತೂಕದ 2 ಬಳೆಗಳು ಕಳುವಾಗಿರುವುದು ಗೊತ್ತಾಗಿದೆ. ನಜರ್‌ಬಾದ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮನೆ ಹಿಂಬಾಗಿಲು ಮುರಿದು ಚಿನ್ನಾಭರಣ ಕಳವು

ಹುಣಸೂರು,ಏ.12–ಮನೆಯ ಹಿಂಬಾಗಿಲು ಮುರಿದು ಚಿನ್ನಾಭರಣ ಕಳವು ಮಾಡಿರುವ ಘಟನೆ ಹುಣಸೂರು ತಾಲೂಕು ಉದ್ದೂರು ಗ್ರಾಮದಿಂದ ವರದಿಯಾಗಿದೆ. ಗ್ರಾಮದ ರೈತ ಮಹಿಳೆ ಆಶಾ(29) ಎಂಬುವರು ಏ.9ರಂದು ಮಧ್ಯಾಹ್ನ 2 ಗಂಟೆಗೆ ತನ್ನ ಇಬ್ಬರು ಮಕ್ಕಳೊಂದಿಗೆ ಜಮೀನಿಗೆ ಹೋಗಿ ಸಂಜೆ 5 ಗಂಟೆಗೆ ಹಿಂತಿರುಗುವಷ್ಟರಲ್ಲಿ ಖದೀಮರು ಅವರ ಮನೆ ಹಿಂಬಾಗಿಲು ಮುರಿದು ಒಳನುಗ್ಗಿ ಬೀರುವಿನಲ್ಲಿದ್ದ 25 ಗ್ರಾಂ ತೂಕದ ಚಿನ್ನಾಭರಣ ಕಳವು ಮಾಡಿದ್ದಾರೆ. ಈ ಸಂಬಂಧ ಬಿಳಿಕೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಅಕ್ಕಮಹಾದೇವಿ ಜಯಂತಿ ಆಚರಣೆ



ಮೈಸೂರು,ಏ.12–ಮೈಸೂರಿನ ಜ್ಯೋತಿರ್ಗಮಯ ಸೇವಾ ಟ್ರಸ್ಟ್‌ನ ಹೆಣ್ಣು ಮಕ್ಕಳ ಉಚಿತ ವಿದ್ಯಾರ್ಥಿನಿಲಯದಲ್ಲಿ ಅಕ್ಕ ಮಹಾದೇವಿ ಜಯಂತಿ ಆಚರಿಸಲಾಯಿತು.


ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮರಿ ಮಲ್ಲಪ್ಪ ಶಿಕ್ಷಣ ಸಂಸ್ಥೆಯ ವಿಶ್ರಾಂತ ಪ್ರಾಂಶುಪಾಲರಾದ ಮಂಗಳ ಮುದ್ದುಮಾದಪ್ಪ ಮಾತನಾಡಿ, ಶಿಕ್ಷಣ ಮತ್ತು ಗುರಿಯನ್ನು ಸಾಧಿಸಲು ಯಾವುದೇ ವಯಸ್ಸಿಲ್ಲ, ಶ್ರದ್ಧೆ, ಏಕಾಗ್ರತೆ ಮತ್ತು ದೃಢ ಮನಸ್ಸಿನಿಂದ ಏನೇ ಸಾಧಿಸಲು ಬಯಸಿದರೂ ಫಲ ಸಿಕ್ಕೇ ಸಿಗುತ್ತದೆ ಹಾಗೂ ಅಕ್ಕ ಮಹಾದೇವಿಯವರ ವಚನಗಳ ಮೂಲಕ ವಿದ್ಯಾರ್ಥಿನಿಯರನ್ನು ಪ್ರೋತ್ಸಾಹಿಸಿ, ಹೆಣ್ಣು ಮಕ್ಕಳು ಈಗಿನ ಸಮಾಜದಲ್ಲಿ ಹೇಗೆ ಧೈರ್ಯದಿಂದ ಬದುಕಬೇಕೆಂದು ಕಿವಿಮಾತು ಹೇಳಿದರು.

ಯಾವುದೇ ಸಮಯದಲ್ಲೂ ಧೃತಿಗೆಡದೆ ಒಗ್ಗಟ್ಟಿನಿಂದ ಇರಬೇಕು. ಯಾರಿಗೂ ಕೆಡಕು ಬಯಸದೆ ಒಗ್ಗಟ್ಟಿನಿಂದ ಬಾಳ್ವೆ ನಡೆಸಬೇಕು ಎಂದು ವಿದ್ಯಾರ್ಥಿನಿಯರಲ್ಲಿ ಸ್ಫೂರ್ತಿ ತುಂಬಿದರು. ಜ್ಯೋತಿರ್ಗಮಯ ಸೇವಾ ಟ್ರಸ್ಟ್ ಹೆಣ್ಣು ಮಕ್ಕಳ ಉಚಿತ ವಿದ್ಯಾರ್ಥಿನಿಲಯಕ್ಕೆ ಎಲ್ಲಾ ರೀತಿಯ ಸಹಕಾರ ಮತ್ತು ನೆರವು ನೀಡುತ್ತೇನೆಂದು ಭರವಸೆ ನೀಡಿದರು.

ಬಸವ ಬಳಗಗಳ ಒಕ್ಕೂಟದ ಮಾಜಿ ಅಧ್ಯಕ್ಷೆ ಜಯಾಗೌಡ ಅಧ್ಯಕ್ಷತೆ ವಹಿಸಿದ್ದರು. ಮುಡಾ ಸದಸ್ಯೆ ಲಕ್ಷ್ಮೀ ಹಾಗೂ ಮಹಿಳಾಭಿವೃದ್ಧಿ ನಿಗಮದ ನಿರ್ದೇಶಕಿ ರೇಣುಕಾರಾಜು ಪಾಲ್ಗೊಂಡಿದ್ದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಸ್ಥಾಪಕರಾದ ಮಾದೇಶ್ ಹಾಗೂ ಧರ್ಮದರ್ಶಿಗಳು, ಹಿತೈಷಿಗಳು ಹಾಗೂ ಮಕ್ಕಳು ಭಾಗವಹಿಸಿದ್ದರು.

ನಿಧನ

ತಮ್ಮಯ್ಯಪ್ಪ



ಮೈಸೂರು, ಏ.12– ಗಾರೆ ಕೆಲಸದ ಕಂಟ್ರಾಕ್ಟರ್ ಮತ್ತು ಗಿರಿಯಾಬೋವಿಪಾಳ್ಯದ ನಿವಾಸಿ ತಮ್ಮಯ್ಯಪ್ಪ(68) ಅವರು ಇಂದು ತಮ್ಮ ನಿವಾಸದಲ್ಲಿ ನಿಧನರಾದರು. ದಿವಂಗತರು ಪತ್ನಿ ಜಯಲಕ್ಷ್ಮೀ, ನಾಲ್ವರು ಪುತ್ರಿಯರು, ಓರ್ವ ಪುತ್ರ, ಅಳಿಯಂದಿರು, ಸೊಸೆ ಮತ್ತು ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಗುರುವಾರ(ಏ.13) ಮಧ್ಯಾಹ್ನ 12 ಗಂಟೆಗೆ ರಾಘವೇಂದ್ರ ನಗರದಲ್ಲಿರುವ ರುದ್ರಭೂಮಿಯಲ್ಲಿ ದಿವಂಗತರ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕಲ್ಯಾಟಂಡ ಶಂಭು ಪಳಂಗಪ್ಪ

ಕೊಡಗಿನ ಕಕ್ಕಬ್ಬೆ ನಿವಾಸಿ ಕಲ್ಯಾಟಂಡ ಶಂಭು ಪಳಂಗಪ್ಪ ಅವರು ಬುಧವಾರ ನಿಧನರಾದರು. ಅವರಿಗೆ 78 ವರ್ಷ ವಯಸ್ಸಾಗಿತ್ತು. ಇವರು ಪತ್ನಿ, ಇಬ್ಬರು ಪುತ್ರರು, ಸ್ನೇಹಿತರು ಹಾಗೂ ಅಪಾರ ಬಂಧು ವರ್ಗ ಅಗಲಿದ್ದಾರೆ. ನಾಳೆ (ಏ.13) ಕಲ್ಯಾಟಂಡ ಐನ್‌ಮನೆಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ.

ವರುಣಾದಲ್ಲಿ ಸಿದ್ದರಾಮಯ್ಯ ಗೆಲುವು ನಿಶ್ಚಿತ

ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಅತೀವ ವಿಶ್ವಾಸ



ಮಾಜಿ ಸಿಎಂ ಸಿದ್ದರಾಮಯ್ಯರವರ ಪರವಾಗಿ ಬುಧವಾರ ಮೆಲ್ಲಹಳ್ಳಿ, ಹಳ್ಳಿಕೆರೆಹುಂಡಿ, ಶಿವಪುರ, ಲಕ್ಷ್ಮಿಪುರ ಗ್ರಾಮಗಳಲ್ಲಿ ಮನೆ ಮನೆಗೆ ತೆರಳಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಮತಯಾಚಿಸಿದರು.

ಮೈಸೂರು,ಏ.12(ಎಂಟಿವೈ)– ವರುಣಾ ಕ್ಷೇತ್ರದಲ್ಲಿ ಯಾರೇ ಸ್ಪರ್ಧಿಸಿದರೂ ಸಿದ್ದರಾಮಯ್ಯ ಅವರು ಗೆದ್ದೇಗೆಲ್ಲುತ್ತಾರೆ ಎಂದು ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸಿದ್ದರಾಮಯ್ಯರವರ ಪರವಾಗಿ ಮೆಲ್ಲಹಳ್ಳಿ, ಹಳ್ಳಿಕೆರೆಹುಂಡಿ, ಶಿವಪುರ, ಲಕ್ಷ್ಮಿಪುರ ಗ್ರಾಮಗಳಲ್ಲಿ ಮನೆ ಮನೆಗೆ ತೆರಳಿ ಮತಯಾಚಿಸಿ ಮಾತನಾಡಿದ ಅವರು, ಹಿರಿಯರಾದ ಸೋಮಣ್ಣ ಅವರಿಗೆ ವರುಣಾ ಕ್ಷೇತ್ರದಲ್ಲಿ ನಿಲ್ಲಲು ಇಷ್ಟವಿಲ್ಲದಿದ್ದರೂ ಬಲವಂತವಾಗಿ ಬಿಜೆಪಿ ಮುಖಂಡರು ಕಣಕ್ಕಿಳಿಸಿದ್ದಾರೆ. ಅದಕ್ಕೆ ನಾವು ಸ್ವಾಗತ ಮಾಡುತ್ತೇವೆ. ಸಿದ್ದರಾಮಯ್ಯನವರು ವರುಣಾ ಕ್ಷೇತ್ರಕ್ಕೆ 2 ಸಾವಿರ ಕೋಟಿಗಿಂತಲೂ ಹೆಚ್ಚು ಅನುದಾನ ನೀಡಿ ರಸ್ತೆ, ಚರಂಡಿ, ಕುಡಿಯುವ ನೀರು, ಮನೆಗಳು, ಸಮುದಾಯ ಭವನಗಳು, ಕೆರೆ ತುಂಬಿಸುವ ಯೋಜನೆ, ವಿವಿಧ ನಿಗಮ ಮಂಡಳಿಗಳಿಂದ ನಾನಾ ಫಲಾನುಭವಿಗಳಿಗೆ ವಾಹನಗಳು, ಗಂಗಾ ಕಲ್ಯಾಣ ಯೋಜನೆ ಹೀಗೆ ಹಲವಾರು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಆದ್ದರಿಂದ ಮತದಾರರ ಮೇಲೆ ನಮಗೆ ವಿಶ್ವಾಸವಿದೆ. ಸಿದ್ದರಾಮಯ್ಯರವರು ಅಧಿಕ ಮತಗಳ ಅಂತರದಿಂದ ಗೆಲ್ಲುವ ಅವಕಾಶ ಹೆಚ್ಚಾಗಿದೆ. ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದ ಪಕ್ಷವಾಗಿದ್ದು, ಕಳೆದ ಬಾರಿ ನೀಡಿದ್ದ 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದೆ. ಈಗಲು ಕೊಟ್ಟ ಮಾತಿಗೆ ತಪ್ಪದೇ ಭರವಸೆಗಳನ್ನು ಈಡೇರಿಸುತ್ತೇವೆ. ನಿಮ್ಮೆಲ್ಲರ ಆಶೀರ್ವಾದ ಸಿದ್ದರಾಮಯ್ಯರವರ ಮೇಲಿರಲಿ ಎಂದು ಮನವಿ ಮಾಡಿದರು.

ಬಿಜೆಪಿ ಸರ್ಕಾರದ ಜನವಿರೋಧಿ ನೀತಿಗಳಿಂದಾಗಿ ಜನರು ಬೇಸತ್ತಿದ್ದು, ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಿದ್ದಾರೆ. ರಾಜ್ಯದಾದ್ಯಂತ ನಮಗೆ ಅಭೂತಪೂರ್ವ ಬೆಂಬಲ ವ್ಯಕ್ತವಾಗುತ್ತಿದೆ. ನಮ್ಮ ಕ್ಷೇತ್ರಕ್ಕೆ ಸಿದ್ದರಾಮಯ್ಯನವರೇನು ಹೊಸಬರಲ್ಲ. ಇದೇ ಕ್ಷೇತ್ರದಲ್ಲಿ ಹುಟ್ಟಿ ಬೆಳೆದು, ಮುಖ್ಯಮಂತ್ರಿಯಾಗಿ ಹಲವಾರು ಜನಪರ ಯೋಜನೆಗಳನ್ನು ಜಾರಿಗೆ ತರುವ ಮೂಲಕ ರಾಜ್ಯದಲ್ಲಿ ಹೊಸ ಕ್ರಾಂತಿಯನ್ನೇ ಸೃಷ್ಟಿ ಮಾಡಿದಂತಹ ನಾಯಕರು. ಇದು ಅವರ ಕೊನೆ ಚುನಾವಣೆಯಾಗಿದ್ದು, ತವರು ಕ್ಷೇತ್ರದಿಂದಲೇ ಸ್ಪರ್ಧಿಸಿ ಗೆಲ್ಲಬೇಕೆಂಬ ಆಶಯ ವ್ಯಕ್ತಪಡಿಸಿದ್ದಾರೆ. ಕ್ಷೇತ್ರದ ಜನರು ಪ್ರೀತಿಯಿಂದ ಸ್ವಾಗತಿಸಿದ್ದಾರೆ. ಮನೆ ಮಗನಂತೆ ಪ್ರೀತಿ ತೋರುತ್ತಿದ್ದಾರೆ. ಹಾಗಾಗಿ ಅವರು ಹೆಚ್ಚಿನ ಅಂತರದ ಗೆಲುವು ಸಾಧಿಸಲಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಸಿದ್ದರಾಮಯ್ಯ ಅವರ ಪರವಾಗಿ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಒಗ್ಗಟ್ಟಿನಿಂದ ಅವರ ಗೆಲುವಿಗಾಗಿ ಶ್ರಮ ವಹಿಸುತ್ತಿದ್ದಾರೆ. ಕ್ಷೇತ್ರದ ಮತದಾರರು ಸ್ವಯಂಪ್ರೇರಣೆಯಿಂದ ನಮ್ಮ ತಂದೆಯವರಿಗೆ ಬೆಂಬಲ ನೀಡುತ್ತಿದ್ದಾರೆ. ವರುಣಾ ಕ್ಷೇತ್ರದಲ್ಲಿ ಬಿಜೆಪಿಯಿಂದ ಈಗಾಗಲೇ ಸಚಿವ ವಿ.ಸೋಮಣ್ಣ ಅವರನ್ನು ಅಭ್ಯರ್ಥಿಯಾಗಿ ಮಾಡಿದ್ದಾರೆ. ಬಿಜೆಪಿ ಹೈಕಮಾಂಡ್ ಸೂಚನೆ ಮೇರೆಗೆ ವರುಣಾ ಕ್ಷೇತ್ರದಲ್ಲಿ ಬಲವಂತವಾಗಿ ಸೋಮಣ್ಣ ಅವರನ್ನು ಸ್ಪರ್ಧೆಗಿಳಿಸಿದ್ದಾರೆ. ಬಿಜೆಪಿಯವರ ಕುತಂತ್ರ ರಾಜಕಾರಣ ಇಲ್ಲಿ ನಡೆಯುವುದಿಲ್ಲ. ಈ ಕ್ಷೇತ್ರದ ಮತದಾರರು ಪ್ರಬುದ್ಧ ಪ್ರಜ್ಞಾವಂತ ಮತದಾರರಾಗಿದ್ದಾರೆ. ವಿ ಸೋಮಣ್ಣನವರನ್ನು ರಾಜಕೀಯವಾಗಿ ಮುಗಿಸುವ ಕುತಂತ್ರ ರಾಜಕಾರಣ ಮಾಡಲಾಗಿದೆ. ಈ ಕುತಂತ್ರಕ್ಕೆ ಸೋಮಣ್ಣ ಬಲಿಪಶುವಾಗಿದ್ದಾರೆ ಎಂದು ಡಾ.ಯತೀಂದ್ರ ಆರೋಪಿಸಿದರು.

ಈ ಸಂದರ್ಭದಲ್ಲಿ ಜಿ.ಪಂ. ಮಾಜಿ ಸದಸ್ಯ ಕೆಂಪೀರಯ್ಯ, ತಾ.ಪಂ. ಮಾಜಿ ಸದಸ್ಯರಾದ ಶಿವರತ್ನ ನಾಗರಾಜ್, ಎಂ.ಟಿ. ರವಿಕುಮಾರ್, ಗುರುಸ್ವಾಮಿ, ಪುಟ್ಟಣ್ಣ, ಸಿದ್ದಯ್ಯ, ನಿವೃತ್ತ ಪ್ರಾಂಶುಪಾಲ ಸಿದ್ದಯ್ಯ, ಮುಖಂಡರಾದ ನಾಡನಹಳ್ಳಿ ರವಿ, ಗವಿಸಿದ್ದು, ಮೆಲ್ಲಹಳ್ಳಿ ರವಿ, ಮಹಾದೇವ, ಗಂಗನತಿಮ್ಮಣ್ಣ, ಸಾಕಣ್ಣ, ಮಂಚಯ್ಯ, ಹೆಳವರಹುಂಡಿ ಸೋಮು, ಮಹಾದೇವ, ಹರೀಶ ಟಿ. ಮಣಿ, ಪಟ್ಟೆಹುಂಡಿ, ಕಲ್ಪನ, ಪುಷ್ಪ ಬೋರೇಗೌಡ, ಚೆನ್ನಾಜಮ್ಮ ಇತರರಿದ್ದರು.

ಬಿಜೆಪಿ ಅಧಿಕಾರಕ್ಕೆ ತರುವುದು ನಮ್ಮೆಲ್ಲರ ಹೊಣೆ

ಮೈಸೂರು, ಏ.12– ವರುಣಾ ವಿಧಾನಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ವಿ.ಸೋಮಣ್ಣ ಅವರ ಗೆಲುವಿಗೆ ತಾವು ಶ್ರಮಿಸುವುದಾಗಿ ಕ್ಷೇತ್ರದ ಪ್ರಬಲ ಆಕಾಂಕ್ಷಿಯಾಗಿದ್ದ ಬಿಜೆಪಿ ಮುಖಂಡ ಎಲ್.ಆರ್.ಮಹದೇವಸ್ವಾಮಿ ತಿಳಿಸಿದ್ದಾರೆ.



ಮಹದೇವಸ್ವಾಮಿ

ಪಕ್ಷ ನನಗೆ ತಾಯಿ ಇದ್ದಂತೆ. ಅದನ್ನು ಗೌರವಿಸುವುದು ನನ್ನ ಕರ್ತವ್ಯ. ಹಾಗಾಗಿ ಸೋಮಣ್ಣ ಅವರ ಗೆಲುವಿಗೆ ಶ್ರಮಿಸುವ ಮೂಲಕ ವರುಣಾ ಕ್ಷೇತ್ರ ಬಿಜೆಪಿ ಭದ್ರಕೋಟೆ ಎಂಬುದನ್ನು ಸಾಬೀತು ಮಾಡಲಾಗುವುದು ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಬಿಜೆಪಿ ನನಗೆ ಎಲ್ಲ ಸ್ಥಾನಮಾನವನ್ನು ನೀಡಿದ್ದು, ಪಕ್ಷವನ್ನು ಕಟ್ಟಿ ಬೆಳೆಸಬೇಕಾದ ಜವಾಬ್ದಾರಿ ಕಾರ್ಯಕರ್ತರದ್ದು. ಹೀಗಾಗಿ ಕ್ಷೇತ್ರದಲ್ಲಿ ಹಗಲಿರುಳು ದುಡಿದು ಪಕ್ಷವನ್ನು ಅಧಿಕಾರಕ್ಕೆ ತರುವುದು ನಮ್ಮೆಲ್ಲರ ಹೊಣೆ ಎಂದು ಎಲ್.ಆರ್.ಮಹದೇವಸ್ವಾಮಿ ಹೇಳಿದ್ದಾರೆ.

ದೇವಸ್ಥಾನದಲ್ಲಿ ಪೂಜೆ, ಊಟ ಹಂಚಿದ ಆರೋಪ

ಮಾವಿನಹಳ್ಳಿ ಸಿದ್ದೇಗೌಡ ವಿರುದ್ಧ ಪ್ರಕರಣ ದಾಖಲು



ಸಿದ್ದೇಗೌಡ

ಮೈಸೂರು, ಏ. 12– ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಊಟ ಹಂಚಿದ ದೃಶ್ಯಾವಳಿಗಳು ಯೂಟ್ಯೂಬ್‌ನಲ್ಲಿ ಪ್ರಸಾರವಾದ ಹಿನ್ನೆಲೆಯಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಕಾಂಗ್ರೆಸ್ ಘೋಷಿತ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡರ ವಿರುದ್ಧ ಧಾರ್ಮಿಕ ಸ್ಥಳ ದುರುಪಯೋಗ ಪಡಿಸಿಕೊಂಡ ಆರೋಪದಡಿ ಪ್ರಕರಣ ದಾಖಲಾಗಿದೆ. ಏಪ್ರಿಲ್ 9ರಂದು ಬೆಳಗ್ಗೆ 9 ಗಂಟೆ ಸುಮಾರಿನಲ್ಲಿ ಕೂರ್ಗಳ್ಳಿಯ ಸಿದ್ದಪ್ಪಾಜಿ ದೇವಸ್ಥಾನದಲ್ಲಿ ಪಕ್ಷದ ಸಭೆ ನಡೆಸಿ, ಪೂಜೆ ಸಲ್ಲಿಸಿದ ನಂತರ ಊಟ ಹಂಚಿಕೆ ಮಾಡಿರುವ ವಿಡಿಯೋ ಯೂಟ್ಯೂಬ್‌ನಲ್ಲಿ ಹರಿಬಿಡಲಾಗಿದೆ ಎಂದು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಫ್ಲೈಯಿಂಗ್ ಸ್ಕ್ವಾಡ್‌ನ ಅಧಿಕಾರಿ ಎಸ್. ಸುರೇಶ್ ನೀಡಿದ ದೂರನ್ನು ದಾಖಲಿಸಿಕೊಂಡಿರುವ ವಿಜಯನಗರ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

'ನಂದಿನಿ' ಪರ ಮೈಸೂರಲ್ಲಿ ಅಂಚೆ ಚಳವಳಿ



ಮೈಸೂರು,ಏ.12(ಎಂಟಿವೈ)– ಕನ್ನಡಿಗರ ಅಸ್ಮಿತೆಯಾದ ನಂದಿನಿ ಅಸ್ತಿತ್ವ ಉಳಿಸುವಂತೆ ಒತ್ತಾಯಿಸಿ ಮೈಸೂರಲ್ಲಿ ಕನ್ನಡಾಂಭೆ ರಕ್ಷಣಾ ವೇದಿಕೆ ಕಾರ್ಯಕರ್ತರು ಅಂಚೆ ಪತ್ರ ಚಳವಳಿ ನಡೆಸಿದರು.

ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ರಾಘವೇಂದ್ರಸ್ವಾಮಿ ಮಠದ ಮುಂಭಾಗದ ಅಂಚೆ ಕಚೇರಿ ಬಳಿ ಚಳವಳಿ ನಡೆಸಿದ ಪ್ರತಿಭಟನಾಕಾರರು ನಂದಿನಿ ಉಳಿಸುವಂತೆ ಘೋಷಣೆಗಳನ್ನು ಕೂಗಿದರು. ಹಲವಾರು ದಶಕಗಳಿಂದ ನಾಡಿನ ಜನತೆಗೆ ಕ್ಷೀರ ಕ್ರಾಂತಿ ಮೂಲಕ ಹಾಲನ್ನು ಸರಬರಾಜು ಮಾಡುತ್ತಾ ಬಂದಿರುವ ನಂದಿನಿ ಹಾಲು ಒಕ್ಕೂಟಕ್ಕೆ ಧಕ್ಕೆ ತರುತ್ತಿರುವುದು ಸರಿಯಲ್ಲ. ಗ್ರಾಮಾಂತರ ಪ್ರದೇಶಗಳಲ್ಲಿ ರೈತ ಮಹಿಳೆಯ ಹೈನುಗಾರಿಕೆಯಿಂದಲೇ ಜೀವನ ನಡೆಸುತ್ತಿರುವುದು ಹಾಗೂ ಆರ್ಥಿಕವಾಗಿ ಸಬಲವಾಗುತ್ತಿರುವುದಕ್ಕೆ ಕರ್ನಾಟಕ ಹಾಲು ಒಕ್ಕೂಟವೇ ಕಾರಣ. ನಂದಿನಿಯ ಗುಣಮಟ್ಟ ಮೆಚ್ಚಿ ಹೊರ ರಾಜ್ಯಗಳಿಂದಲೂ ಬೇಡಿಕೆ ಬರುತ್ತಿದೆ. ಜತೆಗೆ ಹೊಸ ಹೊಸ ಹಾಲು ಉತ್ಪನ್ನಗಳನ್ನು ತಯಾರಿಸಿ ನಾಡಿನ ಜನತೆಗೆ ಸರಬರಾಜು ಮಾಡುತ್ತಿದೆ. ಇಂತಹ ಸಂಸ್ಥೆಯನ್ನು ಅಮುಲ್ ಜತೆಗೆ ವಿಲೀನ ಮಾಡಲು ಹೊರಟಿರುವುದು ಸರಿಯಲ್ಲ ಎಂದು ಕಿಡಿಕಾರಿದರು.

ಹೊರ ರಾಜ್ಯಗಳ ಆರೋಕ್ಯ, ಅಮುಲ್, ದೊಡ್ಲಾ ರಾಜ್ಯದ ಮಾರುಕಟ್ಟೆಗೆ ಬಂದರೂ ನಂದಿನಿಗೆ ಸಮವಾಗಿ ಬೆಳೆಯಲು ಸಾಧ್ಯವಾಗಿಲ್ಲ. ಲಾಭದಾಯಕವಾಗಿ ನಡೆಯುತ್ತಿರುವ ಇಂತಹ ಸಂಸ್ಥೆಯನ್ನು ಅಮುಲ್ ಜತೆಗೆ ವಿಲೀನಗೊಳಿಸುವ ಅವಶ್ಯಕತೆ ಇದೆಯೇ ಎಂಬ ಪ್ರಶ್ನೆ ನಾಡಿನ ಜನತೆಯನ್ನು ಕಾಡುತ್ತಿದೆ. ಕೇಂದ್ರದ ಸೂಚನೆಯನ್ನು ಚಾಚೂ ತಪ್ಪದೆ ಪಾಲಿಸುತ್ತಿರುವ ರಾಜ್ಯ ಬಿಜೆಪಿ ನಾಯಕರು ಇನ್ನಾದರೂ ಎಚ್ಚೆತ್ತುಕೊಂಡು ಕನ್ನಡಿಗರ ಹೆಮ್ಮೆಯ ನಂದಿನಿಯ ಅಸ್ತಿತ್ವ ಉಳಿಸಬೇಕು ಎಂದು ಆಗ್ರಹಿಸಿದರು. ಚಳವಳಿಯಲ್ಲಿ ವೇದಿಕೆ ಅಧ್ಯಕ್ಷ ಬಿ.ಬಿ.ರಾಜಶೇಖರ್, ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಎಸ್.ಬಾಲಕೃಷ್ಣ, ಮುಖಂಡರುಗಳಾದ ನಾಲಾಬೀದಿ ರವಿ, ಬೋಗಾದಿ ಸಿದ್ದೇಗೌಡ, ಗುರುಬಸಪ್ಪ, ಪ್ಯಾಲೇಸ್‌ಬಾಬು, ಮದನ್, ಗೋಪಿ, ಎಲ್‌ಐಸಿ ಸಿದ್ದಪ್ಪ ಗೋವಿಂದರಾಜು, ಮಹದೇವಸ್ವಾಮಿ, ಸ್ವಾಮಿ ಗೈಡ್, ಬೀಡಾಬಾಬು ಅರವಿಂದ್, ಕಾವೇರಿಮ್ಮ, ಮಾದಪ್ಪಸ್ವಾಮಿ, ಸುನೀಲ್, ಹರೀಶ್, ನಾಗೇಂದ್ರ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಚುನಾವಣಾ ಸಂಬಂಧ ಸಮಗ್ರ ಮಾಹಿತಿ ಅರಿತು ಕಾರ್ಯೋನ್ಮುಖರಾದರೆ ಸಮಸ್ಯೆ ಇಲ್ಲ

ಚುನಾವಣಾ ಕಾರ್ಯನಿರತ ಸಿಬ್ಬಂದಿಗೆ ಡಿಸಿ ಡಾ.ರಾಜೇಂದ್ರ ಕಿವಿಮಾತು



ಮೈಸೂರು,ಏ.12–ಚುನಾವಣೆಯಲ್ಲಿ ಒತ್ತಡ ನಿರ್ವಹಿಸಿಕೊಂಡು, ಕ್ರಮಬದ್ಧ ಹಾಗೂ ಸರಿಯಾದ ರೀತಿ ಕಾರ್ಯನಿರ್ವಹಿಸುವ ನಿಟ್ಟಿನಲ್ಲಿ ತರಬೇತಿಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಿ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಆದ ಡಾ.ಕೆವಿ. ರಾಜೇಂದ್ರ, ಮಾಸ್ಟರ್ ಟ್ರೈನರ್ಸ್‌ಗಳಿಗೆ ಸೂಚಿಸಿದರು.

ನಗರದ ಕಿರು ರಂಗಮಂದಿರದಲ್ಲಿ ಜಿಲ್ಲೆಯ ವಿವಿಧ ಚುನಾವಣಾ ಕ್ಷೇತ್ರಗಳ ಮಾಸ್ಟರ್ ಟ್ರೈನರ್‌ಗಳಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ತರಬೇತಿಯಲ್ಲಿ ಕ್ಷೇತ್ರವಾರು ಮಾಸ್ಟರ್ ಟ್ರೈನರ್‌ಗಳಿಗೆ ಅವರ ಜವಾಬ್ದಾರಿ ಮತ್ತು ಕರ್ತವ್ಯಗಳ ಬಗ್ಗೆ ಮಾಹಿತಿ ಹಾಗೂ ತರಬೇತಿ ನೀಡಲಾಗುತ್ತಿದ್ದು, ಎಲ್ಲರೂ ಸಕ್ರಿಯವಾಗಿ ಭಾಗವಹಿಸಿ, ಚುನಾವಣಾ ಕೆಲಸ ಸಂಬಂಧ ಯಾವುದೇ ಸಮಸ್ಯೆ ಗೊಂದಲಗಳಿದ್ದಲ್ಲಿ ಸಂಪನ್ಮೂಲ ವ್ಯಕ್ತಿಗಳನ್ನು ಕೇಳಿ ಮಾಹಿತಿ ಪಡೆದುಕೊಳ್ಳಿ ಎಂದು ತಿಳಿಸಿದರು.

ಚುನಾವಣೆಯು ಪರೀಕ್ಷೆ ಇದ್ದಂತೆ. ಈ ಪರೀಕ್ಷೆಯಲ್ಲಿ ಎಲ್ಲರೂ ನೂರಕ್ಕೆ ನೂರು ತೆಗೆಯಲೇಬೇಕು ಅಂದರೆ ನಮ್ಮ ಕೆಲಸ ನೂರಕ್ಕೆ ನೂರರಷ್ಟು ಸಂಪೂರ್ಣವಾಗಿರಬೇಕು ಹಾಗೂ ಸರಿಯಾಗಿರಬೇಕು. ಈ ನಿಟ್ಟಿನಲ್ಲಿ ತರಬೇತಿಗಳಿಗೆ ಯಾವುದೇ ಮಾಹಿತಿ ಬೇಕಿದ್ದರೂ ಜಿಲ್ಲಾಡಳಿತ ಒದಗಿಸುತ್ತದೆ ಎಂದರು.

ಅಪರ ಜಿಲ್ಲಾಧಿಕಾರಿ ಕವಿತಾ ರಾಜಾರಾಮ್ ಮಾತನಾಡಿ, ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಈ ಬಾರಿಯ ಕರ್ನಾಟಕ ವಿಧಾನಸಭಾ ಚುನಾವಣೆ 2023ರ ಕಾರ್ಯವನ್ನು ಪಾರದರ್ಶಕ ಹಾಗೂ ವ್ಯವಸ್ಥಿತವಾಗಿ ಮಾಡುವಲ್ಲಿ ನಿಮ್ಮ ಜವಾಬ್ದಾರಿಯೂ ಇದೆ. ಎಷ್ಟೇ ಪೂರ್ವಸಿದ್ಧತೆ ಮಾಡಿಕೊಂಡು ಕಾರ್ಯನಿರ್ವಹಿಸಿದರೂ ಮತದಾನದ ದಿನ ಒಂದಲ್ಲ ಒಂದು ಸಮಸ್ಯೆ ಬಂದೇ ಬರುತ್ತದೆ. ಅದನ್ನು ಸರಿಯಾದ ರೀತಿಯಲ್ಲಿ ನಿರ್ವಹಿಸಲು ನೀವು ಸಿದ್ಧರಿರಬೇಕು ಎಂದು ತಿಳಿಸಿದರು.

ಎಲ್ಲಾ ಮಾಸ್ಟರ್ ಟ್ರೈನರ್‌ಗಳು ತಮ್ಮ ಜವಾಬ್ದಾರಿ ಹಾಗೂ ಕರ್ತವ್ಯಗಳನ್ನು ಸರಿಯಾಗಿ ಅರ್ಥೈಸಿಕೊಳ್ಳಿ. ಚುನಾವಣೆಯನ್ನು ಹಬ್ಬದ ರೀತಿಯಲ್ಲಿ ಭಾವಿಸಿ ಚುನಾವಣಾ ಕಾರ್ಯದಲ್ಲಿ ಪಾಲ್ಗೊಳ್ಳಿ. ಸರಿಯಾಗಿ ಮಾಹಿತಿಯನ್ನು ಪಡೆದುಕೊಳ್ಳುವ ಹಾಗೂ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸುವ ಮೂಲಕ ತರಬೇತಿ ಹಾಗೂ ಚುನಾವಣೆ ಎರಡನ್ನೂ ಯಶಸ್ವಿಗೊಳಿಸಿ ಎಂದರು.

ಪ್ರಸ್ತುತ ನಮ್ಮ ಜಿಲ್ಲೆಯಲ್ಲಿ 2905 ಮತಗಟ್ಟೆಗಳಿದ್ದು, ಶೇ.50ರಷ್ಟು ಮತಗಟ್ಟೆಗಳಿಗೆ ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ಸಾಮಾನ್ಯ ಹಾಗೂ ಸೂಕ್ಷ್ಮ ಮತಗಟ್ಟೆಗಳನ್ನು ಈಗಾಗಲೇ ಗುರುತಿಸಿದ್ದು, ಬೇಕಾದ ಎಲ್ಲಾ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಮತದಾನದ ವೇಳೆ ಮಾಧ್ಯಮದವರಿಗೆ ಕ್ಯಾಮರಾದ ಜೊತೆ ಮತಗಟ್ಟೆಗೆ ಪ್ರವೇಶಿಸಲು ಅವಕಾಶವಿಲ್ಲ. ಮತದಾರರು ಸಹ ಮತದಾನದ ವೇಳೆ ಮೊಬೈಲ್ ತೆಗೆದುಕೊಂಡು ಹೋಗುವಂತಿಲ್ಲ ಎಂದು ತಿಳಿಸಿದರು. ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೇನರ್ಸ್‌ಗಳಾದ ಡಾ. ಮಂಗಳಮೂರ್ತಿ, ಹೇಮಲತಾ, ತರಬೇತುದಾರರಾದ ರಮೇಶ್ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

13.4.2023 ಗುರುವಾರ, ಮಳೆ ನಕ್ಷತ್ರ: ರೇವತಿ, 31.03.2023 ರಿಂದ 13.04.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಕೃಷ್ಣ ಪಕ್ಷ,
ತಿಥಿ: ಅಷ್ಟಮಿ, ನಕ್ಷತ್ರ: ಪೂಷಾ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಹಾಗೂ ಸಂಜೆ 5.00ಕ್ಕೆ "ಒಂದೇ ಕಥೆ" ವಿವಿಧ ಮುಖ–ಬಾನುಲಿ ಸರಣೀ, ಪ್ರಸ್ತುತಿ– ಪ್ರಭುಸ್ವಾಮಿ ಮಳಿಮಠ, 6.40 ಅರಿವಿನ ಶಿಖರ, ಗಾಯನ– ನಿತಿನ್ ರಾಜಾರಾಂ ಶಾಸ್ತ್ರಿ, ಕೆ.ಟಿ. ಉದಯಕಿರಣ್, ವ್ಯಾಖ್ಯಾನ– ಡಾ. ಜ್ಯೋತಿ ಶಂಕರ್, 7.15 ಭಾವಗೀತೆ–ಪುತ್ತೂರು ನರಸಿಂಹ ನಾಯಕ್, 8.45 ಪಂಪನ ಪೆಂಪು, 9.00 ವೀಣೆಯ ಬೆಡಗು ನಾದದ ಸೊಬಗು, 10.00 ಹಂಸಿನಿ ನಾಗೇಂದ್ರ–ಹಾಡುಗಾರಿಕೆ, 11.00 ಮಿಶ್ರ ಮಾಧುರ್ಯ

ಮಧ್ಯಾಹ್ನ: 12.30 ದೇವರನಾಮ, 1.00 ರಂಗಗೀತೆಗಳು–ಧರ್ಮ ರತ್ನಾಕರ ನಾಟಕದ ಹಾಡುಗಳು, 1.20 ಭಾವಗೀತೆಗಳು–ಕೆ.ಪಿ. ರೇವತಿ, 4.00 ಜನಪದ ಸಂಗೀತ, 5.00 ಮಿಶ್ರಮಾಧುರ್ಯ, 6.50 ಕೃಷಿರಂಗ–ಕಿಸಾನ್‌ವಾಣಿ–ಜೈವಿಕ ಗೊಬ್ಬರಗಳು ಹಾಗೂ ಪ್ರಯೋಜನಗಳು ಕುರಿತು ಡಾ.ಎಲ್. ಮಾಲತಿ ಅವರೊಂದಿಗೆ ಸಂದರ್ಶನ, 8.15 ಯುವವಾಣಿ, 10.00 ನಾಟಕ "ಹೀಗೊಂದು ಹಳ್ಳಿ ಕಥೆ" ರಚನೆ– ಪಿ. ಕುಸುಮಾ ಆಯರಹಳ್ಳಿ, ನಿರ್ಮಾಣ– ಪ್ರಭುಸ್ವಾಮಿ ಮಳೀಮಠ

■ **ಇಲವಾಲ–ಜಯಪುರ ಬ್ಲಾಕ್ ಕಾಂಗ್ರೆಸ್ ಸಮಿತಿ :** ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಚುನಾವಣೆ ಅಂಗವಾಗಿ ಕಾಂಗ್ರೆಸ್ ಕಾರ್ಯಕರ್ತರ ಸಭೆ, ಉಪಸ್ಥಿತರು : ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸ್ಥಳ: ಶ್ರೀ ಹೊಂಬಾಳಮ್ಮ ಸಿದ್ದರಾಮೇಶ್ವರ ಕಲ್ಯಾಣ ಮಂಟಪ, ಕೇರ್ಗಳ್ಳಿ, ಬೆಳಗ್ಗೆ 11ಕ್ಕೆ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ :** ಪಂಡಿತ್ ಭೀಮಸೇನಾಚಾರ್ಯ ಪಾಂಡುರಂಗಿ ಅವರಿಂದ ಭಗವದ್ಗೀತೆ ಪ್ರವಚನ – ಅಧ್ಯಾಯ 7 ಕುರಿತು ಪ್ರವಚನ, ಸ್ಥಳ: ಶ್ರೀರಾಯರ ಮಠ, ಜಯಲಕ್ಷ್ಮಿಪುರಂ, ಸಂಜೆ 5 ಗಂಟೆಗೆ

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಅಧ್ಯಾತ್ಮ ರಾಮಾಯಣ ಕುರಿತು ಉಪನ್ಯಾಸ, ಸ್ಥಳ : ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀ ಉತ್ತರಾದಿ ಮಠ ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ :** ಶ್ರೀ ಭಗವದ್ಗೀತಾ ಅಭಿಯಾನದ ಅಂಗವಾಗಿ ಪಂಡಿತ್ ಭೀಮಸೇನಾಚಾರ್ಯ ಪಾಂಡುರಂಗಿ ಅವರಿಂದ ಭಗವದ್ಗೀತೆ ಪ್ರವಚನ – ಅಧ್ಯಾಯ 7 ಕುರಿತು ಪ್ರವಚನ, ಸ್ಥಳ: ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಶ್ರೀ ಉತ್ತರಾದಿ ಮಠ, ಅಗ್ರಹಾರ, ಸಂಜೆ 6.30 ರಿಂದ.

■ **ಶ್ರೀರಾಮ ಮಂದಿರ :** ಶ್ರೀ ರಾಮನವಮಿ, ಬೆಳಗ್ಗೆ ಶ್ರೀ ದತ್ತ ದಕ್ಷಿಣಾಮೂರ್ತಿ ಹೋಮ, ಸಂಜೆ 6.30ಕ್ಕೆ ವಿದ್ವಾನ್ ಹರೀಶ್ ಪಾಂಡವ ಅವರಿಂದ ಸ್ಯಾಕ್ಸೋಫೋನ್ ವಾದನ, ಸ್ಥಳ: ಶ್ರೀರಾಮ ಮಂದಿರ, ಜಯನಗರ.

■ **ಶ್ರೀ ರಾಮಾಭ್ಯುದಯ ಸಭಾ ಪಬ್ಲಿಕ್ ಚಾರಿಟಬಲ್ ಟ್ರಸ್ಟ್ :** ಒಳಗುಡಿ ಉತ್ಸವ, ಸಂಜೆ 6.30 ಗಂಟೆಗೆ ವಿದುಷಿ ಚೈತ್ರಿಕ ಮತ್ತು ವೃಂದದವರಿಂದ ಶಾಸ್ತ್ರೀಯ ಸಂಗೀತ, ಸ್ಥಳ: ಶ್ರೀರಾಮ ಮಂದಿರ, ಶ್ರೀರಾಮಪೇಟೆ.

■ **ಚಿನ್ಮಯ ಮಿಷನ್ :** ವಿದ್ವಾನ್ ಕೃಷ್ಣರಾವ್ ಪ್ರಕಾಶ್ ಅವರಿಂದ ಪತಂಜಲಿಯ ಯೋಗ ಸೂತ್ರಗಳು– ಸಮಾಧಿ ಪಾದ ಕುರಿತು ಉಪನ್ಯಾಸ, ಸ್ಥಳ: ಶ್ರೀ ಚಿನ್ಮಯ ಮಿಷನ್, ಆಶ್ರಮದ ದತ್ತ ಸನ್ನಿಧಿ, ಯಜ್ಞಶಾಲೆ, ಗೋಕುಲಂ, ಸಂಜೆ 6ಕ್ಕೆ.



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 13 ಗುರುವಾರ 2023

ಸಂಪುಟ: 43 | ಸಂಚಿಕೆ: 353 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಸಿಇಟಿ: ಮಾಹಿತಿ ತಿದ್ದುಪಡಿಗೆ 15ರವರೆಗೆ ಅವಕಾಶ

ಬೆಂಗಳೂರು: ಈ ವರ್ಷದ ಸಿಇಟಿ ಪರೀಕ್ಷೆಗೆ ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯಲ್ಲಿ ಅರ್ಹತೆಗೆ ಅನುಗುಣವಾಗಿ ಸಮರ್ಪಕ ಮಾಹಿತಿ ತಿದ್ದುಪಡಿಗೆ ಏಪ್ರಿಲ್ 15ರ ಬೆಳಿಗ್ಗೆ 11 ಗಂಟೆಯವರೆಗೆ ಅವಕಾಶವಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕಿ ಎಸ್. ರಮ್ಯಾ ತಿಳಿಸಿದ್ದಾರೆ.

ಈ ಸಂಬಂಧ ಬುಧವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ವಿದ್ಯಾರ್ಥಿಗಳು ತಮ್ಮ ಪ್ರವರ್ಗ ಮೀಸಲಾತಿ, ವಾರ್ಷಿಕ ಆದಾಯ, ಕನ್ನಡ ಮಾಧ್ಯಮ, ಗ್ರಾಮೀಣ ಅಭ್ಯರ್ಥಿ, ವಿಶೇಷ ಕ್ಯಾಟಗರಿ ಇತ್ಯಾದಿಗಳನ್ನು ಸರಿಯಾಗಿ ತುಂಬಲು ಇದರಿಂದ ಅವಕಾಶವಾಗಲಿದೆ. ತಿದ್ದುಪಡಿ ಮಾಡಿದ ಬಳಿಕ, 'ಡಿಕ್ಲರೇಷನ್ ಬಟನ್' ಆಯ್ಕೆ ಮಾಡಿಕೊಂಡು, ನಂತರವಷ್ಟೇ 'ಫೈನಲ್ ಸಬ್‌ಮಿಶನ್' ಸಲ್ಲಿಸಿ, ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು. ತಿದ್ದುಪಡಿ ಮಾಡಿದ ಅರ್ಜಿಯ ಮುದ್ರಿತ ● 9ನೇ ಪುಟಕ್ಕೆ



ವಿಧಾನಸಭಾ ಸಾರ್ವತ್ರಿಕ ಚುನಾವಣೆ; ಅಧಿಸೂಚನೆ ಪ್ರಕಟಣೆಯೊಂದಿಗೆ

ಇಂದಿನಿಂದ ನಾಮಪತ್ರ ಸಲ್ಲಿಕೆ

ಚುನಾವಣೆಗೆ ಮೈಸೂರು ಜಿಲ್ಲಾಡಳಿತ ಸರ್ವ ರೀತಿಯ ಸಿದ್ಧತೆ

■ ಏ.20ರವರೆಗೆ ನಿತ್ಯ ಬೆಳಗ್ಗೆ 11ರಿಂದ ಮಧ್ಯಾಹ್ನ 3 ಗಂಟೆವರೆಗೆ ಉಮೇದುವಾರಿಕೆ ಸಲ್ಲಿಕೆ ■ ಏ.21 ನಾಮಪತ್ರ ಪರಿಶೀಲನೆ; ಏ.24 ವಾಪಸ್ ಪಡೆಯಲು ಕಡೇ ದಿನ ■ ಮೇ 10 ಮತದಾನ; ಮೇ 13 ಮತ ಎಣಿಕೆ, ಫಲಿತಾಂಶ ■ ಮೈಸೂರು ಜಿಲ್ಲೆಯಲ್ಲಿ 2905 ಮತಗಟ್ಟೆ ಸ್ಥಾಪನೆ ■ ಒಟ್ಟು ಮತದಾರರು 26,38,487

ಮೈಸೂರು, ಏ. 12(ಆರ್‌ಕೆ)– ಕರ್ನಾಟಕ ರಾಜ್ಯ ವಿಧಾನಸಭಾ ಸಾರ್ವತ್ರಿಕ ಚುನಾವಣೆಗೆ ನಾಳೆ (ಏ.13) ಯಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರು ಇಂದು ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಚುನಾವಣೆಗೆ ಮೈಸೂರು ಜಿಲ್ಲೆಯ 11 ವಿಧಾನಸಭಾ ಕ್ಷೇತ್ರದಲ್ಲಿ ಕೈಗೊಂಡಿರುವ ಪೂರ್ವ ಸಿದ್ಧತೆಗಳ ಬಗ್ಗೆ ಮಾಹಿತಿ ನೀಡಿದರು.

ಗುರುವಾರ ಅಧಿಸೂಚನೆ ಹೊರಡಿಸಲಿದ್ದು, ಏಪ್ರಿಲ್ 13 ರಿಂದ ಏಪ್ರಿಲ್ 20ರವರೆಗೆ ಬೆಳಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ (ರಜಾ ದಿನಗಳನ್ನು ಹೊರತುಪಡಿಸಿ) ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಬಹುದು ಎಂದು ಅವರು ತಿಳಿಸಿದರು. ಏ.21ರಂದು ನಾಮಪತ್ರಗಳ ಪರಿಶೀಲನೆ, ಏ.24 ರಂದು ಉಮೇದುವಾರಿಕೆ ವಾಪಸ್ ಪಡೆಯಲು ಕಡೇ ದಿನವಾಗಿದೆ. ಮೇ 10 ರಂದು ಮತದಾನ ನಡೆಯಲಿದ್ದು, ಮೇ 13ರಂದು ಮೈಸೂರಿನ ವಾಲ್ಮೀಕಿ ರಸ್ತೆಯಲ್ಲಿರುವ ಮಹಾರಾಣಿ ಸರ್ಕಾರಿ ಮಹಿಳಾ ವಾಣಿಜ್ಯ ಮತ್ತು ಮ್ಯಾನೇಜ್‌ಮೆಂಟ್ ಕಾಲೇಜು ಕೇಂದ್ರದಲ್ಲಿ ಮತ ಎಣಿಕೆ ನಡೆಯಲಿದೆ. ಅಂದು ಮಧ್ಯಾಹ್ನದ ವೇಳೆಗೆ ಫಲಿತಾಂಶ ಹೊರಬೀಳುವ ನಿರೀಕ್ಷೆ ಇದೆ.

26,38,487 ಮತದಾರರು

ಮೈಸೂರು ಜಿಲ್ಲೆಯಲ್ಲಿ ಏ.12ರಲ್ಲಿದ್ದಂತೆ 13,29,493 ● 9ನೇ ಪುಟಕ್ಕೆ



ಮೈಸೂರಿನ ಡಿಸಿ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಅವರು ಸುದ್ದಿಗೋಷ್ಠಿ ನಡೆಸಿದರು. ಎಸ್ಪಿ ಸೀಮಾ ಲಾಟ್ಕರ್, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತರೆಡ್ಡಿ ಹಾಗೂ ಜಿಲ್ಲಾ ಪಂಚಾಯ್ತಿ ಸಿಇಒ ಕೆ.ಎಂ.ಗಾಯತ್ರಿ ಅವರನ್ನು ಚಿತ್ರದಲ್ಲಿ ಕಾಣಬಹುದು.

ರಾಜ್ಯಾದ್ಯಂತ ಉಮೇದುವಾರಿಕೆ ಸಲ್ಲಿಕೆ

ಬೆಂಗಳೂರು, ಏ.12(ಕೆಎಂಶಿ)–ರಾಜ್ಯ ವಿಧಾನಸಭಾ ಚುನಾವಣೆಗೆ ನಾಳೆಯಿಂದ ನಾಮಪತ್ರ ಸಲ್ಲಿಕೆ ಪ್ರಾರಂಭವಾಗಲಿದೆ.

ಕೇಂದ್ರ ಚುನಾವಣಾ ಆಯೋಗ ನಾಳೆ (ಏಪ್ರಿಲ್ 13) ಅಧಿಸೂಚನೆ ಹೊರಡಿಸಲಿದ್ದು, ತಕ್ಷಣದಿಂದಲೇ ನಾಮಪತ್ರ ಸಲ್ಲಿಕೆ ಕಾರ್ಯ ಆರಂಭಗೊಳ್ಳಲಿದೆ. ನಾಮಪತ್ರ ಸಲ್ಲಿಕೆಗೆ ಏಪ್ರಿಲ್ 20 ರವರೆಗೂ ಅವಕಾಶವಿರುತ್ತದೆ. ಏಪ್ರಿಲ್ 21 ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ನಾಮಪತ್ರ ಹಿಂಪಡೆಯಲು ಏಪ್ರಿಲ್ 24 ಕಡೇ ದಿನವಾಗಿದೆ.

ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಿಗೂ ಮೇ 10 ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ಮೇ 13ರಂದು ಫಲಿತಾಂಶ ಪ್ರಕಟವಾಗಲಿದೆ. ರಾಜ್ಯದಲ್ಲಿ ಒಟ್ಟಾರೆ 5.24 ಕೋಟಿ ಮತದಾರರಿದ್ದು, ಪುರುಷರು 2.63 ಕೋಟಿ ಇದ್ದರೆ, ಮಹಿಳೆಯರು 2.60 ಕೋಟಿ ಮತದಾನದ ಹಕ್ಕು ಪಡೆದಿದ್ದಾರೆ.

ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಲ್ಲಿ ಎಸ್‌ಸಿಗೆ 36, ಎಸ್‌ಟಿಗೆ 15 ಕ್ಷೇತ್ರ ಮೀಸಲಿರಿಸಿ, ಉಳಿದ ಕ್ಷೇತ್ರಗಳನ್ನು ಸಾಮಾನ್ಯ ವರ್ಗಕ್ಕೆ ಮೀಸಲಿಡಲಾಗಿದೆ. ಪ್ರತಿ ಮತಗಟ್ಟೆಗೆ ಸರಾಸರಿ 883 ಮತದಾರರಂತೆ ಒಟ್ಟು 58282 ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ. ನಗರ ಪ್ರದೇಶಕ್ಕಿಂತ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚು ಮತಗಟ್ಟೆಗಳಿರಲಿವೆ. ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣೆ ನಡೆಸಲು ಆಯೋಗ ಎಲ್ಲಾ ರೀತಿಯ ಕ್ರಮ ಕೈಗೊಂಡಿದೆ. ಚುನಾವಣಾ ಉಸ್ತುವಾರಿಗಾಗಿ ಆಯೋಗ 2500 ಹಿರಿಯ ಅಧಿಕಾರಿಗಳನ್ನು ವಿವಿಧ ಹಂತಗಳಲ್ಲಿ ನೇಮಿಸಲಾಗಿದೆ. ಚುನಾವಣಾ ಸಂದರ್ಭದಲ್ಲಿ ಅವ್ಯವಹಾರಗಳನ್ನು ತಡೆಗಟ್ಟಲು ರಾಜ್ಯಾದ್ಯಂತ ಪ್ರಮುಖ ಕೇಂದ್ರಗಳಲ್ಲಿ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿದೆ. ಚುನಾವಣಾ ವೇಳಾಪಟ್ಟಿಗೂ ಮುನ್ನವೇ ಜೆಡಿಎಸ್ 92 ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿತ್ತು. ಆನಂತರ ಕಾಂಗ್ರೆಸ್ ಎರಡು ಹಂತಗಳಲ್ಲಿ 166 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಪ್ರಕಟಿಸಿದೆ. ಆಡಳಿತಾರೂಢ ಬಿಜೆಪಿ ಅಧಿಸೂಚನೆ ಹೊರಬೀಳುವ ಎರಡು ದಿನಗಳ ಮುಂಚೆ 189 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಪ್ರಕಟಿಸಿದೆ.

ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಬೇಡಿ

ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿ ಸಲಹೆ

ಮೈಸೂರು, ಏ.12(ಆರ್‌ಕೆ)–ಪ್ರಚಾರದ ವೇಳೆ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಎಚ್ಚರ ವಹಿಸಿ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ.ವಿ.ರಾಜೇಂದ್ರ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಇಂದಿಲ್ಲಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ರಾಜಕೀಯ ಪಕ್ಷಗಳ ಪ್ರಮುಖರು, ಪ್ರತಿನಿಧಿಗಳ ಸಭೆ ನಡೆಸಿದ ಅವರು, ಈಗಾಗಲೇ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದು, ಸ್ಟ್ಯಾಟಿಕ್ ಸರ್ವೆಲನ್ಸ್ ಟೀಂ, ಫ್ಲೈಯಿಂಗ್ ಸ್ಕ್ವಾಡ್, ಸಿವಿಲ್ ಪೊಲೀಸರು ಕಾರ್ಯಾಚರಣೆಯಲ್ಲಿದ್ದಾರೆ. ನಾಮಪತ್ರ ಸಲ್ಲಿಸುವ ವೇಳೆ, ಪ್ರಚಾರ ಸಭೆ, ರ್‍ಯಾಲಿ, ಬಹಿರಂಗ ಸಭೆಗಳನ್ನು ಆಯೋಜನೆ ಮಾಡಿದಾಗ ಚುನಾವಣಾಧಿಕಾರಿಗಳಿಂದ ಪೂರ್ವಾನುಮತಿ ಪಡೆದು, ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಶಾಂತಿಯುತ ಚುನಾವಣೆಗೆ ಸಹಕರಿಸಬೇಕು ಎಂದರು. ಈ ಸಂದರ್ಭ ಅಭ್ಯರ್ಥಿಗಳು ಚುನಾವಣಾ ಪ್ರಚಾರಕ್ಕೆ ಹೋದಾಗ ಅಭಿಮಾನಿಗಳು, ಬೆಂಬಲಿಗರು, ಹಿತೈಷಿಗಳು ನೀಡುವ ಹಣಕಾಸಿನ ನೆರವು ಇನ್ನಿತರ ಸಹಾಯಗಳ ಬಗ್ಗೆ ಮಾಹಿತಿ ನೀಡಬೇಕಾಗುತ್ತದೆ. ಅದೇ ರೀತಿ ಅಭ್ಯರ್ಥಿಗಳು ದೇವಸ್ಥಾನ ಅಥವಾ ಇನ್ನಿತರ ಸ್ಥಳಗಳಲ್ಲಿ ಪೂಜಾ ತಟ್ಟೆಗೆ ಹಣ ಹಾಕಿದರೂ ನೀತಿ ಸಂಹಿತೆ ಉಲ್ಲಂಘನೆಯಾಗುವುದರಿಂದ ಎಚ್ಚರ ವಹಿಸಬೇಕೆಂದೂ ಸಲಹೆ ನೀಡಿದರು. ಯಾವುದೇ ಗಣ್ಯ ವ್ಯಕ್ತಿಗಳು, ಸ್ಟಾರ್ ಕ್ಯಾಂಪೈನರ್‌ಗಳು ಚುನಾವಣಾ ಪ್ರಚಾರ ಸಭೆ ● 9ನೇ ಪುಟಕ್ಕೆ

ಮಹಾರಾಣಿ ಕಾಮರ್ಸ್ ಕಾಲೇಜಿನಲ್ಲಿ ಮತ ಎಣಿಕೆಗೆ ಸಿದ್ಧತೆ

ಮೈಸೂರು, ಏ.12(ಆರ್‌ಕೆ)–ಮೇ 10ರಂದು ನಡೆಯಲಿರುವ ವಿಧಾನಸಭಾ ಚುನಾವಣೆಯ ಮೈಸೂರು ಜಿಲ್ಲೆಯ ಎಲ್ಲಾ 11 ಕ್ಷೇತ್ರಗಳ ಮತ ಎಣಿಕೆ ಪ್ರಕ್ರಿಯೆ ಮೈಸೂರಿನ ವಾಲ್ಮೀಕಿ ರಸ್ತೆಯಲ್ಲಿರುವ ಮಹಾರಾಣಿ ಸರ್ಕಾರಿ ಮಹಿಳಾ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್ ಕಾಲೇಜಿನಲ್ಲಿ ಮೇ 13ರಂದು ನಡೆಯಲಿದೆ.



ಮತ ಎಣಿಕಾ ಕೇಂದ್ರದಲ್ಲಿ ವಿಧಾನಸಭಾ ಕ್ಷೇತ್ರವಾರು ಸ್ಟ್ರಾಂಗ್ ರೂಂಗಳನ್ನು ಸಿದ್ಧಪಡಿಸಲಾಗಿದ್ದು, ಇವಿಎಂ ಮತ್ತು ವಿವಿ ಪ್ಯಾಟ್ ಇರಿಸಲು ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ. ಸ್ಟ್ರಾಂಗ್ ರೂಂ ಕಿಟಕಿಗಳಿಗೆ ಪ್ಲೈವುಡ್ ಶೀಟ್‌ಗಳನ್ನು ಅಳವಡಿಸಿ ಬಂದ್ ಮಾಡಲಾಗಿದ್ದು, ಮತಯಂತ್ರಗಳ ನಂಬರ್ ಅನ್ನು ಮಾರ್ಕ್ ಮಾಡಿ ಸ್ಥಳ ಮೀಸಲಿರಿಸಲಾಗಿದೆ. ಆಯಾ ಚುನಾವಣಾಧಿಕಾರಿಗಳು ● 9ನೇ ಪುಟಕ್ಕೆ



ಪಿಯುಸಿಗೆ ಮೇ 22ರಿಂದ ದಾಖಲಾತಿ ಪ್ರಾರಂಭ: ಜೂ.1ರಿಂದ ಕಾಲೇಜು ಆರಂಭ

ಬೆಂಗಳೂರು: ಈಗಾಗಲೇ ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ 2023–24ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಯನ್ನು ಪ್ರಕಟಿಸಲಾಗಿತ್ತು. ಇಂದು ಆ ಪಟ್ಟಿಯನ್ನು ಪರಿಷ್ಕರಿಸಿ ವೇಳಾಪಟ್ಟಿ ಪ್ರಕಟಿಸಿದೆ. ಅದರಂತೆ ಜ.1, 2023ರಿಂದ ಪಿಯು ಕಾಲೇಜು ಆರಂಭಗೊಳ್ಳಲಿದೆ ಪ್ರಥಮ ಹಾಗೂ ದ್ವಿತೀಯ ಪಿಯುಸಿಗೆ ಮೇ22 ರಿಂದ ದಾಖಲಾತಿ ಪ್ರಕ್ರಿಯೆ ಪ್ರಾರಂಭವಾಗಲಿದೆ.

ಈ ಸಂಬಂಧ ಪರಿಷ್ಕೃತ ಸುತ್ತೋಲೆಯನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರು ಪ್ರಕಟಿಸಿದ್ದಾರೆ. 2023–24ನೇ ಶೈಕ್ಷಣಿಕ ಸಾಲಿನ ಶೈಕ್ಷಣಿಕ ಚಟುವಟಿಕೆಗಳ ವೇಳಾಪಟ್ಟಿಯನ್ನು 06–04–2023ರಂದು ಪ್ರಕಟಿಸಲಾಗಿತ್ತು. ಆದರೆ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಹಿತದೃಷ್ಟಿಯಿಂದ ಪರಿಷ್ಕೃತ ವೇಳಾಪಟ್ಟಿಯನ್ನು ಇಂದು ಪ್ರಕಟಿಸಲಾಗಿದೆ ಎಂದಿದ್ದಾರೆ.

ಪರಿಷ್ಕೃತ ಶೈಕ್ಷಣಿಕ ವೇಳಾಪಟ್ಟಿಯಂತೆ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪದವಿಪೂರ್ವ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಯನ್ನು ಕಾರ್ಯನಿರ್ವಹಿಸುವಂತೆ ಸೂಚಿಸಿದ್ದಾರೆ. 2023–24ನೇ ಸಾಲಿನ ಪರಿಷ್ಕೃತ ಪಿಯು ಕಾಲೇಜು ಶೈಕ್ಷಣಿಕ ವೇಳಾಪಟ್ಟಿ ಮೊದಲ ಅವಧಿಯು 01–06–2023ರಿಂದ 13–06–2023ರವರೆಗೆ ನಡೆಯಲಿದೆ.

2ನೇ ಅವಧಿಯ ತರಗತಿಗಳು 30–10–2023ರಿಂದ 29–02–2024ರವರೆಗೆ ನಡೆಯಲಿದೆ ಪ್ರಥಮ ಪಿಯುಸಿ ದಾಖಲಾತಿ ಪ್ರಕಿಯೆ 22–05–2023ರಿಂದ ಪ್ರಾರಂಭವಾಗಲಿದೆ. ದ್ವಿತೀಯ ಪಿಯುಸಿ ದಾಖಲಾತಿ ಪ್ರಕ್ರಿಯೆ ಕೂಡ ಇದೇ ದಿನಾಂಕದಿಂದ ಪ್ರಾರಂಭಗೊಳ್ಳಲಿದೆ. ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಸಿದ್ಧಪಡಿಸಿ ಕೊಂಡ ವೇಳಾಪಟ್ಟಿಯಂತೆ ತರಗತಿಗಳು 01–06–2023ರಿಂದ ಆರಂಭಗೊಳ್ಳಲಿವೆ. ಮಧ್ಯಂತರ ರಜೆ 14–10–2023ರಿಂದ 29–10–2023ರವರೆಗೆ ಇರಲಿದೆ. ಕೊನೆಯ ಕಾರ್ಯನಿರತ ದಿನ 30–03–2024 ಆಗಿರುತ್ತದೆ. ಬೇಸಿಗೆ ರಜೆಯು 31–03–2024ರಿಂದ ಪ್ರಾರಂಭಗೊಳ್ಳಲಿದೆ.

ಹೆಚ್.ಡಿ.ಕೋಟೆಗೆ ಕೃಷ್ಣನಾಯಕ್, ಅರಸೀಕೆರೆ ಬಸವರಾಜ್, ಶ್ರವಣಬೆಳಗೊಳ ಚಿದಾನಂದ ಸೇರಿ ಬಿಜೆಪಿಯ

12 ಅಭ್ಯರ್ಥಿಗಳ 2ನೇ ಪಟ್ಟಿ ಪ್ರಕಟ

ಮೈಸೂರು, ಏ.12–ನಿನ್ನೆಯಷ್ಟೇ 189 ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿದ್ದ ಬಿಜೆಪಿ ಇಂದು ರಾತ್ರಿ 23 ಅಭ್ಯರ್ಥಿಗಳನ್ನೊಳಗೊಂಡ ಎರಡನೇ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಇನ್ನೂ 12 ಅಭ್ಯರ್ಥಿಗಳನ್ನು ಅಂತಿಮಗೊಳಿಸಬೇಕಾಗಿದೆ. ಮೈಸೂರಿನ ಕೆ.ಆರ್. ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಕಗ್ಗಂಟಾಗಿದ್ದು, ಎರಡನೇ ಪಟ್ಟಿಯಲ್ಲೂ ಈ ಕ್ಷೇತ್ರದ ಅಭ್ಯರ್ಥಿ ಹೆಸರು ಪ್ರಕಟವಾಗಿಲ್ಲ. ಹೆಚ್.ಡಿ.ಕೋಟೆ ಕ್ಷೇತ್ರಕ್ಕೆ ಕೃಷ್ಣನಾಯಕ್, ಅರಸಿಕೆರೆಗೆ ಜಿ.ವಿ.ಬಸವರಾಜು, ಶ್ರವಣಬೆಳಗೊಳ ಕ್ಷೇತ್ರಕ್ಕೆ ಚಿದಾನಂದ ಅವರನ್ನು ಘೋಷಿಸಲಾಗಿದೆ.



ಕೃಷ್ಣನಾಯಕ್

ಇನ್ನುಳಿದಂತೆ ದೇವರ ಹಿಪ್ಪರಿಗೆಯಲ್ಲಿ ಸೋಮನಗೌಡ ಪಾಟೀಲ್ ಸಾಸನೂರ್, ಬಸವನ ಬಾಗೇವಾಡಿಗೆ ಎಸ್.ಕೆ.ಬೆಳ್ಳುಬ್ಬಿ, ಇಂಡಿಗೆ ಖಾಸಗೌಡ ಬಿರಾದ, ಗುರುಮಿಟ್ಕಲ್‌ಗೆ ಲಲಿತಾ ಅನಪೂರ್, ಬೀದರ್‌ಗೆ ಈಶ್ವರ್ ಸಿಂಗ್ ಠಾಕೂರ್, ಬಾಲ್ಕಿಗೆ ಪ್ರಕಾಶ್ ಖಂಡ್ರೆ, ಗುವಾಹಟಿಗೆ ಪ್ರಸನ್ನ ಮನವಳ್ಳಿ, ಕಲಘಟಗಿಗೆ ನಾಗರಾಜ್ ಚಬ್ಬಿ, ಹಾನಗಲ್‌ಗೆ ಶಿವರಾಜ್ ಸಜ್ಜನರ್, ಹಾವೇರಿಗೆ ಗವಿಸಿದ್ದಪ್ಪ ದ್ಯಾಮಣ್ಣನವರ್, ಹರಪ್ಪನಹಳ್ಳಿಗೆ ಕರುಣಾಕರ ರೆಡ್ಡಿ, ದಾವಣಗೆರೆ ಉತ್ತರಕ್ಕೆ ಲೋಕಿಕೆರೆ ನಾಗರಾಜ್, ದಾವಣಗೆರೆ ದಕ್ಷಿಣಕ್ಕೆ ಅಜಯ ಕುಮಾರ್, ಚನ್ನಗಿರಿಗೆ ಶಿವಕುಮಾರ್, ಬೈಯಂದೂರಿಗೆ ಗುರುರಾಜ್ ಗಂಟಿಹೊಳೆ, ಮೂಡಿಗೆರೆಗೆ ದೀಪಕ್ ದೊಡ್ಡಯ್ಯ, ಗುಬ್ಬಿಗೆ ಎಸ್.ಡಿ.ದಿಲೀಪ್ ಕುಮಾರ್, ಶಿಡ್ಲಘಟ್ಟಗೆ ರಾಮಚಂದ್ರಗೌಡ, ಕೆಜಿಎಫ್‌ಗೆ ಅಶ್ವಿನಿ ಸಂಪಂಗಿ ಅವರನ್ನು ಅಭ್ಯರ್ಥಿಗಳಾಗಿ ಘೋಷಿಸಲಾಗಿದೆ.

ಬಿಜೆಪಿಯಲ್ಲಿ ಬಂಡಾಯದ ಭಾರೀ ಬಿಸಿ


ಲಕ್ಷ್ಮಣ್ ಸವದಿ, ಆರ್.ಶಂಕರ್ ಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ; ಅಂಗಾರ ನಿವೃತ್ತಿ, ರಘುಪತಿ ಕಣ್ಣೀರು

■ ಜಗದೀಶ್ ಶೆಟ್ಟರ್ ಸಮಾಧಾನ ಪಡಿಸಲೆತ್ನ ■ ಈಶ್ವರಪ್ಪ ನಿವೃತ್ತಿ ಹಿನ್ನೆಲೆಯಲ್ಲಿ ಅವರ ಬೆಂಬಲಿಸಿ ಪಾಲಿಕೆ ಸದಸ್ಯ ರಾಜೀನಾಮೆ

ಮೈಸೂರು, ಏ.12–ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಮೊದಲನೇ ಮತ್ತು ಎರಡನೇ ಪಟ್ಟಿ ಬಿಡುಗಡೆಯಾಗುತ್ತಿದ್ದಂತೆಯೇ ಪಕ್ಷದಲ್ಲಿ ಅಸಮಾಧಾನ ಹೊಗೆಯಾಡುತ್ತಿದ್ದು, ಹಿರಿಯ ಮುಖಂಡರೇ ಪಕ್ಷ ತ್ಯಜಿಸಲು ಮುಂದಾಗಿದ್ದಾರೆ.

ಯಡಿಯೂರಪ್ಪ ನೇತೃತ್ವದ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿಯಾಗಿದ್ದ ಲಕ್ಷ್ಮಣ ಸವದಿ ವಿಧಾನ ಪರಿಷತ್ ಸದಸ್ಯರಾಗಿದ್ದರೂ ಕೂಡ ಅಥಣಿ ಕ್ಷೇತ್ರದ ಟಿಕೆಟ್ ಬಯಸಿದ್ದರು. ಅವರಿಗೆ ಟಿಕೆಟ್ ಕೈತಪ್ಪಿದ್ದರಿಂದ ಪರಿಷತ್ ಸದಸ್ಯತ್ವಕ್ಕೆ ಇಂದು ರಾಜೀನಾಮೆ ಸಲ್ಲಿಸಿದ್ದಾರೆ. ಇವರು ಕಾಂಗ್ರೆಸ್ ಅಥವಾ ಜೆಡಿಎಸ್‌ನಿಂದ ಸ್ಪರ್ಧೆಗಿಳಿಯಬಹುದು ಎಂದು ಹೇಳಲಾಗಿದೆ. ರಾಣೆ ಬೆನ್ನೂರು ಕ್ಷೇತ್ರದಿಂದ ಪಕ್ಷೇತರರಾಗಿ ಗೆದ್ದು ಯಡಿಯೂರಪ್ಪ ಸರ್ಕಾರಕ್ಕೆ ಬೆಂಬಲ ಸೂಚಿಸಿದ್ದರ ಪರಿಣಾಮವಾಗಿ ಶಾಸಕ ಸ್ಥಾನದಿಂದ ಅನರ್ಹಗೊಂಡಿದ್ದ ಆರ್.ಶಂಕರ್ ಅವರಿಗೆ ಉಪ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡದ ಬಿಜೆಪಿ, ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಿತ್ತು. ಈ ಚುನಾವಣೆಯಲ್ಲಿ ಅವರು ರಾಣೆ ಬೆನ್ನೂರು ಕ್ಷೇತ್ರದ ಪ್ರಬಲ ಆಕಾಂಕ್ಷಿಯಾಗಿದ್ದರು. ಟಿಕೆಟ್ ಕೈತಪ್ಪಿದ್ದರಿಂದ ಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ● 9ನೇ ಪುಟಕ್ಕೆ

ಚಾಮುಂಡಿಬೆಟ್ಟಕ್ಕೆ ಬೆಂಕಿ: 50ರಿಂದ 60 ಎಕರೆ ಸಸ್ಯ, ಪ್ರಾಣಿ–ಪಕ್ಷಿ ನಾಶ



ಅಗ್ನಿಶಾಮಕ ದಳದ ಪರಿಶ್ರಮದ ಸತತ ಕಾರ್ಯಾಚರಣೆಯಿಂದ ತಪ್ಪಿದ ಹೆಚ್ಚಿನ ಅನಾಹುತ

ಮೈಸೂರು,ಏ.12(ಎಸ್‌ಬಿಡಿ)–ಕಿಡಿಗೇಡಿಗಳಿಂದ ಚಾಮುಂಡಿಬೆಟ್ಟಕ್ಕೆ ಬೆಂಕಿ ಹೊತ್ತಿ, ಹತ್ತಾರು ಎಕರೆ ಅರಣ್ಯ ಪ್ರದೇಶದ ಗಿಡ–ಮರಗಳು ಸುಟ್ಟು ಹೋಗಿವೆ.


ಚಾಮುಂಡಿಬೆಟ್ಟದ ಪಾದ, ಮೆಟ್ಟಿಲು ಮಾರ್ಗದ ಬಲಭಾಗದಲ್ಲಿ ಗುರುವಾರ ಸಂಜೆ ಬೆಂಕಿ ಕಾಣಿಸಿಕೊಂಡಿದೆ. ಕೂಡಲೇ ಸ್ಥಳೀಯರು ಅಗ್ನಿಶಾಮಕ ಠಾಣೆಗೆ ಮಾಹಿತಿ ನೀಡಿದ್ದಾರೆ. ಕೆಲ ಹೊತ್ತಿನಲ್ಲೇ ಬೆಂಕಿ ಕೆನ್ನಾಲಿಗೆ ಆವರಿಸಿದೆ. ಧಗ.. ಧಗ... ಉರಿಯುತ್ತಿದ್ದ ಬೆಂಕಿಗೆ ಸಾವಿರಾರು ಗಿಡಮರಗಳು ಅಗ್ನಿಗೆ ಆಹುತಿಯಾಗಿವೆ. ಬೆಂಕಿ ಜ್ವಾಲೆ ಹಾಗೂ ದಟ್ಟ ಹೊಗೆಯಿಂದಾಗಿ ಆ ಭಾಗದಲ್ಲಿದ್ದ ಸಣ್ಣ ಪುಟ್ಟ ಪ್ರಾಣಿ–ಪಕ್ಷಿಗಳು ಬಲಿಯಾಗಿವೆ.

ವಿಷಯ ತಿಳಿದು ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ಸಿಬ್ಬಂದಿ ತಕ್ಷಣ ಕಾರ್ಯಾಚರಣೆ ಆರಂಭಿಸಿದರು. ಕಡಿದಾದ ಜಾಗದಲ್ಲಿ ಬೆಂಕಿ ವ್ಯಾಪಿಸಿದ್ದರಿಂದ ಕಾರ್ಯಾಚರಣೆ ನಡೆಸುವುದು ಸವಾಲಾಗಿತ್ತು. ಹತ್ತಿರ ಹೋಗುವುದಕ್ಕೂ ಅವಕಾಶವಿರದ ಕಾರಣ ಅವರು ಹರಸಾಹಸಪಟ್ಟರು. 4 ಫೈರ್ ಎಂಜಿನ್‌ಗಳ ಮೂಲಕ ಬೇರೆ ಬೇರೆ ಸ್ಥಳದಿಂದ ನೀರು ಹಾಕಿ, ಕೆನ್ನಾಲಿಗೆ ಮತ್ತಷ್ಟು ವ್ಯಾಪಿಸದಂತೆ ಮುನ್ನೆಚ್ಚರಿಕೆ ವಹಿಸಿದರು. ಮುಖ್ಯ ಅಗ್ನಿಶಾಮಕ ಅಧಿಕಾರಿ ಜಯರಾಮು, ಪ್ರಭಾರ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಕೆ.ಪಿ.ನವೀನ್ ಕುಮಾರ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಹೆಚ್.ರಾಜು, ಅಗ್ನಿಶಾಮಕ ಠಾಣಾಧಿಕಾರಿ ನಾಗರಾಜೇ ಅರಸ್ ಸೇರಿದಂತೆ 25ಕ್ಕೂ ಹೆಚ್ಚು ಸಿಬ್ಬಂದಿ ಮೂರ್‍ನಾಲ್ಕು ಗಂಟೆಗಳ ಕಾಲ ನಿರಂತರ ಕಾರ್ಯಾಚರಣೆ ನಡೆಸಿ, ಬೆಂಕಿಯನ್ನು ತಹಬದಿಗೆ ತಂದರು. ರಾತ್ರಿ 10 ಗಂಟೆ ವೇಳೆಗೆ ಬೆಂಕಿ ನಂದಿಸಿದರಾದರೂ ಮುಂಜಾಗ್ರತಾ ಕ್ರಮವಾಗಿ ಒಂದು ಫೈರ್ ಎಂಜಿನ್ ವಾಹನ ಹಾಗೂ ಸಿಬ್ಬಂದಿ, ಕೆಲ ಗಂಟೆಗಳ ಕಾಲ ಸ್ಥಳದಲ್ಲೇ ಇದ್ದು ● 6ನೇ ಪುಟಕ್ಕೆ

> “ 4 ಫೈರ್ ಎಂಜಿನ್‌ಗಳ ಮೂಲಕ 25 ಮಂದಿ ಕಾರ್ಯಾಚರಣೆ ನಡೆಸಿ, ಬೆಂಕಿಯನ್ನು ನಂದಿಸಲಾಗಿದೆ. ಸುಮಾರು 50–60 ಎಕರೆ ಪ್ರದೇಶಕ್ಕೆ ಬೆಂಕಿ ಆವರಿಸಿತ್ತು. ಯಾರೋ ಕಿಡಿಗೇಡಿಗಳಿಂದ ಈ ಅವಘಡ ಸಂಭವಿಸಿರಬಹುದು. ಧೂಮಪಾನಿಗಳು ಎಲ್ಲೆಂದರಲ್ಲಿ ಬೀಡಿ–ಸಿಗರೇಟ್ ತುಂಡುಗಳನ್ನು ಬಿಸಾಡಬಾರದು. ಒಣಹುಲ್ಲು, ಕಸದ ರಾಶಿಗೆ ಬೆಂಕಿ ಹಾಕಬಾರದು. ಜವಾಬ್ದಾರಿಯಿಂದ ನಡೆದುಕೊಂಡರೆ ಇಂತಹ ಅವಘಡಗಳನ್ನು ತಪ್ಪಿಸಬಹುದು. **–ಹೆಚ್.ರಾಜು, ಜಿಲ್ಲಾ ಅಗ್ನಿಶಾಮಕ ಅಧಿಕಾರಿ**



ಕಾನೂನು ತಜ್ಞ ಸಿಕೆಎನ್ ರಾಜಾ ಇನ್ನಿಲ್ಲ



ಮೈಸೂರು, ಏ.12– ಕಾನೂನು ತಜ್ಞ ಡಾ.ಸಿ.ಕೆ.ಎನ್.ರಾಜಾ(91) ಅವರು ವಯೋಸಹಜ ಅನಾರೋಗ್ಯದಿಂದ ಬುಧವಾರ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ನಿಧನರಾದರು.

ಮೂಲತಃ ನಂಜನಗೂಡಿನವರಾದ ಇವರು ಮೈಸೂರಿನ ಲಕ್ಷ್ಮೀಪುರಂನಲ್ಲಿ ನೆಲೆಸಿದ್ದರು. ಪತ್ನಿ ಶ್ರೀಮತಿ ಮೀನಾಕ್ಷಿ ರಾಜಾ, ಪುತ್ರ ಆರ್.ಶ್ರೀಕಂಠಪ್ರಸಾದ್, ಸೊಸೆಯಂದಿರಾದ ಡಾ.ಗಾಯತ್ರಿ ಪ್ರಸಾದ್, ಸಂಧ್ಯಾ, ಮೊಮ್ಮಕ್ಕಳಾದ ಆದಿತ್ಯ, ಅವಿನಾಶ್ ಸೇರಿದಂತೆ ಅಪಾರ ಬಂಧು–ಬಳಗ, ಸ್ನೇಹಿತರು, ಶಿಷ್ಯರನ್ನು ● 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಗಿರಾಕಿ : ನಿಮ್ಮ ಈ ಹೋಟೆಲ್ ಅಡುಗೆ ಮನೇನ ದಿನಕ್ಕೆ ನಾಲ್ಕು ಸಲ ತೊಳೆದು ಶುಭ್ರವಾಗಿ ಇಡ್ತೀರ ಅಂತ ಕಾಣುತ್ತೆ

ಮಾಲೀಕ : ಹೌದು ಸಾರ್. ತಮಗೆ ಅದು ಹೇಗೆ ತಿಳೀತು?

ಗಿರಾಕಿ : ಯಾವ ತಿಂಡಿ ತಿಂದರೂ ಫಿನಾಯಲ್ ವಾಸನೆ ಬರುತ್ತೆ. ಅದರಿಂದ ತಿಳೀತು!

ಮೈಸೂರು ಮಿತ್ರ

ಗುರುವಾರ, 13 ಏಪ್ರಿಲ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಎಲ್ಲರಿಗೂ ಆಸೆಗಳಿರುತ್ತವೆ. ಕೆಲವರು ತಮ್ಮ ಯೋಗ್ಯತೆಗೆ ಮೀರಿದುದನ್ನು ಬಯಸುತ್ತಾರೆ. ಅದು ಸಿಗದಾದಾಗ ಲೋಕವನ್ನೋ, ವಿಧಿಯನ್ನೋ ಬೇರೆ ಯಾರನ್ನೋ ದೂರುತ್ತಾರೆ. –ಮಹಾಭಾರತ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಉತ್ತಮನು ಎತ್ತ ಹೋದರೂ ಶುಭವೆ

ನಿಮ್ಮ ಪತ್ರಗಳು

ಯಾರ ಓಟು ಯಾರಿಗೋ!

ಮಾನ್ಯರೆ,

ರಾಜ್ಯದ ಅತ್ಯಂತ ಪ್ರತಿಷ್ಠೆಯ ಕಣವಾಗಿ ಹೊರಹೊಮ್ಮಿರುವ ವರುಣಾ ವಿಧಾನ ಸಭಾ ಕ್ಷೇತ್ರದಲ್ಲಿ ಭಾರತ ರಾಷ್ಟ್ರೀಯ ಕಾಂಗ್ರೆಸ್‌ನಿಂದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಸತಿ ಸಚಿವ ವಿ.ಸೋಮಣ್ಣನವರು ಎದುರಿಸುವುದು ಅಧಿಕೃತವಾಗುವುದರೊಂದಿಗೆ ಈಗ ಎಲ್ಲರ ಕಣ್ಣು ಈ ಕ್ಷೇತ್ರದ ಮೇಲೆ ನೆಟ್ಟಿದೆ. ಪ್ರಸ್ತುತ ಈ ಕ್ಷೇತ್ರವನ್ನು ಸಿದ್ದರಾಮಯ್ಯನವರ ಪುತ್ರ ಡಾ.ಯತೀಂದ್ರ ಸಿದ್ದರಾಮಯ್ಯ ಪ್ರತಿನಿಧಿಸಿದ್ದರು. ಈ ಹಿಂದೆ ಈ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಎರಡು ಬಾರಿ ಗೆಲುವಿನ ನಗೆ ಬೀರಿದ್ದರು. ಈ ಕ್ಷೇತ್ರದಲ್ಲಿ ಸ್ಪರ್ಧಿಸಬಹುದಾದ ಇತರ ಅಭ್ಯರ್ಥಿಗಳು ಗೌಣವಾಗುತ್ತಾರೆ. ಹಾಲಿ ವಿಧಾನ ಸಭೆಯಲ್ಲಿ ಪ್ರತಿಪಕ್ಷದ ನಾಯಕರಾಗಿರುವ ಸಿದ್ದರಾಮಯ್ಯ, 2013 ಮೇನಿಂದ 2018ರ ಮೇವರೆಗೆ ಈ ರಾಜ್ಯದ ಮುಖ್ಯಮಂತ್ರಿಯಾಗಿ ಅನ್ನಭಾಗ್ಯ ಸೇರಿದಂತೆ ಹಲವಾರು ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದಾರೆ. ಸಿದ್ದರಾಮಯ್ಯ ರಾಜ್ಯದಲ್ಲಿ 13 ಬಾರಿ ಬಜೆಟ್ ಮಂಡಿಸುವ ಮೂಲಕ ರಾಮಕೃಷ್ಣ ಹೆಗಡೆಯವರ ದಾಖಲೆಯನ್ನು ಸರಿಗಟ್ಟಿದ್ದಾರೆ. ಅತ್ತ ಬೆಂಗಳೂರಿನ ಗೋವಿಂದ ರಾಜನಗರ ಕ್ಷೇತ್ರವನ್ನು ಪ್ರತಿನಿಧಿಸುತ್ತಿರುವ ವಿ.ಸೋಮಣ್ಣನವರು ವಸತಿ ಸೇರಿದಂತೆ ಹಲವಾರು ಪ್ರಮುಖ ಖಾತೆಗಳನ್ನು ಯಶಸ್ವಿಯಾಗಿ ನಿರ್ವಹಿಸಿ ತಮ್ಮ ಕ್ಷೇತ್ರದಲ್ಲಿ ಒಳ್ಳೆಯ ಹೆಸರು ಗಳಿಸಿದ್ದಾರೆ. ಪ್ರಬಲ ಲಿಂಗಾಯಿತ ಕೋಮಿಗೆ ಸೇರಿರುವ ಸೋಮಣ್ಣನವರು ಈ ಹಿಂದೆ ಕಾಂಗ್ರೆಸ್ ಪಕ್ಷದಲ್ಲಿದ್ದವರು. ಅವರು ಸಿದ್ದರಾಮಯ್ಯನವರ ಸಮಕಾಲೀನರೂ ಸಹ. ನೇರ ನಡೆ ನುಡಿಗೆ ಹೆಸರಾದ ಸೋಮಣ್ಣ, ಸಿದ್ದರಾಮಯ್ಯನವರನ್ನು ಎದುರಿಸಬಹುದಾದ ಶಕ್ತಿಯನ್ನು ಹೊಂದಿದ್ದಾರೆ. ಅದೂ ಅಲ್ಲದೇ ಅವರು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾಗಿಯೂ ಕೆಲಸ ಮಾಡಿದ್ದಾರೆ. ಅವರು ರಾಜ್ಯದ ಮತ್ತೊಂದು ಕ್ಷೇತ್ರದಲ್ಲಿ ಸಹ ಸ್ಪರ್ಧಿಸಲಿದ್ದಾರೆ. ಸೋಮಣ್ಣ ವರುಣಾ ಕ್ಷೇತ್ರದಲ್ಲಿ ಸಿದ್ದರಾಮಯ್ಯನವರಿಗೆ ಪ್ರಬಲ ಸ್ಪರ್ಧೆ ನೀಡಬಹುದಾದರೂ, ವಿಜಯ ಪತಾಕೆ ಹಾರಿಸುತ್ತಾರೆಯೇ ಎಂಬುದನ್ನು ಕಾದು ನೋಡಬೇಕು. ಅದೂ ಅಲ್ಲದೆ ಕ್ಷೇತ್ರಕ್ಕೆ ಹೊಸಬರಾದ ಅವರನ್ನು ಅಲ್ಲಿಯ ಮತದಾರ ಸ್ವೀಕರಿಸುತ್ತಾನೆಯೇ ಎಂಬುದು ಸಹ ಗಣನೆಗೆ ಬರುತ್ತದೆ. ಒಟ್ಟಿನಲ್ಲಿ ಇವರಿಬ್ಬರ ಸ್ಪರ್ಧೆಯಿಂದಾಗಿ ವರುಣಾ ಕ್ಷೇತ್ರ ಎಲ್ಲರ ಗಮನ ಸೆಳೆದಿದೆ. ಇನ್ನೇನು ಕೆಲವೇ ದಿನಗಳಲ್ಲಿ ತಾರಾ ಪ್ರಚಾರಕರು ಈ ಕ್ಷೇತ್ರಕ್ಕೆ ಲಗ್ಗೆ ಇಡಲಿದ್ದಾರೆ. ಯಾವ ಹೂವು ಯಾರ ಮುಡಿಗೋ ಅನ್ನುವ ಹಾಗೆ ಯಾರ ಓಟು ಯಾರಿಗೋ ಅಲ್ಲವೇ?

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು.

ದ್ವಿಚಕ್ರ ವಾಹನಗಳಂತೆ ಆಟೋರಿಕ್ಷಾಗಳನ್ನೂ ತಪಾಸಣೆ ನಡೆಸಿ

ಮಾನ್ಯರೆ,

ಇತ್ತೀಚೆಗೆ ಮೈಸೂರಿಗೆ ನನ್ನ ಸ್ವಂತ ಕೆಲಸಕ್ಕಾಗಿ ಬಂದಿದ್ದೆ. ಸರಸ್ವತಿಪುರಂನಿಂದ ಬಸ್ ನಿಲ್ದಾಣಕ್ಕೆ ಹೋಗಬೇಕಿತ್ತು. ಸರಸ್ವತಿಪುರಂ ಬಸ್ ನಿಲ್ದಾಣದಲ್ಲಿ ಆಟೋ ನಿಲ್ಲಿಸಿದೆ. ಆತ ಬಸ್ ನಿಲ್ದಾಣಕ್ಕೆ 150 ರೂ. ಕೇಳಿದ. ನಾನು ಮೀಟರ್ ಹಾಕಪ್ಪ. ಅದರಂತೆ ಹಣ ನೀಡುವುದಾಗಿ ತಿಳಿಸಿದೆ ಅದು ಆಗೋದಿಲ್ಲ ಬೇರೆ ಆಟೋ ನೋಡಿಕೊಳ್ಳಿ ಎಂದು ಉಡಾಫೆಯಿಂದ ಉತ್ತರಿಸಿ ಹೊರಟೆ ಬಿಟ್ಟ. ಮೈಸೂರಿನ ಆಟೋರಿಕ್ಷಾ ಚಾಲಕರಿಗೆ ಪೊಲೀಸರ ಭಯವಿಲ್ಲ. ಪೊಲೀಸರೂ ಸಹ ಪ್ರಯಾಣಿಕರಿಗೆ ಸ್ಪಂದಿಸುತ್ತಿಲ್ಲ. ಮಾನ್ಯ ಪೊಲೀಸ್ ಆಯುಕ್ತರಲ್ಲಿ ಒಂದು ಮನವಿ, ದ್ವಿಚಕ್ರ ವಾಹನಗಳನ್ನು ತಪಾಸಣೆ ಮಾಡುವಂತೆ ಆಟೋರಿಕ್ಷಾಗಳನ್ನು ತಪಾಸಣೆ ಮಾಡಿ, ಪರ ಊರಿನಿಂದ ಬರುವ ವ್ಯಕ್ತಿಗಳಿಂದ ಸುಲಿಗೆ ಮಾಡುವುದನ್ನು ತಡೆಯಬಹುದು. ಮೈಸೂರು ನಗರ ಪ್ರವಾಸಿಗರಿಂದ ತುಂಬಿರುತ್ತದೆ. ಯಾವುದೇ ಪ್ರವಾಸಿಗರಿಗೂ ಅನ್ಯಾಯವಾಗಬಾರದು. ನಗರ ಪೊಲೀಸ್ ಆಯುಕ್ತರು ಇದನ್ನು ಗಮನಿಸುವರೆ?

–ರಾಘವ ಆಚಾರ್ಯ, ಬನಶಂಕರಿ, ಬೆಂಗಳೂರು.

ಈ ರಸ್ತೆಯಲ್ಲಿ ಸಂಚರಿಸಿದರೆ ಗರ್ಭಿಣಿಯರಿಗೆ ಉಚಿತ ಹೆರಿಗೆ

ಮಾನ್ಯರೆ,

ಮೈಸೂರಿನ ಕುವೆಂಪುನಗರದ ನೃಪತುಂಗ ರಸ್ತೆ ಕೆಎಸ್‌ಆರ್‌ಟಿಸಿ ಡಿಪೋದಿಂದ ಕುವೆಂಪುನಗರ ವಾಣಿಜ್ಯ ಸಂಕೀರ್ಣದವರೆಗೂ ಅತ್ಯಂತ ಶೋಚನೀಯ ಸ್ಥಿತಿ ತಲುಪಿದೆ. ರಸ್ತೆ ತುಂಬಾ ಗುಂಡಿ ಬಿದ್ದಿದೆ. ತುಂಬಾ ಹದಗೆಟ್ಟಿರುವ ಈ ರಸ್ತೆಯಲ್ಲಿ ದ್ವಿಚಕ್ರ ವಾಹನ ಸವಾರರು, ಬಸ್ ಚಾಲಕರು ತುಂಬಾ ಪ್ರಯಾಸದಿಂದಲೇ ವಾಹನ ಚಲಾಯಿಸುವ ಪರಿಸ್ಥಿತಿ ಒದಗಿದೆ. ಗರ್ಭಿಣಿಯರು ಈ ರಸ್ತೆಯಲ್ಲಿ ವಾಹನದಲ್ಲಿ ಸಂಚರಿಸಿದರೆ ಉಚಿತ ಹೆರಿಗೆ ಗ್ಯಾರಂಟಿ.

ಸಂಬಂಧಪಟ್ಟ ಜನಪ್ರತಿನಿಧಿಗಳು, ಅಧಿಕಾರಿಗಳು ಇದರ ಬಗ್ಗೆ ಗಮನಹರಿಸಿ ಸಮಸ್ಯೆ ಬಗೆಹರಿಸುವಂತೆ ಮನವಿ. – ನೊಂದ ನಾಗರಿಕರು, ಮೈಸೂರು.

'ಧಮ್ಮ ಪದ ಸಾರ'

ಮಾನ್ಯರೆ,

ಪ್ರೊ. ಎಸ್. ಶಿವಾಜಿ ಜೋಯಿಸರು ಶ್ರಮಿಸಿ ಸಂಗ್ರಹಿಸಿದ ಬುದ್ಧ (ಧರ್ಮ) ಸಂಬಂಧವಾದ ಸಾವಿರಾರು ಗ್ರಂಥಗಳನ್ನು ಈಚೆಗೆ ನಗರದಲ್ಲಿ ಪ್ರದರ್ಶಿಸಿದ್ದು ಅತ್ಯಂತ ಅಭಿನಂದನೀಯವಾದ, ಪ್ರ'ಬುದ್ಧ'ವಾದ ಕಾರ್ಯ! ಅವರ ಸಂಗ್ರಹದಲ್ಲಿ ನನ್ನ 'ಧಮ್ಮಪದ ಸಾರ' ಎಂಬ ಪುಟ್ಟ ಕೃತಿಯೂ ಸೇರಿದೆಯೇ (ನಾನು ನೋಡಲಿಲ್ಲ).

ಹಿಂದೂಗಳಿಗೆ ಭಾಗವದ್ಗೀತೆ ಹೇಗೋ, ಕ್ರೈಸ್ತರಿಗೆ ಬೈಬಲ್ ಹೇಗೋ, ಇಸ್ಲಾಮಿಗಳಿಗೆ ಕುರಾನ್ ಹೇಗೋ, ಬೌದ್ಧರಿಗೆ ಧಮ್ಮಪದ (ಧರ್ಮಪಥ) ಹಾಗೆ. ಅದು 26 'ವರ್ಗ'ಗಳಲ್ಲಿ ವ್ಯವಸ್ಥಿತವಾದ 423 ಪದ್ಯಗಳನ್ನುಳ್ಳ ಬುದ್ಧನ ಉಪದೇಶಗಳ ಸಂಕಲನ; ಪಾಳಿಯಲ್ಲಿರುವ ಬೌದ್ಧ ಧರ್ಮೀಯ ಪವಿತ್ರ ಗ್ರಂಥವಾದ 'ತ್ರಿಪಿಟಕ'ದ 'ಖುದ್ದಕ ನಿಕಾಯಕ್ಕೆ ಸೇರಿದ್ದು; ಬುದ್ಧ ಬೋಧನೆಗಳಲ್ಲಿ ಅತ್ಯಂತ ಸಂಕ್ಷಿಪ್ತವಾದುದು. (ನಾನು ಕಾವ್ಯಾತ್ಮಕವಾದ 218ನ್ನು ಮಾತ್ರ ಆರಿಸಿ, ಕನ್ನಡಿಸಿದ್ದೇನೆ).

ಬುದ್ಧನ ಉಪದೇಶವೇ ಧಮ್ಮ. ಅದು ಯಾವುದೇ ಪೂರ್ವಾಧಿಕಾರ ವಿಧಿಸಿದ್ದಲ್ಲ; ಯಾವುದೇ ಸಿದ್ಧಾಂತಕ್ಕೆ ಬದ್ಧವಾದುದಲ್ಲ. ಬುದ್ಧನ ಸ್ವಂತ ಸತ್ಯ ಸಾಕ್ಷಾತ್ಕಾರವೇ ಅದರ ಆಕರ. ಬದುಕಿನ ಸ್ವರೂಪವನ್ನು, ನಿರ್ವಾಣದ ಮಾರ್ಗವನ್ನೂ ಅದು ತಿಳಿಸಿಕೊಡುತ್ತದೆ. ಧಮ್ಮ ಪದದ ಪದ್ಯಗಳೆಂದರೆ ಬೆಳಕಿನ ಹರಳುಗಳು; ಬಾಳಿನ ಗುರಿಯನ್ನರಿಹುವ, ನಿಜವಾದ ಸುಖಕ್ಕೆ, ಆನಂದಕ್ಕೆ ಕರೆದೊಯ್ಯುವ ಕಲ್ಪತರು ಬುದ್ಧಗುರುವಿನ ಈ ಉಪದೇಶ ಪರಂಪರೆ!

ನಿದರ್ಶನಕ್ಕೆ ಇದೊಂದು ಪದ್ಯಾನುವಾದ
ಜಾಜಿಯು ಬಳ್ಳಿಯು ಬಾಡಿದ ಹೂಗಳ
ನೆಂತು ಕಳಚಿಕೊಳ್ಳುವುದಂತು
ಓ ಭಿಕ್ಷುಗಳೆ, ನೀವು ರಾಗದ್ವೇಷಗಳನು
ಕಳಚಿ ಬಿಸಾಡುವುದೊಳಿತು!

–ಸಿಪಿಕೆ, ಮೈಸೂರು.

ಪದ್ಮ ಪ್ರಶಸ್ತಿ; ಡಾ.ಎಸ್.ಎಲ್.ಭೈರಪ್ಪನವರು ಪ್ರಧಾನಿ ಮೋದಿಯವರನ್ನು ಭೇಟಿಯಾದ ಅವಿಸ್ಮರಣೀಯ ಕ್ಷಣ

“ಇತ್ತೀಚೆಗೆ ರಾಷ್ಟ್ರಪತಿ ಭವನದಲ್ಲೇ ನಡೆದ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಾದ ಪದ್ಮ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಖ್ಯಾತ ಸಾಹಿತಿ ಎಸ್.ಎಲ್.ಭೈರಪ್ಪ ಸೇರಿದಂತೆ ಪ್ರಶಸ್ತಿ ಪುರಸ್ಕೃತರ ಸಂಬಂಧಿಗಳೊಂದಿಗೆ ಪ್ರಧಾನಿ ಮೋದಿ ಆತ್ಮೀಯವಾಗಿ ಸಂವಾದಿಸಿದ ಕ್ಷಣದ ವಿವರಣೆ ಇದು...

■ ಪ್ರೊ.ಜಿ.ಎಲ್.ಶೇಖರ್



ಪ್ರಧಾನಿ ನರೇಂದ್ರ ಮೋದಿಯವರು ಮೈಸೂರಿನ ಖ್ಯಾತ ಕಾದಂಬರಿಕಾರ ಡಾ.ಎಸ್.ಎಲ್.ಭೈರಪ್ಪ ಅವರ ಕುಶಲೋಪರಿ ನಡೆಸುತ್ತಿರುವುದನ್ನು ಕಾಣಬಹುದು. ಸುಧಾಮೂರ್ತಿ ಅವರೂ ಚಿತ್ರದಲ್ಲಿದ್ದಾರೆ.

ಪದ್ಮ ಪ್ರಶಸ್ತಿ ಪುರಸ್ಕೃತರ ಕಡೆಗೆ ಪ್ರಧಾನಿ ನರೇಂದ್ರ ಮೋದಿಯವರು ನಮಸ್ಕರಿಸುತ್ತಾ ಬಂದವರೇ, ನಮಸ್ತೆ ಭೈರಪ್ಪಜಿ... ಆಪ್ ಕೈಸೇ ಹೇ... ಎಂದು ಗೌರವಪೂರ್ವಕವಾಗಿ ಕೇಳುತ್ತಾರೆ. 'ನಾನು ಕರ್ನಾಟಕದ ಎಸ್.ಎಲ್.ಭೈರಪ್ಪ, ಕನ್ನಡ ಕಾದಂಬರಿಕಾರ (ವಿನಯ ಪೂರ್ವಕ ನಮಸ್ಕಾರದೊಂದಿಗೆ ಪ್ರತಿಕ್ರಿಸಿ)' ಎಂದು ಭೈರಪ್ಪನವರು ಹೇಳುತ್ತಿದ್ದಂತೆ ಅದಕ್ಕೆ ತಕ್ಷಣವೇ ಪ್ರತಿಕ್ರಿಯಿಸಿದ ಮೋದಿಯವರು 'ಸರ್ ನೀವು ಯಾರಿಗೆ ತಾನೇ ಗೊತ್ತಿಲ್ಲ' ಎಂದು ಭೈರಪ್ಪರ ಕೈಗಳನ್ನು ಹಿಡಿದು ಅತ್ಯಂತ ಗೌರವದಿಂದ ನುಡಿದರು.

ಹೀಗೆ ಅವರ ನಡುವಿನ ಸಂಕ್ಷಿಪ್ತ ಸಂಭಾಷಣೆ ಮುಂದುವರೆಯುತ್ತದೆ. 'ನೀವು ಈಗ ಯಾವ ಪುಸ್ತಕ ಬರೆಯುತ್ತಿದ್ದೀರಾ? ಎಂದು ಪ್ರಧಾನಿಗಳು ಕೇಳುತ್ತಿದ್ದಂತೆ 'ಸದ್ಯಕ್ಕೆ ಯಾವುದೇ ಪುಸ್ತಕ ಬರೆಯುತ್ತಿಲ್ಲ' ಎಂದು ಭೈರಪ್ಪ ಉತ್ತರಿಸಿದರು. 'ದಯವಿಟ್ಟು ಕಾದಂಬರಿ ಬರೆಯುವುದನ್ನು ನಿಲ್ಲಿಸಬೇಡಿ ಸರ್, ಭಾರತದಾದ್ಯಂತ ನಿಮ್ಮ ಓದುಗರು ಇದ್ದಾರೆ. ಅವರು ನಿಮ್ಮ ಪರಿಪಕ್ವ ಜ್ಞಾನದಿಂದ ಹೊಸ ಬರವಣಿಗೆ ಬಯಸುತ್ತಾರೆ' ಎಂದು ಪ್ರಧಾನಿಗಳು ಹೇಳುತ್ತಿದ್ದಂತೆ ಭೈರಪ್ಪನವರು ಮುಗುಳ್ನಕ್ಕರು.

ಮುಂದುವರೆದು ಪ್ರಧಾನಿಗಳು, 'ನಿಮ್ಮ ಆರೋಗ್ಯ ಹೇಗಿದೆ? (ಬಹುಶಃ ಭೈರಪ್ಪನವರು ಅತ್ಯಂತ ಶಿಸ್ತಿನ ವ್ಯಕ್ತಿತ್ವದವರು ಎಂಬುದು ಮೋದಿಯವರಿಗೂ ಗೊತ್ತಿರಬೇಕು). ನೀವು ಯಾವ ಔಷಧಿಗಳನ್ನು ತೆಗೆದುಕೊಳ್ಳುತ್ತೀರಿ? ನೀವು ಬೆಳಗ್ಗೆ ವಾಯು ವಿಹಾರಕ್ಕೆ ಹೋಗುತ್ತಿದ್ದೀರಾ? ಎಂಬ ಮೋದಿಯವರ ಆತ್ಮೀಯ ಮತ್ತು ಸೌಜನ್ಯದ ಮಾತುಗಳು ಭೈರಪ್ಪರನ್ನು ಆವರಿಸಿತು. ತಾವು ಪ್ರಧಾನಿ ಎಂಬ ದೊಡ್ಡಸ್ತಿಕೆ ಇಲ್ಲದ ಮೋದಿಯವರ ಕಳಕಳಿ ಅಲ್ಲಿ ಅನಾವರಣಗೊಂಡಿತ್ತು.

ಏ.5ರಂದು ಪದ್ಮ ಪ್ರಶಸ್ತಿ ಪ್ರಧಾನ ಸಮಾರಂಭದ ಬಳಿಕ ಮೋದಿಯವರು ಪ್ರತಿಯೊಬ್ಬ ಪ್ರಶಸ್ತಿ ಪುರಸ್ಕೃತರನ್ನು ಆತ್ಮೀಯವಾಗಿ ಕುಶಲೋಪರಿ ವಿಚಾರಿಸಿದ ಕ್ಷಣಗಳಲ್ಲಿ ಭೈರಪ್ಪರೊಂದಿಗೆ ಪ್ರಧಾನಿಗಳು ಮಾತುಕತೆ ನಡೆಸಿದ ಸಂದರ್ಭವಿದು. ಪ್ರಶಸ್ತಿ ಪುರಸ್ಕೃತರ ಜೊತೆಗಿದ್ದವರ ಬಗ್ಗೆಯೂ ಮೋದಿಯವರು ಆತ್ಮೀಯ ಭಾವ ವ್ಯಕ್ತಪಡಿಸಿದರು. ನಗುಮುಖದಿಂದ ಯುವಕರ ಬೆನ್ನುತಟ್ಟಿ ಪ್ರೇರೇಪಿಸಿದರು.

ಸೌಜನ್ಯದ ಆತಿಥ್ಯ: ರಾಷ್ಟ್ರಪತಿ ಭವನದಲ್ಲಿ ಏರ್ಪಡಿಸಿದ್ದ ಚಹಾಕೂಟದ ನಂತರ ಇಲ್ಲಿಂದ ಕೆಲವೇ ಕಿಲೋಮೀಟರ್ ದೂರುದಲ್ಲಿರುವ ಸುಷ್ಮಾ ಸ್ವರಾಜ್ ಭವನದ ನಳಂದ ಬಾಂಕ್ವೆಟ್ ಹಾಲ್‌ನಲ್ಲಿ ಕೇಂದ್ರ ಗೃಹ ಸಚಿವ ಹಾಗೂ ಸಹಕಾರ ಸಚಿವ ಅಮಿತ್ ಶಾ ಅವರು ಪ್ರಶಸ್ತಿ ಪುರಸ್ಕೃತರು ಮತ್ತು ಅವರ ಕುಟುಂಬ ಸದಸ್ಯರಿಗೆ ಭೋಜನ ಏರ್ಪಡಿಸಿದ್ದರು. ಇಲ್ಲಿ ಸಹ ಅನೇಕ ಕೇಂದ್ರ ಸಚಿವರು ಪ್ರಶಸ್ತಿ ಪುರಸ್ಕೃತರು ಹಾಗೂ ಅವರ ಕುಟುಂಬ ಸದಸ್ಯರಿಗೆ ಅತ್ಯಂತ ಸೌಜನ್ಯದಿಂದ ಅತಿಥ್ಯ ನೀಡಿದರು. ಪ್ರಶಸ್ತಿ ಪುರಸ್ಕೃತರಿಗೆ ಪ್ರತ್ಯೇಕ ಸ್ಥಳ ನಿಗದಿಪಡಿಸಿದ್ದರೂ ಅವರ ಕುಟುಂಬ ಸದಸ್ಯರೂ ಅವರ ಸನಿಹದಲ್ಲೇ ಕುಳಿತಿದ್ದರು. ರಾಷ್ಟ್ರ ನಿರ್ಮಾಣ ಸಂಬಂಧ ಸಂವಾದ ನಡೆಸಲು ಮತ್ತು ಪ್ರಶಸ್ತಿ ಪುರಸ್ಕೃತರ ಅಭಿಪ್ರಾಯ ವ್ಯಕ್ತಪಡಿಸಲು ಪ್ರತಿ ಪ್ರಶಸ್ತಿ ಪುರಸ್ಕೃತರ ಮೇಜಿನೊಂದಿಗೆ ಒಬ್ಬ ಕೇಂದ್ರ ಅಥವಾ ರಾಜ್ಯ ಸಚಿವರು ಕುಳಿತಿದ್ದರು. ಅಂತೆಯೇ ಡಾ.ಭೈರಪ್ಪ ಅವರ ಮೇಜಿನಲ್ಲಿ ರಾಜಸ್ಥಾನ ಸರ್ಕಾರದ ಕಾಂಗ್ರೆಸ್ ಮಂತ್ರಿ ಆಸೀನರಾಗಿದ್ದರು! ಪ್ರಶಸ್ತಿ ಪುರಸ್ಕೃತರೊಂದಿಗೆ ಸಂವಾದ ನಡೆಯುತ್ತಿದ್ದಂತೆ ಅಮಿತ್ ಶಾ, ಪಿಯೂಷ್ ಗೋಯಲ್ ಮತ್ತು ಅನುರಾಗ್ ಠಾಕೂರ್ ಸೇರಿದಂತೆ ಇನ್ನಿತರ ಸಚಿವರು, ಪ್ರಶಸ್ತಿ ಪುರಸ್ಕೃತರು ಹಾಗೂ ಅವರ ಕುಟುಂಬ ಸದಸ್ಯರಿಗೆ ಶುಭಾಶಯ ಕೋರಿದರು.



ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಜೊತೆಗೆ ಡಾ.ಭೈರಪ್ಪ ಅವರ ಪುತ್ರ ಉದಯ್ ಶಂಕರ್ ಅವರು ಸೆಲ್ಫಿ ತೆಗೆದುಕೊಂಡ ಕ್ಷಣ.

ಮಧ್ಯವರ್ತಿಗಳು ಸಹ ಈ ಪ್ರಶಸ್ತಿಗಳನ್ನು ಪಡೆಯುತ್ತಿದ್ದರು. ಈ ಪ್ರಶಸ್ತಿ ಹೆಚ್ಚು ಗಣ್ಯರ ಕೇಂದ್ರೀತವಾಗಿತ್ತು. ಆದರೆ ಈಗ ಅರ್ಹರು ಪ್ರಶಸ್ತಿಗೆ ಭಾಜನರಾಗುತ್ತಿದ್ದಾರೆ.

ಕಾಶಿಯ 125 ವರ್ಷದ ಯೋಗ ಗುರು ಸ್ವಾಮಿ ಶಿವಾನಂದ, ಮಂಗಳೂರಿನ ಬುಡಕಟ್ಟು ಸಾವಯವ ಕೃಷಿಕ ಅಮೈ ಮಹಾಲಿಂಗ ನಾಯ್ಕ, ಜೋಗಮ್ಮ ಪರಂಪರೆಯ ತೃತೀಯಲಿಂಗಿ ಜಾನಪದ ನೃತ್ಯಗಾರ್ತಿ ಮಂಜಮ್ಮ ಜೋಗತಿ, ಅರಣ್ಯದ ವಿಶ್ವಕೋಶ ಎಂದೇ ಪ್ರಸಿದ್ಧಿ ಪಡೆದಿರುವ ಹೊನ್ನಾಳಿ ಗ್ರಾಮದ ಹಾಲಕ್ಕಿ ಬುಡಕಟ್ಟು ಮಹಿಳೆ ತುಳಸಿ ಗೌಡ ಅವರಂತಹವರು ರಾಷ್ಟ್ರಪತಿ ಭವನ ಪ್ರವೇಶಿಸಿದ ದಿನಗಳಲ್ಲಿ ನಾವಿದ್ದೇವೆ.

ನನ್ನ ತಪ್ಪು ಕಲ್ಪನೆ ನೀಗಿದ್ದೀರಾ!: ಏ.5 ರಂದು ಪದ್ಮಶ್ರೀ ಪ್ರಶಸ್ತಿ ಪಡೆದ ನಂತರ 'ಮೋದಿಜಿ, ನೀವು ನನ್ನ ತಪ್ಪು ಕಲ್ಪನೆ ನೀಗಿದ್ದೀರಾ ಎಂದು ಬಿದ್ರಿ ಕರಕುಶಲ ಕಲಾವಿದ ರಶೀದ್ ಅಹ್ಮದ್ ಕ್ವಾದ್ರಿ, ಮೋದಿಯವರಲ್ಲಿ ಹೇಳಿಕೊಳ್ಳುವ ಮೂಲಕ ಬಿಜೆಪಿ ಮುಸಲ್ಮಾನರಿಗೆ ಪ್ರಶಸ್ತಿ ನೀಡುವುದಿಲ್ಲ ಎಂದು ತಾವು ತಪ್ಪಾಗಿ ಭಾವಿಸಿದ್ದನ್ನು ಬಹಿರಂಗಪಡಿಸಿದ್ದಾರೆ.

'ಸಣ್ಣ ಹೆಜ್ಜೆಗಳು ದೊಡ್ಡ ಬದಲಾವಣೆಗಳನ್ನು ತರುತ್ತವೆ. ನಾವು ಮೌನವಾಗಿ ಕೆಲಸ ಮಾಡುವವರನ್ನು ಗುರುತಿಸುವ ಮೂಲಕ ಪದ್ಮ ಪ್ರಶಸ್ತಿಗೆ ಆಯ್ಕೆ ವಿಧಾನವನ್ನು ಸುಧಾರಿಸಿದ್ದೇವೆ ಎಂದು ಪ್ರಧಾನಿ ಮೋದಿ ಹೇಳಿಕೊಂಡಿದ್ದಾರೆ. ರಾಜಕೀಯವನ್ನು ಬದಿಗಿಟ್ಟು ಪ್ರಶಸ್ತಿಗಳನ್ನು ಭಾರತದ ಮಹತ್ತರವಾದ ಉದ್ದೇಶಕ್ಕಾಗಿ ಕೊಡುಗೆ ನೀಡಿದವರನ್ನು ಗುರುತಿಸಬೇಕು ಎಂದು ಅವರು ಆಗಾಗ್ಗೆ ಹೇಳಿದ್ದಾರೆ. ವಿರೋಧ ಪಕ್ಷಗಳ ಅನೇಕ ರಾಜಕೀಯ ನಾಯಕರು ಪದ್ಮ ಪ್ರಶಸ್ತಿಗಳಿಂದ ಗೌರವಿಸಲ್ಪಟ್ಟಿದ್ದಾರೆ ಎಂಬ ಅಂಶ ಅವಲೋಕಿಸಿದರೆ ಅವರ ದೃಷ್ಟಿಕೋನ ಸ್ಪಷ್ಟವಾಗುತ್ತದೆ.

ಪದ್ಮ ಪ್ರಶಸ್ತಿಯಲ್ಲಿ ಸ್ವಾಗತಾರ್ಹ ಬದಲಾವಣೆ: ಪ್ರಧಾನಿ ಮೋದಿ ಮತ್ತು ಅವರ ಸಚಿವರು ತೋರಿದ ಗೌರವ ಮತ್ತು ಕೊಟ್ಟ ಆತಿಥ್ಯ ಮಹೋನ್ನತವಾದುದು ಎಂದು ಡಾ.ಭೈರಪ್ಪ ಹೇಳುತ್ತಾರೆ. ಮೋದಿಯವರ ಸರ್ಕಾರದಲ್ಲಿ ಪದ್ಮ ಪ್ರಶಸ್ತಿಗಳನ್ನು ನೀಡುವಲ್ಲಿ ಸ್ವಾಗತಾರ್ಹ ಬದಲಾವಣೆ ಆಗಿದೆ. ಪದ್ಮ ಪ್ರಶಸ್ತಿಗಳನ್ನು ಬಹಳ ಹಿಂದೆಯೇ ಸ್ಥಾಪಿಸಲಾಗಿದ್ದರೂ ರಾಷ್ಟ್ರ ರಾಜಧಾನಿಯಲ್ಲಿನ ಶಕ್ತಿ ವಲಯಗಳೊಂದಿಗೆ ಗುರುತಿಸಿಕೊಂಡ ವ್ಯಕ್ತಿಗಳಿಗೆ ಮಾತ್ರ ಈ ಪ್ರಶಸ್ತಿ ನೀಡುವ ಅಪಖ್ಯಾತಿ ಈ ಮೊದಲು ಇದ್ದಿತು. ಉದಾಹರಣೆಗೆ, 2014ರ ಮೊದಲು ಮಂತ್ರಿಗಳೊಂದಿಗೆ ಸಂಪರ್ಕ ಹೊಂದಿದ ದೊಡ್ಡ ಪತ್ರಕರ್ತರು, ಸಂಶಯಾಸ್ಪದ ನಾಮನಿರ್ದೇಶನ ಪ್ರಕ್ರಿಯೆಯು ಸಾರ್ವಜನಿಕರಿಗೆ ಮುಕ್ತವಾಗಿದ್ದು, ಸ್ವಯಂ ನಾಮನಿರ್ದೇಶನ ಸಹ ಮಾಡಬಹುದು.

ರಾಷ್ಟ್ರಪತಿ ಭವನದ ದರ್ಬಾರ್ ಹಾಲ್‌ನಲ್ಲಿ ನಡೆದ ನಾಗರಿಕ ಪದವಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪದ್ಮ ಪ್ರಶಸ್ತಿಗಳನ್ನು ಎರಡು ಸುತ್ತುಗಳಲ್ಲಿ ಪ್ರದಾನ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು (ಮೊದಲನೇ ಸುತ್ತು ಮಾ.22 ಹಾಗೂ ಎರಡನೇ ಸುತ್ತು ಏ.5). ರಾಷ್ಟ್ರಪತಿಗಳು ಒಟ್ಟು 106 ಪದ್ಮ ಪ್ರಶಸ್ತಿಗಳ ಪ್ರದಾನಕ್ಕೆ ಅನುಮೋದನೆ ನೀಡಿದ್ದರು. 106 ಪ್ರಶಸ್ತಿ ಪುರಸ್ಕೃತರಲ್ಲಿ 6 ಮಂದಿ ಪದ್ಮವಿಭೂಷಣ, 9 ಮಂದಿ ಪದ್ಮಭೂಷಣ ಹಾಗೂ 91 ಮಂದಿ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಸುಧಾಮೂರ್ತಿ ಸೇರಿದಂತೆ ಪ್ರಶಸ್ತಿ ಪುರಸ್ಕೃತರಲ್ಲಿ 19 ಮಂದಿ ಮಹಿಳೆಯರು ಎಂಬುದು ಗಮನಾರ್ಹ.



ಮೋದಿಯವರಲ್ಲಿ ರಶೀದ್ ಅಹ್ಮದ್ ಖಾದ್ರಿ ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ ಸಂದರ್ಭ.



ಪ್ರಧಾನಿ ನರೇಂದ್ರ ಮೋದಿ, ಪ್ರಶಸ್ತಿ ಪುರಸ್ಕೃತರ ಕುಟುಂಬ ಸದಸ್ಯರ ಕುಶಲೋಪರಿ ವಿಚಾರಿಸಿದರು.

'ಮಾತಿನಲ್ಲಿ ವ್ಯಕ್ತಪಡಿಸಲಾಗದ ಹೆಮ್ಮೆ'



ಲೇಖಕಿ ಮತ್ತು ಲೋಕೋಪಕಾರಿ ಸುಧಾಮೂರ್ತಿ ಅವರ ಸಾಮಾಜಿಕ ಕಾರ್ಯಗಳನ್ನು ಗುರುತಿಸಿ ಪದ್ಮಭೂಷಣ ಪ್ರಶಸ್ತಿ ನೀಡಲಾಗಿದೆ. ಯುಕೆ ಪ್ರಧಾನಮಂತ್ರಿ ರಿಷಿ ಸುನಕ್ ಅವರನ್ನು ವಿವಾಹವಾಗಿರುವ ಸುಧಾಮೂರ್ತಿ ಪುತ್ರಿ ಅಕ್ಷತಾ ಮೂರ್ತಿ ಸಹ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿದವರಲ್ಲಿ ಒಬ್ಬರು. ಸಮಾರಂಭದ ನಂತರ ತಮ್ಮ ತಾಯಿ ಪ್ರಶಸ್ತಿ ಸ್ವೀಕರಿಸಿದ ಕ್ಷಣಗಳನ್ನು ಹಂಚಿಕೊಳ್ಳಲು ಅವರು 'ಇನ್ಸ್ಟಾಗ್ರಾಮ್' ಮೊರೆ ಹೋದರು. ಇದಕ್ಕೆ ಪ್ರತಿಕ್ರಿಯಿಸಿದ ಯುಕೆ ಪ್ರಧಾನಿ ರಿಷಿ ಸುನಕ್, ಇದು 'ಹೆಮ್ಮೆಯ ದಿನ' ಎಂದು ಹೇಳಿದ್ದಾರೆ. 'ನನ್ನ ತಾಯಿ ಭಾರತದ ರಾಷ್ಟ್ರಪತಿಗಳಿಂದ ಪದ್ಮಭೂಷಣ ಪ್ರಶಸ್ತಿ ಸ್ವೀಕರಿಸಿದ ಕ್ಷಣವು ಹೇಳಲಾಗದಷ್ಟು ಹೆಮ್ಮೆಯಿಂದ ಕೂಡಿದೆ. ನನ್ನ ತಾಯಿ ಯಾವ ಮನ್ನಣೆಗಾಗಿ ಬದುಕುವುದಿಲ್ಲ. ನನ್ನ ಹೆತ್ತವರು ನನ್ನ ಸಹೋದರ ಮತ್ತು ನನ್ನಲ್ಲಿ ಕಠಿಣ ಪರಿಶ್ರಮ, ನಮ್ರತೆ, ನಿಸ್ವಾರ್ಥತೆ ಎಂಬ ಮೌಲ್ಯಗಳನ್ನು ತುಂಬಿದ್ದಾರೆ. ಅವರು ಪ್ರಶಸ್ತಿ ಸ್ವೀಕರಿಸಿದ ಕ್ಷಣವನ್ನು ನೋಡುವುದು ಅತೀವ ರೋಮಾಂಚಕಾರಿ ಅನುಭವ ನೀಡಿತು' ಎಂದು ಅವರು ಮುಕ್ತಾಯಗೊಳಿದ್ದಾರೆ.



ರಿಷಿ ಸುನಕ್

ಇದಕ್ಕೆ ಪ್ರತಿಕ್ರಿಯಿಸಿರುವ ರಿಷಿ ಸುನಕ್, 'ಇದೊಂದು ಹೆಮ್ಮೆಯ ದಿನ' ಎಂದು ಎರಡು ಚಪ್ಪಾಳೆ ಎಮೋಜಿಗಳೊಂದಿಗೆ ಕಾಮೆಂಟ್ ಮಾಡಿದ್ದಾರೆ. ಸುಧಾಮೂರ್ತಿ ಅವರ ಪತಿ ಹಾಗೂ ಇನ್ಫೋಸಿಸ್ ಸಂಸ್ಥಾಪಕ ಎನ್.ಆರ್. ನಾರಾಯಣಮೂರ್ತಿ, ಅವರ ಪುತ್ರ ರೋಹನ್‌ಮೂರ್ತಿ, ಸಹೋದರಿ ಡಾ.ಸುನಂದಾ ಕುಲಕರ್ಣಿ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಕೊಡವರ ಹೆಮ್ಮೆ...




1962ರಲ್ಲಿ ಅಂದಿನ ರಾಷ್ಟ್ರಪತಿ ಡಾ.ಎಸ್.ರಾಧಾಕೃಷ್ಣನ್ ಅವರಿಂದ ಶಿಕ್ಷಕ ಡಿ.ಕೆ.ಅಪ್ಪಯ್ಯ ಅವರು ಬೋಧನೆಗಾಗಿ ಪ್ರತಿಷ್ಠಿತ ರಾಷ್ಟ್ರಪತಿ ಪ್ರಶಸ್ತಿ ಸ್ವೀಕರಿಸಿದರು. ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ಸಾಂಪ್ರದಾಯಿಕ ಕೊಡವ ಉಡುಪು ಧರಿಸಿ ಪ್ರಶಸ್ತಿ ಸ್ವೀಕರಿಸಿದವರು ಇವರೇ ಮೊದಲಿರಬಹುದು. ಅಪ್ಪಯ್ಯ ಅವರು ಕೊಡಗಿನ ಅಮ್ಮತ್ತಿಯ ರಘು ಮತ್ತು ಅಂಜು ಅವರ ತಂದೆ. (ಚಿತ್ರ ಕೃಪೆ ; ವಾಟ್ಸಪ್)

ಬಣ್ಣದ ಲೋಕದ ಚಿಣ್ಣರು ದೇಸಿ ಸೊಗಡಿನ ಶಿಬಿರ

ಮೈಸೂರು,ಏ.12–ಮೈಸೂರಿನ ವರ್ಣ ಮೈಸೂರು ಸಂಸ್ಥೆ ವತಿಯಿಂದ ಏ.16ರಿಂದ ಮೇ 1 ರವರೆಗೆ 7ರಿಂದ 14 ವರ್ಷದೊಳಗಿನ ಮಕ್ಕಳಿಗಾಗಿ ಧ್ವನ್ಯಾಲೋಕದಲ್ಲಿ ಬಣ್ಣದ ಲೋಕದ ಚಿಣ್ಣರು ದೇಸಿ ಸೊಗಡಿನ ಬೇಸಿಗೆ ಶಿಬಿರ ಆಯೋಜಿಸಲಾಗಿದೆ. ಶಿಬಿರದಲ್ಲಿ ದೇಸಿ ಆಟಗಳು, ಕೋಲಾಟ, ಕರಕುಶಲ, ರಂಗಭೂಮಿ ಚಟುವಟಿಕೆಗಳು, ನಾಟಕ ತಯಾರಿ, ಜಾನಪದ ಹಾಗೂ ನೃತ್ಯ, ಪರಿಸರ ಸಂಚಾರ, ಯಕ್ಷಗಾನ, ಯೋಗ, ರಂಗಪ್ರಸಾದನ, ನವರಸಾಭಿನಯ, ಚಿತ್ರಕಲೆ, ಬೆಳದಿಂಗಳೂಟ, ಬಂಧ ಬೆಸುಗೆ ಇತ್ಯಾದಿ ದೇಸಿ ಚಟುವಟಿಕೆಗಳು ಇರುತ್ತವೆ. ಮಾಹಿತಿಗೆ ಮೊ. 9481800239, 9008213521 ಸಂಪರ್ಕಿಸಬಹುದು.

ಸಿಎಂ ಬಸವರಾಜ ಬೊಮ್ಮಾಯಿ ಟೆಂಪಲ್ ರನ್: ಧರ್ಮಸ್ಥಳ, ಕುಕ್ಕೆ ಸೇರಿ ಹಲವು ದೇಗುಲಗಳಿಗೆ ಭೇಟಿ



ಮಂಗಳೂರು: ವಿಧಾನಸಭೆ ಚುನಾವಣೆಗೆ ಟಿಕೆಟ್ ಘೋಷಣೆಯಾದ ಬೆನ್ನಲ್ಲೇ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ದಕ್ಷಿಣ ಕನ್ನಡದ ವಿವಿಧ ದೇಗುಲಗಳಿಗೆ ಭೇಟಿ ನೀಡುತ್ತಿದ್ದಾರೆ. ಸದ್ಯ ಕುಟುಂಬಸಮೇತರಾಗಿ ಬೆಳ್ತಂಗಡಿ ತಾಲೂಕಿನ ಧರ್ಮಸ್ಥಳಕ್ಕೆ ಭೇಟಿ ನೀಡಿರುವ ಅವರು, ಮಂಜುನಾಥನ ದರ್ಶನ ಪಡೆಯಲಿದ್ದಾರೆ. ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಧರ್ಮಸ್ಥಳದಿಂದ ಕುಕ್ಕೆಸುಬ್ರಹ್ಮಣ್ಯಕ್ಕೂ ಭೇಟಿನೀಡಲಿದ್ದಾರೆ. ಇಂದು ರಾತ್ರಿ ಮಂಗಳೂರಿನಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಗುರುವಾರ ಮುಂಜಾನೆ ಕೊಲ್ಲೂರಿಗೂ ತೆರಳಿ, ನಂತರ ಕಟೀಲು ದೇಗುಲ ಮತ್ತು ಉಳ್ಳಾಲದ ಪ್ರಸಿದ್ದ ಸೋಮನಾಥ ದೇಗುಲಕ್ಕೆ ತೆರಳಿ ದರ್ಶನ ಪಡೆಯಲಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲೂಕಿನ ಧರ್ಮಸ್ಥಳದಲ್ಲಿ ಅಧಿಕಾರಿಗಳ ತಂಡ ಬೊಮ್ಮಾಯಿ ಅವರ ಹೆಲಿಕಾಪ್ಟರ್ ಪರಿಶೀಲನೆ ನಡೆಸಿತು. ಹೆಲಿಕಾಪ್ಟರ್, ಸೂಟ್‌ಕೇಸ್ ಅನ್ನು ಅಧಿಕಾರಿಗಳು ಪರಿಶೀಲಿಸಿದರು. ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಅಧಿಕಾರಿಗಳು ರಾಜಕಾರಣಿಗಳ ಚಲನವಲನಗಳ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಟಿವಿ ರಿಪೇರಿ
ಎಲ್‌ಸಿಡಿ, ಎಲ್‌ಇಡಿ ಟಿವಿ
Service at your doorstep.
Mob: 9880066886

WANTED
MLM LEADERS FOR REPUTED COMPANY
7624874832
8660338292

ವೃದ್ಧಾಶ್ರಮ
ಹಿರಿಯ ಜೀವಗಳಿಗೆ, ಹಾಸಿಗೆ ಹಿಡಿದ ವೃದ್ಧರು, ಪಾರ್ಶವಾಯು ಪೀಡಿತರು, ಹಾಗೂ ಕೈಲಾಗದ ವಯೋ ವೃದ್ಧರನ್ನು ಮನೆಯಂತೆಯೇ ನೋಡಿಕೊಳ್ಳುತ್ತಿರುವ ಸಂಸ್ಥೆ ನಮ್ಮ ಮೈಸೂರಿನಲ್ಲಿ ಊಟ ವಸತಿಯೊಂದಿಗೆ ಇಚ್ಛೆವುಳ್ಳವರು ಸಂಪರ್ಕಿಸಿ
9110455297 | 9591557126

ಮೈಸೂರು ಮ್ಯಾರೇಜ್ ಬ್ಯೂರೋ
ಎಲ್ಲಾ ಜಾತಿಯ ವಧುವರನ್ನು ಹುಡುಕಲುಸಹಾಯ ಬೇಕೇ? ಕೂಡಲೇ ನಮಗೆ ಕರೆಮಾಡಿ
ಡಾ. ಗುರೂಜಿ
7899625268
9448229184

ಬೇಕಾಗಿದ್ದಾರೆ
ಹೋಟೆಲ್ ಕೆಲಸಕ್ಕೆ ಮ್ಯಾನೇಜರ್ (M) 2 No. ಕ್ಯಾಶಿಯರ್(F) 1 No., ಶೆಫ್(M) 5 No., ಹೆಲ್ಪರ್5 No., ಕ್ಲೀನಿಂಗ್ ಮಾಡಲು ಕನಿಷ್ಠ 2 ವರ್ಷ ಅನುಭವ ಉಳ್ಳವವರು ಬೇಕಾಗಿದ್ದಾರೆ. ಊಟ ವಸತಿಯೊಂದಿಗೆ ಉತ್ತಮ ಸಂಬಳ ನೀಡಲಾಗುತ್ತದೆ. ESI ಸೌಲಭ್ಯ ಇದೆ.
9980822305

TELECALLER WANTED
Female experienced
Telecaller Required
for reputated company with computer knowledge.
Freshers can apply
WhatsApp CV :
82177 72692 / 95382 32646

WANTED
Part time / Full time
Business Partners
No Investment
6361879848

ಗ್ಯಾಸ್ ಪೈಪ್ ಲೈನಿಂಗ್
ಮನೆ/ಹೋಟೆಲ್‌ಗಳಿಗೆ ಗ್ಯಾಸ್‌ಪೈಪ್ ಲೈನಿಂಗ್ ಮಾಡುತ್ತೇವೆ.
ಎಲ್ಲಾ ಕಂಪನಿಯ ಸ್ಟೌವ್+ಗ್ಯಾಸ್ ಗೀಜರ್+ಹಬ್‌ಸ್ಟೌವ್+ ಚಿಮಿನಿ ಸರ್ವೀಸ್ ಲಭ್ಯ

8088888115
22 ವರ್ಷದ ಅನುಭವ

WANTED
TEACHING STAFF
for reputed institution (Experience Preferred) for all subjects. Transport facilities available. Drop your resume through WhatsApp / Contact no:
8971577685,9980631121

MUDA APPROVED SITES FOR SALE
40x60, 30x40, 20x30
in between Manipal & NH Hospital
LOAN AVAILABLE
from all major Banks.
8971119292/9611223444

GAYATHRI EDUCATION TRUST (R) GAYATHRI VIDYALAYA
Hosa undavadi, K.R.Sagara, S.R. Patna (T)
D.Ed - All Subject - 4 Teacher
BSc, B.Ed – 4 (Mathematics and Science), BA, B.Ed – 2 (English and Social), Montessori Teacher – 2
Computer Teacher – 1 Classical / Western Dance Teacher– 2
Music teacher– 1, Clerk -2
Bus Drivers -2 , Security Female -2
Ph: 8892927318
8183054747, 6360302911

ಸೈಟ್ಸ್ @ ಮೈಸೂರು
ಇಲವಾಲ ಬಸ್ ಸ್ಟ್ಯಾಂಡ್ ಹತ್ತಿರ
DTCP APPROVED
ಹೂಡಿಕೆಗೆ / ಮನೆ ಕಟ್ಟಲು ಸೂಕ್ತವಾದ ಸ್ಥಳ ಮುಂಬರಲಿರುವ ಮೈಸೂರು ಕುಶಾಲ್ ನಗರ ರಾಷ್ಟ್ರೀಯ ಹೆದ್ದಾರಿಯ ಹತ್ತಿರ
GSS 89512-76688

SITE FOR SALE
GATEWAY MYSORE
30X40, Site No. 43
near Manipal Hospital, Opp. Hotel Atrium.
Mysore-Bangalore Highway, Mysore.
Call : 80502 45258 / 87923 24748

ಸೈಟ್ಸ್ @ ಮೈಸೂರು
ಟಿ.ನರಸೀಪುರ ರಿಂಗ್ ರೋಡ್ ನಿಂದ ಸುಮಾರು 1.5 KMS
MUDA APPROVED
ಸುತ್ತಮುತ್ತ ಮೂಡಾ ಲೇಔಟ್ಟಳಿವೆ
GSS 89512-76688

ಶುಂಠಿ ಕೃಷೀಕರೆ
ಉತ್ತಮ ದರ್ಜೆಯ ಬೇವಿನ ಹಿಂಡಿ ಹಾಗೂ ಬೇವಿನ ಹುಡಿ ನಿಮ್ಮ ಸಮಕ್ಷಮ ಮಾಡಿಕೊಡಲಾಗುತ್ತದೆ.
ಶ್ರೀ ಕಾಮಾಕ್ಷಿ ಬಯೋ–ನೀಮ್
#203, ಬನ್ನಿಮಂಟಪ ಬಡಾವಣೆ, ಮೈಸೂರು–570 015
Mob: 80888-87802

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಂಟಿಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th, SSLC, PUC, ITI, Any Degree ಪಾಸ್ /ಫೇಲ್ ಆದ ಯುವಕ/ ಯುವತಿಯರು ಇಂದೇ ಬೇಕಾಗಿದ್ದಾರೆ. ESI +PF ನೊಂದಿಗೆ ಊಟ ವಸತಿಯಿರುತ್ತದೆ.
ಸಂಬಳ / ಓಟಿ, 15200-86000
9740733021, 9535028750

SRI NARAYANANANDA VIDYALAYA
Hinkal, Mysuru-570030
TEACHERS REQUIRED
1. NST/Montessori, 2) PUC., D.Ed
Interview on 19-04-2023
1. B.A., B.Ed 2) B.Sc., B.Ed 3. C.PEd/B.PEd
Interview on 20-04-2023
Time : 09.30 am to 2.00 pm
7353711673

ಬೇಕಾಗಿದ್ದಾರೆ
ಸೇಲ್ಸ್ ಕೆಲಸಕ್ಕೆ ಹುಡುಗ/ ಹುಡುಗಿಯರು ಬೇಕಾಗಿದ್ದಾರೆ
ಸಂಬಳ 10000-12000/-
Ph.9535112233
ಶಿವರಾಂಪೇಟೆ, ಮೈಸೂರು

ಸೈಟ್ ಮಾರಾಟಕ್ಕಿದೆ
ಕೆ.ಆರ್. ನಗರ ಟೌನ್ ಸುಭಾಷ್ ನಗರದಲ್ಲಿ
S/F 40x60
ಸಂಪರ್ಕಿಸಿ:
9611539340

ರೂಂಬಾಯ್ಸ್ ಬೇಕಾಗಿದ್ದಾರೆ
: ಸಂಪರ್ಕಿಸಿ :
ಶ್ರೀ ಗಣೇಶ್ ಪ್ರಸಾದ್ ಲಾಡ್ಜ್
1096, ರಾಜಕಮಲ್ ಟಾಕೀಸ್ ಎದುರು, ಶಿವರಾಂಪೇಟೆ, ಮೈಸೂರು
Ph.: 9986756866

S.K. CONSTRUCTION
ಹೊಸ ಮನೆ ಕಟ್ಟಬೇಕೆ, ಚಿಂತೆ ಬೇಡ Enginiaring Plan ವಾಸ್ತುಪ್ರಕಾರ, 3D Elivation ಸಹಿತ ನಿಮ್ಮ ಕೈಗೆ ಎಟಕುವ ಬೆಲೆಯಲ್ಲಿ ಉತ್ತಮ ಗುಣಮಟ್ಟದಲ್ಲಿ Construction ಮಾಡಿ ಕೊಡುತ್ತೇವೆ.
9620528490

SITE FOR SALE
30x40 North
Somnatha nagar
30x40 North
Gayatry layout
8197012595

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

ಕೊಳ್ಳೇಗಾಲದ ಜ್ಯೋತಿಷ್ಯರು
ಪಂ. ಎಸ್. ಕುಮಾರಸ್ವಾಮಿ (ಮೋಡಿ ಮಾಂತ್ರಿಕರು)
MOB: 9880583804
ಇವರು ಕೊಳ್ಳೇಗಾಲದ ಚೌಡಿ, ಭೂತರಾಯ ಅಘೋಚರ ಶಕ್ತಿಯಿಂದ ಸ್ತ್ರೀ ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ದೋಷ, ಸಾಲ ಬಾಧೆ, ಯಾವುದೇ ಸಮಸ್ಯೆಗಳಿಗೆ ಮೋಡಿ ಮಾಂತ್ರಿಕ ಶಕ್ತಿಯಿಂದ ಚೌಡಿ ಮತ್ತು ಭೂತರಾಯನ ಪ್ರಯೋಗ ದಿಂದ ಎರಡೇ ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ಎಟಿಎಂ ಪಕ್ಕ, ಟಿಕೆಟ್ ಬುಕ್ಕಿಂಗ್ ಕೌಂಟರ್ ಹತ್ತಿರ (ರಿಲಾಯನ್ಸ್ ಮಾಲ್) (ಕೆ.ಎಸ್.ಆರ್.ಟಿ.ಸಿ) ಸಬರ್ಬ್ ಬಸ್ ಸ್ಟ್ಯಾಂಡ್, ಮೈಸೂರು-1

LEARN WITH THE LEADER
Architectural / Civil CAD
Mechanical CAD
Electrical CAD
CADD® CENTRE
Skills Driven Job Led
V.V. Mohalla 0821-4006323
Saraswathipuram 0821-4288882

ಹೊಸ ಮನೆ ಮಾರಾಟಕ್ಕಿದೆ
20x30 ಲಿಂಗದೇವರ ಕೊಪ್ಪಲು ಹಿಂಭಾಗ, ಸಾಯಿ ಗಾರ್ಮೆಂಟ್ಸ್ ಮುಂಭಾಗ, ಶ್ರೀನಿಧಿ ಲೇಔಟ್
9902634441
6366484442

ಹೊಸ ಚೀಟಿಗಳ ಪ್ರಾರಂಭ
ಸೀಬಿ ನರಸಿಂಹಸ್ವಾಮಿ ಚಿಟ್ಸ್ (ಕಂ) ಪ್ರೈ.ಲಿ., ಮೈಸೂರು / ಹಾಸನ.

ಚೀಟಿ ಮೊತ್ತ	ತಿಂಗಳು	ತಿಂಗಳ ಕಂತು	3ನೇ ತಿಂಗಳಿಂದ
1 ಲಕ್ಷ	25	4000/–	3000/–
2 ಲಕ್ಷ	25	8000/–	6000/–
5 ಲಕ್ಷ	25	20,000/–	15,000/–
10 ಲಕ್ಷ	50	20,000/–	15,000/–
10 ಲಕ್ಷ	100	10,000/–	7,500/–
25 ಲಕ್ಷ	100	25,000/–	18,750/–

7892303484 / 8749077453

ಸ್ವರ ಭವಿಷ್ಯ
ಇಡಗುಂಜಿ ಮಹಾಗಣಪತಿ ಜ್ಯೋತಿಷ್ಯ ದಾಂಪತ್ಯ ಸಮಸ್ಯೆ, ಸಾಲದ ಬಾಧೆ, ಕೋರ್ಟ್‌ಕೇಸ್, ಕುಟುಂಬ ಕಲಹ, ಸ್ತ್ರೀಪ್ರೀತಿಯಲ್ಲಿ ನಂಬಿಕೆ ಸಮಸ್ಯೆಯಲ್ಲಿ ನೊಂದಿದ್ದೀರಾ, ಕೋರ್ಟ್ ಪರಿಹಾರ, ಎರಡು ದಿನ ಪರಿಹಾರ,
ಪ್ರಧಾನ ತಂತ್ರಿಕರು ವಿಷ್ಣುಕಾಂತ್ ಜೋಶಿ
8549998630

ಸಂಪು
ಕ್ಲೀನಿಂಗ್‌ಗಾಗಿ
ಸಂಪರ್ಕಿಸಿ:
8861612486

ಮಾಂತ್ರಿಕ ಕೇರಳ ಶ್ರೀ ಭಗವತಿ ಜ್ಯೋತಿಷ್ಯರು
ಶ್ರೀ ಎಸ್.ಎಸ್.ಪ್ರಸಾದ್ ಪೊದುವಾಳ್
ಮೊ.: 9731839596
ಇವರು ಕುಟ್ಟಿಚೇತನ್ ರುದ್ರಿಮಾರ್ತಾಂಡ ದೇವಿ ಭಗವತಿ ಮಳಯಾಳಿ ಮಾಂತ್ರಿಕ ಶಕ್ತಿಯಿಂದ ಸ್ತ್ರೀ ಪುರುಷ, ಪ್ರೇಮ, ದಾಂಪತ್ಯ ಸಮಸ್ಯೆ, ಸಂತಾನ, ದುಷ್ಟಶಕ್ತಿ, ಶತ್ರುಬಾಧೆ, ವ್ಯಾಪಾರ, ಅತ್ತೆ ಸೊಸೆ ಕಿರಿಕಿರಿ, ಸಾಲಬಾಧೆ, ಆರೋಗ್ಯ, ಮಾನಸಿಕ ಚಿಂತೆ, ನಿಮ್ಮ ಯಾವುದೇ ಗುಪ್ತ ಸಮಸ್ಯೆಗಳಿಗೆ ತಕ್ಷಣದಲ್ಲಿ ಪರಿಹಾರ ಶತಸಿದ್ಧ. ಖಾಯಂ ಮನೆ ವಿಳಾಸ:– ಮನೆ ನಂ.68, ಸತ್ಯ ಮಾರ್ಗ ಗೀತಾ ಸ್ಕೂಲ್ ಹಿಂಭಾಗ, ಹೊಸ ಡಿ.ಸಿ ಆಫೀಸ್ ಎದುರು, ಸಿದ್ಧಾರ್ಥನಗರ, ಮೈಸೂರು.

ಬೇಕಾಗಿದ್ದಾರೆ
ಹೆಬ್ಬಾಳನಲ್ಲಿರುವ ಪೆಟ್ರೋಲ್ ಬಂಕಿನಲ್ಲಿ ಕೆಲಸ ಮಾಡಲು ಸೂಪರ್‌ವೈಸರ್ ಬೇಕಾಗಿದ್ದಾರೆ. ಆಕರ್ಷಕ ವೇತನ ದೊರೆಯುತ್ತದೆ.
8892258814

ಬೇಕಾಗಿದ್ದಾರೆ
ಹೆಲ್ಪರ್ಸ್ ಕೆಲಸ ನಿರ್ವಹಿಸಲು ಮೇಟಿಗಳ್ಳಿ ಇಂಡಸ್ಟ್ರಿಯಲ್ ಏರಿಯಾದಲ್ಲಿ ವಿದ್ಯಾರ್ಹತೆ 7th to 10th ವಯಸ್ಸು 18 ರಿಂದ 35 ರೊಳಗೆ, ಪುರುಷರು ಮಾತ್ರ ಹಾಗೂ House Keeping ಪುರುಷರು ಹೆಬ್ಬಾಳ ಇಂಡಸ್ಟ್ರಿಯಲ್ ಏರಿಯಾದಲ್ಲಿ, ಒಳ್ಳೆಯ ವೇತನ ಹಾಗೂ ESI, PF ಸೌಲಭ್ಯವಿರುತ್ತದೆ.
9611238376,9008912479

PART TIME JOBS
ಮನೆಯಲ್ಲೇ ಕುಳಿತು ನಾವು ಕೊಡುವ ಪುಸ್ತಕ ಬರೆಯುವ ಹಾಗೂ ಫಾರಂ ತುಂಬುವ ಮೂಲಕ ತಿಂಗಳಿಗೆ 15,000 ರಿಂದ 20,000 ಸಂಪಾದಿಸಿ.
(ಕೋರಿಯರ್ ಸೌಲಭ್ಯವಿದೆ)
8749098879

ಬಾಡಿಗೆಗೆ
ಮೈಸೂರು ಸಿಟಿ ವಿದ್ಯಾರಣ್ಯಪುರಂ ನಾಲ್ಕನೇ ಮುಖ್ಯ ರಸ್ತೆಯ 27ನೇ ಕ್ರಾಸಿನ ಕಾರ್ನರ್‌ನಲ್ಲಿ 3 ಅಂಗಡಿಗಳು (10x10 ಅಡಿ), ಗೋಡೌನ್ (10x40 ಅಡಿ) ಮತ್ತು ಮನೆ 2BHK ಲಭ್ಯವಿದೆ.
9448872684
9900079871

JOBNET
ಮೊಬೈಲ್‌ನಲ್ಲಿ ಕೆಲಸ ಮನೆಯಲ್ಲಿ ಕುಳಿತು ಮೊಬೈಲ್ ಮೂಲಕ ಫಾರಂ ಫಿಲ್ಲಿಂಗ್ ಮಾಡಿ ಪ್ರತಿ ತಿಂಗಳಿಗೆ 10,000 ರಿಂದ 20,000 ಸಂಪಾದಿಸಿ
9731891409

ಕೇರಳ ಶ್ರೀ ಪ್ರಸಿದ್ಧ ಮಹಾ ಮಾಂತ್ರಿಕ ಜ್ಯೋತಿಷ್ಯರು, ನಂ.1 ಮೋಡಿ ತಜ್ಞರು
ಪಂಡಿತ್ ಕೆ.ಎಸ್.ಕೃಷ್ಣಮೂರ್ತಿ
ಮೊ.: 9741806990
ತಾಯಿ ಚಾಮುಂಡೇಶ್ವರಿ ಕಾಣತೊರೆ ನಾಲ್ವರ ದೈವ ಚೌಡಪ್ ಕರಿ ಭಗವತಿ ಮಹಾ ಮಾಂತ್ರಿಕ ಶಕ್ತಿಯಿಂದ ಲೈಂಗಿಕ, ದಾಂಪತ್ಯ, ಸ್ತ್ರೀ ಪುರುಷ ಪ್ರೇಮ ವಿಚಾರ, ಕೋರ್ಟ್ ಕಚೇರಿ, ಹಣಕಾಸಿನ ತೊಂದರೆ, ವಿವಾದ, ಮನೆಯಲ್ಲಿ ಅಶಾಂತಿ, ಮಾನಸಿಕ ಚಿಂತೆ, ಇನ್ನೂ ಮುಂತಾದ ಸಮಸ್ಯೆಗಳಿಗೆ 3 ದಿನದಲ್ಲಿ ಪರಿಹಾರ ಶತಸಿದ್ಧ. ಖಾಯಂ ವಿಳಾಸ: ಸಬರ್ಬ್ ಬಸ್‌ಸ್ಟ್ಯಾಂಡ್ ಪಕ್ಕ, ಇರ್ವಿನ್ ರೋಡ್, ಆಂಧ್ರಶೈಲಿ ನಂದಿನಿ ಹೋಟೆಲ್ ಹಿಂಭಾಗ, ಮಾರುತಿ ಸುಜುಕಿ ಆಟೋ ಮೊಬೈಲ್ ಪಕ್ಕ ಮನೆಯಲ್ಲಿ ನೆಲಸಿದ್ದಾರೆ. ಹಳ್ಳಕೇರಿ, ಮೈಸೂರು ಇಲ್ಲಿ ಹೇಳುವ ವಿಚಾರಗಳನ್ನು ಗುಪ್ತವಾಗಿ ಇಡಲಾಗುತ್ತದೆ.



Solar Water Heater SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

ಬೇಕಾಗಿದ್ದಾರೆ
ಪ್ರತಿಷ್ಠಿತ ಖಾಸಗಿ ಸೆಕ್ಯೂರಿಟಿ ಏಜೆನ್ಸಿಗೆ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್ ಮತ್ತು ಸೆಕ್ಯೂರಿಟಿ ಸೂಪರ್‌ವೈಸರ್ ಬೇಕಾಗಿದ್ದಾರೆ. ಪೈಪ್ ಸರ್ಕಲ್, ಬನ್ನಿಮಂಟಪ, ಬಲ್ಲಾಳ್ ಸರ್ಕಲ್, ಸಿದ್ದೇಗೌಡನ ಬೀದಿ, ವಿ.ನಕಲ್,
*ESI PF ಜೊತೆಗೆ ಆಕರ್ಷಕ ಸಂಬಳ ಇರುತ್ತದೆ!
Landscaping, All Types of Housekeeping, Manpower Outsourcing, Floor Washing (House Keeping Materials And Washing Chemicals) Material & Chemicals available
Ph - 8217563349

SITE FOR SALE
40x60 Site for Sale Opp. Park Suvarna Layout
46 Lakhs
9900745548

FOR SALE
33x40 house for Sale in JP Nagar Ground and I st floor
30x40 Duplex house for sale in sharadadevi Nagar
45x60 old house for sale in Vidyarayanapuram
9880344263

IMKTA - PRE-SCHOOL TEACHER TRAINING
Diploma Courses for SSLC, PU or any Degree Candidates.
Regular / Saturday / Correspondence Courses with practical training.
www: imkta.in
ALPHA INTERNATIONAL SCHOOL
@ Srirampura & Gokulam
Call: 7829937469, 9901803394
ONLINE TRAINING AVAILABLE

ಕೇರಳ ಶ್ರೀ ಪ್ರಸಿದ್ಧ ಜ್ಯೋತಿಷ್ಯರು
Famous Astrologer
ಪಂಡಿತ್ ಸಂತೋಷ್. 9741250896
ಕಾಣತೊರ್ ನಾಲ್ವರ ದೈವ, ಕಲ್ಲುಟಿ ಭಗವತಿ ಶಕ್ತಿಯಿಂದ ದಾಂಪತ್ಯ ಸಮಸ್ಯೆ, ಲೈಂಗಿಕ ಸಮಸ್ಯೆ, ಸ್ತ್ರೀ ಪುರುಷ ಪ್ರೇಮ ವಿಚಾರ, ಶತ್ರು ಬಾಧೆ, ಹಣಕಾಸಿನ ತೊಂದರೆ, ಮಾನಸಿಕ ಚಿಂತೆ, ಪ್ರೇತ ಬಾಧೆ, ವಿದೇಶ ಪ್ರಯಾಣ ಇನ್ನೂ ಮುಂತಾದ ಯಾವುದೇ ಕಠಿಣ ಸಮಸ್ಯೆಗಳಿಗೆ 3 ದಿನದಲ್ಲಿ ಶಾಶ್ವತ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ವಿನಯ ಮಾರ್ಗ ರಸ್ತೆ,, ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಎದುರು, ಬ್ಯಾಂಕ್ ಆಫ್ ಬರೋಡ ಪಕ್ಕ, ಸಿದ್ಧಾರ್ಥ ನಗರ, ಮೈಸೂರು

ತಕ್ಷಣ ಬೇಕಾಗಿದ್ದಾರೆ
ನಂಜನಗೂಡು, ಕಡಕೊಳ ಏರಿಯಾದ TVS ಫ್ಯಾಕ್ಟರಿಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC, ಮೇಲ್ಪಟ್ಟು ವಯೋಮಿತಿ 45 ವರ್ಷದೊಳಗೆ
ಸಂಬಳ: 16,000/-(8Hrs 26 Days)
ಊಟ ತಿಂಡಿ ವಸತಿ ಸೌಲಭ್ಯವಿರುತ್ತದೆ.
9620777819,9620667819

ಕೆಲಸಕ್ಕೆ ಬೇಕಾಗಿದ್ದಾರೆ
Jai & Sons (P) Ltd, Mysore ನಲ್ಲಿ ಕೆಲಸ ಮಾಡಲು ಬೇಕಾಗಿದ್ದಾರೆ. ಬಿಲ್ಲಿಂಗ್ ಮಾಡಲು Computer ನಲ್ಲಿ ಅನುಭವವುಳ್ಳ ಹುಡುಗರು ಬೇಕಾಗಿದ್ದಾರೆ.
9108222005

ಬೇಕಾಗಿದ್ದಾರೆ
ಟಿ.ನರಸೀಪುರ ಛತ್ರಕ್ಕೆ ಸಂಸಾರ ಸಮೇತ ಇರುವಂತಹ ವಾಚ್‌ಮನ್ ಬೇಕಾಗಿದ್ದಾರೆ.
7ನೇ ತರಗತಿ ಓದಿರಬೇಕು.
8105341903

ಬೇಕಾಗಿದ್ದಾರೆ
ವೃದ್ಧರು ರೋಗಿಗಳನ್ನು ಆರೈಕೆ ಮಾಡಲು ಆಸಕ್ತಿಯುಳ್ಳ 18 ವರ್ಷ ಮೇಲ್ಪಟ್ಟ ಯುವಕ ಯುವತಿಯರು ಕೂಡಲೇ ಬೇಕಾಗಿದ್ದಾರೆ. ಊಟ ವಸತಿಯೊಂದಿಗೆ ತಿಂಗಳ ವೇತನ 12000 ರಿಂದ 18000, ತನಕ ಕೊಡಲಾಗುವುದು. ಮೊದಲು ಬಂದವರಿಗೆ ಆದ್ಯತೆ ನಿಮ್ಮ ದಾಖಲಾತಿ ಸಮೇತ ಸಂಪರ್ಕಿಸಿ
9035324777,7259306665

ಬೇಕಾಗಿದ್ದಾರೆ
ಲೇಡೀಸ್ PG ಯಲ್ಲಿ ಕೆಲಸ ಮಾಡಲು ಮಹಿಳೆಯರು ಬೇಕಾಗಿದ್ದಾರೆ. ಕಡ್ಡಾಯವಾಗಿ PG ಯಲ್ಲಿಯೇ ಉಳಿದುಕೊಳ್ಳಬೇಕು. ಊಟ ವಸತಿ, ಸಂಬಳ ದೊರೆಯುತ್ತದೆ. ಸಂಪರ್ಕಿಸಿ:
9972567537/9035004605

ಬೇಕಾಗಿದ್ದಾರೆ
ನಮ್ಮಲ್ಲಿ ಎಲೆಕ್ಟ್ರಿಷಿಯನ್ ಹಾಗು ಡ್ರೈವಿಂಗ್, ಎರಡೂ ಕೆಲಸ ಮಾಡುವ ಒಬ್ಬ ಕೆಲಸಗಾರ ಬೇಕಾಗಿದ್ದಾರೆ. ಸಂಬಳ ಪ್ರತಿ ತಿಂಗಳು 15000 ರೂಪಾಯಿ. ಸ್ಥಳೀಯರು ಹಾಗು ಗಾಡಿ ಉಳ್ಳವರಿಗೆ ಆದ್ಯತೆ. ನಿಮ್ಮ resume ಗಳನ್ನ ಕೆಳಗಿನ ನಂಬರ್‌ಗೆ ಕಳುಹಿಸಿ.
ಸಂಪರ್ಕಿಸಿ: 7975936766

FOR SALE
1) 30x40 15 lakhs sites in H D Kote Road
2) 17/60 House Near Kamakshi Hospital
3)40x60 52 L sites Near Ring Road
4)30x40 N G+2 House Near Ashwini Choultry Srirampura
SITES AVAILABLE IN DATTAGALLI JP NAGAR AND VIJAYNAGAR
95386 90359,90359 90359

WE ARE HIRING..! Walk in interview
Minimum Graduation Sales Manager Age between 25 to 40 yrs, Salary 18000 to Upto 35000/- PM Plus Incentives & Other Perks Type- Full time, Employees Experience: 1-3 years. Location:- Mysore
Call: 9845210772 /8976970243

WANTED
ACCOUNTANT
with knowledge of Tally must to work at Hinkal & Industrial Suburb, Mysore
9480155900

WANTED FOR Bhaskar Heart Centre

Post:	Qualification:
Receptionist	Degree/PUC
Marketing / PRO (M)	Degree/PUC
Laboratory Technician	CMLT/DMLT
Pharma Aid	PUC/Degree

0821-2499188 / 9880186386

Mysore District Rifle Association. Camp
for 10 years & above. Scheduled to start from 19th April 2023.Training, weapons and pellets provided. Only sports shoes needed. Coaching by international level shooter M S Suresh.
For details call: 9620636121

HOUSE FOR RENT
Ground Floor at Mahajana Layout, Vijayanagar 2nd Stage, near Kullegowda Circle, 2 BHK, Dinig, Pooja room, Big Veranda, Car Parking (Only Vegetarians preferred)
Contact:
9900096943

S.C.E.T English Medium School
Vijaynagar, Mysore.
TEACHERS REQUIRED
• NST / Montessori,
• Office Asst. Any Degree
• M.A.,B.Ed ,• M.Sc.,B.Ed (P.C.M)(C.B.Z) • C.PEd/B.PEd
NOTE: Fluency in English is must.
Call: 8904817272/8867280449
Ph: 0821-2302079

HOME TUTOR
Class 9th and 10th
Physics and Maths (CBSE)
9008231304

ಬೇಕಾಗಿದ್ದಾರೆ
ಅನುಭವಿ ಮೇಂಟೆನೆನ್ಸ್ ಇಂಜಿನಿಯರ್ಸ್ –2 ಹುದ್ದೆ ಸ್ಟೀವರ್ಡ್– ಅನುಭವ ಇರುವವರು/ಹೊಸಬರಿಗೆ–4 ಹುದ್ದೆ
ದಿ ಕೋರಮ್ ಹೋಟೇಲ್
ನಂ. 2257/1, ವಿನೋಬಾ ರಸ್ತೆ, ಕಲಾಮಂದಿರದ ಹತ್ತಿರ, ಮೈಸೂರು.
ಸಂಪರ್ಕಿಸಿ: 9620274629 / 9886577795

KRISHIK SARVODAYA FOUNDATION (R) MYSORE BRANCH
CA-25 Gen. K.S. Thimmaiah Road, Vijayanagar Second Stage, Mysore – 17
Walk in Interview
ACADEMIC COORDINATOR
Educational Qualification: Masters
Date of Interview: 15.04.2023
Timing: 3.00pm. Contact :
0821 2301564 / 9945752592

HOUSE FOR RENT
Veg Only
3 BHK Duplex House (First & Second Floor) with solar, Rent Rs. 14,000/-, 'I' Block, Kuvempunagar near Chikkamma Niketana / KEB for immediate possession.
Mob: 9900745096/9986499519

Jnanajyothi vidyalaya (HPS)
Beerihundi. Mysore (Tq).
NST, MONTESSORI, Kannada-2, English-2 Mathematics-2, Science-1, Social Science-1
all subject teachers wanted
Contact:
9845390377 / 8197057626

ಬೇಕಾಗಿದ್ದಾರೆ
ವೃದ್ಧರು ರೋಗಿಗಳನ್ನು ಆರೈಕೆ ಮಾಡಲು ನಮ್ಮ ಸಂಸ್ಥೆಯಲ್ಲೇ ಉಳಿದುಕೊಳ್ಳುವಂತಹ ಯುವಕ /ಯುವತಿಯರು, ಮಹಿಳೆಯರು, ವಿಧವೆ / ವಿಚ್ಛೇದಿತರು ಹೋಂ ನರ್ಸಿಂಗ್ ಕೆಲಸಕ್ಕಾಗಿ ತಕ್ಷಣ ಬೇಕಾಗಿದ್ದಾರೆ. (ಸರ್ಕಾರಿ ನೋಂದಾಯಿತ ಸಂಸ್ಥೆ) ಯಾವುದೇ ರೀತಿಯ ಶುಲ್ಕ ಇರುವುದಿಲ್ಲ (ನಮ್ಮಲ್ಲೇ ಉಳಿದುಕೊಳ್ಳುವವರಿಗೆ ಮಾತ್ರ ಅವಕಾಶ) ಸಂಬಳ 12000ರಿಂದ 18000
(ESI, PF ಸೌಲಭ್ಯ ಇರುತ್ತದೆ . ಸಂಪರ್ಕಿಸಿ:
8050699742/7760043596

ಬೇಕಾಗಿದ್ದಾರೆ
ಕಂಪ್ಯೂಟರ್ ಆಫೀಸ್ನಲ್ಲಿ, ಫ್ರಂಟ್ ಆಫೀಸ್ ಮತ್ತು ಅಕೌಂಟ್ಸ್ ನಿರ್ವಹಣೆಗಾಗಿ, ಬಿ.ಕಾಮ್ ಮಾಡಿರುವ 25 ವರ್ಷದೊಳಗಿನ ಮಹಿಳಾ ಅಭ್ಯರ್ಥಿಗಳು ಬೇಕಾಗಿದ್ದಾರೆ.ಕಂಪ್ಯೂಟರ್ ಮತ್ತು ಅಕೌಂಟ್ಸ್ ನಲ್ಲಿ ಅನುಭವವುಳ್ಳವರಿಗೆ ಹೆಚ್ಚಿನ ಆದ್ಯತೆ... ಸಂಪರ್ಕಿಸಿ:
8073393505

WANTED
FEMALE STOREKEEPER
for Pharma Distributor Located at Ramavilas Road (near city bus stand)
Timings-10-7:30
Contact: 7022345675
9739499933/9986108208

WANTED
Best Future Foundation®
MSW ,MSC Psychology ,Any Master Degree Any degree and Driver with office Boy
Please Contact:
9964849691/9353988090

ಮನೆ ಮಾರಾಟಕ್ಕಿದೆ
20x30 ಅಳತೆಯ ಮನೆ, ನೆಲ ಮಹಡಿ ಮತ್ತು ಮೊದಲನೇ ಮಹಡಿ, ನಾಯ್ಡು ಸ್ಟೋರ್ ಹತ್ತಿರ, ಶ್ರೀರಾಂಪುರ, 2ನೇ ಹಂತ, ಮೈಸೂರು. ಸಂಪರ್ಕಿಸಿ:
9019176858
ಮಧ್ಯವರ್ತಿಗಳಿಗೆ ಅವಕಾಶವಿಲ್ಲ

CHOULTRY AVAILABLE
Sri. Vittala Rukmini Convention Hall available on 6th and 7th May 2023
Contact:
9880048310

WANTED
ALL 8 HOURS DUTY
1) Security Guards 10000/- + Weekly off 2) Male Housekeepers For Hospital 10000/- + Weekly off 3) Maintenance Officer Rs.12000/- + Weekly off for Hospital Contact :
M/s Karnataka Security Agency
0821-4247385 / 9480420666

ಕೆಲಸಕ್ಕೆ ಬೇಕಾಗಿದ್ದಾರೆ
1) ಮೊಬೈಲ್ ಸರ್ವೀಸ್ ಕೆಲಸಕ್ಕೆ ಬೇಕಾಗಿದ್ದಾರೆ
2) ಆಫೀಸ್ ಬಾಯ್ ಬೇಕಾಗಿದ್ದಾರೆ
3) ಟೆಲಿಕಾಲ್ ಮಾಡಲು ಹುಡುಗರು ಬೇಕಾಗಿದ್ದಾರೆ
9482426207

ನಿವೃತ್ತ ನೌಕರರು/ಮನೆ ಒಡತಿಯರಿಗೆ ಉದ್ಯೋಗಾವಕಾಶ
ವಿದ್ಯಾರ್ಹತೆ: SSLC ಉತ್ತೀರ್ಣರಾಗಿರಬೇಕು
ವೇತನ: ರೂ. 10000 ರಿಂದ 30000/–
ಸಂದರ್ಶನಕ್ಕೆ ಹಾಜರುಪಡಿಸಬೇಕಾದ ದಾಖಲೆಗಳು 1) ವಿದ್ಯಾರ್ಹತೆ ಅಂಕಪಟ್ಟಿ, 2) ಆಧಾರ್ ಕಾರ್ಡ್, 3) ಪಾನ್ ಕಾರ್ಡ್, 4) ಬ್ಯಾಂಕ್ ಪಾಸ್‌ಪುಸ್ತಕ 5) ಪಾಸ್ ಪೋರ್ಟ್ ಅಳತೆ ಫೋಟೋ. ಸಂಪರ್ಕಿಸಿ:
9886647852

Match Maker Bride/Groom ವಧು ವರರ ಮಾಹಿತಿ ಕೇಂದ್ರ
ಎಲ್ಲಾ ಜಾತಿಯ Govt/ Jobs/Private/ಸ್ವಂತ/ Own Factory/ಡಾಕ್ಟರ್/ಇಂಜಿನಿಯರ್,/All Education ಕರ್ನಾಟಕದಾದ್ಯಂತ "ಒಂದು ಲಕ್ಷ" 1st Mariage ವಧು/ ವರರಿದ್ದಾರೆ. 8,000 ಡೈವೋರ್ಸಿಗಳು/ವಿಧವೆಯರು/ವಿಧುರರು/ ಸ್ವಜಾತಿ/ಅಂತರ್ಜಾತಿ ವಧುಗಳಿಗೆ ಉಚಿತ+ಮದುವೆ–ಊಟ–ವಸತಿ– ಉದ್ಯೋಗಕ್ಕಾಗಿ ಶೀಘ್ರ ಸಂಪರ್ಕಿಸಿ: 30 ಒಂದು ವಧುಗಳಿಗೆ ವರ ಬೇಕು
7975728012

ಹಾಸ್ಟೆಲ್ ಗೆ
ವೆಜ್ ಮತ್ತು ನಾನ್ ವೆಜ್ ಅಡುಗೆಯವರು ಬೇಕಾಗಿದ್ದಾರೆ.
ಸ್ಥಳ: ಸುಳ್ಯ
9902176566

ಬೇಕಾಗಿದ್ದಾರೆ
ಮೈಸೂರಿನಲ್ಲಿ ಮಹಿಳಾ ವಿಧ್ಯಾರ್ಥಿ ನಿಲಯದಲ್ಲಿ ಅಡುಗೆ ಕೆಲಸ ಮಾಡಲು ಮಹಿಳಾ ಅಡುಗೆಯವರು ಬೇಕಾಗಿರುತ್ತಾರೆ. ಅನುಭವವಿದ್ದರೆ ಅನುಕೂಲ.
ಕರೆ ಮಾಡಿ – 9986339606

MYTHRI TOURS
ಶಿರಡಿ ಪ್ರವಾಸ.
3 ಜ್ಯೋತಿರ್ಲಿಂಗ ದರ್ಶನ
4 ದಿನಗಳು 12– ಏಪ್ರಿಲ್ 23.
ಪಂಡರಾಪುರ, ಶನಿಸಿಂಗಪುರ, ಗೃಷ್ನೇಶ್ವರ, ಎಲ್ಲೋರ, ನಾಸಿಕ್, ತ್ರಯಂಬಕೇಶ್ವರ, ಭೀಮಾಶಂಕರ.
9482421499

ಸುವರ್ಣಯಾತ್ರ ಚಾರ್ ಧಾಮ್ ಯಾತ್ರ
ಯಾತ್ರ 13 ದಿನಗಳು 21/05/23.
ಕಾಶಿ ಪ್ರವಾಸ 7 ದಿನಗಳು 23/04/23. ನೇಪಾಳ ಪ್ರವಾಸ 9 ದಿನಗಳು 9/06/23.
ವೈಷ್ಣೋದೇವಿ, ಸಿಮ್ಲಾ, ಮನಾಲಿ 10 ದಿನಗಳು 19/06/23.
901962508, 9008381022

ಬೇಕಾಗಿದ್ದಾರೆ
ಕರ್ನಾಟಕದಾದ್ಯಂತ ಹೆಸರಾಂತ ಕಂಪನಿ, ಆಫೀಸ್ ಕೆಲಸಕ್ಕೆ ಯುವಕ / ಯುವತಿಯರು ಬೇಕಾಗಿದ್ದಾರೆ. ವಸತಿಯೂಟದೊಂದಿಗೆ
Salary+OT 17800/- 68000/-
6366882001/ 9035022290

ಮೈಸೂರು ಮಿತ್ರ 43 — ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 6 ರಲ್ಲಿ

ನಾಳೆ ಕೆ.ಆರ್.ಪೇಟೆ ಚುನಾವಣಾ ಅಖಾಡಕ್ಕೆ ಬಿ.ವೈ. ವಿಜಯೇಂದ್ರ

ಸಚಿವ ಕೆ.ಸಿ. ನಾರಾಯಣಗೌಡ


ಕೆ.ಸಿ. ನಾರಾಯಣಗೌಡ


ಬಿ.ಎಸ್. ಯಡಿಯೂರಪ್ಪ


ಬಿ.ವೈ. ವಿಜಯೇಂದ್ರ

ಮಂಡ್ಯ, ಏ.12– ಜಿಲ್ಲೆಯೊಳಗೆ ಮೊದಲ ಬಾರಿಗೆ ಕಮಲ ಅರಳಿಸಲು ನನಗೆ ಕೈ ಜೋಡಿಸಿದ್ದ ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ ಏ.14ರಂದು ಕೆ.ಆರ್.ಪೇಟೆ ಕ್ಷೇತ್ರದಲ್ಲಿ ನನ್ನೊಂದಿಗೆ ಪ್ರಚಾರ ನಡೆಸಲಿದ್ದಾರೆ ಎಂದು ಕೆ.ಆರ್.ಪೇಟೆ ಬಿಜೆಪಿ ಅಭ್ಯರ್ಥಿಯೂ ಆದ ಸಚಿವ ಕೆ.ಸಿ. ನಾರಾಯಣಗೌಡ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆಗೆ ನಾಮಪತ್ರ ಸಲ್ಲಿಸುವ ಮುನ್ನವೇ ಒಂದು ಬಾರಿ ಬಿ.ವೈ.ವಿಜಯೇಂದ್ರ ಪ್ರಚಾರ ನಡೆಸಿ ಹೋಗುವರು. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರು ಎರಡು ಬಾರಿ ಕ್ಷೇತ್ರಕ್ಕೆ ಪ್ರಚಾರಕ್ಕೆ ಆಗಮಿಸುವ ಭರವಸೆ ನೀಡಿದ್ದಾರೆ. ಉಪಚುನಾವಣೆಯಲ್ಲಿ ನನ್ನ ಗೆಲುವಿಗೆ ಪ್ರಮುಖ ಪಾತ್ರವನ್ನು ವಿಜಯೇಂದ್ರ ವಹಿಸಿದ್ದರು. ಜೆಡಿಎಸ್ ಭದ್ರಕೋಟೆಯೊಳಗೆ ಬಿಜೆಪಿ ಪರವಾಗಿ ಮತಗಳನ್ನು ಸಂಘಟಿಸುವಲ್ಲಿ ಬಿ.ವೈ.ವಿಜಯೇಂದ್ರ ಕಾರ್ಯತಂತ್ರ ಫಲಿಸಿತ್ತು. ಉಪ ಚುನಾವಣೆ ಮಾದರಿಯಲ್ಲಿ ಈ ಚುನಾವಣೆ ನಡೆಸಲಾಗದಿದ್ದರೂ ಕಾರ್ಯತಂತ್ರವನ್ನು ಹೆಣೆಯಲಾಗಿದೆ ಎಂದರು. ರಾಜ್ಯದಲ್ಲಿ ರೇಷ್ಮೆ, ಯುವಜನ ಸಬಲೀಕರಣ ಕ್ರೀಡಾ ಇಲಾಖೆ ಸಚಿವನಾಗಿ ಎರಡೂ ಖಾತೆಗಳಿಗೆ ಗೌರವ–ಘನತೆಯನ್ನು ತಂದುಕೊಟ್ಟಿದ್ದೇನೆ. ಇದಕ್ಕಾಗಿ ಜನರು ಮತ್ತೆ ತಮ್ಮ ಕೈ ಹಿಡಿಯುವರೆಂಬ ವಿಶ್ವಾಸವಿದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರು ಚುನಾವಣೆ ಘೋಷಣೆಗೆ ಮುನ್ನವೇ ನಾನು ಮತ್ತು ವಿಜಯೇಂದ್ರ ಪ್ರಚಾರಕ್ಕೆ ಬಂದು ನನ್ನನ್ನು ಗೆಲ್ಲಿಸುವುದಾಗಿ ಮಾತು ನೀಡಿದ್ದರು. ಇದೀಗ ಕೊಟ್ಟ ಮಾತಿನಂತೆ ಮೊದಲಿಗೆ ಬಿ.ವೈ.ವಿಜಯೇಂದ್ರ ನಂತರದಲ್ಲಿ ಬಿ.ಎಸ್. ಯಡಿಯೂರಪ್ಪನವರು ನನ್ನ ಪರ ಪ್ರಚಾರಕ್ಕೆ ಬರಲಿದ್ದಾರೆ ಎಂದು ತಿಳಿಸಿದರು.

ಸಿಎಂ, ಸುಮಲತಾ, ಸುದೀಪ್ ಪ್ರಚಾರ ಸಾಧ್ಯತೆ: ಇವರೊಂದಿಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದೆ ಸುಮಲತಾ ಅಂಬರೀಶ್, ಬಿಜೆಪಿ ಸ್ಟಾರ್ ಪ್ರಚಾರಕರೆನಿಸಿರುವ ನಾಯಕ ನಟ ಸುದೀಪ್ ಅವರನ್ನೂ ಕರೆತರುವುದಕ್ಕೆ ಸಿದ್ಧತೆ ಮಾಡಿಕೊಂಡಿದ್ದು, ಅಭಿವೃದ್ಧಿ ಕೈ ಹಿಡಿಯುವ ವಿಶ್ವಾಸ ನನಗಿದ್ದು, ರೇಷ್ಮೆ ಸಚಿವರಾಗಿ, ಮಂಡ್ಯ ಜಿಲ್ಲೆಯನ್ನು ರೇಷ್ಮೆ ಉತ್ಪಾದನೆಯಲ್ಲಿ ರಾಜ್ಯದಲ್ಲೇ ಮೊದಲ ಸ್ಥಾನದಲ್ಲಿ ನಿಲ್ಲಿಸಿದ್ದೇನೆ. ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವರಾಗಿ ಮಂಡ್ಯ ಜಿಲ್ಲಾ ಕ್ರೀಡಾಂಗಣದ ಆಧುನೀಕರಣ, ಕ್ರೀಡಾ ವಿಜ್ಞಾನ ಕೇಂದ್ರ, ಕೆ.ಆರ್.ಪೇಟೆ ಒಳಾಂಗಣ ಕ್ರೀಡಾಂಗಣ, ಕೋಚ್‌ಗಳ ನೇಮಕ ಮಾಡುವುದರೊಂದಿಗೆ ನಾನು ವಹಿಸಿಕೊಂಡಿದ್ದ ಖಾತೆಗಳಿಗೆ ಅಭಿವೃದ್ಧಿಯ ಸ್ಪರ್ಶ ನೀಡಿದ್ದು, ಕೆ.ಆರ್.ಪೇಟೆ ಕ್ಷೇತ್ರಕ್ಕೆ ಎರಡು ಸಾವಿರ ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮಾಡಿರುವುದು ತೃಪ್ತಿ ತಂದಿದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದೊಳಗೆ ಸಂಘಟನೆಯಿಲ್ಲ. ಬಿ.ಎಲ್.ದೇವರಾಜು ಕಾಂಗ್ರೆಸ್ ಅಭ್ಯರ್ಥಿಯಾಗಿರುವುದರಿಂದ ಜೆಡಿಎಸ್ ಮತಗಳು ಒಡೆಯುವ ಸಾಧ್ಯತೆಗಳಿವೆ. ಬಿಜೆಪಿ ಪಕ್ಷದವರೆಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಕಳೆದ ಉಪ ಚುನಾವಣೆಯಲ್ಲಿ ತಮ್ಮ ಕೈ ಹಿಡಿದಿದ್ದ ಕುರುಬ ಸಮುದಾಯದ ಮತಗಳನ್ನು ಕ್ರೋಢೀಕರಿಸಿಕೊಂಡು ಗೆಲುವಿನ ಗುರಿ ಮುಟ್ಟುವುದಕ್ಕೆ ಹೋರಾಟ ನಡೆಸುತ್ತಿದ್ದೇನೆ ಎಂದರು.

ವಿವಿಧ ಗ್ರಾಮಗಳಲ್ಲಿ ಶಾಸಕ ಪುಟ್ಟರಾಜು ಸಭೆ



ಪಾಂಡವಪುರ, ಏ.12– ಮೇಲುಕೋಟೆ ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಜೆಡಿಎಸ್ ಅಭ್ಯರ್ಥಿ ಶಾಸಕ ಸಿ.ಎಸ್.ಪುಟ್ಟರಾಜು ಅವರು ಬುಧವಾರ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಗ್ರಾಪಂ ವ್ಯಾಪ್ತಿಯ ಜೆಡಿಎಸ್ ಮುಖಂಡರು, ಕಾರ್ಯಕರ್ತರ ಸಭೆ ನಡೆಸಿದರು.

ಬುಧವಾರ ಬೆಳಿಗ್ಗೆ ಮೇಲುಕೋಟೆಯ ಚಲುವನಾರಾಯಸ್ವಾಮಿ ದೇವಸ್ಥಾನದಲ್ಲಿ ಶಾಸಕ ಸಿ.ಎಸ್.ಪುಟ್ಟರಾಜು ಅವರು ದಂಪತಿಗಳ ಸಮೇತ ಪೂಜೆ ಸಲ್ಲಿಸಿದರು. ಪ್ರಚಾರ ರಥಕ್ಕೆ ಚಾಲನೆ ನೀಡಿದರು.

ನಂತರ ತಾಲೂಕಿನ ಬಳಘಟ್ಟ, ಮೇಲುಕೋಟೆ, ಜಕ್ಕನಹಳ್ಳಿ, ಮಾಣಿಕ್ಯನಹಳ್ಳಿ, ಹಳೇಬೀಡು, ಸುಂಕಾತೊಣ್ಣೂರು, ಲಕ್ಷ್ಮೀಸಾಗರ, ಟಿ.ಎಸ್.ಛತ್ರ, ಚಿಕ್ಕಾಡೆ, ಕನಗನಮರಡಿ, ದೊಡ್ಡಬ್ಯಾಡರಹಳ್ಳಿ, ಹಿರೇಮರಳಿ, ಕೆ.ಬೆಟ್ಟಹಳ್ಳಿ ಗ್ರಾಪಂಗಳಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು, ಬೆಂಬಲಿಗರ ಸಭೆ ನಡೆಸಿ ಮತಯಾಚಿಸಿದರು. ಏ.18ರಂದು ನಾಮಪತ್ರಸಲ್ಲಿಕೆ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಮನವಿ ಮಾಡಿದರು.

ಶಾಸಕ ಸಿ.ಎಸ್.ಪುಟ್ಟರಾಜು ಮಾತನಾಡಿ, ವಿಧಾನಸಭೆ ಚುನಾವಣೆ ಸಮೀಪಿಸಿದ್ದು ಹೀಗಾಗಲೇ ಕ್ಷೇತ್ರದಲ್ಲಿ ಪ್ರಚಾರ ಕಾರ್ಯ ಆರಂಭಿಸಲಾಗಿದೆ. ಅದೇ ರೀತಿ ಬುಧವಾರ ಮತ್ತು ಗುರುವಾರ ತಾಲೂಕಿನ ಉಳಿದ ಎಲ್ಲಾ ಗ್ರಾಪಂ ಮಟ್ಟದ ಕಾರ್ಯಕರ್ತರ ಸಭೆ ನಡೆಸಲಾಗುತ್ತದೆ. ಏ.18 ರಂದು ಪಟ್ಟಣದ ಶ್ರೀಮಹಾಂಕಾಳೇಶ್ವರಿ ದೇವಸ್ಥಾನದಿಂದ ಮೆರವಣಿಗೆ ಮೂಲಕ ಆಗಮಿಸಿ ಪಟ್ಟಣದ ಮಿನಿ ವಿಧಾನಸೌಧದಲ್ಲಿ ನಾಮಪತ್ರ ಸಲ್ಲಿಸಲಾಗುವುದು. ನಂತರ ಕ್ರೀಡಾಂಗಣದ ಮುಂಭಾಗದಲ್ಲಿ ಬೃಹತ್ ಸಮಾವೇಶ ನಡೆಸಲಾಗುತ್ತಿದೆ. ಅಂದಿನ ಸಭೆಗೆ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಸೇರಿದಂತೆ ರಾಜ್ಯದ ಹಲವು ನಾಯಕರು ಆಗಮಿಸಲಿದ್ದಾರೆ ಹಾಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಮನವಿ ಮಾಡಿದರು.

ನಿಮ್ಮೆಲ್ಲರ ಪ್ರೀತಿ, ವಿಶ್ವಾಸ, ಆಶೀರ್ವಾದದಿಂದ ಶಾಸಕ, ಸಚಿವನಾಗಿ ಕ್ಷೇತ್ರವನ್ನು ಸಾಕಷ್ಟು ಅಭಿವೃದ್ಧಿಪಡಿಸಿದ್ದೇನೆ. ಕ್ಷೇತ್ರವನ್ನು ಇನ್ನಷ್ಟು ಅಭಿವೃದ್ಧಿಪಡಿಸಬೇಕು ಎನ್ನುವ ಕನಸ್ಸಿನೊಂದಿಗೆ ಮತ್ತೊಮ್ಮೆ ಚುನಾವಣೆಗೆ ಸ್ಪರ್ಧಿಸಿದ್ದೇನೆ. ಬಾಕಿ ಉಳಿದಿರುವ ಅಭಿವೃದ್ಧಿ ಕೆಲಸಗಳ ಪೂರ್ಣಗೊಳಿಸಲು ಮತ್ತಷ್ಟು ಹೊಸ ಯೋಜನೆಗಳನ್ನು ರೂಪಿಸಲು ನನ್ನನ್ನು ಮತ್ತೊಮ್ಮೆ ಆಶೀರ್ವದಿಸಿ ವಿಧಾನಸಭೆಗೆ ಕಳುಹಿಸಿ ಕೊಡುವ ಮೂಲಕ ಅಭಿವೃದ್ಧಿಗೆ ಬೆಂಬಲವಾಗಿ ನಿಲ್ಲಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಅಧ್ಯಕ್ಷ ಎಸ್.ಎ.ಮಲ್ಲೇಶ್, ಜಿಪಂ ಮಾಜಿ ಸದಸ್ಯ ಸಿ.ಅಶೋಕ್, ಸಿ.ಪಿ.ಶಿವರಾಜು, ಚಿಕ್ಕಾಡೆ ಚೇತನ್ ಸೇರಿದಂತೆ ಆಯಾ ಭಾಗದ ಜೆಡಿಎಸ್ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

ಮೂಲಸೌಕರ್ಯಕ್ಕೆ ಆಗ್ರಹಿಸಿ ತಾಲೂಕು ಕಚೇರಿಗೆ ಮುತ್ತಿಗೆ



ಮದ್ದೂರು, ಏ.12– ಪಟ್ಟಣದ ಕೆಇಬಿ ಮುಂಭಾಗದಲ್ಲಿ ವಾಸ ಮಾಡುತ್ತಿರುವ ತಮಿಳು ಕಾಲೋನಿಯ ಶ್ರಮಿಕ ನಗರದ ನಿವಾಸಿಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕ ಜನಶಕ್ತಿ, ಮಹಿಳಾ ಮುನ್ನಡೆ, ಮಂಡ್ಯ ಜಿಲ್ಲಾ ಶ್ರಮಿಕ ನಗರ ನಿವಾಸಿಗಳ ಒಕ್ಕೂಟ ಹಾಗೂ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ ವತಿಯಿಂದ ಬುಧವಾರ ತಾಲೂಕು ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಲಾಯಿತು.

ಈಗಾಗಲೇ ಕಾಲೋನಿಗೆ ಮೂಲ ಸೌಕರ್ಯ ಕಲ್ಪಿಸದ ಹಿನ್ನೆಲೆಯಲ್ಲಿ ವಿಧಾನ ಸಭಾ ಚುನಾವಣೆ ಮತ ಬಹಿಷ್ಕಾರ ಮಾಡಲಾಗಿದ್ದು, ಒಂದು ವಾರದ ಹಿಂದೆ ಜಿಲ್ಲಾಧಿಕಾರಿಯವರು ಕಾಲೋನಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ತಮಿಳು ಕಾಲೋನಿಯ ಜಾಗವನ್ನು ಕಂದಾಯ ಇಲಾಖೆ ವತಿಯಿಂದ ಅಳತೆ ನಡೆಸಿ ಪುರಸಭೆಗೆ ಹಸ್ತಾಂತರ ಮಾಡಲಾಗುವುದು ಮತ್ತು ಶೀಘ್ರದಲ್ಲೇ ಕುಡಿಯುವ ನೀರಿನ ಘಟಕವನ್ನು ಸ್ಥಾಪನೆ ಮಾಡಲಾಗುವುದು ಎಂದು ಭರವಸೆ ನೀಡಿದ್ದರು. ಆದರೆ, ತಹಸೀಲ್ದಾರ್ ನರಸಿಂಹ ಮೂರ್ತಿ ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಇನ್ನು ಎರಡು ದಿನಗಳಲ್ಲಿ ಕ್ರಮ ಜರುಗಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದೆಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಗ್ರೇಡ್–2 ತಹಸೀಲ್ದಾರ್ ಶಿವಕುಮಾರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಜಗದೀಶ್, ಆನಂದ್‌ರಾಜ್, ವಿಶ್ವ, ದೇವರಾಜ್, ಶಾಂತಿ, ಚಂದ್ರಶೇಖರ್, ಮುರುಗ, ಭವ್ಯ, ರವಿ ಸೇರಿದಂತೆ ಇತರರು ಇದ್ದರು.

ಕಾಂಗ್ರೆಸ್–ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ರೈತರಿಗೆ ಅನ್ಯಾಯ

ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷ ನಂಜುಂಡೇಗೌಡ ಆರೋಪ



ಶ್ರೀರಂಗಪಟ್ಟಣ, ಏ.12– ಸಮ್ಮಿಶ್ರ ಸರ್ಕಾರ ಇದ್ದ ಸಮಯದಲ್ಲಿ ಕೇಂದ್ರದ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಂದಿನ ಮುಖ್ಯಮಂತ್ರಿ ಕುಮಾರಸ್ವಾಮಿ ಸೇರಿದಂತೆ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ರಾಜ್ಯದ ರೈತರಿಗೆ ಅನ್ಯಾಯವೆಸಗಿರುವುದಾಗಿ ಬಿಜೆಪಿ ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷ ಕೆ.ಎಸ್.ನಂಜುಂಡೇಗೌಡ ಆರೋಪಿಸಿದರು.

ಶ್ರೀರಂಗಪಟ್ಟಣ ತಾಲೂಕಿನ ಬಾಬುರಾಯನಕೊಪ್ಪಲು ಭಾರತಿ ಸಮುದಾಯ ಭವನದಲ್ಲಿ ಏರ್ಪಡಿಸಲಾಗಿದ್ದ ಕೆ.ಶೆಟ್ಟಹಳ್ಳಿ ಹೋಬಳಿ ಮಟ್ಟದ ಬಿಜೆಪಿ ಕಾರ್ಯಕರ್ತರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಬಿಜೆಪಿ ಅಭ್ಯರ್ಥಿ ಇಂಡುವಾಳು ಸಚ್ಚಿದಾನಂದ ಮಾತನಾಡಿ, ಈ ಬಾರಿಯೂ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ. ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸಗಳು ಕುಂಟಿತವಾಗಿದ್ದು, ಹಾಲಿ– ಮಾಜಿ ಶಾಸಕರುಗಳ ಆಸ್ತಿ ಮಾತ್ರ ಏರಿಕೆಯಾಗಿದೆ. ಶಾಸಕರು, ಸಂಸದರ ವಿರುದ್ಧ ವಾಗ್ದಾಳಿ ನಡೆಸುವುದೇ ಅಭಿವೃದ್ಧಿ ಎಂಬಂತೆ ಶಾಸಕರು ಭಾವಿಸಿದ್ದಾರೆ.

ನಾನು ರಾಜಕೀಯಕ್ಕೆ ಬರುವ ಮುನ್ನವೇ ಸಾಮಾಜಿಕವಾಗಿ ಗುರ್ತಿಸಿಕೊಂಡಿದ್ದು ಕುಟುಂಬ ರಾಜಕಾರಣ ಮಾಡೊಲ್ಲ. ರಾಜಕೀಯಕ್ಕೆ ನಮ್ಮ ಕುಟುಂಬದಿಂದ ನಾನೇ ಮೊದಲು ನಾನೇ ಕೊನೆ ಎಂದರು. ರಾಜ್ಯಕಾರಿಣಿ ಸಮಿತಿ ಸದಸ್ಯ ಡಾ.ಸಿದ್ದರಾಮಯ್ಯ, ಜಿಲ್ಲಾ ಉಪಾಧ್ಯಕ್ಷ ಟಿ.ಶ್ರೀಧರ್, ಜಿಪಂ ಮಾಜಿ ಸದಸ್ಯ ಎಸ್.ಎಲ್. ಲಿಂಗರಾಜು, ತಾಲೂಕು ಅಧ್ಯಕ್ಷ ಪೀ.ಹಳ್ಳಿ ರಮೇಶ್, ಪ್ರಧಾನ ಕಾರ್ಯ ದರ್ಶಿ ಬಲ್ಲೇನಹಳ್ಳಿ ಸಂತೋಷ್, ಮುಖಂಡರುಗಳಾದ ದೇವರಾಜು, ಇಂದ್ರಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ಇದೇ ವೇಳೆ ವಿವಿಧ ಗ್ರಾಮಗಳ ನೂರಾರು ಯುವಕರು ಹಾಗೂ ಮುಖಂಡರು ಜೆಡಿಎಸ್ ಹಾಗೂ ಕಾಂಗ್ರೆಸ್ ಪಕ್ಷವನ್ನು ತೊರೆದು ಬಿಜೆಪಿ ಪಕ್ಷಕ್ಕೆ ಸೇರ್ಪಡೆಗೊಂಡರು.

ನಾಳೆ ಕವನ ಸಂಕಲನ ಬಿಡುಗಡೆ

ಮಂಡ್ಯ, ಏ.12– ಭೂಮಿ ಬೆಳಗು ಸಾಂಸ್ಕೃತಿಕ ಸಂಘದ ವತಿಯಿಂದ ಸಂತೆಕಸಲಗೆರೆ ಪ್ರಕಾಶ್ ಅವರ 'ನಾಲಿಗೆ ಸವೆದ ಕುರುಹುಗಳಿಲ್ಲ' ಕವನ ಸಂಕಲನ ಲೋಕಾರ್ಪಣೆ ಕಾರ್ಯಕ್ರಮ ಏ.14ರಂದು ಬೆಳಗ್ಗೆ 10.30 ಗಂಟೆಗೆ ನಗರದ ಗಾಂಧಿ ಭವನದಲ್ಲಿ ನಡೆಯಲಿದೆ. ಬಿ.ಎಂ.ಶ್ರೀ ಪ್ರತಿಷ್ಠಾನದ ಅಧ್ಯಕ್ಷ ಡಾ. ಭೈರಮಂಗಲ ರಾಮೇಗೌಡ ಅವರು ಪುಸ್ತಕ ಲೋಕಾರ್ಪಣೆ ಮಾಡುವರು. ಕಿರುತೆರೆ ನಟ ಡಾ. ಹನಿಯೂರು ಚಂದ್ರೇಗೌಡ ಪುಸ್ತಕ ಕುರಿತು ಮಾತನಾಡುವರು. ಸಾಹಿತಿ ಸಂತೆಕಸಲಗೆರೆ ಪ್ರಕಾಶ್, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ವೇದಿಕೆ ಅಧ್ಯಕ್ಷ ಎಲ್. ಸಂದೇಶ್ ಸಮಾರಂಭದಲ್ಲಿ ಭಾಗವಹಿಸುವರು. ಸಾಹಿತಿ ಡಾ. ಮಜ್ಜಿಗೆಪುರ ಶಿವರಾಮ್ ಅಧ್ಯಕ್ಷತೆ ವಹಿಸುವರು ಎಂದು ಮಂಗಲ ಎಂ. ಯೋಗೀಶ್ ತಿಳಿಸಿದ್ದಾರೆ.

ನೇಮಕ



ಮೈಸೂರು, ಏ. 12– ಮೈಸೂರಿನ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್‌ನ ವೃತ್ತಿಪರ ನಿರ್ದೇಶಕರನ್ನಾಗಿ ವಕೀಲ ವಿ.ಎಂ. ನಾಗೇಂದ್ರ ಪ್ರಸಾದ್ ಅವರನ್ನು ನೇಮಕ ಮಾಡಲಾಗಿದೆ.

ಮೂರನೇ ಪುಟದಿಂದ

ಕಾನೂನು ತಜ್ಞ ಸಿಕೆಎನ್ ರಾಜಾ ಇನ್ನಿಲ್ಲ

ಅಗಲಿದ್ದಾರೆ. ರಾಜಾ ಅವರ ಮತ್ತೋರ್ವ ಪುತ್ರ, ಮಕ್ಕಳ ತಜ್ಞ ಡಾ.ಆರ್.ಕೇಶವ್ ಅವರು ನಿಧನರಾಗಿದ್ದಾರೆ. ಚಾಮುಂಡಿಬೆಟ್ಟ ತಪ್ಪಲಿನ ಸ್ಮಶಾನದಲ್ಲಿ ಡಾ. ಸಿ.ಕೆ.ಎನ್.ರಾಜಾ ಅವರ ಅಂತ್ಯ ಸಂಸ್ಕಾರವನ್ನು ಇಂದು ಸಂಜೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ತಂದೆ ಸಿ.ಕೆ.ನಾಗಪ್ಪ ಹಾಗೂ ತಾತ ಅವರೂ ವಕೀಲರಾಗಿದ್ದರಿಂದ ಡಾ.ಸಿ.ಕೆ.ಎನ್.ರಾಜಾ ಅವರಿಗೆ ಬಾಲ್ಯದಿಂದಲೂ ಕಾನೂನು ವಿಷಯದಲ್ಲಿ ಆಸಕ್ತಿ ಇತ್ತು. ಕಾನೂನು ವಿಷಯದಲ್ಲಿ ಪಿಹೆಚ್.ಡಿ ಪಡೆದ ದಕ್ಷಿಣ ಭಾರತದ ಮೊದಲಿಗರು ಎಂಬ ಕೀರ್ತಿಗೆ ಪಾತ್ರರಾಗಿದ್ದ ರಾಜಾ ಅವರು, ಸಾಂವಿಧಾನಿಕ ಕಾನೂನು ಮತ್ತು ಅಂತರರಾಷ್ಟ್ರೀಯ ಕಾನೂನು ಪರಿಣಿತರಾಗಿದ್ದರು. 1953ರಿಂದ 58 ರವರೆಗೆ ವಕೀಲರಾಗಿ ಅಭ್ಯಾಸ ಮಾಡಿ, ಸುದೀರ್ಘ 60 ವರ್ಷಗಳ ಕಾಲ ಬೋಧಕರಾಗಿ ಸಾವಿರಾರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದ್ದರು.

ಶಾರದಾವಿಲಾಸ ಕಾನೂನು ಕಾಲೇಜು, ಧಾರವಾಡ ವಿಶ್ವವಿದ್ಯಾಲಯದ ಕಾನೂನು ಕಾಲೇಜಿನಲ್ಲಿ ಅಧ್ಯಾಪಕರಾಗಿ ಸೇವೆ ಸಲ್ಲಿಸಿದ್ದ ಅವರು, ಮೈಸೂರು ವಿವಿ ಕಾನೂನು ಸ್ನಾತಕೋತ್ತರ ವಿಭಾಗದ ಪ್ರಾಧ್ಯಾಪಕರಾಗಿ, ವಿಭಾಗದ ಮುಖ್ಯಸ್ಥರಾಗಿ, ಡೀನ್, ಫ್ಯಾಕಲ್ಟಿಯಾಗಿ, ಸಿಂಡಿಕೇಟ್, ಸೆನೆಟ್ ಹಾಗೂ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ಕಾರ್ಯ ನಿರ್ವಹಿಸಿದ್ದರು. ನಿವೃತ್ತಿ ನಂತರವೂ ಎಸ್‌ಬಿಆರ್‌ಆರ್ ಮಹಾಜನ ಕಾನೂನು ಕಾಲೇಜು ಹಾಗೂ ಜೆಎಸ್‌ಎಸ್ ಕಾನೂನು ಕಾಲೇಜಿನಲ್ಲೂ ಅಧ್ಯಾಪಕರಾಗಿ ಕಾರ್ಯ ನಿರ್ವಹಿಸಿದ್ದರು. ಇಳಿವಯಸ್ಸಿನವರೆಗೂ ಕಾನೂನು ಬೋಧಿಸುತ್ತಿದ್ದ ಅವರು 2 ವರ್ಷಗಳಿಂದೀಚೆಗಷ್ಟೇ ವಿಶ್ರಾಂತ ಜೀವನದಲ್ಲಿದ್ದರು.


ಅಲ್ಲದೆ ಭಾರತೀಯ ಕಾನೂನು ಸಂಸ್ಥೆ, ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆ, ಇಂಡಿಯನ್ ಸೊಸೈಟಿ ಆಫ್ ಕ್ರಿಮಿನಾಲಜಿ, ಅಖಿಲ ಭಾರತ ಕಾನೂನು ಉಪನ್ಯಾಸಕರ ಸಂಘದ ಸದಸ್ಯರಾಗಿ, ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್‌ನ ನಿರ್ದೇಶಕರಾಗಿ ಕೆಲಸ ಮಾಡಿದ್ದರು. ಎನ್‌ಐಇ ವಿದ್ಯಾಸಂಸ್ಥೆ ನಿರ್ದೇಶಕರಾಗಿ ಹಾಗೂ ಉಪಾಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದರು. ಮೈಸೂರಿನ ಅನಾಥಾಲಯ ಆಡಳಿತ ಮಂಡಳಿ, ಎಲ್‌ಐಸಿಯ ಪಾಲಿಸಿ–ಹೋಲ್ಡರ್ಸ್ ಕೌನ್ಸಿಲ್ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದರು. ರಾಜಾ ಅವರು ಕಾನೂನಿಗೆ ಸಂಬಂಧಿಸಿದ 25 ಪುಸ್ತಕಗಳು, ಪ್ರಮುಖ ನಿಯತಕಾಲಿಕೆಗಳಲ್ಲಿ 250ಕ್ಕೂ ಹೆಚ್ಚು ಸಂಶೋಧನಾ ಲೇಖನಗಳು, 2 ಕಾದಂಬರಿಗಳನ್ನು ಹೊರತಂದಿದ್ದರು. ಅಲ್ಲದೆ ಸುಧಾ, ಮಯೂರ, ಕಸ್ತೂರಿ ಮ್ಯಾಗ್ಸಿನ್‌ಗಳಲ್ಲಿ ಕನ್ನಡದ ಹಾಸ್ಯ ಲೇಖನಗಳನ್ನು ಬರೆಯುತ್ತಿದ್ದರು. ಇವರ ವಿಡಂಬನಾತ್ಮಕ ಲೇಖನಗಳ ಸಂಕಲನ 'ಯಾರ್‍ರೀ ಅರ್ಜೆಂಟ್ ಬೆಂಗ್ಳೂರ್' ಪುಸ್ತಕ ಪ್ರಸಿದ್ಧಿ ಪಡೆದಿದೆ.

50ರಿಂದ 60 ಎಕರೆ ಸಸ್ಯ, ಪ್ರಾಣಿ–ಪಕ್ಷಿ ನಾಶ

ನಿಗಾ ವಹಿಸಿದ್ದರು. ಪೊಲೀಸರು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಾಚರಣೆಗೆ ಸಹಕರಿಸಿದರು. ಸಂಜೆ ಸುಮಾರು 5.45ರ ವೇಳೆಗೆ ಮೆಟ್ಟಿಲು ಮಾರ್ಗದ ಬಲಭಾಗದಲ್ಲಿ ಬೆಂಕಿ ಕಾಣಿಸಿಕೊಂಡಿತು. ಯಾರೋ ಒಣಗಿದ ಎಲೆಗಳನ್ನು ಸುಡುತ್ತಿರಬಹುದೆಂದು ಭಾವಿಸಿದೆವು. ಆದರೆ ಕೆಲಹೊತ್ತಿನಲ್ಲೇ ಬೆಂಕಿ ಹೆಚ್ಚು ವ್ಯಾಪಿಸಿದ್ದರಿಂದ ತಕ್ಷಣ ಅಗ್ನಿಶಾಮಕ ಠಾಣೆಗೆ ಮಾಹಿತಿ ನೀಡಿದೆವು. ಕರೆ ಮಾಡಿ 10–15 ನಿಮಿಷದಲ್ಲೇ ಸ್ಥಳಕ್ಕೆ ಧಾವಿಸಿದ ಅವರು, ನಾಲ್ಕು ವಾಹನಗಳೊಂದಿಗೆ ಕಾರ್ಯಾಚರಣೆ ಆರಂಭಿಸಿದರು. ಯಾರೂ ಹೋಗಲಾಗದ ಸ್ಥಳವಾಗಿದ್ದರೂ ನಿರಂತರ ಕಾರ್ಯಾಚರಣೆ ನಡೆಸಿ, ಬೆಂಕಿ ನಂದಿಸಿದರು. ಪೊಲೀಸರೂ ತುಂಬಾ ಸಹಕಾರ ನೀಡಿದರು. ತ್ವರಿತ ಕ್ರಮ ಕೈಗೊಳ್ಳದಿದ್ದರೆ ಖಂಡಿತ ಬೆಟ್ಟದ ಭಾಗಾರ್ಧಕ್ಕೆ ಬೆಂಕಿ ಆವರಿಸಿ, ಅನಾಹುತವಾಗುತ್ತಿತ್ತು ಎಂದು ಬೆಟ್ಟದ ಪಾದದ ನಿವಾಸಿ ಸವಿತಾ ಘಾಟ್ಕೆ ತಿಳಿಸಿದರು.

ಕಿಡಿಗೇಡಿಗಳ ದುಷ್ಕೃತ್ಯ: ಬೇಸಿಗೆಯಲ್ಲಿ ಬೆಂಕಿ ಅವಘಡಗಳು ಹೆಚ್ಚು ಸಂಭವಿಸುತ್ತವೆ. ಒಂದೆಡೆ ಆಕಸ್ಮಿಕವಾಗಿ ನಡೆದರೆ ಮತ್ತೊಂದೆಡೆ ಕಿಡಿಗೇಡಿಗಳು ಕಿಡಿ ಹೊತ್ತಿಸುತ್ತಾರೆ. ಬೆಂಕಿಯಿಟ್ಟು ಮಜಾ ತೆಗೆದುಕೊಳ್ಳುವ ಇಂತಹ ವಿಚಿತ್ರ ವ್ಯಕ್ತಿಗಳಿಂದ ಹಚ್ಚಸಿರು ನಾಶವಾಗುವುದರ ಜೊತೆಗೆ ಅನೇಕ ಪ್ರಾಣಿ–ಪಕ್ಷಿಗಳು ಬಲಿಯಾಗುತ್ತವೆ. ಒಣ ಹುಲ್ಲು ಅಥವಾ ಎಲೆಗಳ ರಾಶಿಗೆ ಬೆಂಕಿ ಇಡುವುದು, ಬೀಡಿ–ಸಿಗರೇಟು ಸೇದಿ, ಬೆಂಕಿ ನಂದಿಸದೆ ಎಲ್ಲೆಂದರಲ್ಲಿ ಬಿಸಾಡುವುದು ಕೆಲವರಿಗೆ ಖಯ್ಯಾಲಿಯಾಗಿದೆ. ಇಂದು ಚಾಮುಂಡಿಬೆಟ್ಟದಲ್ಲಿ ಬೆಂಕಿ ಅವಘಡ ಸಂಭವಿಸಿರುವುದೂ ಇದೇ ಕಾರಣದಿಂದ. ಹೀಗೆ ಕೇಡು ಮಾಡುವುದರಿಂದ ಏನನ್ನೂ ಸಾಧಿಸಲಾಗದು. ಒಂದಲ್ಲ ಒಂದು ದಿನ ಅದು ತಿರುಗುಬಾಣವಾಗುತ್ತದೆ. ಯಾರೂ ಈ ರೀತಿ ಪ್ರಕೃತಿ ಒಡಲಿಗೆ ಬೆಂಕಿ ಹಚ್ಚುವ ದುಷ್ಕೃತ್ಯವೆಸಗಬಾರದು.





[ಏಪ್ರಿಲ್ 13]

ಪಂಜಾಬ್ V/S ಗುಜರಾತ್

ಸ್ಥಳ: ಮೊಹಾಲಿ ಸ್ಟೇಡಿಯಂ, ಪಂಜಾಬ್

ಸಮಯ: ಸಂಜೆ 7.30

ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ರಾಜಸ್ಥಾನ್	4	3	1	0	6
ಲಕ್ನೋ	4	3	1	0	6
ಕೋಲ್ಕತ್ತಾ	3	2	1	0	4
ಗುಜರಾತ್	3	2	1	0	4
ಸಿಎಸ್‌ಕೆ	4	2	2	0	4
ಪಂಜಾಬ್	3	2	1	0	4
ಆರ್‌ಸಿಬಿ	3	1	2	0	2
ಮುಂಬೈ	3	1	2	0	2
ಎಸ್‌ಆರ್‌ಹೆಚ್	3	1	2	0	2
ಡೆಲ್ಲಿ	4	0	4	0	0

ರಾಜಸ್ಥಾನ್ ರಾಯಲ್ಸ್‌ಗೆ ರೋಚಕ ಜಯ



ಚೆನ್ನೈ– ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ 3 ರನ್‌ಗಳ ರೋಚಕ ಜಯ ಸಾಧಿಸಿತು. ಈ ಮೂಲಕ ಐಪಿಎಲ್‌ನಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ನಾಯಕನಾಗಿ 200ನೇ ಪಂದ್ಯವಾಡಿದ ದಿಗ್ಗಜ ನಾಯಕ ಎಂಎಸ್ ಧೋನಿ ಗೆಲುವಿನ ಸಂಭ್ರಮ ಪಡೆಯುವಲ್ಲಿ ವಿಫಲರಾಗಿದ್ದಾರೆ.

ಇಲ್ಲಿನ ಚೆಪಾಕ್ ಮೈದಾನದಲ್ಲಿ ಬುಧವಾರ ನಡೆದ ಐಪಿಎಲ್ 16ನೇ ಆವೃತ್ತಿಯ 17ನೇ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ತಂಡಕ್ಕೆ 15 ವರ್ಷಗಳ ಬಳಿಕ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಬಂದ ಮೊದಲ ಗೆಲುವಾಗಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ ರಾಯಲ್ಸ್ ತಂಡ ಜೋಸ್ ಬಟ್ಲರ್(52 ರನ್) ಅವರ ಆಕರ್ಷಕ ಅರ್ಧಶತಕ ಹಾಗೂ ಕೆಳಹಂತದಲ್ಲಿ ಶಿಮ್ರೋನ್ ಹೆಟ್ಮೆಯರ್ ಸ್ಫೋಟಕ ಇನ್ನಿಂಗ್ಸ್‌ನ ನೆರವಿನಿಂದ 8 ವಿಕೆಟ್ ನಷ್ಟಕ್ಕೆ 175 ರನ್ ಪೇರಿಸಿತ್ತು.

176 ರನ್‌ಗಳ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ ಆರಂಭದಲ್ಲೆ ಋತುರಾಜ್ ಗಾಯಕ್ವಾಡ್ ವಿಕೆಟ್ ಕಳೆದುಕೊಂಡಿತು. ಈ ಹಂತದಲ್ಲಿ ಜೊತೆಯಾದ ಡೆವೋನ್ ಕಾನ್ವೇ(50ರನ್, 38 ಎಸೆತ, 6 ಬೌಂಡರಿ) ಹಾಗೂ ಅಜಿಂಕ್ಯ ರಹಾನೆ (31 ರನ್,19 ಎಸೆತ, 2 ಬೌಂಡರಿ, 1 ಸಿಕ್ಸರ್) 2ನೇ ವಿಕೆಟ್‌ಗೆ 68 ರನ್ ಜೊತೆಯಾಟವನ್ನು ಸ್ಪಿನ್ ಮೋಡಿ ಮಾಡಿದ ಅಶ್ವಿನ್ 10ನೇ ಓವರ್‌ನಲ್ಲಿ ಬೇರ್ಪಡಿಸಿದರು.

ಆ ಬಳಿಕ ಶಿವಂ ದುಬೆ 8 ರನ್ ಬಾರಿಸಿ ಔಟಾದರೆ, ಮೊಯಿನ್ ಅಲಿ 7 ರನ್‌ಗೆ ವಿಕೆಟ್ ಒಪ್ಪಿಸಿದರು. ಅಂಬಟಿ ರಾಯುಡು 2 ಎಸೆತಗಳಲ್ಲಿ 1 ರನ್ ಬಾರಿಸಿ ಔಟಾದಾಗ ಚೆನ್ನೈ 103 ರನ್‌ಗೆ 5 ವಿಕೆಟ್ ಕಳೆದುಕೊಂಡು ಸೋಲುವ ಭೀತಿಯಲ್ಲಿತ್ತು. ಈ ವೇಳೆ ಜೊತೆಯಾದ ರವೀಂದ್ರ ಜಡೇಜಾ (25 ರನ್, 15 ಎಸೆತ, 1 ಬೌಂಡರಿ, 2 ಸಿಕ್ಸರ್), ಎಂ.ಎಸ್ ಧೋನಿ (32 ರನ್, 17 ಎಸೆತ, 1 ಬೌಂಡರಿ, 3 ಸಿಕ್ಸರ್) ಗೆಲುವಿಗೆ ದೊಡ್ಡ ಮಟ್ಟದಲ್ಲಿ ಶ್ರಮಿಸಿದರೂ ಜಯ ಗಳಿಸಲು ಸಾಧ್ಯವಾಗಲಿಲ್ಲ. ಅಂತಿಮವಾಗಿ 6 ವಿಕೆಟ್ ನಷ್ಟಕ್ಕೆ 172 ರನ್ ಗಳಿಸಲಷ್ಟೇ ಸಾಧ್ಯವಾಯಿತು. ಈ ಮೂಲಕ ರಾಜಸ್ಥಾನ್ ರಾಯಲ್ಸ್ 3 ರನ್‌ಗಳ ರೋಚಕ ಗೆಲುವು ಪಡೆಯಿತು. 4 ಓವರ್‌ಗಳಲ್ಲಿ 25 ರನ್ ನೀಡಿ ಪ್ರಮುಖ 2 ವಿಕೆಟ್ ಜೊತೆಗೆ ಬ್ಯಾಟಿಂಗ್‌ನಲ್ಲೂ ಮಿಂಚಿದ ರವಿಚಂದ್ರನ್ ಅಶ್ವಿನ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಆಸ್ಪತ್ರೆಗೆ ದಾಖಲಾದ ನಟಿ ಮಾಳವಿಕಾ ಅವಿನಾಶ್



ಬೆಂಗಳೂರು: ನಟಿ ಹಾಗೂ ರಾಜಕಾರಣಿ ಮಾಳವಿಕಾ ಅವಿನಾಶ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಆಸ್ಪತ್ರೆ ಬೆಡ್ ಮೇಲೆ ಮಲಗಿಕೊಂಡಿರುವ ಫೋಟೋವನ್ನು ಹಂಚಿಕೊಂಡಿರುವ ಅವರು ತಮಗಾದ ಆರೋಗ್ಯ ಸಮಸ್ಯೆಯನ್ನೂ ಅಭಿಮಾನಿಗಳ ಜೊತೆ ಹಂಚಿಕೊಂಡಿದ್ದಾರೆ. ಅಲ್ಲದೇ, ಈ ರೀತಿ ಸಮಸ್ಯೆಯಾದಾಗ ನೆಗ್ಲೆಟ್ ಮಾಡಬೇಡಿ ಎಂದು ಸಲಹೆಯನ್ನೂ ನೀಡಿದ್ದಾರೆ. ಮಾಳವಿಕಾ ಮೈಗ್ರೇನ್ ಸಮಸ್ಯೆಯಿಂದ ಬಳಲುತ್ತಿದ್ದಾರಂತೆ. ಹಾಗಾಗಿ ಇದನ್ನು ಯಾರೂ ಹಗುರವಾಗಿ ತೆಗೆದುಕೊಳ್ಳಬೇಡಿ ಎಂದು ಅವರು ಹೇಳಿದ್ದಾರೆ. ಕೇವಲ ತಲೆನೋವು ಅಂದುಕೊಂಡು ತಾತ್ಸಾರ ಮಾಡಿದರೆ, ನನ್ನ ರೀತಿಯಲ್ಲೇ ನೀವು ಆಸ್ಪತ್ರೆಯಲ್ಲಿ ಮಲಗಬೇಕಾಗುತ್ತದೆ ಎಂದು ಸಣ್ಣ ಎಚ್ಚರಿಕೆಯನ್ನೂ ಅವರು ನೀಡಿದ್ದಾರೆ. ಮೈಗ್ರೇನ್ ಸಮಸ್ಯೆಯನ್ನು ಹೇಳಿಕೊಂಡು ಆಸ್ಪತ್ರೆಯ ಬೆಡ್‌ನಿಂದ ಸೆಲ್ಫಿ ಕ್ಲಿಕ್ಕಿಸಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮಾಳವಿಕಾ, ಚೇತರಿಸಿಕೊಳ್ಳುತ್ತಿರುವ ಕುರಿತು ಹಂಚಿಕೊಂಡಿದ್ದಾರೆ.

ಬೈಕ್‌ಗೆ ಲಾರಿ ಡಿಕ್ಕಿ: ಸವಾರ ಸಾವು

ಪಾಂಡವಪುರ, ಏ.12– ಬೈಕ್–ಲಾರಿ ಡಿಕ್ಕಿಯಾಗಿ ಸವಾರ ಸ್ಥಳದಲ್ಲಿಯೇ ಮೃತಪಟ್ಟಿರುವ ಘಟನೆ ತಾಲೂಕಿನ ಕನಗನಮರಡಿ ಗ್ರಾಮದ ಹೊರವಲಯದಲ್ಲಿ ಬುಧವಾರ ನಡೆದಿದೆ.

ಗ್ರಾಮದ ನಿವಾಸಿ ಕೆ.ಪುಟ್ಟಸ್ವಾಮೀಗೌಡ (60) ಅಪಘಾತದಲ್ಲಿ ಮೃತಪಟ್ಟಿದ್ದು, ಇವರು ಪಾಂಡವಪುರದಿಂದ ಕನಗನಮರಡಿ ಗ್ರಾಮಕ್ಕೆ ತೆರಳುತ್ತಿದ್ದಾಗ ಕನಗನಮರಡಿ ಕ್ವಾರೆಯ ಕ್ರಷರ್‌ಯಿಂದ ಕಲ್ಲಿನ ಪುಡಿ ತುಂಬಿಕೊಂಡು ಬರುತ್ತಿದ್ದ ಲಾರಿ ಇವರ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಬೈಕ್ ಸವಾರ ಲಾರಿಯ ಕೆಳಗೆ ಸಿಲುಕಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ವಿಷಯ ತಿಳಿದ ಗ್ರಾಮಸ್ಥರು ಸ್ಥಳಕ್ಕೆ ಆಗಮಿಸಿ ಲಾರಿ ಸವಾರನಿಗೆ ಥಳಿಸಿ ಪೊಲೀಸರಿಗೆ ಒಪ್ಪಿಸಿದ್ದಾರೆ.

ಘಟನೆಯನ್ನು ಖಂಡಿಸಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಘಟನೆಗೆ ಕಲ್ಲು ಗಣಿಗಾರಿಕೆ ಮಾಲೀಕರೇ ಕಾರಣ. ಕ್ವಾರೆ ಮಾಲೀಕರು ಹೆಚ್ಚಿನ ಪರಿಹಾರ ನೀಡಬೇಕು. ಜತೆಗೆ ಸರಕಾರದಿಂದ ಪರಿಹಾರ ನೀಡಬೇಕೆಂದು ಪಟ್ಟುಹಿಡಿದು ಪ್ರತಿಭಟನೆ ನಡೆಸಿದರು. ಸ್ಥಳಕ್ಕಾಗಮಿಸಿದ ಪೊಲೀಸರು ಪರಿಹಾರ ಕೊಡಿಸುವ ಭರವಸೆ ನೀಡಿದ ನಂತರ ಮೃತದೇಹವನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದರು. ಘಟನೆ ಸಂಬಂಧ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ವರ್ಷದ ಸಾಮಾಜಿಕ ಉದ್ಯಮಿ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮೈಸೂರು, ಏ. 12– ಜುಬಿಲೆಂಟ್ ಭಾರ್ತಿಯಾ ಫೌಂಡೇಶನ್ ಮತ್ತು ಶ್ವಾಬ್ ಫೌಂಡೇಶನ್ ಫಾರ್ ಸೋಶಿಯಲ್ ಎಂಟರ್‌ಪ್ರಿನರ್‌ಶಿಪ್, ವರ್ಲ್ಡ್ ಎಕನಾಮಿಕ್ ಫೋರಂ ಸಂಸ್ಥೆಯು ವಾರ್ಷಿಕ ಸ್ಪರ್ಧೆಯ 14ನೇ ಆವೃತ್ತಿಗೆ ಅರ್ಜಿಗಳನ್ನು ಆಹ್ವಾನಿಸಿದೆ. ವರ್ಷದ ಸಾಮಾಜಿಕ ಉದ್ಯಮಿ (SEOY) –2023 ಪ್ರಶಸ್ತಿಗಾಗಿ ಅರ್ಜಿಗಳನ್ನು ಏ.30 ರವರೆಗೆ ಸ್ವೀಕರಿಸಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು www.jubilant-bhartiafoundation.com ನಲ್ಲಿ ಲಭ್ಯವಿರುವ ಅರ್ಜಿ ನಮೂನೆಯನ್ನು ಸಲ್ಲಿಸಬಹುದು ಅಥವಾ ಭರ್ತಿ ಮಾಡಿದ ಫಾರ್ಮ್ ಅನ್ನು jbf.seoy@jubl.comಗೆ ಇಮೇಲ್ ಮಾಡಬಹುದು ಎಂದು ಪ್ರಕಟಣೆ ತಿಳಿಸಿದೆ.

ಅಶೋಕಪುರಂನ ಅಂಬೇಡ್ಕರ್ ಉದ್ಯಾನವನದಲ್ಲಿ ಅಪಾಯಕಾರಿ ಕಾಮಗಾರಿ; ನಿವಾಸಿಗಳ ಖಂಡನೆ



ಮೈಸೂರು,ಏ.12(ಎಂಕೆ)– ಮೈಸೂರು ಅಶೋಕಪುರಂನ ಡಾ.ಬಿ.ಆರ್. ಅಂಬೇಡ್ಕರ್ ಉದ್ಯಾನವನದ ಅಭಿವೃದ್ಧಿ ಹೆಸರಿನಲ್ಲಿ ಲಕ್ಷಾಂತರ ರೂ. ನುಂಗುವ ಯತ್ನ ನಡೆದಿದೆ. ಕಳಪೆ ಕಾಮಗಾರಿ ನಡೆಸಿರುವ ಗುತ್ತಿಗೆದಾರರು ವಾಯುವಿಹಾರಿಗಳು ಹಾಗೂ ಮಕ್ಕಳ ಪ್ರಾಣಕ್ಕೆ ಕುತ್ತು ತಂದಿದ್ದಾರೆ ಎಂದು ಅಶೋಕಪುರಂನ ಕೆಲ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

'ಮಹಾತ್ಮಗಾಂಧಿ ನಗರ ವಿಕಾಸ ಯೋಜನೆ'ಯಡಿ 1.9 ಕೋಟಿ ರೂ. ವೆಚ್ಚದಲ್ಲಿ ಸ್ಟೇಜ್, ಸೆಕ್ಯೂರಿಟಿ ಕೊಠಡಿ ನಿರ್ಮಾಣ, ಜಿಮ್ ಸಲಕರಣೆಗಳ ಅಳವಡಿಸುವುದು, ಎಲ್‌ಇಡಿ ಸ್ಕ್ರೀನ್, ಗ್ರಿಲ್ ಕಾಂಪೌಂಡ್‌ಗೆ ಬಣ್ಣ ಬಳಿಯುವುದು, ಪಾದಚಾರಿ ಮಾರ್ಗದ ಹಾಳಾಗಿರುವ ಭಾಗಗಳಲ್ಲಿ ಇಂಟರ್‌ಲಾಕ್ ಮತ್ತು ಕರ್ಬ್ ಕಲ್ಲುಗಳನ್ನು ತೆಗೆದು ಹೊಸದಾಗಿ ಹಾಕುವ ಕಾಮಗಾರಿಗಳು ಒಂದೆಡೆ ನಡೆಯುತ್ತಿದ್ದರೆ, ಮತ್ತೊಂದು ಕಡೆಯಿಂದ ಪೂರ್ಣಗೊಳ್ಳುವ ಮುಂಚೆಯೇ ಹಾಳಾಗುತ್ತಿರುವುದು ಕಳಪೆ ಕಾಮಗಾರಿ ಎಂಬುದನ್ನು ಸಾಕ್ಷೀಕರಿಸಿದೆ. ಗುತ್ತಿಗೆದಾರರು ಬೇಕಾಬಿಟ್ಟಿ ಕಾಮಗಾರಿ ನಡೆಸಿದ್ದು, ಉದ್ಯಾನವನ ಅಭಿವೃದ್ಧಿ ಹೆಸರಿನಲ್ಲಿ ಭಾರೀ ಗೋಲ್‌ಮಾಲ್ ನಡೆಸಿದ್ದಾರೆ ಎಂದು ದೂರಿದ್ದಾರೆ.

ಪಾರ್ಕ್‌ನೊಳಗಿನ ಮಕ್ಕಳ ಆಟಿಕೆ ಸಲಕರಣೆಗಳ ಸುತ್ತಲೂ ಗ್ರಿಲ್ ಕಾಂಪೌಂಡ್ ಅಳವಡಿಸಲಾಗಿತ್ತು. ಆದರೆ ಅಳವಡಿಸಿದ ಒಂದೆರಡು ದಿನಗಳಲ್ಲಿಯೇ ಗ್ರಿಲ್‌ಗಳೆಲ್ಲವೂ ನೆಲಕ್ಕುರುಳಿವೆ. ಸುಮಾರು 80 ಕೆಜಿಗೂ ಹೆಚ್ಚು ತೂಕ ಇರುವ ಗ್ರಿಲ್‌ಗಳನ್ನು ಅಳವಡಿಸಲು ಕನಿಷ್ಠ ಎರಡು ಅಡಿ ಆಳ ಗುಂಡಿ ತೆಗೆದು ಕಾಂಕ್ರೀಟ್ ಹಾಕಿ ಕಂಬ(ಕಬ್ಬಿಣದ ಕಂಬಗಳು) ನಿಲ್ಲಿಸಬೇಕು. ಆದರೆ ಮಕ್ಕಳ ಆಟಿಕೆ ಸಲಕರಣೆಗಳ ಸುತ್ತಲೂ ಕಟ್ಟಿದ್ದ ಸುಮಾರು ಒಂದು





ಅಡಿ(ಡಿವೈಡರ್ ಮಾದರಿ) ಎತ್ತರದ ಕಿರು ಕಟ್ಟೆಯ ಮೇಲೆ ಒಂದು ಇಟ್ಟಿಗೆ(ಸುಮಾರು ಅರ್ಧ ಅಡಿಗೂ ಕಡಿಮೆ ಇರುವ ಮಣ್ಣಿನ ಇಟ್ಟಿಗೆ) ಒಡೆದು ಹಾಕಿ ಅದರ ಜಾಗದಲ್ಲಿ ಕಾಂಕ್ರೀಟ್ ಸುರಿದು ಕಂಬಗಳನ್ನು ನಿಲ್ಲಿಸಿದ್ದಾರೆ. ಇದರಿಂದಾಗಿ ಕಂಬಗಳು ಗ್ರಿಲ್‌ಗಳ ತೂಕಕ್ಕೆ ಹೊಂದಾಣಿಕೆಯಾಗದೆ ಕಾಂಕ್ರೀಟ್ ಸಮೇತ ಕಿತ್ತು ನೆಲಕ್ಕುರುಳಿವೆ ಎಂದು ನಿವಾಸಿ, ಕೆ.ಆರ್.ಬ್ಯಾಂಕ್‌ನ ನಿರ್ದೇಶಕರೂ ಆದ ಹೆಚ್.ವಾಸು 'ಮೈಸೂರು ಮಿತ್ರ'ನಲ್ಲಿ ಕಾಮಗಾರಿ ಕುರಿತು ಮಾಹಿತಿ ನೀಡಿದರು.

ಒಂದು ಗ್ರಿಲ್ ಎತ್ತಲು ಕನಿಷ್ಠ ನಾಲ್ಕು ಜನರಾದರೂ ಬೇಕು. ಇಷ್ಟೊಂದು ತೂಕವಿರುವ ಗ್ರಿಲ್‌ಗಳನ್ನು ಅಳವಡಿಸಲು ಸದೃಢವಾಗಿ ಕಂಬಗಳನ್ನು ನಿಲ್ಲಿಸಬೇಕು. ಆದರೆ ಬೇಕಾಬಿಟ್ಟಿಯಾಗಿ ಕಂಬಗಳನ್ನು ನಿಲ್ಲಿಸಿದ್ದರಿಂದ ಆಟವಾಡುತ್ತಿದ್ದ ಮಕ್ಕಳ ಪಕ್ಕಕ್ಕೆ ಗ್ರಿಲ್‌ಗಳು ಉರುಳಿ ಬಿದ್ದಿವೆ. ಅದೃಷ್ಟವಶಾತ್ ಯಾರಿಗೂ ತೊಂದರೆಯಾಗಿಲ್ಲ ಎಂದು ಆತಂಕ ವ್ಯಕ್ತಪಡಿಸಿದರಲ್ಲದೆ ಜಿಮ್ ಸಲಕರಣೆಗಳನ್ನು ಅವ್ಯವಸ್ಥಿತವಾಗಿ ಅಳವಡಿಸಿದ್ದಾರೆ. ಇನ್ನೂ ಟೈಲ್ಸ್‌ಗಳನ್ನು ಅಳವಡಿಸಿರಲಿಲ್ಲ. ಅಷ್ಟರಲ್ಲೇ ಜಿಮ್ ಸಲಕರಣೆಗಳ ಸುತ್ತಲಿರುವ ಕಿರು ಗೋಡೆ ಕುಸಿದು ಬೀಳುತ್ತಿದೆ ಎಂದು ಹೇಳಿದರು.

ಪ್ರತಿಮೆ ಪಕ್ಕದಲ್ಲೇ ಶೌಚಾಲಯ: ಪಾರ್ಕ್‌ನಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಪಕ್ಕದಲ್ಲೇ ಸ್ಟೇಜ್ ನಿರ್ಮಾಣ ಮಾಡಲಾಗುತ್ತಿದೆ. ಸ್ಟೇಜ್ ಹಿಂಭಾಗ ಶೌಚಾಲಯ ನಿರ್ಮಿಸಲಾಗುತ್ತಿದ್ದು, ಈ ಶೌಚಾಲಯವೂ ಅಂಬೇಡ್ಕರ್ ಪ್ರತಿಮೆ ಪಕ್ಕದಲ್ಲೇ ಇದೆ. ಉದ್ಯಾನವನದ ಪಕ್ಕದಲ್ಲಿ ತಿರುಗಾಡುವವರಿಗೆ ಅಂಬೇಡ್ಕರ್ ಅವರ ಪ್ರತಿಮೆ ಕಾಣದಂತೆ ಸ್ಟೇಜ್ ನಿರ್ಮಾಣ ಮಾಡಲಾಗುತ್ತಿದೆ. ಇದನ್ನು ಉದ್ದೇಶಪೂರ್ವಕವಾಗಿಯೇ ಮಾಡಲಾಗುತ್ತಿದೆ ಎಂದು ಕಿಡಿಕಾರಿದರು.

> ಡಾ.ಬಿ.ಆರ್.ಅಂಬೇಡ್ಕರ್ ಉದ್ಯಾನವನ ಅಭಿವೃದ್ಧಿ ಮಾಡುವುದಾಗಿ ಹಾಳು ಮಾಡಲಾಗುತ್ತಿದೆ. ವ್ಯವಸ್ಥಿತ ಕಾಮಗಾರಿ ನಡೆಯುತ್ತಿಲ್ಲ. ನೆಲಕ್ಕುರುಳಿದ ಗ್ರಿಲ್‌ಗಳನ್ನು ಅಂಬೇಡ್ಕರ್ ಜಯಂತಿ ನಂತರ ಅಳವಡಿಸಲಾಗುವುದು ಎಂದು ನೆಪ ಹೇಳುತ್ತಿದ್ದಾರೆ. ಬೇಕಾಗಿರುವ ಅಭಿವೃದ್ಧಿ ಬಿಟ್ಟು ಹಣದಾಸೆಗೆ ತಮ್ಮಿಷ್ಟದಂತೆ ಕಾಮಗಾರಿ ನಡೆಸುತ್ತಿದ್ದಾರೆ.
> – ಹೆಚ್.ವಾಸು, ಅಶೋಕಪುರಂ ನಿವಾಸಿ

ಅನವಶ್ಯಕ ಖರ್ಚು: ಪಾದಚಾರಿ ಮಾರ್ಗದ ಕೆಲವೆಡೆಯಷ್ಟೇ ಕರ್ಬ್ ಕಲ್ಲುಗಳು ಹಾಳಾಗಿವೆ. ಆದರೆ, ತಮ್ಮ ಜೇಬು ತುಂಬಿಸಿಕೊಳ್ಳುವ ಉದ್ದೇಶದಿಂದಲೇ ಚೆನ್ನಾಗಿರುವ ಪಾದಚಾರಿಯ ಕರ್ಬ್ ಕಲ್ಲುಗಳನ್ನು ತೆಗೆದು ಹೊಸದಾಗಿ ಅಳವಡಿಸಲು ಮುಂದಾಗಿದ್ದಾರೆ. ಆಶ್ಚರ್ಯವೆಂದರೆ ಹೊಸದಾಗಿ ತಂದಿರುವ ಕರ್ಬ್ ಕಲ್ಲುಗಳು ಕೂಡ ಅಳವಡಿಸುವುದಕ್ಕೂ ಮುನ್ನವೇ ಒಡೆದು ಹೋಗಿವೆ. ಅಂದಾಜು 30–40 ಲಕ್ಷದಲ್ಲಾಗುವ ಅಭಿವೃದ್ಧಿ ಕಾಮಗಾರಿಗೆ ಕೋಟಿ ರೂ. ಖರ್ಚು ಮಾಡುತ್ತಿದ್ದಾರೆ. ಸಾರ್ವಜನಿಕರ ತೆರಿಗೆ ಹಣವನ್ನು ಹಾಡಹಗಲೇ ಲೂಟಿ ಮಾಡುತ್ತಿದ್ದಾರೆ ಎಂದು ವಾಸು ಆಕ್ರೋಶ ವ್ಯಕ್ತಪಡಿಸಿದರು.

ಕಾರಂಜಿ ಕೆಟ್ಟು ವರ್ಷಗಳೇ ಕಳೆದಿದೆ: ಉದ್ಯಾನವನದಲ್ಲಿರುವ ಕಾರಂಜಿ ಕೆಟ್ಟು ವರ್ಷಗಳೇ ಕಳೆದಿವೆ. ಕೆಟ್ಟು ಹೋಗಿರುವ ಕಾರಂಜಿ ಸರಿಪಡಿಸದೆ ಚೆನ್ನಾಗಿದ್ದ ಉದ್ಯಾನವನ್ನು ಅಭಿವೃದ್ಧಿ ಹೆಸರಿನಲ್ಲಿ ಹಾಳು ಮಾಡಲಾಗುತ್ತಿದೆ. ಈ ಸಂಬಂಧ ಗುತ್ತಿಗೆದಾರರನ್ನು ಕೇಳಿದರೆ ಶಾಸಕರನ್ನು ಕೇಳಿ ಎಂದು ಉಡಾಫೆ ಉತ್ತರ ನೀಡುತ್ತಾರೆ ಎಂದರು.





ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆ ತಾಲೂಕು ವ್ಯಾಪ್ತಿಗೆ ಒಳಪಡುವ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಕಾಕನಕೋಟೆ ಸಫಾರಿ ಕೇಂದ್ರದಿಂದ ಬುಧವಾರ ಸಂಜೆ ಸಫಾರಿಗೆ ತೆರಳಿದ್ದ ಪ್ರವಾಸಿಗರಿಗೆ ಹುಲಿಯೊಂದು ತನ್ನ ಮರಿಗಳೊಂದಿಗೆ ದರ್ಶನ ನೀಡಿದೆ. ಸಫಾರಿ ರಸ್ತೆ ಪಕ್ಕದಲ್ಲೇ ಮಲಗಿದ್ದ ಹುಲಿಗಳನ್ನು ಕಂಡು ಪ್ರವಾಸಿಗರು ಸಂಭ್ರಮಿಸಿದ್ದಾರೆ. ಮತ್ತೊಂದು ಚಿತ್ರದಲ್ಲಿ ಹುಲಿಗಳ ನೋಡಲು ಸಾಲುಗಟ್ಟಿ ನಿಂತಿರುವ ಸಫಾರಿ ವಾಹನಗಳಲ್ಲಿರುವ ಪ್ರವಾಸಿಗರನ್ನು ಕಾಣಬಹುದು.
ಚಿತ್ರ: ಎಂ.ಎನ್.ಲಕ್ಷ್ಮೀನಾರಾಯಣ ಯಾದವ್

ಚೆಕ್‌ಪೋಸ್ಟ್‌ಗಳಲ್ಲಿ 1.5 ಕೋಟಿ ಮುಟ್ಟುಗೋಲು



ಮೈಸೂರು, ಏ. 12(ಆರ್‌ಕೆ)– ಚುನಾವಣಾ ನೀತಿ ಸಂಹಿತೆ ಜಾರಿಗೆ ಬಂದ ನಂತರ ಮೈಸೂರು ಜಿಲ್ಲೆಯಾದ್ಯಂತ ಎಲ್ಲಾ ಚೆಕ್‌ಪೋಸ್ಟ್‌ಗಳಲ್ಲಿ ಒಟ್ಟು 1,47,91,218 ರೂ.ಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ.ವಿ. ರಾಜೇಂದ್ರ ತಿಳಿಸಿದ್ದಾರೆ.

ಫ್ಲೈಯಿಂಗ್ ಸ್ಕ್ವಾಡ್‌ಗಳಿಂದ 11,36,630 ರೂ., ಸ್ಟ್ಯಾಟಿಕ್ ಸರ್ವೆಲನ್ಸ್ ಟೀಂನಿಂದ 1,35,15,158 ರೂ. ಹಾಗೂ ಸಿವಿಲ್ ಪೊಲೀಸರಿಂದ 1,39,430 ರೂ. ನಗದನ್ನು ವಶಪಡಿಸಿಕೊಳ್ಳಲಾಗಿದ್ದು, ಒಟ್ಟು 1,47,91,218 ರೂ. ಮುಟ್ಟುಗೋಲು ಹಾಕಿಕೊಂಡಿದ್ದು, ಆ ಪೈಕಿ 8,64,865 ರೂ. ನಗದು ಬಿಡುಗಡೆ ಸಮಿತಿ ವಿಚಾರಣೆ ನಡೆಸಿ ದಾಖಲಾತಿ ಸರಿ ಇದ್ದ ಕಾರಣ ಸಂಬಂಧಪಟ್ಟವರಿಗೆ ಬಿಡುಗಡೆ ಮಾಡಿದೆ ಎಂದರು.

137 ಗ್ರಾಂ ಚಿನ್ನ 722 ಕಿಟ್ ಬ್ಯಾಗ್, 19,69,647 ರೂ. ಮೌಲ್ಯದ ಗೃಹೋಪಯೋಗಿ ವಸ್ತುಗಳು, 1,76,149.40 ಲೀಟರ್ ಮದ್ಯ ಸೇರಿದಂತೆ 3,69,54,411 ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ದಿನದ 24 ಗಂಟೆಯೂ ಚೆಕ್‌ಪೋಸ್ಟ್‌ಗಳು ಕಾರ್ಯನಿರ್ವಹಿಸುತ್ತಿದ್ದು, ರಾಷ್ಟ್ರೀಯ, ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆಗಳು, ರಿಂಗ್ ರಸ್ತೆಗಳಲ್ಲಿ ಸಂಚರಿಸುವ ಎಲ್ಲಾ ವಾಹನಗಳನ್ನು ಅಧಿಕಾರಿಗಳು ಹಾಗೂ ಸಿಬ್ಬಂದಿ ತಪಾಸಣೆ ನಡೆಸುತ್ತಿದ್ದಾರೆ.

ಯಾವುದೇ ವ್ಯಕ್ತಿ ಒಂದು ದಿನಕ್ಕೆ 50,000 ರೂ.ಗಿಂತ ಹೆಚ್ಚಿಗೆ ಹಣವನ್ನು ಕೊಂಡೊಯ್ಯುವಂತಿಲ್ಲ. ಜಿಎಸ್‌ಟಿ ಬಿಲ್, ಪೂರಕ ದಾಖಲೆಗಳಿಲ್ಲದೆ ವಸ್ತುಗಳನ್ನು ಸಾಗಿಸುವುದು ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿದಂತಾಗುತ್ತದೆ. ಅದೇ ರೀತಿ ಅಭ್ಯರ್ಥಿಗಳು 40 ಲಕ್ಷ ರೂ.ಗಳವರೆಗೆ ಮಾತ್ರ ಚುನಾವಣೆಗೆ ಖರ್ಚು ಮಾಡಲು ಅವಕಾಶವಿರುತ್ತದೆ. ಪ್ರಚಾರ, ರ್‍ಯಾಲಿಗಳಿಗೆ 4 ವಾಹನಗಳಿಗೆ ಮಾತ್ರ ಅನುಮತಿ ನೀಡಲಾಗುತ್ತದೆ. ಆದರೆ ಅವರು ತಾವು ಮಾಡುವ ಖರ್ಚು–ವೆಚ್ಚದ ಬಗ್ಗೆ ಮಾಹಿತಿ ನೀಡುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಕೃಷಿ ಪಂಪ್‌ಸೆಟ್‌ಗೆ ಅಸಮರ್ಪಕ ವಿದ್ಯುತ್ ಪೂರೈಕೆ ಖಂಡಿಸಿ ಪ್ರತಿಭಟನೆ

ಜಯಪುರ, ಏ.12– ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ವೇಳೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವಂತೆ ಒತ್ತಾಯಿಸಿ ಜಯಪುರ ಚೆಸ್ಕಾಂ ಕಚೇರಿ ಮುಂದೆ ರಾಜ್ಯ ಕಬ್ಬು ಬೆಳೆಗಾರರ ಸಂಘದ ರೈತರು ಪ್ರತಿಭಟನೆ ನಡೆಸಿದರು.

ಜಯಪುರ ಚೆಸ್ಕಾಂ ವ್ಯಾಪ್ತಿಯ ಕೃಷಿ ಪಂಪ್‌ಸೆಟ್‌ಗಳಿಗೆ ಅಸಮರ್ಪಕ ವಿದ್ಯುತ್ ಪೂರೈಕೆ ಕಾರಣ ಬೆಳೆದು ನಿಂತಿರುವ ರೈತರ ಬೆಳೆಗಳು ಒಣಗಿ ಹೋಗುತ್ತಿವೆ. ರೈತರ ಬದುಕಿನ ಜೊತೆ ಚೆಲ್ಲಾಟವಾಡುತ್ತಿರುವುದು ಖಂಡನೀಯ. ಸರ್ಕಾರ ನಿಗದಿಪಡಿಸಿರುವ ಸಮಯದಂತೆ ವಿದ್ಯುತ್ ಸರಬರಾಜು ಮಾಡುತ್ತಿಲ್ಲ. ಪದೇ ಪದೆ ವಿದ್ಯುತ್ ಕಡಿತವಾಗುತ್ತಿರುವ ಕಾರಣ ಮೋಟರ್‌ಗಳು ಸುಟ್ಟು ಹೋಗುತ್ತಿವೆ. ಈಗಾಗಲೇ ಸಾಲದ ಸುಳಿಯಲ್ಲಿ ಸಿಲುಕಿರುವ ರೈತರಿಗೆ ಗಾಯದ ಮೇಲೆ ಬರೆ



ಎಳೆದಂತಾಗಿದೆ ಎಂದು ಬರಡನಪುರ ನಾಗರಾಜು ನೇತೃತ್ವದಲ್ಲಿ ರೈತರು ಜಯಪುರದ ಚೆಸ್ಕಾಂ ಕಚೇರಿ ಮುಂದೆ ಪ್ರತಿಭಟನೆ ನಡೆಸಿ, ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನಾನಿರತ ರೈತರೊಂದಿಗೆ ಚೆಸ್ಕಾಂ ಅಧಿಕಾರಿಗಳು ಮಾತುಕತೆ ನಡೆಸಿ, ಸಮರ್ಪಕ ವಿದ್ಯುತ್ ಪೂರೈಕೆ ಮಾಡುವ ಭರವಸೆ ನೀಡಿದರು.

ಈ ವೇಳೆ ಇಂಜಿನಿಯರ್ ಸುರೇಶ್, ಗುಜ್ಜೆಗೌಡನಪುರ ವಿಭಾಗದ ಇಂಜಿನಿಯರ್ ಸುರೇಶ್, ಬರಡನಪುರ ಗ್ರಾಮದ ಮಹೇಶ್, ಕೆಂಪನಂಜಪ್ಪ, ಗಿರೀಶ್, ಶಿವಣ್ಣ, ರವಿ, ಶಿವಮಲ್ಲು ರಾಜೇಂದ್ರ, ದಾರಿಪುರ ಗ್ರಾಮದ ಗುರು, ಕಂಠಿ, ದೊಡ್ಡ ಕಾಟೂರು ಮಹಾದೇವಸ್ವಾಮಿ, ಹಾಗೂ ಮಾವಿನಹಳ್ಳಿ, ಜಯಪುರ, ದಾರಿಪುರ, ಬರಡನಪುರ ಗ್ರಾಮಗಳ ಉಪಸ್ಥಿತರಿದ್ದರು.



ಏ.19ರಿಂದ ಬೇಸಿಗೆ ಏರ್ ರೈಫಲ್ ಶೂಟಿಂಗ್ ಶಿಬಿರ

ಮೈಸೂರು, ಏ.12(ಎಂಕೆ)– ಮೈಸೂರು ಜಿಲ್ಲಾ ರೈಫಲ್ ಅಸೋಸಿಯೇಷನ್ ವತಿಯಿಂದ ಏ.19ರಿಂದ 10 ದಿನಗಳ 'ಬೇಸಿಗೆ ಏರ್ ರೈಫಲ್ ಶೂಟಿಂಗ್ ಶಿಬಿರ' ಆಯೋಜಿಸಲಾಗಿದೆ. ಶಿಬಿರದಲ್ಲಿ ಭಾಗವಹಿಸುವವರಿಗೆ ರೈಫಲ್ ಹಾಗೂ ಬುಲೆಟ್‌ಗಳನ್ನು ಒದಗಿಸಲಾಗುವುದು. ತರಬೇತುದಾರ ಎಂ.ಎಸ್.ಸುರೇಶ್ ನೇತೃತ್ವದಲ್ಲಿ ಶಿಬಿರ ನಡೆಯಲಿದ್ದು, ಹೆಚ್ಚಿನ ಮಾಹಿತಿಗಾಗಿ ಮೊ.ನಂ.9620636121ಗೆ ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

ಮೇಣದ ಬತ್ತಿ ಮೆರವಣಿಗೆ ಮೂಲಕ ಮತದಾನದ ಅರಿವು



ಮೈಸೂರು, ಏ.12– ಜಿಲ್ಲೆಯ ಹೆಚ್.ಡಿ. ಕೋಟೆ ತಾಲೂಕಿನ ಹಂಪಾಪುರ ಗ್ರಾಮ ಪಂಚಾಯಿತಿ ಆವರಣದಲ್ಲಿ ಮೇಣದ ಬತ್ತಿ ಬೆಳಕಿನಲ್ಲಿ ಮತದಾನ ಪ್ರತಿಜ್ಞಾ ವಿಧಿ ಸ್ವೀಕಾರ ಮಾಡುವ ಮೂಲಕ ಸಾರ್ವಜನಿಕರಿಗೆ ಮತದಾನ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಚುನಾವಣೆ ಹಿನ್ನೆಲೆಯಲ್ಲಿ ಬುಧವಾರ ಸಂಜೆ ಹಂಪಾಪುರ ಗ್ರಾಪಂ ಆವರಣದಲ್ಲಿ ಸ್ವೀಪ್ ಸಮಿತಿಯು ನಡೆಸಿದ ಮೇಣದ ಬತ್ತಿ ಮೆರವಣಿಗೆಯಲ್ಲಿ ಪ್ರತಿಜ್ಞಾ ವಿಧಿ ಸ್ವೀಕರಿಸಿದರು. ಈ ವೇಳೆ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ಕಾರ್ಯ ನಿರ್ವಾಹಕ ಅಧಿಕಾರಿ ಜೆರಾಲ್ಡ್ ರಾಜೇಶ್ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರರೆ ಪ್ರಭುಗಳು, ನಿಮ್ಮ ಮತ ಅಮೂಲ್ಯವಾಗಿದ್ದು, ಯಾವುದೇ ಆಮಿಷಗಳಿಗೆ ಒಳಗಾಗದೆ ಮುಕ್ತ, ನ್ಯಾಯಸಮ್ಮತವಾಗಿ ಮೇ 10ರಂದು ನಡೆಯಲಿರುವ ವಿಧಾನಸಭಾ ಚುನಾವಣಾ ಹಬ್ಬದಲ್ಲಿ ಎಲ್ಲಾ ಮತದಾರರು ಪಾಲ್ಗೊಂಡು ಕಡ್ಡಾಯವಾಗಿ ಮತ ಚಲಾಯಿಸಿ ತಮ್ಮ ಹಕ್ಕು ಮತ್ತು ಕರ್ತವ್ಯ ಪಾಲಿಸಬೇಕು ಎಂದು ಸಾರ್ವಜನಿಕರಿಗೆ ಕರೆ ನೀಡಿದರು.

ಪ್ರಜಾಪ್ರಭುತ್ವ ಆಶಯವನ್ನು ಸಾಕಾರಗೊಳಿಸಲು ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡುವುದು ನಿಮ್ಮ ಕೈ ಬೆರಳಿನಲ್ಲಿರುವುದು ಪ್ರಜಾಪ್ರಭುತ್ವದ ಸೌಂದರ್ಯವನ್ನು ತೋರುತ್ತದೆ ಎಂದರು.

ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಆದ ಕಾರ್ಯನಿರ್ವಾಹಕ ಅಧಿಕಾರಿ ಜೆರಾಲ್ಡ್ ರಾಜೇಶ್ ನಿರ್ದೇಶನದಂತೆ ಮತದಾನ ಜಾಗೃತಿ ಮೂಡಿಸಲು ತಾಲೂಕಿನ ಅಣ್ಣೂರು, ಆಲನಹಳ್ಳಿ, ಕಂಚಮಳ್ಳಿ, ಜಿ.ಬಿ.ಸರಗೂರು, ತುಂಬಸೋಗೆ ಸೇರಿದಂತೆ ಹಲವು ಗ್ರಾಮ ಪಂಚಾಯಿತಿಗಳಲ್ಲೂ ಬುಧವಾರ ಸಂಜೆ ಮೇಣದ ಬತ್ತಿ ಮೆರವಣಿಗೆ ಮೂಲಕ ತೆರಳಿಗೆ ಜನರಿಗೆ ಮತದಾನ ಮಹತ್ವ ಸಾರಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಯೋಜನಾಧಿಕಾರಿ ರಂಗಸ್ವಾಮಿ, ಪಿಡಿಓ ಸೌಮ್ಯ ಹಾಗೂ ಗ್ರಾ.ಪಂ ಸಿಬ್ಬಂದಿ ಸೇರಿದಂತೆ ಸಾರ್ವಜನಿಕರು ಭಾಗವಹಿಸಿದ್ದರು.

ಎನ್.ಆರ್.ಕ್ಷೇತ್ರದಲ್ಲಿ ಎಸ್‌ಡಿಪಿಐಗೆ ಬಿಎಸ್ಪಿ ಬೆಂಬಲ

● ಬೆಂಗಳೂರು ಪುಲಕೇಶಿನಗರದಲ್ಲೂ ಇದೇ ಹೊಂದಾಣಿಕೆ ● ಚಾ.ನಗರ, ಸಿಂದಗಿಯಲ್ಲಿ ಬಿಎಸ್‌ಪಿಗೆ ಎಸ್‌ಡಿಪಿಐ ಬೆಂಬಲ

ಮೈಸೂರು, ಏ.12(ಎಂಕೆ)– ನರಸಿಂಹರಾಜ ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಡಿಪಿಐಗೆ ಬಿಎಸ್ಪಿ ಬೆಂಬಲ ನೀಡಿದೆ ಎಂದು ಎಸ್‌ಡಿಪಿಐ ರಾಜ್ಯಾಧ್ಯಕ್ಷ ಹಾಗೂ ಎನ್.ಆರ್ ಕ್ಷೇತ್ರ ಅಭ್ಯರ್ಥಿ ಅಬ್ದುಲ್ ಮಜೀದ್ ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿದ ಅವರು, ಬಿಎಸ್ಪಿ ಹಾಗೂ ಎಸ್‌ಡಿಪಿಐ ನಡುವೆ ತಲಾ ಎರಡು ಕ್ಷೇತ್ರಗಳಲ್ಲಿ ಮಾತ್ರ ಒಪ್ಪಂದ ಮಾಡಿಕೊಳ್ಳಲಾಗಿದೆ. ಎನ್.ಆರ್ ಹಾಗೂ ಬೆಂಗಳೂರಿನ ಪುಲಿಕೇಶಿನಗರ ಕ್ಷೇತ್ರದಲ್ಲಿ ಬಿಎಸ್ಪಿ, ಎಸ್‌ಡಿಪಿಐ ಅಭ್ಯರ್ಥಿಗೆ ಬೆಂಬಲ ನೀಡಿದರೆ, ಚಾಮರಾಜನಗರ ಹಾಗೂ ಸಿಂದಗಿ ಕ್ಷೇತ್ರದಲ್ಲಿ ಬಿಎಸ್‌ಪಿ ಅಭ್ಯರ್ಥಿಗಳಿಗೆ ಎಸ್‌ಡಿಪಿಐ ಸಂಪೂರ್ಣ ಬೆಂಬಲ ನೀಡಲಿದೆ ಎಂದರು.

ಈ ಹೊಂದಾಣಿಕೆಯು ನಾಲ್ಕು ಕ್ಷೇತ್ರಗಳಿಗೆ ಮಾತ್ರ ಸೀಮಿತವಾಗಿದೆಯೇ ಹೊರತು ರಾಜ್ಯಮಟ್ಟದಲ್ಲಿ ಇರುವುದಿಲ್ಲ. ಇದಕ್ಕೆ ಬಿಎಸ್‌ಪಿಯ ರಾಜ್ಯ ಹಾಗೂ ರಾಷ್ಟ್ರ ನಾಯಕರು ಸಮ್ಮತಿ ನೀಡಿದ್ದಾರೆ. ಅದರಂತೆ ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಬಿಎಸ್‌ಪಿ ಅಭ್ಯರ್ಥಿ ಹಾ.ರಾ.ಮಹೇಶ್ ಅವರ ಗೆಲುವಿಗೆ ಬೆಂಬಲ ನೀಡಲಾಗುವುದು ಎಂದು ತಿಳಿಸಿದರು.



ಕಳೆದ 21 ವರ್ಷಗಳಿಂದ ಎನ್.ಆರ್. ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಕ್ರಮಗಳು ನಡೆದಿಲ್ಲ. ಇದಕ್ಕೆಲ್ಲಾ ಕ್ಷೇತ್ರ ಶಾಸಕರೇ ನೇರ ಹೊಣೆಯಾಗಿದ್ದಾರೆ. ಆದ್ದರಿಂದ ಕ್ಷೇತ್ರದ ಮತದಾರರು ಈ ಬಾರಿ ಬದಲಾವಣೆ ಬಯಸಿದ್ದಾರೆ. ಎಸ್‌ಡಿಪಿಐಗೆ ಬೆಂಬಲ ನೀಡುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬಿಎಸ್‌ಪಿ ನೀಡಿದ ಬೆಂಬಲದಿಂದಾಗಿ ಗೆಲ್ಲುವ ಸಂಪೂರ್ಣ ವಿಶ್ವಾಸ ಮೂಡಿದೆ ಎಂದರು.

ಬಿಎಸ್‌ಪಿ ಜಿಲ್ಲಾಧ್ಯಕ್ಷ ಬಿ.ಆರ್.ಪುಟ್ಟಸ್ವಾಮಿ ಮಾತನಾಡಿ, ಸಂವಿಧಾನದ ಆಶಯಗಳಿಗೆ ಬದ್ಧವಾಗಿರುವ ಎರಡೂ ಪಕ್ಷಗಳ ಅಭ್ಯರ್ಥಿಗಳು ವಿಧಾನಸಭೆಗೆ ಪ್ರವೇಶ ಪಡೆಯಲೇಬೇಕು ಎಂಬ ಉದ್ದೇಶದಿಂದ ಅನಿವಾರ್ಯವಾಗಿ ಮೈತ್ರಿ ಮಾಡಿಕೊಳ್ಳಲಾಗಿದೆ. ರಾಜಕೀಯದಲ್ಲಿ ಪಕ್ಷಗಳ ನಡುವೆ ಹೊಂದಾಣಿಕೆ ಸಹಜ. ಈ ಮೂಲಕ ಸಮ ಸಮಾಜ ನಿರ್ಮಾಣಕ್ಕೆ ಪ್ರಯತ್ನ ನಡೆಸುತ್ತಿದ್ದೇವೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಬಿಎಸ್‌ಪಿ ರಾಜ್ಯ ಕಾರ್ಯದರ್ಶಿ ಶಂಕರ್, ಜಿಲ್ಲಾ ಉಸ್ತುವಾರಿ ಚಂದ್ರಶೇಖರ್, ನಗರಾಧ್ಯಕ್ಷ ಸಿ.ಶ್ರೀನಿವಾಸಪ್ರಸಾದ್, ಜಿಲ್ಲಾ ಖಜಾಂಚಿ ಬಿ.ಮಹದೇವಸ್ವಾಮಿ, ಎಸ್‌ಡಿಪಿಐನ ರಾಜ್ಯ ಉಪಾಧ್ಯಕ್ಷ ದೇವನೂರು ಪುಟ್ಟನಂಜಯ್ಯ, ಜಿಲ್ಲಾಧ್ಯಕ್ಷ ರಫತ್‌ಖಾನ್, ಜಿಲ್ಲಾ ಉಸ್ತುವಾರಿ ಎಸ್.ಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.

ಸಹಾಯವಾಣಿ 112 ಕರೆಗೆ ಎಂಟೇ ನಿಮಿಷದಲ್ಲಿ ಸ್ಪಂದನೆ

ಮೈಸೂರು, ಏ.12(ಎಂಕೆ)– ಮೈಸೂರು ನಗರ ವ್ಯಾಪ್ತಿಯಲ್ಲಿ ಪೊಲೀಸ್ ಸಹಾಯವಾಣಿ 112 ನಂಬರ್‌ಗೆ 45,172 ತುರ್ತು ಕರೆಗಳು ಬಂದಿದ್ದು, ಸರಾಸರಿ 8 ನಿಮಿಷದಲ್ಲಿ ಸ್ಪಂದನೆ ನೀಡಲಾಗಿದೆ. ಮೈಸೂರು ನಗರದಲ್ಲಿ ಪೊಲೀಸ್ ವ್ಯವಸ್ಥೆಯನ್ನು ಜನಸ್ನೇಹಿಗೊಳಿಸುವ ನಿಟ್ಟಿನಲ್ಲಿ ಮತ್ತು ಸಾರ್ವಜನಿಕರ ಕರೆಗೆ ತುರ್ತಾಗಿ ಅವರ ಬಳಿಗೆ ತೆರಳಿ ಸಮಸ್ಯೆಗೆ ಸ್ಪಂದಿಸುವ ಸಲುವಾಗಿ 2020ರ ಡಿ.14ರಿಂದ ನಗರದಲ್ಲಿ ಆರಂಭವಾದ 112 ತುರ್ತು ಸ್ಪಂದನೆ ಆರಂಭವಾಗಿದೆ. ಇದುವರೆಗೆ 45,172(ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ ಪ್ರಕರಣಗಳು ಮಾತ್ರ) ಕರೆಗಳು ಬಂದಿವೆ. ನಗರದೆಲ್ಲೆಡೆ 20 ತುರ್ತು ಸ್ಪಂದನ ವಾಹನಗಳು ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿವರೆಗೆ ನಗರದ ನಾಗರಿಕರು ತುರ್ತು ಸಂದರ್ಭಗಳಲ್ಲಿ ಹಾಗೂ ಸಹಾಯಕ್ಕಾಗಿ ಪೊಲೀಸ್ ಸಹಾಯವಾಣಿ 112ಗೆ ಕರೆ ಮಾಡಿದ್ದಾರೆ. ಅಲ್ಲದೆ ದಿನ 24 ಗಂಟೆಯೂ ತುರ್ತು ಸ್ಪಂದನ ವಾಹನಗಳು ಕಾರ್ಯನಿರ್ವಹಿಸಲಿದ್ದು, ಈ ವ್ಯವಸ್ಥೆಯ ಸದುಪಯೋಗ ಪಡೆಯಲು ಪ್ರಕಟಣೆಯಲ್ಲಿ ಕೋರಲಾಗಿದೆ.

ಜೂಜಾಟ: 17 ಮಂದಿ ಬಂಧನ

ಮೈಸೂರು,ಏ.12(ಎಂಕೆ)–ಜೂಜು ಅಡ್ಡೆ ಮೇಲೆ ದಾಳಿ ನಡೆಸಿರುವ ಸಿಸಿಬಿ ಪೊಲೀಸರು, ಜೂಜಾಟದಲ್ಲಿ ತೊಡಗಿದ್ದ 17 ಜನರನ್ನು ಬಂಧಿಸಿ 79,960 ರೂ. ನಗದು ವಶಕ್ಕೆ ಪಡೆದಿದ್ದಾರೆ. ನಜರ್‌ಬಾದ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಕರುಣಾ ಟ್ರಸ್ಟ್ ಬಳಿ, 9ನೇ ಕ್ರಾಸ್‌ನಲ್ಲಿರುವ ಖಾಲಿ ಜಾಗದಲ್ಲಿ ಖಚಿತ ಮಾಹಿತಿ ಮೇಲೆ ದಾಳಿ ನಡೆಸಿದ ಸಿಸಿಬಿ ಪೊಲೀಸರು, ಜೂಜಾಟದಲ್ಲಿ ತೊಡಗಿದ್ದ 17 ಜನರನ್ನು ಬಂಧಿಸಿ, ಪಣವಾಗಿಟ್ಟಿದ್ದ 79,960 ರೂ. ಹಾಗೂ ಇಸ್ಪೀಟ್ ಕಾರ್ಡ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಸಂಬಂಧ ನಜರ್‌ಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆದಿವಾಸಿಗಳ ಹಕ್ಕು ಉಲ್ಲಂಘನೆ; ಈ ಅಮಾಯಕ ಸಮುದಾಯಕ್ಕೆ ಕಿರುಕುಳ

ಹಿರಿಯ ಪತ್ರಕರ್ತ ಕಮಲ್‌ಗೋಪಿನಾಥ್ ವಿಷಾದ

ಮೈಸೂರು,ಏ.12(ಎಂಟಿವೈ)–ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಆದಿವಾಸಿಗಳ ಹಕ್ಕುಗಳ ಉಲ್ಲಂಘನೆ ಮುಂದುವರೆದಿರುವ ಸಂಬಂಧ ಹಿರಿಯ ಪತ್ರಕರ್ತ ಕಮಲ್ ಗೋಪಿನಾಥ್ ವಿಷಾದಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆದಿವಾಸಿಗಳಿಗೆ ಅವರ ಹಕ್ಕನ್ನು ಸಂರಕ್ಷಿಸುವಂತೆ ಸತ್ಯಶೋಧನಾ ಸಮಿತಿ ಶಿಫಾರಸ್ಸು ಮಾಡಿದೆ. ಅರಣ್ಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಗಮನಕ್ಕೂ ತಂದಿದೆ. ಆದರೆ, ಇದುವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ. ಈ ಹಿನ್ನೆಲೆಯಲ್ಲಿ ನ್ಯಾಯಾಂಗ ನಿಂದನಾ ಅರ್ಜಿ ಸಲ್ಲಿಸಲು ಉದ್ದೇಶಿಸಲಾಗಿದೆ. ಕಾನೂನಿನ ಪ್ರಕಾರ ಆದಿವಾಸಿಗಳ ಹಕ್ಕುಗಳನ್ನು ಎತ್ತಿಹಿಡಿಯಬೇಕು. ಕಾಡಿನಿಂದ ಹೊರಹಾಕುವಿಕೆ, ಆದಿವಾಸಿಗಳಿಗೆ ಬೆದರಿಕೆ ಮತ್ತು ಹಿಂಸೆ ಕೊನೆಯಾಗಬೇಕು. ಆದಿವಾಸಿಗಳಿಗೆ ಸಂಬಂಧಿಸಿದ ವಿವಿಧ ಕಾನೂನುಗಳ ಅನುಸರಣೆ ಸ್ಥಿತಿ ಮತ್ತು ಪರಿಸ್ಥಿತಿಯನ್ನು ಪರಿಶೀಲಿಸಲು ಆರು ಸದಸ್ಯರ ಸಮಿತಿ ಪ್ರವಾಸ ಕೈಗೊಂಡಿತ್ತು. ಶಿಕ್ಷಣ ತಜ್ಞರು, ಸಂಶೋಧಕರು ಮತ್ತು ಪತ್ರಕರ್ತರುಳ್ಳ ಈ ಸಮಿತಿಯು ಏ.8ರಿಂದ 11ರವರೆಗೆ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶಕ್ಕೆ 4 ದಿನಗಳ ಕಾಲ ಭೇಟಿ ನೀಡಿತ್ತು. ಈ ವೇಳೆ ಸಂರಕ್ಷಿತ ಪ್ರದೇಶಗಳು, ಪುನರ್ವಸತಿ ಸ್ಥಳಗಳಲ್ಲಿ ಆದಿವಾಸಿಗಳು ಮತ್ತು ಗ್ರಾಮಸ್ಥರೊಡನೆ ಸಂವಾದ ನಡೆಸಿ, ಅವರ ಅಹವಾಲು ಆಲಿಸಲಾಗಿತ್ತು ಎಂದರು.



ನಾಗರಹೊಳೆ ಪ್ರದೇಶದ ಆದಿವಾಸಿಗಳ ಸ್ಥಿತಿಗತಿ ಕುರಿತು ವಿಚಾರಿಸಲು ಹೈಕೋರ್ಟ್ ನೇಮಿಸಿದ ಸಮಿತಿ ನೇತೃತ್ವ ವಹಿಸಿದ್ದ ಪ್ರೊ.ಮುಜಾಫರ್ ಅಸ್ಸಾದಿ ಅವರನ್ನೂ ನಮ್ಮ ತಂಡ ಭೇಟಿ ಮಾಡಿತು. ಈ ವೇಳೆ ಅವರ ಸಮಿತಿ 2014ರಲ್ಲಿ ಮಹತ್ವದ ಶಿಫಾರಸುಗಳನ್ನು ಮಾಡಿದ್ದನ್ನು ಗಮನಿಸಿತು. ಭೋಗೇಪುರದಲ್ಲಿ ಅರಣ್ಯದಿಂದ ಬಲವಂತವಾಗಿ ಹೊರಹಾಕಲ್ಪಟ್ಟ ಕುಟುಂಬಗಳನ್ನು ಭೇಟಿ ಮಾಡಿ ಕುಶಲೋಪರಿ ನಡೆಸಲಾಯಿತು. ಅಲ್ಲಿನ ನಿವಾಸಿಗಳು ಅರಣ್ಯ ಅಧಿಕಾರಿಗಳಿಂದ ವಂಚನೆಗೊಳಗಾದ ತಮ್ಮ ಸಂಕಟ ವಿವರಿಸಿದರು. ಪ್ರತಿ ಕುಟುಂಬಕ್ಕೆ ಮೂರು ಎಕರೆ ಜಮೀನು ನೀಡುವುದಾಗಿ ಭರವಸೆ ನೀಡಲಾಗಿತ್ತಾದರೂ, 1.5 ಎಕರೆ ನೀಡಲಾಗಿದೆ. ಆ ಭೂಮಿಯೂ ಫಲವತ್ತತೆ ಕಳೆದುಕೊಂಡಿರುವುದು ಪರಿಶೀಲನೆ ವೇಳೆ ಕಂಡು ಬಂದಿದೆ ಎಂದು ತಿಳಿಸಿದರು.

ಸ್ಥಳಾಂತರದ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನವೇ ಆದಿವಾಸಿಗಳ ಮನೆಗಳನ್ನು ಧ್ವಂಸ ಮಾಡಿದ್ದಾರೆ. ಅವರು ಬೆಳೆದಿದ್ದ ಬೆಳೆಗಳಿಗೆ ಹಾನಿ ಮಾಡಲಾಗಿದೆ. ಎಲ್ಲಾ ಸೇವೆ ಹಾಗೂ ವಿತರಣಾ ಸೌಲಭ್ಯ ಸ್ಥಗಿತಗೊಳಿಸಲಾಗಿದೆ. ಅರಣ್ಯ ಇಲಾಖೆ ಮತ್ತು ಕೆಲವು ವನ್ಯಜೀವಿ ಪರ ಎನ್‌ಜಿಓಗಳಿಂದ ಭಯದ ವಾತಾವರಣ ಸೃಷ್ಟಿಸಿದ್ದಾರೆ. ಆದಿವಾಸಿಗಳನ್ನು ಕಾಡಿನಿಂದ ಹೊರಗೆ ಹೋಗಲು ಒತ್ತಾಯಿಸಿರುವುದು ಪರಿಶೀಲನೆ ವೇಳೆ ಅರಿವಿಗೆ ಬಂದಿದೆ ಎಂದರು.

ಹೆಬ್ಬಾಳದಲ್ಲಿ 2015ರಿಂದ 2023ರ ನಡುವೆ ಕನಿಷ್ಠ 27 ಪುರುಷರು ಮತ್ತು ಆರು ಮಕ್ಕಳು ಸಾವನ್ನಪ್ಪಿದ್ದಾರೆ. ಈ ಬಗ್ಗೆ ಸರ್ಕಾರದಿಂದ ಯಾವುದೇ ಅಧ್ಯಯನ ನಡೆದಿಲ್ಲ. ಈ ದೊಡ್ಡ ಪ್ರಮಾಣದ ಸಾವುಗಳಿಗೆ ಕಾರಣಗಳು ಮತ್ತು ಆದಿವಾಸಿಗಳ ಆರೋಗ್ಯ ಪರಿಸ್ಥಿತಿಗಳನ್ನು ಅರ್ಥಮಾಡಿಕೊಳ್ಳುವುದು ಮುಖ್ಯವಾಗಿದೆ. ಕಾಫಿ ಎಸ್ಟೇಟ್‌ಗಳಲ್ಲಿ ಆದಿವಾಸಿ ಕಾರ್ಮಿಕರ ಅನಿಶ್ಚಿತ ಜೀವನ ಮತ್ತು ಕೆಲಸದ ಪರಿಸ್ಥಿತಿ ಕಂಡರೆ ಆಘಾತವಾಗಲಿದೆ. ಆದಿವಾಸಿ ಕಾರ್ಮಿಕರ ಮಾನವ ಹಕ್ಕುಗಳನ್ನು ಜಿಲ್ಲಾಡಳಿತ ಮತ್ತು ಕಾರ್ಮಿಕ ಇಲಾಖೆ ಸಂಪೂರ್ಣವಾಗಿ ನಿರ್ಲಕ್ಷಿಸುತ್ತಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಹೀಗಾಗಿ ಪುನರ್ವಸತಿ ಕುರಿತಂತೆ ಕ್ರಮಕ್ಕೆ ಆಗ್ರಹಿಸಿ ಸಂಬಂಧಿತ ಇಲಾಖೆಗಳಿಗೆ ತಂಡ ವರದಿ ಸಲ್ಲಿಸಲಿದೆ. ಅಗತ್ಯಬಿದ್ದರೆ ನ್ಯಾಯಾಂಗ ನಿಂದನಾ ಅರ್ಜಿ ಸಲ್ಲಿಸಲು ಉದ್ದೇಶಿಸಲಾಗಿದೆ ಎಂದು ಎಚ್ಚರಿಸಿದರು. ಇದೇ ವೇಳೆ ಆದಿವಾಸಿ ಮುಖಂಡರಾದ ಜೆ.ಎ.ಶಿವು, ಜೆ.ಕೆ. ತಿಮ್ಮ, ಚೌಡಮ್ಮ, ಮೀರಾ ಸಂಘಮಿತ್ರ ತಮ್ಮ ಅಳಲನ್ನು ತೋಡಿಕೊಂಡರಲ್ಲದೆ, ಅರಣ್ಯ ಇಲಾಖೆ ಸಿಬ್ಬಂದಿ ನೀಡುತ್ತಿರುವ ಕಿರುಕುಳವನ್ನು ವಿವರಿಸಿದರು. ಈ ಸಂದರ್ಭದಲ್ಲಿ ಪರಿಶೀಲನಾ ಸಮಿತಿ ಸದಸ್ಯರಾದ ಆಶೀಶ್ ಗುಪ್ತಾ, ಜೆ.ಎಸ್. ರಾಮಕೃಷ್ಣ ಇದ್ದರು.

ಮೈಸೂರು ಮಿತ್ರ ಗುರುವಾರ 13 ಏಪ್ರಿಲ್ 2023

ಏ.18, ಪೊನ್ನಂಪೇಟೆಯಲ್ಲಿ 'ಸ್ಪೇಸ್ ಆನ್ವೀಲ್ಸ್' ಪ್ರದರ್ಶನ

ಮಕ್ಕಳಲ್ಲಿ ಬಾಹ್ಯಾಕಾಶದ ಬಗ್ಗೆ ಆಸಕ್ತಿ ಮೂಡಿಸುವ ಉದ್ದೇಶ



ಮಡಿಕೇರಿ, ಏ.12– ಕಳೆದ ಹಲವಾರು ವರ್ಷಗಳಲ್ಲಿ ಬಾಹ್ಯಾಕಾಶದಲ್ಲಿ ನಡೆದಿರುವ ಸಾಧನೆಗಳನ್ನು ಪ್ರದರ್ಶಿಸಲು ಮತ್ತು ಮಕ್ಕಳಲ್ಲಿ ಬಾಹ್ಯಾಕಾಶದ ಬಗ್ಗೆ ಹೆಚ್ಚಿನ ಆಸಕ್ತಿ ಬೆಳೆಸಲು ಏ.18ರಂದು ಪೊನ್ನಂಪೇಟೆಯಲ್ಲಿ ಉಡಾವಣಾ ವಾಹನಗಳು, ಉಪಗ್ರಹಗಳು ಇತ್ಯಾದಿಗಳ ಮಾದರಿಗಳನ್ನು ಸಾಗಿಸುವ 'ಸ್ಪೇಸ್ ಆನ್ವೀಲ್ಸ್' ಪ್ರದರ್ಶನ ನಡೆಯಲಿದೆ.

ಪತ್ರಿಕಾ ಹೇಳಿಕೆ ನೀಡಿರುವ ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಪ್ರಾಂಶುಪಾಲ ಡಾ.ಎಂ.ಬಸವರಾಜು ಹಾಗೂ ಪಿಯು ಕಾಲೇಜಿನ ಪ್ರಾಂಶುಪಾಲೆ ಡಾ.ರೋಹಿಣಿ, ಭಾರತೀಯ ಬಾಹ್ಯಾಕಾಶ ಸಂಸ್ಥೆ, ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಯೂನಿವರ್ಸಿಟಿಯ ಸಹಯೋಗದೊಂದಿಗೆ ಕೂರ್ಗ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಆವರಣದಲ್ಲಿ ಭಾರತೀಯ ಬಾಹ್ಯಾಕಾಶ ಕೇಂದ್ರವು ಪ್ರಪ್ರಥಮ ಬಾರಿಗೆ ಕೊಡಗಿನಲ್ಲಿ 'ಸ್ಪೇಸ್ ಆನ್ವೀಲ್ಸ್' ಪ್ರದರ್ಶನ ನಡೆಸುತ್ತಿದೆ ಎಂದಿದ್ದಾರೆ.

ಅಂದು ಬೆಳಗ್ಗೆ 10.30 ಗಂಟೆಗೆ ಕಾಲೇಜಿನ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಇಸ್ರೋದ ವಿಜ್ಞಾನಿ ಶ್ರೀನಿವಾಸ್ ಮತ್ತು ಕೊಡವ ಎಜುಕೇಶನ್ ಸೊಸೈಟಿಯ ಅಧ್ಯಕ್ಷ ಡಾ.ಎಂ.ಸಿ.ಕಾರ್ಯಪ್ಪ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ವೈಜ್ಞಾನಿಕ ಅಭಿವೃದ್ಧಿಯಲ್ಲಿ ಭಾರತದ ದೃಷ್ಟಿಯನ್ನು ಸಾಕಾರಗೊಳಿಸಲು ರಾಕೆಟ್‌ಗಳು, ಉಪಗ್ರಹಗಳು ಮತ್ತು ಅವುಗಳ ಅಪ್ಲಿಕೇಶನ್‌ಗಳನ್ನು ನಿಯೋಜಿಸುವಲ್ಲಿ ಇಸ್ರೋದ ಪರಾಕ್ರಮದ ಬಗ್ಗೆ ಮತ್ತು ಮಕ್ಕಳಲ್ಲಿ ಬಾಹ್ಯಾಕಾಶದ ಕುರಿತು ವೈಜ್ಞಾನಿಕ ಮನೋಭಾವವನ್ನು ಬೆಳೆಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದಿದ್ದಾರೆ.

ಈ ಪ್ರದರ್ಶನವು ಮೊದಲ ಎರಡು ಉಡಾವಣಾ ಪ್ಯಾಡ್‌ಗಳ ಮಾದರಿಗಳು, ಚಂದ್ರ ಯಾನ–1 ಮಿಷನ್, ಇಂಡಿಯನ್ಮಾರ್ಸ್ ಆರ್ಬಿಟರ್ಮಿಷನ್– ಮಂಗಳಯಾನ್, ಭಾರತೀಯ ರಿಮೋಟ್ಸೆನ್ಸಿಂಗ್ ಅಪ್ಲಿಕೇಶನ್‌ಗಳಂತಹ ತಾಂತ್ರಿಕ ಅಪ್ಲಿಕೇಶನ್‌ಗಳು, ಮತ್ತು ಭಾರತೀಯ ಪ್ರಾದೇಶಿಕ ನ್ಯಾವಿಗೇಷನ್ ಸ್ಯಾಟಲೈಟ್, ಇತರ ಭಾರತೀಯ ಉಪಗ್ರಹ ಸಂವಹನ ಅಪ್ಲಿಕೇಶನ್‌ಗಳು, ಬಾಹ್ಯಾಕಾಶ ಪ್ರಪಂಚದ ಬಗ್ಗೆ ಉತ್ತಮ ಒಳನೋಟವನ್ನು ಒದಗಿಸುವ ಚಂದ್ರನ ಗಗನಯಾತ್ರಿ ಮತ್ತು ಚಂದ್ರಯಾನ–2 ಬಾಹ್ಯಾಕಾಶ ನೌಕೆಯ ಕಲಾತ್ಮಕ ಮಾದರಿಗಳನ್ನು ಹೊಂದಿದೆ. ಇದರೊಂದಿಗೆ ಇಸ್ರೋದ ಭವಿಷ್ಯದ ಕಾರ್ಯಾಚರಣೆಗಳಾದ ಆದಿತ್ಯ ಎಲ್–1, ಚಂದ್ರಯಾನ–3, ಗಗನ್‌ಯಾನ್ ಮಿಷನ್, ವೀನಸ್ ಆರ್ಬಿಟರ್ಮಿಷನ್ ಮತ್ತು ಎನ್.ಐ.ಎಸ್.ಎ.ಆರ್ ಮಿಷನ್‌ನ ಮಾಹಿತಿಯನ್ನು ಒಳಗೊಂಡಿದೆ. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಮುಕ್ತವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ಗೋಣಿಕೊಪ್ಪದಿಂದ ಕಾಲೇಜಿನವರೆಗೆ ಉಚಿತವಾಗಿ ಬಸ್ಸಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಬೆಳಿಗ್ಗೆ 10 ಗಂಟೆಯಿಂದ ಅರ್ಧ ತಾಸಿಗೊಂದು ಬಸ್ಸಿನ ವ್ಯವಸ್ಥೆ ಮಾಡಲಾಗಿದ್ದು, ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 8310194928, 8971231520, 7899850298 ಸಂಪರ್ಕಿಸಲು ತಿಳಿಸಿದರು.

ಕೊಡಗು ಜಿಲ್ಲಾ ವಿಧಾನಸಭಾ ಚುನಾವಣೆ

ಇಂದಿನಿಂದ ನಾಮಪತ್ರ ಸಲ್ಲಿಕೆ ಆರಂಭ



ಮಡಿಕೇರಿ, ಏ.12– ಕೊಡಗು ಜಿಲ್ಲಾ ವಿಧಾನಸಭಾ ಚುನಾವಣೆ ಸಂಬಂಧ ಚುನಾವಣಾ ಅಧಿಸೂಚನೆ ಹೊರಡಿಸಲಾಗಿದ್ದು, ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ನಾಳೆ (ಏ.13) ಯಿಂದ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ಬಿ.ಸಿ.ಸತೀಶ ತಿಳಿಸಿದ್ದಾರೆ.

ನಾಮಪತ್ರ ಸಲ್ಲಿಸಲು ಏ.20 ಕೊನೆಯ ದಿನವಾಗಿದೆ. ಏ.21 ರಂದು ನಾಮಪತ್ರ ಪರಿಶೀಲನಾ ಕಾರ್ಯ ನಡೆಯಲಿದೆ. ಏ.24 ರಂದು ನಾಮಪತ್ರ ವಾಪಸ್ಸು ಪಡೆಯಲು ಕೊನೆಯ ದಿನವಾಗಿದೆ. ಮೇ 10 ರಂದು ಮತದಾನ ನಡೆಯಲಿದೆ. ಮೇ 13 ರಂದು ಮತ ಎಣಿಕೆ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

'ಮಡಿಕೇರಿ ವಿಧಾನಸಭಾ ಕ್ಷೇತ್ರಕ್ಕೆ ಮಡಿಕೇರಿ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಕಚೇರಿಗೆ (ಉಪ ವಿಭಾಗಾಧಿಕಾರಿ ಕಚೇರಿಯಲ್ಲಿ) ನಾಮಪತ್ರ ಸಲ್ಲಿಸಬಹುದಾಗಿದೆ. ಹಾಗೆಯೇ ವಿರಾಜಪೇಟೆ ವಿಧಾನಸಭಾ ಕ್ಷೇತ್ರಕ್ಕೆ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಕಚೇರಿಗೆ (ವಿರಾಜಪೇಟೆ ತಹಶೀಲ್ದಾರರ ಕಚೇರಿಯಲ್ಲಿ) ನಾಮಪತ್ರ ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಚುನಾವಣಾ ಆಯೋಗದ ನಿರ್ದೇಶನದಂತೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗಿದೆ. ಆ ನಿಟ್ಟಿನಲ್ಲಿ ವಿವಿಧ ತಂಡಗಳು ಕಾರ್ಯ ನಿರ್ವಹಿಸುತ್ತಿದ್ದು, ಎಂಸಿಸಿ ಇಬ್ಬರು ನೋಡಲ್ ಅಧಿಕಾರಿಗಳು, 44 ಸೆಕ್ಟರ್ ಅಧಿಕಾರಿಗಳು, 14 ಫ್ಲೈಯಿಂಗ್ ಸ್ಕ್ವಾಡ್, 39 ಸ್ಟಾಟಿಕ್ ಸರ್ವೆಲೆನ್ಸ್ ತಂಡಗಳು ಕಾರ್ಯ ಪ್ರವೃತ್ತರಾಗಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ವಿವರಿಸಿದರು.

ವಿಧಾನಸಭಾ ಚುನಾವಣೆಯಲ್ಲಿ ಒಬ್ಬ ಅಭ್ಯರ್ಥಿ 40 ಲಕ್ಷ ರೂ.ವರೆಗೆ ಖರ್ಚು ಮಾಡಬಹುದಾಗಿದೆ. ಈ ಹಿನ್ನೆಲೆ ಅಭ್ಯರ್ಥಿಗಳ ವೆಚ್ಚದ ಮೇಲೆ ನಿಗಾ ವಹಿಸಲು ವಿವಿಧ ವೆಚ್ಚ ತಂಡಗಳನ್ನು ನೇಮಕ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಕೊಡಗು ಜಿಲ್ಲೆಯ ಎರಡು ವಿಧಾನ 'ಸಭಾ ಕ್ಷೇತ್ರಕ್ಕೆ ತಲಾ ಒಬ್ಬರಂತೆ ಇಬ್ಬರು ಸಹಾಯಕ ವೆಚ್ಚ ವೀಕ್ಷಕರು, ಇಬ್ಬರು ಲೆಕ್ಕ ತಂಡದವರು, ನಾಲ್ಕು ಮಂದಿ ವೀಡಿಯೋ ಸರ್ವೆಲೆನ್ಸ್ ತಂಡ, ಹಾಗೆಯೇ ಇಬ್ಬರು ವಿಡಿಯೋ ವೀವಿಂಗ್ ತಂಡವನ್ನು ರಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ವಿವರಿಸಿದರು.

ಜಿಲ್ಲೆಯಲ್ಲಿ ಒಟ್ಟು 542 ಮತಗಟ್ಟೆಗಳಿದ್ದು, ಮಡಿಕೇರಿ ವಿಧಾನಸಭಾ ಕ್ಷೇತ್ರದಲ್ಲಿ 269 ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 273 ಮತಗಟ್ಟೆಗಳು ಇವೆ ಎಂದು ಜಿಲ್ಲಾಧಿಕಾರಿ ಅವರು ಹೇಳಿದರು.

ಕೊಡಗು ಜಿಲ್ಲೆಯಲ್ಲಿ ಒಟ್ಟು 4,52,642 ಮತದಾರರಿದ್ದು, 4,51,216 ಸಾಮಾನ್ಯ ಮತದಾರರು ಮತ್ತು 1,426 ಸೇವಾ ಮತದಾರರು ಇದ್ದಾರೆ ಎಂದು ಜಿಲ್ಲಾಧಿಕಾರಿ ಅವರು ವಿವರಿಸಿದರು. ಮಡಿಕೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2,30,359 ಮತದಾರರು ಇದ್ದಾರೆ. ವಿರಾಜಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 2,22,283 ಮಂದಿ ಮತದಾರರಿದ್ದಾರೆ ಎಂದರು.

ಶ್ರೀ ದುರ್ಗಿ, ವಿಷ್ಣುಮೂರ್ತಿ, ನಾಗದೇವರ ವಾರ್ಷಿಕೋತ್ಸವ



ವಿರಾಜಪೇಟೆ, ಏ.12– ವಿರಾಜಪೇಟೆ ಪಟ್ಟಣದ ಶಿವಕೇರಿಯಲ್ಲಿರುವ ಶ್ರೀ ದುರ್ಗಿ, ವಿಷ್ಣು ಮೂರ್ತಿ, ನಾಗದೇವರ ಪ್ರತಿಷ್ಠೆ ವರ್ಧಂತಿ ದೇವಾಲಯದ ವಾರ್ಷಿಕೋತ್ಸವವನ್ನು ಶ್ರದ್ಧಾಭಕ್ತಿ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು.

ವಾರ್ಷಿಕೋತ್ಸವದ ಅಂಗವಾಗಿ ದೇವಾಲಯದಲ್ಲಿ ಬೆಳಗ್ಗೆ 8 ಗಂಟೆಗೆ ಪ್ರಧಾನ ಕಳಸ ಹೋಮ, ದುರ್ಗಾ ಹೋಮ, ಆಶ್ಲೇಷ ಬಲಿ, ವಿಷ್ಣು ಸಹಸ್ರ ನಾಮ, ತುಳಸಿ ಅರ್ಚನೆ, ಕಳಸ ಅಭಿಷೇಕ ಹಾಗೂ ವಿಶೇಷ ಪೂಜೆಗಳು ನಡೆದು ಮಧ್ಯಾಹ್ನ 12.30ಕ್ಕೆ ಮಹಾಪೂಜೆ ನಂತರ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ಮಾಡಲಾಯಿತು. ಈ ಸಂದರ್ಭ ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರು ಉಪಸ್ಥಿತರಿದ್ದರು. ಉತ್ಸವಕ್ಕೆ ಪಟ್ಟಣ ಹಾಗೂ ದೂರದ ಊರುಗಳಿಂದಲೂ ಭಕ್ತರು ಆಗಮಿಸಿದ್ದರು.

ಜಿಲ್ಲೆಯಲ್ಲಿ ಹಾಲಿ ಶಾಸಕರಿಗೆ ಟಿಕೆಟ್ ನೀಡಿದ ಹೈಕಮಾಂಡ್

ಕೊಡಗು ಜಿಲ್ಲೆಯಲ್ಲಿ ಈ ಬಾರಿ ಅಭ್ಯರ್ಥಿಗಳ ಬದಲಾವಣೆ ಕೂಗಿಗೆ ಬಿಜೆಪಿ ತೆರೆ



ಅಪ್ಪಚ್ಚು ರಂಜನ್



ಕೆ.ಜಿ. ಬೋಪಯ್ಯ

ಮಡಿಕೇರಿ, ಏ.12– ಬಿಜೆಪಿಯ ಭದ್ರಕೋಟೆ ಎನಿಸಿಕೊಂಡಿರುವ ಕೊಡಗಿನ ಎರಡು ವಿಧಾನ ಸಭಾ ಕ್ಷೇತ್ರಗಳಿಗೆ ಹಾಲಿ ಶಾಸಕರೇ ಅಭ್ಯರ್ಥಿಗಳಾಗಿದ್ದು, ಈ ಬಾರಿಯ ಟಿಕೆಟ್ ಯಾರಿಗೆ ಎಂಬ ಗೊಂದಲಗಳಿಗೆ ತೆರೆ ಬಿದ್ದಿದೆ.

ಈ ಬಾರಿ ಬದಲಾವಣೆ ಎಂಬ ಕೂಗು ಜಿಲ್ಲೆಯಲ್ಲಿ ಪ್ರಬಲವಾಗಿ ಕೇಳಿ ಬಂದಿದ್ದ ಹಿನ್ನೆಲೆಯಲ್ಲಿ ಮಡಿಕೇರಿ ಕ್ಷೇತ್ರದಿಂದ ಹಾಲಿ ಶಾಸಕ ಅಪ್ಪಚ್ಚು ರಂಜನ್, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಬಿ.ಬಿ ಭಾರತೀಶ್ ಮತ್ತು ಕೃಷಿ ಮೋರ್ಚಾ ಜಿಲ್ಲಾಧ್ಯಕ್ಷ ಡಾ. ಬಿ.ಸಿ.ನವೀನ್ ಕುಮಾರ್ ಹಾಗೂ ವಿರಾಜಪೇಟೆ ಕ್ಷೇತ್ರದಿಂದ ಹಾಲಿ ಶಾಸಕ ಕೆ.ಜಿ. ಬೋಪಯ್ಯ, ಪಶ್ಚಿಮ ಘಟ್ಟ ಸಂರಕ್ಷಣಾ ಕಾರ್ಯಪಡೆ ಮಾಜಿ ಅಧ್ಯಕ್ಷ ಶಾಂತೆಯಂಡ ರವಿ ಕುಶಾಲಪ್ಪ, ಬಿಜೆಪಿ ಜಿಲ್ಲಾಧ್ಯಕ್ಷ ರಾಬಿನ್ ದೇವಯ್ಯ ಅವರ ಹೆಸರುಗಳು ಅಂತಿಮವಾಗಿ ದೆಹಲಿಯ ಬಿಜೆಪಿ ವರಿಷ್ಠರ ಅಂಗಳಕ್ಕೆ ತಲುಪಿತ್ತು.

ತಳ ಮಟ್ಟದ ಸರ್ವೇ ವರದಿ ಮತ್ತು ಗೆಲ್ಲುವ ಸಾಮರ್ಥ್ಯವಿರುವ ಅಭ್ಯರ್ಥಿಗಳನ್ನು ಅಳೆದು ತೂಗಿದ ಬಿಜೆಪಿ ವರಿಷ್ಠರು ಅಂತಿಮವಾಗಿ ಹಾಲಿ ಶಾಸಕರುಗಳಿಗೆ ಟಿಕೆಟ್ ನೀಡಿದೆ. ಆ ಮೂಲಕ ಜಿಲ್ಲೆಯಲ್ಲಿ ಹೊಸ ಮುಖಗಳಿಗೆ ಮಣೆ ಹಾಕಿ ಗೆಲುವಿನ ಪ್ರಯೋಗ ನಡೆಸುವ ಗೋಜಿಗೆ ಬಿಜೆಪಿ ಪ್ರಮುಖರು ಮುಂದಾಗಿಲ್ಲ. ಮಡಿಕೇರಿ ಕ್ಷೇತ್ರಕ್ಕೆ ಮಂಡೇಪಂಡ ಅಪ್ಪಚ್ಚು ರಂಜನ್, ವಿರಾಜಪೇಟೆ ಕ್ಷೇತ್ರಕ್ಕೆ ಕೊಂಬಾರನ ಬೋಪಯ್ಯ ಅವರುಗಳು ಅಭ್ಯರ್ಥಿಗಳಾಗಿದ್ದು, ಟಿಕೆಟ್ ಖಚಿತ ಭರವಸೆ ಮೇಲೆ ಈಗಾಗಲೇ ಹಲವು ಸಭೆ ಸಮಾವೇಶಗಳನ್ನು ನಡೆಸುವ ಮೂಲಕ ಇಬ್ಬರು ಶಾಸಕರು ಪ್ರಚಾರ ಆರಂಭಿಸಿ ಮತದಾರರನ್ನು ಸೆಳೆಯುವ ಪ್ರಯತ್ನ ನಡೆಸಿದ್ದಾರೆ.

ಟಿಕೆಟ್ ಕುರಿತು ಪ್ರತಿಕ್ರಿಯಿಸಿದ ಶಾಸಕ ಅಪ್ಪಚ್ಚು ರಂಜನ್ ಬಿಜೆಪಿ ಮುಖಂಡರಿಗೆ ಧನ್ಯವಾದ ತಿಳಿಸಿದ್ದಾರೆ. 4 ಬಾರಿ ಸರ್ವೇ ನಡೆಸಿ ಆ ವರದಿ ಆಧಾರದಲ್ಲೇ ಟಿಕೆಟ್ ಹಂಚಿಕೆಯಾಗಿದೆ. ಕೇಂದ್ರ ಮತ್ತು ರಾಜ್ಯ ಸರಕಾರಗಳ ಅಭಿವೃದ್ಧಿ ಕಾರ್ಯಗಳನ್ನು ಮತದಾರರ ಮುಂದಿಟ್ಟು ಚುನಾವಣೆ ಎದುರಿಸುವುದಾಗಿ ಹೇಳಿದರು.

ಪ್ರಕೃತಿ ವಿಕೋಪ, ಕೋವಿಡ್ ಸಂದರ್ಭ ಖುದ್ದಾಗಿ ಜನರ ಬಳಿ ತೆರಳಿ ಸಮಸ್ಯೆ ಪರಿಹಾರಕ್ಕೆ ಪ್ರಯತ್ನಿಸಿದ್ದೇನೆ. ಕೋವಿಡ್ ಸಂದರ್ಭ ಪಿ.ಪಿ. ಕಿಟ್ ತೊಟ್ಟು ವಾರ್ಡ್‌ಗಳಿಗೆ ತೆರಳಿ ಸೋಂಕಿತರ ಆರೋಗ್ಯ ವಿಚಾರಿಸಿದ ರಾಜ್ಯದ ಮೊದಲ ಶಾಸಕ ತಾನು ಎಂದು ಹೇಳಿದ ಅಪ್ಪಚ್ಚು ರಂಜನ್, ಈ ಬಾರಿ ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಸಾಧಿಸ ಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕ್ಷೇತ್ರದ ಮತದಾರರು ಹಣದ ಆಮಿಷಕ್ಕೆ ಬಲಿಯಾಗಲ್ಲ, ತಮ್ಮ ಮೊದಲ ಚುನಾವಣೆಯಿಂದ ಇಲ್ಲಿಯ ವರೆಗೂ ಕ್ಷೇತ್ರದ ಮತದಾರರು ತಮ್ಮನ್ನು ಕೈಬಿಡದೇ ಹೆಚ್ಚು ಮತಗಳನ್ನು ನೀಡುತ್ತಾ ಬಂದಿದ್ದಾರೆ. ಈ ಬಾರಿಯೂ ಕಳೆದ ಸಾಲಿಗಿಂತ ಅಧಿಕ ಮತಗಳ ಅಂತರದಲ್ಲಿ ಗೆಲುವು ಸಾಧಿಸುವುದಾಗಿ ವಿಶ್ವಾಸದ ನುಡಿಯಾಡಿದರು. ಏ.18ರಂದು ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಸುವುದಾಗಿ ಮಾಹಿತಿ ನೀಡಿದರು.

ಟಿಕೆಟ್ ಕುರಿತು ಪ್ರತಿಕ್ರಿಯಿಸಿದ ಶಾಸಕ ಕೆ.ಜಿ. ಬೋಪಯ್ಯ, ಟಿಕೆಟ್ ನೀಡುವುದು ಬಿಡುವುದು ಹೈಕಮಾಂಡ್ ಮುಖಂಡರಿಗೆ ಸೇರಿದ್ದಾಗಿತ್ತು. ಅವರು ಏನೇ ನಿರ್ಧಾರ ಕೈಗೊಂಡಿದ್ದರೂ ಪಕ್ಷದ ನಿಷ್ಠಾವಂತನಾಗಿ ಆ ನಿರ್ಧಾರಕ್ಕೆ ಬದ್ಧನಾಗಿರುತ್ತಿದ್ದೆ ಎಂದು ಹೇಳಿದರು. ಮತ್ತೆ ಸ್ಪರ್ಧಿಸಲು ಅವಕಾಶ ನೀಡಿದ ಬಿಜೆಪಿ ವರಿಷ್ಠರಿಗೆ ಧನ್ಯವಾದ ಸಲ್ಲಿಸಿದ ಬೋಪಯ್ಯ, ಎಲ್ಲಾ ಆಕಾಂಕ್ಷಿಗಳ ಬೆಂಬಲ ಪಡೆದು ಸ್ಪರ್ಧಿಸುತ್ತೇನೆ. ಕೊಡಗಿನ ಎರಡೂ ಕ್ಷೇತ್ರಗಳಲ್ಲೂ ಬಿಜೆಪಿ ಗೆಲ್ಲಲಿದೆ. ಮತದಾರರ ಆಶೀರ್ವಾದದಿಂದ ಮತ್ತೆ ಗೆಲುವು ಸಾಧಿಸುವ ವಿಶ್ವಾಸವಿದೆ. ಪಕ್ಷದ ಕಾರ್ಯಕರ್ತರು, ಪಕ್ಷ ನಿಷ್ಠರು ಬಿಜೆಪಿಯನ್ನು ಗೆಲ್ಲಿಸುತ್ತಾರೆ. ಇದಕ್ಕೆ ಹಿತೈಷಿಗಳ ಸಹಕಾರವೂ ಇದೆ ಎಂದು ಹೇಳಿದರು.

ವಿರಾಜಪೇಟೆಯಲ್ಲಿ ಅರೆಸೇನಾ ಪಡೆ ಪಥಸಂಚಲನ



ವಿರಾಜಪೇಟೆ, ಏ.12– ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿರಾಜಪೇಟೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕೇಂದ್ರದ ಅರೆಸೇನಾ ಪಡೆ ಹಾಗೂ ಪೊಲೀಸರು ಪಥಸಂಚಲನ ನಡೆಸಿ, ಶಾಂತಿಯುತ ಮತ್ತು ಮುಕ್ತ ಚುನಾವಣೆ ಬಗ್ಗೆ ಜನತೆಗೆ ಅಭಯ ನೀಡಿದರು.

ಈ ಸಂದರ್ಭ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಸ್.ಸುಂದರ್ ರಾಜ್ ಅವರು ಮಾತನಾಡಿ, ವಿಧಾನಸಭಾ ಚುನಾವಣೆಯಲ್ಲಿ ಶಾಂತಿಯುತವಾಗಿ ತಮ್ಮ ಮತದಾನದ ಹಕ್ಕನ್ನು ಚಲಾಯಿಸಲು ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಪಥಸಂಚಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ವಿರಾಜಪೇಟೆ ಡಿವೈಎಸ್ಪಿ ಆರ್.ಮೋಹನ್‌ಕುಮಾರ್, ಕ್ಷೇತ್ರದ ಚುನಾವಣಾಧಿಕಾರಿಗಳು, ವೃತ್ತ ನಿರೀಕ್ಷಕ ಬಿ.ಎಸ್.ಶಿವರುದ್ರ, ನಗರ ಹಾಗೂ ಗ್ರಾಮಾಂತರ ಠಾಣಾಧಿಕಾರಿಗಳಾದ ಮದನ್‌ಕುಮಾರ್ ಮತ್ತು ರವಿಕುಮಾರ್ ಸೇರಿದಂತೆ ಕೇಂದ್ರದ ಅರೆ ಸೇನಾಪಡೆ ನೂರಾರು ಸಿಬ್ಬಂದಿಗಳು ಪಥಸಂಚಲನದಲ್ಲಿ ಭಾಗವಹಿಸಿದ್ದರು.

ವಿ.ಸೋಮಣ್ಣ ವರುಣ ಕ್ಷೇತ್ರ ಒಂದರಲ್ಲಿ ಸ್ಪರ್ಧಿಸಿ ತಾಕತ್ ತೋರಿಸಲಿ: ಎಂ. ರುದ್ರೇಶ್ ಸವಾಲು

ಹೈಕಮಾಂಡ್ ಬೆದರಿಸಿ ಎರಡು ಕಡೆ ಟಿಕೆಟ್ ಗಿಟ್ಟಿಸಿಕೊಂಡಿದ್ದಾರೆ: ಆರೋಪ



ಚಾಮರಾಜನಗರ, ಏ.12– ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ಅವರು ಹೈಕಮಾಂಡ್‌ಗೆ ಬ್ಲಾಕ್‌ಮೇಲ್ ಮಾಡಿ ಎರಡು ಕಡೆ ಟಿಕೆಟ್ ಪಡೆದಿಕೊಂಡಿದ್ದಾರೆ. ಅವರು ತಾಕತ್ ಇದ್ದರೆ ವರುಣಾ ಕ್ಷೇತ್ರದ ಒಂದರಲ್ಲಿಯೇ ಸ್ಪರ್ಧಿಸಿ ಗೆದ್ದು ಬರಲಿ ಎಂದು ಕೆಆರ್‌ಐಡಿಎಲ್ ಅಧ್ಯಕ್ಷ ಎಂ. ರುದ್ರೇಶ್ ಸವಾಲು ಹಾಕಿದ್ದಾರೆ.

ನಗರದ ಪಚ್ಚಪ್ಪ ಬಡಾವಣೆಯಲ್ಲಿರುವ ತಮ್ಮ ನಿವಾಸದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿ. ಸೋಮಣ್ಣ ಈ ಹಿಂದೆಯೇ ಕಾಂಗ್ರೆಸ್‌ಗೆ ಹೋಗುತ್ತೇನೆ ಎಂದು ಒಂದು ಕಾಲು ಬಿಜೆಪಿಯಿಂದ ಹೊರಗೆ ಹಾಕಿದ್ದರು. ಈಗ ಅವರಿಗೆ ವರುಣಾ ಮತ್ತು ಚಾಮರಾಜನಗರ ಎರಡು ಕ್ಷೇತ್ರಗಳಲ್ಲಿ ಸ್ಪರ್ಧಿಸುವ ಮೂಲಕ ಸಿದ್ದರಾಮಯ್ಯರೊಂದಿಗೆ ಒಳ ಒಪ್ಪಂದ ಮಾಡಿಕೊಂಡಿದ್ದಾರೆ. ಮುಂದೆ ಅವರು ಕಾಂಗ್ರೆಸ್‌ಗೆ ಹೋದರೆ ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರಿಗೆ ಅನ್ಯಾಯವಾಗುತ್ತದೆ ಎಂದರು.

ಪಕ್ಷದ ವರಿಷ್ಠರು ಎಲ್ಲವನ್ನು ಗಮನಿಸಿ, ಸೋಮಣ್ಣ ಅವರಿಗೆ ಎರಡು ಕಡೆ ನೀಡಿರುವ ಟಿಕೆಟ್ ಬಗ್ಗೆ ಮರು ಪರಿಶೀಲನೆ ಮಾಡಿ, ವರುಣಾದಲ್ಲೇ ಸ್ಪರ್ಧೆ ಮಾಡುವಂತೆ ಸೂಚನೆ ನೀಡಿ, ಚಾ.ನಗರಕ್ಕೆ ಮತ್ತೊಬ್ಬರಿಗೆ ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿಕೊಳ್ಳುತ್ತೇವೆ ಎಂದರು.

ನಾನು ಕೂಡ ಈ ಕ್ಷೇತ್ರದ ಪ್ರಮುಖ ಆಕಾಂಕ್ಷಿಯಾಗಿದ್ದು, ಕಳೆದ ಒಂದು ವರ್ಷದಿಂದ ಕ್ಷೇತ್ರದಲ್ಲಿ ಪ್ರವಾಸ ಮಾಡಿ, ಕ್ಷೇತ್ರದ ಮತದಾರರು ಹಾಗೂ ಅಭಿಮಾನಿಗಳ ವಿಶ್ವಾಸವನ್ನು ಗಳಿಸಿದ್ದೇನೆ. ಹೀಗಾಗಿ ಕ್ಷೇತ್ರದಲ್ಲಿ ಬಿಜೆಪಿ ಪರ ಅಲೆ ಇದ್ದು, ನಾವೆಲ್ಲರು ಸೇರಿ ಕಷ್ಟಪಟ್ಟು ಸಂಘಟನೆ ಮಾಡಿರುವ ಕ್ಷೇತ್ರಕ್ಕೆ ಸೋಮಣ್ಣ ಬಂದು ಸ್ಪರ್ಧೆ ಮಾಡುವುದು ಸರಿಯಲ್ಲ. ಅವರು ಹಿರಿಯ ನಾಯಕರು. ಸಿಎಂ ಆಗುವ ಅರ್ಹತೆಯುಳ್ಳವರು. ಮಾಜಿ ಸಿಎಂ ಸಿದ್ದರಾಮಯ್ಯ ಅವರಿಗೆ ಸಮಾನದ ವ್ಯಕ್ತಿಯಾಗಿದ್ದಾರೆ. ಹೀಗಾಗಿ ಅವರು ವರುಣಾದಿಂದಲೇ ಸ್ಪರ್ಧೆ ಮಾಡಿ ಸಾಮಾನ್ಯ ಕಾರ್ಯಕರ್ತರಿಗೆ ಚಾಮರಾಜನಗರ ಕ್ಷೇತ್ರವನ್ನು ಬಿಟ್ಟುಕೊಟ್ಟು ನಮ್ಮಂಥ ಅನೇಕ ನಾಯಕರು ಬೆಳೆಯಲು ಅವಕಾಶ ಮಾಡಿಕೊಡಲಿ ಎಂದರು.

ಪಕ್ಷೇತರವಾಗಿ ಸ್ಪರ್ಧಿಸುವಂತೆ ಕಾರ್ಯಕರ್ತರು ಒತ್ತಡ ಹೇರುತ್ತಿದ್ದಾರೆ. ನಾಳೆ (ಗುರುವಾರ) ಅಭಿಮಾನಿಗಳ ಸಭೆ ನಡೆಸಿ ತೀರ್ಮಾನ ಕೊಳ್ಳುತ್ತೇನೆ. ವಿ. ಸೋಮಣ್ಣ ಕಾರ್ಯಕರ್ತರ ಮುಂದೆ ಯಡಿಯೂರಪ್ಪ ಅವರನ್ನು ಬೈಯುತ್ತಾರೆ ಅವರ ಮುಂದೆ ಹೋಗಿ ಕೈಕಟ್ಟಿ ನಿಲ್ಲುತ್ತಾರೆ. ಇದನ್ನು ನೋಡಿದರೆ ನಮಗೆ ನಾಚಿಕೆಯಾಗುತ್ತದೆ ಎಂದು ತಿಳಿಸಿದರು.

ವಿಧಾನಪರಿಷತ್ ಮಾಜಿ ಸದಸ್ಯ ಪ್ರೊ. ಕೆ.ಆರ್.ಮಲ್ಲಿಕಾರ್ಜುನಪ್ಪ ಅವರು, ಫೋನ್ ಮೂಲಕ ಚರ್ಚೆ ಮಾಡಿದ್ದು, ಬಂಡಾಯವಾಗಿ ನಿಲ್ಲುವ ಬಗ್ಗೆ ಅವರು ಸಲಹೆ ಸೂಚನೆಗಳನ್ನು ಕೇಳಿದ್ದು, ಅವರು ದುಡುಕಿನ ನಿರ್ಧಾರ ಬೇಡ ಗುರುವಾರ ಎಲ್ಲರೂ ಕುಳಿತು ಒಂದು ನಿರ್ಣಯ ಕೈಗೊಳ್ಳೋಣ ಎಂದು ತಿಳಿಸಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಸಂತೇಮರಹಳ್ಳಿ ಬಸವಣ್ಣ, ಗೌಡಿಕೆ ಬಸವಣ್ಣ, ಆಲೂರು ಮಲ್ಲು, ಜ್ಯೋತಿ ರೇವಣ್ಣ ಹಾಜರಿದ್ದರು.

ಅಬಕಾರಿ ಇಲಾಖೆಯಿಂದ ವಿವಿಧೆಡೆ ಕಾರ್ಯಾಚರಣೆ: ಅಕ್ರಮ ಮದ್ಯ ವಶ







ಚಾಮರಾಜನಗರ, ಏ.12– ಅಬಕಾರಿ ಅಧಿಕಾರಿಗಳು ಜಿಲ್ಲೆಯ ವಿವಿಧೆಡೆ ದಾಳಿ ನಡೆಸಿ ಅಕ್ರಮ ಮದ್ಯ ವಶಪಡಿಸಿಕೊಂಡಿದ್ದಾರೆ. ಚಾಮರಾಜನಗರ ತಾಲೂಕು ಬಡಗಲಪುರ ಗ್ರಾಮದ ವೀರಭದ್ರ ಸ್ವಾಮಿ ಅವರ ಮನೆಯ ಮೇಲೆ ದಾಳಿ ನಡೆಸಿ ಅಕ್ರಮವಾಗಿ ಮಾರಾಟ ಮಾಡಲು ಸಂಗ್ರಹಿಸಿಟ್ಟಿದ್ದ 4,882 ರೂ. ಮೌಲ್ಯದ 12.510 ಲೀಟರ್ ಮದ್ಯವನ್ನು ವಶಪಡಿಸಿಕೊಂಡು ಆರೋಪಿಯನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಚಾಮರಾಜನಗರ ತಾಲೂಕು ನಲ್ಲೂರು ಗ್ರಾಮದ ಸುಬ್ಬಯ್ಯ ಅವರ ಮನೆಯ ಮೇಲೆ ದಾಳಿ ನಡೆಸಿ ಅಕ್ರಮವಾಗಿ ಮಾರಾಟ ಮಾಡಲು ಸಂಗ್ರಹಿಸಿದ್ದ 1756 ರೂ. ಮೌಲ್ಯದ 4.500 ಲೀಟರ್ ಮದ್ಯವನ್ನು ವಶಪಡಿಸಿಕೊಂಡು ಆರೋಪಿಯನ್ನು ಬಂಧಿಸಲಾಗಿದೆ.

ಹನೂರು ತಾಲೂಕು ಅಜ್ಜೀಪುರ ಗ್ರಾಮದಲ್ಲಿ ಗಸ್ತು ನಡೆಸುತ್ತಿದ್ದ ವೇಳೆ ದ್ವಿಚಕ್ರ ವಾಹನದಲ್ಲಿ ಅಕ್ರಮವಾಗಿ ಸಾಗಿಸಲಾಗುತ್ತಿದ್ದ 3372 ರೂ. 8.640 ಲೀಟರ್ ಮದ್ಯವನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ. ಆರೋಪಿಯನ್ನು ಬಂಧಿಸಿ ಮೊಕದ್ದಮೆ ದಾಖಲಿಸಲಾಗಿದೆ. ವಾಹನ ವಶಕ್ಕೆ ಪಡೆಯಲಾಗಿದೆ.

ಹನೂರು ತಾಲೂಕಿನ ಕೆ. ಗುಂಡಾಪುರ–ಕಾಂಚಹಳ್ಳಿ ರಸ್ತೆಯಲ್ಲಿ ದ್ವಿಚಕ್ರ ವಾಹನದಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 1686 ರೂ. ಮೌಲ್ಯದ 4.320 ಲೀಟರ್ ಮದ್ಯವನ್ನು ವಶಪಡಿಸಿಕೊಂಡಿದ್ದು, ಆರೋಪಿಯನ್ನು ದಸ್ತಗಿರಿ ಮಾಡಿ ಪ್ರಕರಣ ದಾಖಲಿಸಲಾಗಿದೆ. ವಾಹನ ವಶಕ್ಕೆ ಪಡೆಯಲಾಗಿದೆ.

ಮೈಸೂರು ವಿಭಾಗದ ಅಬಕಾರಿ ಜಂಟಿ ಆಯುಕ್ತರು ಹಾಗೂ ಚಾಮರಾಜನಗರ ಅಬಕಾರಿ ಉಪ ಆಯುಕ್ತರು ಅವರ ನಿರ್ದೇಶನದಂತೆ ಮತ್ತು ಚಾಮರಾಜನಗರ ಉಪ ವಿಭಾಗದ ಅಬಕಾರಿ ಉಪ ಅಧೀಕ್ಷರಾದ ಎಂ.ಡಿ. ಮೋಹನ್ ಕುಮಾರ್ ಮಾರ್ಗದರ್ಶನದಂತೆ ದಾಳಿ ನಡೆಸಲಾಯಿತು. ಕಾರ್ಯಾಚರಣೆಯಲ್ಲಿ ಅಬಕಾರಿ ಅಧಿಕಾರಿ ಹಾಗೂ ಸಿಬ್ಬಂದಿಗಳಾದ ಎಂ.ಬಿ. ಉಮಾಶಂಕರ, ಬಿ.ಪಿ. ನಂದಿನಿ, ಬಿ. ರವಿಕುಮಾರ್, ಬಿ.ವಿ. ಕೃಷ್ಣಮೂರ್ತಿ, ಆರ್. ವೀರತಪ್ಪ, ಇತರರು ಭಾಗವಹಿಸಿದ್ದರು.

ಇದುವರೆಗೆ 39,31,360 ರೂ. ವಶ

ಚಾಮರಾಜನಗರ, ಏ.12– ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧೆಡೆ ಮಾರ್ಚ್ 30ರಿಂದ ಏಪ್ರಿಲ್ 11ರವರೆಗೆ ದಾಖಲೆ ಇಲ್ಲದ ಒಟ್ಟು 39,31,360 ರೂ.ಗಳನ್ನು ವಶ ಪಡೆದುಕೊಳ್ಳಲಾಗಿದೆ. ಎಸ್.ಎಸ್.ಟಿ ತಂಡ, ಫ್ಲೈಯಿಂಗ್ ಸ್ಕ್ವಾಡ್ ತಂಡ, ಚೆಕ್ ಪೋಸ್ಟ್ ತಂಡದ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳ ತಂಡವು ವಾಹನ ತಪಾಸಣೆ ವೇಳೆ ಇದುವರೆಗೆ ಒಟ್ಟು 39,31,360 ರೂ.ಗಳನ್ನು ವಶಕ್ಕೆ ಪಡೆದಿರುವುದಾಗಿ ಪ್ರಕಟಣೆ ತಿಳಿಸಿದೆ.

ಹಿರಿಕಾಟಿ ಚೆಕ್‌ಪೋಸ್ಟ್ ಬಳಿ ದಾಖಲೆ ಇಲ್ಲದ 34 ಲಕ್ಷ ರೂ. ವಶ

ಚಾಮರಾಜನಗರ, ಏ.12– ಗುಂಡ್ಲುಪೇಟೆ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಹಿರೀಕಾಟಿ ಚೆಕ್‌ಪೋಸ್ಟ್‌ನಲ್ಲಿ ಇಂದು ಮಧ್ಯಾಹ್ನ 2.30 ಗಂಟೆಯಲ್ಲಿ ಸಮರ್ಪಕವಾದ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 34 ಲಕ್ಷ ರೂ. ಹಣವನ್ನು ವಶಕ್ಕೆ ಪಡೆಯಲಾಗಿದೆ. ವಾಹನ ತಪಾಸಣಾ ವೇಳೆಯಲ್ಲಿ ಚುನಾವಣಾ ಕರ್ತವ್ಯಕ್ಕೆ ಸಂಬಂಧಿಸಿದಂತೆ ನಿಯೋಜನೆಯಾಗಿದ್ದ ಅಧಿಕಾರಿಗಳ ತಂಡಗಳು ಹಾಗೂ ಪೊಲೀಸ್ ಅಧಿಕಾರಿ ಸಿಬ್ಬಂದಿ ದಾಖಲೆ ಇಲ್ಲದ ಹಣವನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗಿದೆ ಎಂದು ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಾಮರಾಜನಗರ, ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರಕ್ಕೆ ವೆಚ್ಚ ವೀಕ್ಷಕರು

ಚಾಮರಾಜನಗರ, ಏ.12– ವಿಧಾನಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಚಾಮರಾಜನಗರ ವಿಧಾನಸಭಾ ಕ್ಷೇತ್ರ ಹಾಗೂ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ ಚುನಾವಣಾ ವೆಚ್ಚ ವೀಕ್ಷಕರಾಗಿ ಐ.ಆರ್.ಎಸ್. ಅಧಿಕಾರಿಗಳಾದ ಹಿಮ್ಮಾಶು ಜೋಶಿ ಅವರನ್ನು ನಿಯೋಜಿಸಲಾಗಿದೆ.

ಚುನಾವಣಾ ವೆಚ್ಚ ವೀಕ್ಷಕರು ಚಾಮರಾಜನಗರ ಪಟ್ಟಣದ ಸತ್ತಿ ರಸ್ತೆಯ ಸರ್ಕಾರಿ ಪ್ರವಾಸಿ ಮಂದಿರದಲ್ಲಿ ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಲಭ್ಯವಿರುತ್ತಾರೆ. ಸಾರ್ವಜನಿಕರು ಸಂಪರ್ಕಿಸಬೇಕಾದಲ್ಲಿ ಮೊ. ಸಂಖ್ಯೆ 9481465911 ಸಂಪರ್ಕಿಸಬಹುದಾಗಿದೆ ಎಂದು ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ ಮುಖಂಡರು



ಬೇಗೂರು(ಗುಂಡ್ಲುಪೇಟೆ), ಏ.12– ಸಮೀಪದ ನೇನೇಕಟ್ಟೆ ಗ್ರಾಮದಲ್ಲಿ ಹಲವರು ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾದರು. ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಹೆಚ್.ಎಂ.ಗಣೇಶ್‌ಪ್ರಸಾದ್ ಹಾಗೂ ಪಕ್ಷದ ಹಿರಿಯ ಮುಖಂಡರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ.

ಈ ಸಂದರ್ಭ ಮಾತನಾಡಿದ ಅವರು ಪಕ್ಷಕ್ಕೆ ಸೇರ್ಪಡೆಯಾಗಿರುವುದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಗ್ರಾಮಕ್ಕೆ ಬೇಕಾದ ಸವಲತ್ತುಗಳನ್ನು ಸರ್ಕಾರದ ಮಟ್ಟದಲ್ಲಿ ಕೊಡಿಸಲಾಗುವುದು. ನಿಮ್ಮೆಲ್ಲರ ಸಹಕಾರ ಇದೇ ರೀತಿ ಮುಂದುವರಿಯಲಿ ಎಂದರು. ಈ ಸಂದರ್ಭದಲ್ಲಿ ಸ್ವಾಮಿ, ಶಂಭುಲಿಂಗಪ್ಪ, ಮಾದಪ್ಪ , ಕೂಸಪ್ಪ, ಚಿಕ್ಕ ಕೂಸಪ್ಪ, ಮಹೇಶ್, ಮಾದೇಗೌಡ್ರು, ಬೀರೇಗೌಡ್ರು, ಮಹದೇವ, ಸೇರಿದಂತೆ ಜಿಪಂ ಮಾಜಿ ಸದಸ್ಯ ಕೆರಹಳ್ಳಿ ನವೀನ್, ಕಬ್ಬಹಳ್ಳಿ ಮಹೇಶ್ ಸೇರಿದಂತೆ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಹಾಜರಿದ್ದರು.

ಚಾ.ನಗರ ಬಿಎಸ್‌ಪಿ ಅಭ್ಯರ್ಥಿಗೆ ಎಸ್‌ಡಿಪಿಐ ಬೆಂಬಲ

ಚಾಮರಾಜನಗರ, ಏ.12– ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಬಿಎಸ್‌ಪಿ ಅಭ್ಯರ್ಥಿ ಹ.ರಾ.ಮಹೇಶ್ ಅವರಿಗೆ ಎಸ್‌ಡಿಪಿಐ ಬೆಂಬಲ ನೀಡಲಿದೆ ಎಂದು ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಅಬ್ರಾರ್ ಅಹಮ್ಮದ್ ಹೇಳಿದರು.

ಎರಡೂ ಪಕ್ಷಗಳ ಆಂತರಿಕ ಸಭೆಯ ತೀರ್ಮಾನದಂತೆ ಚಾಮರಾಜನಗರ ಕ್ಷೇತ್ರದಲ್ಲಿ ಬಿಎಸ್‌ಪಿಗೆ ಸಂಪೂರ್ಣ ಬೆಂಬಲ ನೀಡಲಾಗುವುದು. ಇದಕ್ಕೆ ಪ್ರತಿಯಾಗಿ ಮೈಸೂರಿನ ಎನ್.ಆರ್. ಕ್ಷೇತ್ರ, ಬೆಂಗಳೂರಿನ ಪುಲಿಕೇಶಿ ನಗರ, ಸರ್ವಜ್ಞ ನಗರ ಕ್ಷೇತ್ರಗಳಲ್ಲಿ ಎಸ್‌ಡಿಪಿಐ ಅಭ್ಯರ್ಥಿಗಳಿಗೆ ಬಿಎಸ್‌ಪಿ ಬೆಂಬಲ ನೀಡಲಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಬಿಎಸ್‌ಪಿ ಅಭ್ಯರ್ಥಿ ಹ.ರಾ.ಮಹೇಶ್ ಅವರು ಚಾಮರಾಜನಗರಕ್ಕೆ ಒಳ್ಳೆಯ ಅಭ್ಯರ್ಥಿಯಾಗಿದ್ದಾರೆ. ಇವರಿಗೆ ಸಮಾಜದ ಬಗ್ಗೆ ಕಾಳಜಿ ಇದೆ. ಇವರನ್ನು ಗೆಲ್ಲಿಸುವ ಅನಿವಾರ್ಯತೆ ಇದೆ. ಕಳೆದ 15 ವರ್ಷಗಳಿಂದ ಶಾಸಕ ಸಿ.ಪುಟ್ಟರಂಗಶೆಟ್ಟಿ ಚಾಮರಾಜನಗರದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಮಾಡಿಲ್ಲ. ಶಾಸಕ ಸ್ಥಾನಕ್ಕೆ ಅನರ್ಹ. ಕಲಾಪಗಳಲ್ಲಿ ಯಾವುದೇ ವಿಚಾರಗಳ ಚರ್ಚೆ, ಪ್ರಸ್ತಾಪ ಮಾಡಿಲ್ಲ. ಅಲ್ಲದೇ ಹಿಜಾಬ್, ಹಲಾಲ್ ಬಗ್ಗೆ ಎಲ್ಲೂ ಮಾತನಾಡಿಲ್ಲ ಎಂದು ದೂರಿದರು.

ಸಿ.ಪುಟ್ಟರಂಗಶೆಟ್ಟಿ ಒಬ್ಬ ಅಸಮರ್ಥ ವ್ಯಕ್ತಿ. ಇವರು ಸಚಿವರಾಗಿದ್ದಾಗ ಜಾತಿ ಗಣತಿ ವರದಿಯನ್ನು ಬಿಡುಗಡೆ ಮಾಡಿಲ್ಲ. ಅಲ್ಲದೇ ಹಲವು ಭ್ರಷ್ಟಾಚಾರ ಆರೋಪಗಳು ಇವೆ. ಮತದಾರರು ಜಾತಿ ಲೆಕ್ಕ ಹಾಕಬಾರದು. ಕೊಳ್ಳೇಗಾಲ, ಗುಂಡ್ಲುಪೇಟೆ ಕ್ಷೇತ್ರಗಳಲ್ಲೂ ಬಿಎಸ್‌ಪಿ ಅಭ್ಯರ್ಥಿಗೆ ಬೆಂಬಲ ನೀಡುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಸಭೆ ನಡೆಸಿ ತೀರ್ಮಾನಿಸಲಾಗುವುದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬಿಎಸ್‌ಪಿ ಜಿಲ್ಲಾಧ್ಯಕ್ಷ ನಾಗಯ್ಯ, ಚಾಮರಾಜನಗರ ಅಭ್ಯರ್ಥಿ ಹ.ರಾ. ಮಹೇಶ್, ಕೊಳ್ಳೇಗಾಲ ಅಭ್ಯರ್ಥಿ ಕಮಲ್ ನಾಗರಾಜ್, ಎಸ್‌ಡಿಪಿಐ ಪ್ರಧಾನ ಕಾರ್ಯದರ್ಶಿ ಎಂ.ಮಹೇಶ್, ಉಪಾಧ್ಯಕ್ಷ ಸೈಯದ್ ಆರೀಫ್, ಖಜಾಂಚಿ ನಯಾಜ್ ಉಲ್ಲಾ ಇದ್ದರು.

ಇಂದು ನಾಗಶ್ರೀ ಪ್ರತಾಪ್ ಬೆಂಬಲಿಗರ ಸಭೆ

ಚಾಮರಾಜನಗರ, ಏ.12– ಈ ಕ್ಷೇತ್ರದ ಬಿಜೆಪಿ ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದ ಜಿಪಂ ಮಾಜಿ ಅಧ್ಯಕ್ಷೆ ಹಾಗೂ ಮಾಜಿ ಶಾಸಕ ದಿ. ಸಿ.ಗುರುಸ್ವಾಮಿ ಅವರ ಪುತ್ರಿ ಜಿ. ನಾಗಶ್ರೀ ಪ್ರತಾಪ್ ಅವರ ಬೆಂಬಲಿಗರ ಬಳಗ ನಗರದಲ್ಲಿ ನಾಳೆ (ಏ.13) ಸಭೆ ಕರೆದಿದೆ.

ನಗರದ ಎಲ್‌ಐಸಿ ಕಚೇರಿ ಬಳಿಯಿರುವ ಶ್ರೀ ಭ್ರಮರಾಂಭ ಕಲ್ಯಾಣ ಮಂಟಪದಲ್ಲಿ ಬೆಳಗ್ಗೆ 10 ಗಂಟೆಗೆ ಸಭೆ ಕರೆಯಲಾಗಿದೆ. ನಾಗಶ್ರೀ ಅವರಿಗೆ ಟಿಕೆಟ್ ಕೈ ತಪ್ಪಿರುವ ಬಗ್ಗೆ ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳಲು ಈ ಸಭೆ ಕರೆಯಲಾಗಿದೆ. ಕಾರ್ಯಕರ್ತರು, ಮುಖಂಡರು, ಹಿತೈಷಿಗಳು ಆಗಮಿಸುವಂತೆ ಬಳಗ ಕೋರಿದೆ.

ಮೈಸೂರು ಮಿತ್ರ ಗುರುವಾರ 13 ಏಪ್ರಿಲ್ 2023

ಮೂರನೇ ಪುಟದಿಂದ

ಇಂದಿನಿಂದ ನಾಮಪತ್ರ ಸಲ್ಲಿಕೆ

ಮಹಿಳೆಯರು, 13,08,771 ಪುರುಷರು, 223 ಇತರರು ಸೇರಿ ಒಟ್ಟು 26,38,487 ಮತದಾರರಿದ್ದಾರೆ. ಒಟ್ಟು 2905 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಅಲ್ಲಿ ಅಗತ್ಯ ಸೌಲಭ್ಯ ಕಲ್ಪಿಸಲಾಗಿದೆ.

ವೆಚ್ಚಗಳ ಮೇಲೆ ನಿಗಾ: ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಿ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮೇಲೆ ನಿಗಾ ಇಡಲು ಜಿಲ್ಲೆಯಾದ್ಯಂತ 242 ಸೆಕ್ಟರ್ ಅಧಿಕಾರಿಗಳು, 51 ಫ್ಲೈಯಿಂಗ್ ಸ್ಕ್ವಾಡ್, 53 ಸ್ಟ್ಯಾಟಿಕ್ ಸರ್ವೇಲೆನ್ಸ್ ಟೀಂ, 12 ವೀಡಿಯೋ ಸರ್ವೇಲೆನ್ಸ್ ಟೀಂ, 11 ವೀಡಿಯೋ ವೀವಿಂಗ್ ಟೀಂ, 11 ಅಕೌಂಟಿಂಗ್ ಟೀಂ ಹಾಗೂ 17 ಸಹಾಯಕ ಚುನಾವಣಾ ವೀಕ್ಷಕರನ್ನು ನಿಯೋಜಿಸಲಾಗಿದೆ. ಪ್ರತೀ ವಿಧಾನಸಭಾ ಕ್ಷೇತ್ರಗಳಿಗೊಬ್ಬರಂತೆ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಯನ್ನು ಮಾದರಿ ನೀತಿ ಸಂಹಿತೆ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ.

ನಾಮಪತ್ರ ಸಲ್ಲಿಸುವಾಗ...: ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳು ನಾಮಪತ್ರವನ್ನು ಭರ್ತಿ ಮಾಡಿ ನಮೂನೆ-2ಬಿ ಯಲ್ಲಿ ಸಲ್ಲಿಸಬೇಕು. ನಮೂನೆ-26ರಲ್ಲಿ ನೋಟರಿ ಅವರಿಂದ ದೃಢೀಕರಿಸಿದ ಅಫಿಡವಿಟ್ ಸಲ್ಲಿಸಬೇಕು. 25 ವರ್ಷಕ್ಕಿಂತ ಕಡಿಮೆ ಇರುವವರು ಚುನಾವಣೆಗೆ ಸ್ಪರ್ಧಿಸುವಂತಿಲ್ಲ. ಮಾನ್ಯತೆ ಪಡೆದ ರಾಜಕೀಯ ಪಕ್ಷದ ಅಭ್ಯರ್ಥಿಯಾಗಿದ್ದಲ್ಲಿ ಒಬ್ಬರು ಸೂಚಕರು, ಪಕ್ಷೇತರ ಅಭ್ಯರ್ಥಿಯಾದಲ್ಲಿ 10 ಮಂದಿ ಸೂಚಕರಿರಬೇಕು. ರಾಜಕೀಯ ಪಕ್ಷಗಳ ಅಭ್ಯರ್ಥಿಯಾದಲ್ಲಿ ನಮೂನೆ-3 ಮತ್ತು ಬಿ ಅನ್ನು ನಾಮಪತ್ರ ಸಲ್ಲಿಸುವ ಕೊನೆಯ ದಿನ ಮಧ್ಯಾಹ್ನ 3 ಗಂಟೆಯೊಳಗೆ ಸಲ್ಲಿಸಬೇಕು.

ಅಭ್ಯರ್ಥಿಯಾಗ ಬಯಸುವವರು 10,000 ರೂ. ಠೇವಣಿ ಹಣ ಪಾವತಿಸಬೇಕು. ಎಸ್ಸಿ-ಎಸ್ಟಿಗೆ ಸೇರಿದವರು 5000 ರೂ.ಗಳನ್ನು ಪಾವತಿಸಬೇಕು. ನಾಮಪತ್ರ ಸಲ್ಲಿಸುವಾಗ ಅಭ್ಯರ್ಥಿ ಸೇರಿ 5 ಮಂದಿ ಮಾತ್ರ ಚುನಾವಣಾಧಿಕಾರಿ ಕಚೇರಿಗೆ ಪ್ರವೇಶಿಸುವುದು. ಒಬ್ಬ ಅಭ್ಯರ್ಥಿಯು 40 ಲಕ್ಷ ರೂ.ಗಳವರೆಗೆ ಚುನಾವಣಾ ವೆಚ್ಚ ಮಾಡಲು ಅವಕಾಶವಿರುತ್ತದೆ. ಚುನಾವಣಾ ವೆಚ್ಚದ ಮೇಲೆ ನಿಗಾ ಇರಿಸಲು 9 ಮಂದಿ ವೆಚ್ಚ ವೀಕ್ಷಕರನ್ನು ಭಾರತ ಚುನಾವಣಾ ಆಯೋಗವು ನೇಮಿಸಿದೆ.

15,128 ಅಧಿಕಾರಿಗಳು: ಮೈಸೂರು ಜಿಲ್ಲೆಯಾದ್ಯಂತ ಎಲ್ಲಾ 11 ವಿಧಾನಸಭಾ ಕ್ಷೇತ್ರಗಳಿಗೆ 2,905 ಮತಗಟ್ಟೆಗಳಿಗೆ 3,782 ಪಿಆರ್‌ಓ, 3782 ಎಪಿಆರ್‌ಓ, 7,564 ಪಿಓ ಸೇರಿ ಒಟ್ಟು 15,128 ಮಂದಿಯನ್ನು ಮತದಾನ ಪ್ರಕ್ರಿಯೆಗೆ ನಿಯೋಜಿಸಲಾಗಿದ್ದು, ಆಯಾ ವಿಧಾನಸಭಾ ಕ್ಷೇತ್ರಗಳಲ್ಲಿ ಏಪ್ರಿಲ್ 22 ಮತ್ತು 23 ರಂದು ಮತದಾನಾಧಿಕಾರಿಗಳಿಗೆ ತರಬೇತಿ ನೀಡಲಾಗುವುದು. ಮೈಸೂರು ನಗರ ಸೇರಿದಂತೆ ಜಿಲ್ಲೆಯಾದ್ಯಂತ ಎಲ್ಲಾ ಮತಗಟ್ಟೆಗಳಿಗೆ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದ್ದು, ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲು ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗವಾಗದಂತೆ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ನಗರ ಪೊಲೀಸ್ ಆಯುಕ್ತ ಬಿ. ರಮೇಶ್, ಎಸ್ಪಿ ಸೀಮಾ ಲಾಟ್ಕರ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಜಿ. ಲಕ್ಷ್ಮೀಕಾಂತರೆಡ್ಡಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ. ಗಾಯತ್ರಿ ಅವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಬೇಡಿ

ನಡೆಸುವಾಗ ಅಭ್ಯರ್ಥಿಗಳಿದ್ದರೆ ಅಥವಾ ಬ್ಯಾನರ್‌ನಲ್ಲಿ ಅಭ್ಯರ್ಥಿ ಭಾವಚಿತ್ರಗಳಿದ್ದರೆ ಅದು ಚುನಾವಣಾ ವೆಚ್ಚಕ್ಕೆ ಸೇರುತ್ತದೆ. ಬ್ಯಾಂಕ್ ಖಾತೆಗಳಿಗೆ ಹಣ ಜಮಾ ಆದಲ್ಲಿ ಅಥವಾ ಡೆಬಿಟ್ ಆದಲ್ಲಿ ಬ್ಯಾಂಕ್ ಅಧಿಕಾರಿಗಳು, ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ನಿಗಾ ವಹಿಸುತ್ತಿರುವುದರಿಂದ 40 ಲಕ್ಷ ರೂ.ಗಳಿಗಿಂತ ಚುನಾವಣಾ ವೆಚ್ಚ ಮೀರದಂತೆ ನೋಡಿಕೊಂಡು ಪ್ರತೀ ದಿನದ ವಹಿವಾಟಿನ ಬಗ್ಗೆ ಮಾಹಿತಿ ನೀಡುವಂತೆ ಡಾ. ರಾಜೇಂದ್ರ ತಿಳಿಸಿದರು. ಚುನಾವಣಾ ಪ್ರಚಾರಕ್ಕೆ ಕರಪತ್ರ, ಇನ್ನಿತರ ಸಾಮಗ್ರಿ ಬಳಸಿದಲ್ಲಿ ಅದರ ಸಂಪೂರ್ಣ ಮಾಹಿತಿ ನೀಡಬೇಕು, ವಾಹನ ಬಳಸಿದಲ್ಲಿ, ಕಾರ್ಯಕ್ರಮ ಆಯೋಜಿಸಿದರೆ, ಪತ್ರಿಕೆ, ವಿದ್ಯುನ್ಮಾನ ಮಾಧ್ಯಮ, ಸಾಮಾಜಿಕ ಜಾಲತಾಣಗಳಲ್ಲಿ ಜಾಹೀರಾತು ನೀಡಿದಾಗ ಅದರ ಜಿಎಸ್‌ಟಿ ಬಿಲ್ ಅನ್ನು ಸಲ್ಲಿಸಬೇಕಾಗುತ್ತದೆಯಾದ್ದರಿಂದ ಚುನಾವಣಾ ವೆಚ್ಚ 40 ಲಕ್ಷ ರೂ. ಮೀರದಂತೆ ನೋಡಿಕೊಳ್ಳಿ ಎಂದು ಅವರು ಸಲಹೆ ನೀಡಿದರು.

ಮತ ಎಣಿಕೆಗೆ ಸಿದ್ಧತೆ

ತರುವ ವಿದ್ಯುನ್ಮಾನ ಮತಯಂತ್ರಗಳನ್ನು ಚುನಾವಣೆ ಮುಗಿದ ಬಳಿಕ ಮತ ಎಣಿಕಾ ಕೇಂದ್ರದ ಸ್ಟ್ರಾಂಗ್ ರೂಂಗಳಲ್ಲಿ ಭದ್ರಪಡಿಸಲು ಸಿದ್ಧತೆ ಮಾಡಲಾಗಿದ್ದು, ಈ ಪ್ರಕ್ರಿಯೆಯನ್ನು ವಿಡಿಯೋ ಸರ್ವೆಲನ್ಸ್ ಟೀಂ ಸಿಬ್ಬಂದಿ ರೆಕಾರ್ಡ್ ಮಾಡುವರು. ಮೇ 13ರಂದು ಬೆಳಗ್ಗೆ 8 ಗಂಟೆಗೆ ಚುನಾವಣಾ ವೀಕ್ಷಕರು, ಅಭ್ಯರ್ಥಿಗಳ ಸಮ್ಮುಖದಲ್ಲಿ ಸ್ಟ್ರಾಂಗ್ ರೂಂ ತೆರೆದು ಮತಯಂತ್ರಗಳನ್ನು ಮತ ಎಣಿಕೆ ಹಾಲ್‌ಗೆ ಪೂರೈಸಲಾಗುವುದು.

ಸ್ಟ್ರಾಂಗ್ ರೂಂ, ಮತ ಎಣಿಕೆ ಸ್ಥಳ, ಮೀಡಿಯಾ ಸೆಂಟರ್, ಕಂಪ್ಯೂಟರ್ ರೂಂ ಸೇರಿದಂತೆ ಕೇಂದ್ರದ ಒಳ ಹಾಗೂ ಹೊರ ಆವರಣಗಳಲ್ಲಿ ಹೆಚ್ಚುವರಿ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ನಿಯೋಜಿಸಿ ಶಾಂತಿಯುತ ಮತ ಎಣಿಕೆಗೆ ಸರ್ವ ರೀತಿಯಲ್ಲಿ ಸಿದ್ಧತೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದ್ದಾರೆ. ಅದೇ ರೀತಿ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಚುನಾವಣಾಧಿಕಾರಿಗಳ ಅಧೀನದಲ್ಲಿ ಒಂದೊಂದು ಸ್ಟ್ರಾಂಗ್ ರೂಂಗಳನ್ನು ಸಿದ್ಧಪಡಿಸಲಾಗಿದ್ದು, ಅಲ್ಲಿಂದಲೇ ಮೇ 9ರಂದು ಮಸ್ಟರಿಂಗ್ ಕಾರ್ಯ ನಡೆಯಲಿದೆ. ಮತದಾನ ಪ್ರಕ್ರಿಯೆ ಪೂರ್ಣಗೊಂಡ ನಂತರ ಮೇ 10ರಂದು ರಾತ್ರಿ ಮತಗಟ್ಟೆಗಳಿಂದ ಪೊಲೀಸ್ ಭದ್ರತೆಯಲ್ಲಿ ವಿದ್ಯುನ್ಮಾನ ಮತಯಂತ್ರಗಳನ್ನು ಆಯಾ ಸ್ಟ್ರಾಂಗ್ ರೂಂಗಳಿಗೆ ತಂದು ದಾಖಲು ಮಾಡಿದ ಬಳಿಕ ಅದೇ ದಿನ ತಡರಾತ್ರಿ ಮಹಾರಾಣಿ ಕಾಮರ್ಸ್ ಕಾಲೇಜಿನ ಮತ ಎಣಿಕೆ ಕೇಂದ್ರದ ಸ್ಟ್ರಾಂಗ್ ರೂಂಗೆ ತಂದು ಭದ್ರಪಡಿಸಿ ಜಿಲ್ಲಾ ಚುನಾವಣಾಧಿಕಾರಿ ಸುಪರ್ದಿಗೆ ಒಪ್ಪಿಸಲಾಗುವುದು.

ಮಾಹಿತಿ ತಿದ್ದುಪಡಿಗೆ 15ರವರೆಗೆ ಅವಕಾಶ

ಪ್ರತಿಯನ್ನು ವಿದ್ಯಾರ್ಥಿಗಳು ತಮ್ಮ ಸುರಕ್ಷತೆಗಾಗಿ ಇಟ್ಟುಕೊಳ್ಳಬೇಕು. ಇಲ್ಲದೆ ಹೋದರೆ, ಮೊದಲು ಸಲ್ಲಿಸಿದ್ದ ಅರ್ಜಿಯನ್ನೇ ಮುಂದಿನ ಹಂತಗಳಿಗೆ ಪರಿಗಣಿಸಲಾಗುವುದು ಎಂದು ತಿಳಿಸಿದ್ದಾರೆ. ಇದರಲ್ಲಿ ಅಭ್ಯರ್ಥಿಯ ಹೆಸರು, ತಂದೆ-ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿಗಳ ಬದಲಾವಣೆಗೆ ಅವಕಾಶ ಇರುವುದಿಲ್ಲ. ಇದರಲ್ಲೇನಾದರೂ ಬದಲಾವಣೆಗಳಿದ್ದಲ್ಲಿ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಲಿಯನ್ನು ಸಂಪರ್ಕಿಸಬೇಕು. ಆದರೆ ಸಿಬಿಎಸ್‌ಇ/ಸಿಐಎಸ್‌ಸಿಇ ಪಠ್ಯಕ್ರಮಗಳಲ್ಲಿ 10ನೇ ತರಗತಿ ಓದಿರುವವರು ಈ ವಿವರಗಳನ್ನು ತಮ್ಮ ಅರ್ಜಿಯಲ್ಲಿ ತಿದ್ದುಪಡಿ ಮಾಡಿಕೊಳ್ಳಬಹುದು ಎಂದು ಅವರು ಹೇಳಿದ್ದಾರೆ.ಜೊತೆಗೆ, ರಾಷ್ಟ್ರೀಯತೆಯನ್ನು ತಿದ್ದುಪಡಿ ಮಾಡಿಕೊಳ್ಳಲು ಬಯಸುವ ಓಸಿಐ ಅಭ್ಯರ್ಥಿಗಳು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕರ ಹೆಸರಿನಲ್ಲಿ ನಿಗದಿತ ಮೊತ್ತದ ಡಿಮ್ಯಾಂಡ್ ಡ್ರಾಫ್ಟ್ ಪಡೆದುಕೊಂಡು, ಏಪ್ರಿಲ್ 13 ಮತ್ತು 15ರಂದು ನೇರವಾಗಿ ಹಾಜರಾಗಬೇಕು ಎಂದು ಪ್ರಕಟಣೆ ತಿಳಿಸಿದೆ.

ಅಂಗಾರ ನಿವೃತ್ತಿ, ರಘುಪತಿ ಕಣ್ಣೀರು

ಸಲ್ಲಿಸಿರುವ ಅವರು, ರಾಣೆ ಬೆನ್ನೂರಿನಲ್ಲಿ ಸ್ಪರ್ಧಿಸಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ಸತತವಾಗಿ 6 ಬಾರಿ ಗೆಲುವು ಸಾಧಿಸಿದ್ದ ಸುಳ್ಯ ಕ್ಷೇತ್ರದ ಶಾಸಕರೂ ಆದ ಹಾಲಿ ಸಚಿವ ಎಸ್.ಅಂಗಾರ ಅವರು ತಮಗೆ ಟಿಕೆಟ್ ಕೈತಪ್ಪಿದ್ದರಿಂದ ರಾಜಕೀಯ ನಿವೃತ್ತಿ ಪಡೆದಿರುವುದಾಗಿ ಘೋಷಿಸಿರುವುದಲ್ಲದೇ ಈ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಪರ ಕೆಲಸ ಪ್ರಚಾರ ಮಾಡುವುದಿಲ್ಲ. ಹೊಸ ಅಭ್ಯರ್ಥಿಯ ಗೆಲುವನ್ನು ಪಕ್ಷವೇ ನೋಡಿಕೊಳ್ಳಬಹುದು ಎಂದು ಘೋಷಿಸಿದ್ದಾರೆ. ಅದೇ ರೀತಿ ತಮಗೆ ಟಿಕೆಟ್ ಕೈತಪ್ಪಿದ್ದಕ್ಕೆ ಉಡುಪಿ ಕ್ಷೇತ್ರದ ಶಾಸಕ ರಘುಪತಿ ಭಟ್ ಬೇಸರ ವ್ಯಕ್ತಪಡಿಸಿದ್ದು, ಕಾರ್ಯಕರ್ತರ ಮುಂದೆ ಕಣ್ಣೀರು ಸುರಿಸಿದ್ದಾರೆ. ಬೇರೆ ಪಕ್ಷಕ್ಕೆ ಸೇರುವ ಪ್ರಶ್ನೆಯೇ ಇಲ್ಲ ಎಂದಿರುವ ಅವರು, ತಮಗೆ ಟಿಕೆಟ್ ತಪ್ಪಿರುವುದನ್ನು ಟಿವಿ ನೋಡಿ ತಿಳಿದುಕೊಳ್ಳಬೇಕಾದ ಪರಿಸ್ಥಿತಿ ಬಂದದ್ದು ನೋವುಂಟು ಮಾಡಿದೆ ಎಂದಿದ್ದಾರೆ. ಇನ್ನು ಜೇವರ್ಗಿ ಕ್ಷೇತ್ರದ ಟಿಕೆಟ್ ಬಯಸಿದ್ದ ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸಿದ್ದು, ಅವರು ಜೆಡಿಎಸ್‌ನಿಂದ ಸ್ಪರ್ಧೆಗಿಳಿಯಬಹುದು ಎಂದು ಹೇಳಲಾಗಿದೆ. ಮತ್ತೊಂದೆಡೆ ಚುನಾವಣಾ ರಾಜಕೀಯ ಕೆ.ಎಸ್.ಈಶ್ವರಪ್ಪ ನಿವೃತ್ತಿ ಘೋಷಿಸಿದ್ದರಿಂದ ಬೇಸತ್ತು ಶಿವಮೊಗ್ಗ ಮೇಯರ್, ಉಪ ಮೇಯರ್ ಸೇರಿದಂತೆ ಬಿಜೆಪಿಯ 19 ನಗರ ಪಾಲಿಕೆ ಸದಸ್ಯರು ರಾಜೀನಾಮೆ ಸಲ್ಲಿಸಿದ್ದಾರೆ.


ಕರ್ನಾಟಕದಲ್ಲಿ ಮೊಟ್ಟ ಮೊದಲಿಗೆ ಬಿಜೆಪಿ ಸರ್ಕಾರ ಅಸ್ತಿತ್ವಕ್ಕೆ ಬರಲು ಪಕ್ಷೇತರ ಶಾಸಕರಾಗಿದ್ದ ಗೂಳಿಹಟ್ಟಿ ಶೇಖರ್ ಕೂಡ ಬೆಂಬಲ ಸೂಚಿಸಿ ಯಡಿಯೂರಪ್ಪ ಸರ್ಕಾರದಲ್ಲಿ ಸಚಿವರೂ ಆಗಿದ್ದರು. ಹಾಲಿ ಅವರು ಬಿಜೆಪಿ ಶಾಸಕರಾಗಿರುವ ಹೊಸದುರ್ಗ ಕ್ಷೇತ್ರದಲ್ಲಿ ಟಿಕೆಟ್ ತಪ್ಪಿದ್ದರಿಂದ ತೀವ್ರ ಅಸಮಾಧಾನಗೊಂಡು ಪಕ್ಷೇತರರಾಗಿ ಸ್ಪರ್ಧಿಸಲು ಸಿದ್ಧತೆ ಮಾಡಿಕೊಂಡಿದ್ದಾರೆ. ಕಾಂಗ್ರೆಸ್‌ನಿಂದ ಬಿಜೆಪಿ ಸೇರಿದ್ದ ಮಾಜಿ ಸಂಸದ ಮುದ್ದಹನುಮೇಗೌಡ ಕುಣಿಗಲ್ ಕ್ಷೇತ್ರದಲ್ಲಿ ಟಿಕೆಟ್ ತಪ್ಪಿದ್ದರಿಂದ ಹಾಗೂ ತುಮಕೂರು ನಗರ ಕ್ಷೇತ್ರದಲ್ಲಿ ಟಿಕೆಟ್ ತಪ್ಪಿದ ಮಾಜಿ ಶಾಸಕ ಸೊಗಡು ಶಿವಣ್ಣ ತೀವ್ರ ಅಸಮಾಧಾನ ಹೊರ ಹಾಕಿದ್ದು, ತಾವು ಚುನಾವಣೆಯಲ್ಲಿ ಪಕ್ಷೇತರ ಅಥವಾ ಕಾಂಗ್ರೆಸ್ ಇಲ್ಲವೇ ಜೆಡಿಎಸ್‌ನಿಂದ ಸ್ಪರ್ಧಿಸುವ ಬಗ್ಗೆ ಮಾತನಾಡಿದ್ದಾರೆ.

ಇನ್ನು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಕೂಡ ಟಿಕೆಟ್‌ಗೆ ಪಟ್ಟು ಹಿಡಿದಿದ್ದು, ಅವರನ್ನು ವರಿಷ್ಠರು ದೆಹಲಿಗೆ ಕರೆಸಿಕೊಂಡು ಸಮಾಧಾನಪಡಿಸುವ ಯತ್ನ ಮಾಡಿದ್ದಾರೆ. ಈ ಮಧ್ಯೆ ಜಗದೀಶ್ ಶೆಟ್ಟರ್ ಪ್ರತಿನಿಧಿಸುತ್ತಿರುವ ಹುಬ್ಬಳ್ಳಿ-ಧಾರವಾಡ ಕೇಂದ್ರ ಕ್ಷೇತ್ರದ ಟಿಕೆಟ್ ಇನ್ನೂ ಘೋಷಣೆ ಆಗಿಲ್ಲ.

ನಂದಿನಿ ನುಂಗಲು ಮುಂದಾಗಿರುವ ಅಮುಲ್ ವಿರೋಧಿಸಿ

ಏ.15ಕ್ಕೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ

ರಾಜ್ಯ ರೈತ ಸಂಘ ನಿರ್ಧಾರ



ಮೈಸೂರು, ಏ.12(ಎಂಟಿವೈ)- ರಾಜ್ಯದ ರೈತರ ಒಡನಾಡಿಯಾಗಿರುವ ನಂದಿನಿ ಬ್ರಾಂಡ್ ನುಂಗಿಹಾಕಲು ಯತ್ನಿಸುತ್ತಿರುವ ಅಮುಲ್ ವಿರೋಧಿಸಿ ಏ.15 ರಂದು ರಾಜ್ಯದಾದ್ಯಂತ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಎಂಎಫ್ ಸಂಸ್ಥೆಯನ್ನು ಕಬಳಿಸುವ ವ್ಯವಸ್ಥಿತ ಹುನ್ನಾರ ನಡೆಯುತ್ತಿದೆ. ನಂದಿನಿ ಬ್ರಾಂಡ್ ರಾಜ್ಯದ ಅಸ್ಮಿತೆ. ಕನ್ನಡಿಗರ ಆಸ್ತಿ. ಲಕ್ಷಾಂತರ ರೈತರ ಒಡನಾಡಿಯಾಗಿದೆ. ಲಾಭದಾಯಕ ಸಂಸ್ಥೆಯನ್ನು ಗುಜರಾತ್‌ನ ಅಮುಲ್ ಸಂಸ್ಥೆಯೊಂದಿಗೆ ವಿಲೀನಗೊಳಿಸಲು ಬಿಜೆಪಿ ಸರ್ಕಾರ ಸಂಚು ನಡೆಸಿದೆ. ಈ ಹಿನ್ನೆಲೆಯಲ್ಲಿ ಕನ್ನಡಿಗರು ನಂದಿನಿ ಬ್ರಾಂಡ್ ಅನ್ನು ಉಳಿಸಿಕೊಳ್ಳಲು ಹೋರಾಟ ಮಾಡುವ ಅಗತ್ಯವಿದೆ. ಹಾಗಾಗಿ ರೈತ ಸಂಘವು ಏ.15ರಂದು ಎಲ್ಲಾ ಜಿಲ್ಲೆಗಳಲ್ಲೂ ಪ್ರತಿಭಟನೆ ನಡೆಸಿ, ನಂದಿನಿ ಬ್ರಾಂಡ್ ಉಳಿಸಬೇಕು. ನಂದಿನಿ ಉತ್ಪನ್ನಗಳನ್ನು ಖರೀದಿಸಿ, ಅಮುಲ್ ಉತ್ಪನ್ನಗಳನ್ನು ಧಿಕ್ಕರಿಸುವಂತೆ ಒತ್ತಾಯಿಸಲಾಗುತ್ತದೆ ಎಂದರು.

ಕೇಂದ್ರ ಸರ್ಕಾರ ನಂದಿನಿ ಹಾಲು ಮತ್ತು ಅದರ ಉತ್ಪನ್ನಗಳನ್ನು ನಾಶ ಮಾಡುವ ಉದ್ದೇಶದಿಂದಲೇ ಅಮುಲ್ ಉತ್ಪನ್ನಗಳನ್ನು ರಾಜ್ಯದಲ್ಲಿ ಮುಕ್ತ ಮಾರುಕಟ್ಟೆಗಳಿಗೆ ಬಿಡುಗಡೆ ಮಾಡಿದೆ. ಇದನ್ನು ಕರ್ನಾಟಕ ರಾಜ್ಯ ರೈತ ಸಂಘ ತೀವ್ರವಾಗಿ ಖಂಡಿಸುತ್ತದೆ. ಹೀಗಾಗಿ ಕನ್ನಡ ನೆಲದ ನಂದಿನಿ ಉತ್ಪನ್ನಗಳನ್ನು ನಾಡಿನ ಜನತೆ ಖರೀದಿಸುವ ಮೂಲಕ ನಂದಿನಿ ಅಸ್ಮಿತೆಯನ್ನು ಉಳಿಸಬೇಕು. ಚುನಾವಣೆ ಕಳೆದ ನಂತರ ಹೈನುಗಾರರನ್ನು ಒಳಗೊಂಡಂತೆ ಸಂಘಟಿತ ಹೋರಾಟವನ್ನು ರಾಜ್ಯಾದ್ಯಂತ ರೂಪಿಸಲು ಸಂಘವು ತೀರ್ಮಾನಿಸಿದೆ ಎಂದು ತಿಳಿಸಿದರು. ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಸೋಲಿಸಿ-ರೈತರನ್ನು ಉಳಿಸಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ. ಬಿಜೆಪಿ-ಆರ್‌ಎಸ್‌ಎಸ್ ಸರ್ಕಾರ ರೈತ ವಿರೋಧಿ ಕಾನೂನುಗಳನ್ನು ರೂಪಿಸಿ ರೈತ ವಂಶವನ್ನೆ ನಿರ್ವಂಶ ಮಾಡಲು ಮುಂದಾಗಿದೆ. ರಾಜ್ಯದ ಬಿಜೆಪಿ ಸರ್ಕಾರ ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ತಂದು ಉಳುವವನಿಂದ ಭೂಮಿಯನ್ನು ಕಿತ್ತು ಬಂಡವಾಳಶಾಹಿಗಳ ವಶಕ್ಕೆ ಒಪ್ಪಿಸಲು ಹೊರಟಿದೆ. ಎಪಿಎಂಸಿ ಕಾಯ್ದೆಗೆ ತಿದ್ದುಪಡಿ ತಂದು ಎಪಿಎಂಸಿ ಅಸ್ತಿತ್ವವನ್ನೆ ಇಲ್ಲವಾಗಿಸಿ ಕಾರ್ಪೊರೇಟ್ ಕಂಪನಿಗಳ ವಶಕ್ಕೆ ಮಾರುಕಟ್ಟೆಯನ್ನು ಒಪ್ಪಿಸಿದೆ. ಜಾನುವಾರು ಹತ್ಯೆ ಮತ್ತು ಸಂರಕ್ಷಣೆ ಕಾಯ್ದೆ ತಂದು ಪಶು ಸಂಗೋಪನೆ ನಾಶ ಮಾಡುತ್ತಿದೆ. ವಿದ್ಯುಚ್ಛಕ್ತಿ ತಿದ್ದುಪಡಿ ಕಾಯ್ದೆ ಜಾರಿಗೆ ತರಲು ಮುಂದಾಗಿದೆ. ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನೀಡದೆ, ರೈತರನ್ನು ಲೂಟಿ ಮಾಡುತ್ತಿದೆ. ಕಬ್ಬು ಬೆಳೆಗಾರರ ಹೋರಾಟವನ್ನು ಹಾಗೂ ರೈತರನ್ನು ನಿರ್ಲಕ್ಷಿಸಿ ಆಡಳಿತ ನಡೆಸಿದೆ ಎಂದು ಆರೋಪಿಸಿದರು.

ಜನ ಸಾಮಾನ್ಯರ ಸಮಸ್ಯೆಗಳನ್ನು ಬಿಟ್ಟು ಬಿಜೆಪಿ ಮಂದಿರ-ಮಸೀದಿಗಳ ವಿಚಾರ ಮಾತನಾಡುತ್ತಾ ರಾಜನೀತಿ ತತ್ವಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ. ಪ್ರಜಾಪ್ರಭುತ್ವ ವಿರೋಧಿ ಆಡಳಿತ ನಡೆಸುತ್ತಿದೆ. ಆದ್ದರಿಂದ ಇಂತಹ ಜನ ವಿರೋಧಿ ಪಕ್ಷವು ಮತ್ತೆ ಅಧಿಕಾರಕ್ಕೆ ಬಂದರೆ ಜನ ಸಾಮಾನ್ಯರು ಮತ್ತಷ್ಟು ಸಂಕಷ್ಟಗಳ ಸುಳಿಗೆ ಸಿಕ್ಕಿಹಾಕಿಕೊಳ್ಳಬೇಕಾಗುತ್ತದೆ. ಹೀಗಾಗಿ ರೈತ ಸಂಘದ ರಾಜಕೀಯ ವೇದಿಕೆ ಸರ್ವೋದಯ ಕರ್ನಾಟಕ ಪಕ್ಷ ಸ್ಪರ್ಧಿಸಿರುವ ಕ್ಷೇತ್ರಗಳಲ್ಲಿ ಮತ್ತು ಸಮಾನ ಮನಸ್ಕ ಪಕ್ಷಗಳಿಗೆ ಬೆಂಬಲ ವ್ಯಕ್ತಪಡಿಸಿರುವ ಕ್ಷೇತ್ರಗಳನ್ನು ಹೊರತುಪಡಿಸಿ ಉಳಿದ ಕ್ಷೇತ್ರಗಳಲ್ಲಿ ಸಂಘವು ಬಿಜೆಪಿ ಸೋಲಿಸಿ ಎಂಬ ಘೋಷಣೆಯಡಿ ಪ್ರತಿ ಮತದಾರರನ್ನು ಭೇಟಿಯಾಗುವ ಅಭಿಯಾನ ಹಮ್ಮಿಕೊಳ್ಳಲಾಗಿದೆ. ನಮ್ಮ ಪಕ್ಷದ ಅಭ್ಯರ್ಥಿಗಳು ಸ್ಪರ್ಧಿಸುವ ಕ್ಷೇತ್ರಗಳಲ್ಲಿ ಸಿಪಿಐ ಮತ್ತು ಸಿಪಿಐ(ಎಂ) ಬೆಂಬಲ ಘೋಷಿಸಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಮುಖಂಡರಾದ ಹೊಸೂರು ಕುಮಾರ್, ಪ್ರಸನ್ನ ಎನ್.ಗೌಡ, ಮಹದೇವನಾಯಕ, ಸಿಂಗ್ರೇಗೌಡ ಇದ್ದರು.

ನಾಳೆ 'ಕಾವೇರಿ 2.0' ಕುರಿತು ಅರಿವು ಶಿಬಿರ

ಶೀಘ್ರದಲ್ಲೇ ಮೈಸೂರಲ್ಲಿ ಅನುಷ್ಠಾನಗೊಳ್ಳುವ ಆನ್‌ಲೈನ್ ಆಸ್ತಿ ನೋಂದಣಿ ತಂತ್ರಾಂಶ ಬಗ್ಗೆ ತಜ್ಞರಿಂದ ಮಾಹಿತಿ



ಮೈಸೂರು,ಏ.12(ಪಿಎಂ)- ಕರ್ನಾಟಕ ಸರ್ಕಾರದ ಮುದ್ರಾಂಕ ಮತ್ತು ನೋಂದಣಿ ಇಲಾಖೆಯ ವತಿಯಿಂದ ಕ್ರೆಡಾಯ್ ಮೈಸೂರು ಕೇಂದ್ರ (ರಿಯಲ್ ಎಸ್ಟೇಟ್ ಡೆವಲಪರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ), ಕ್ರೆಡಾಯ್ ಯೂತ್ ವಿಂಗ್ ಮತ್ತು ಬಿಐಎ ಮೈಸೂರು ಕೇಂದ್ರದ (ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ) ಸಂಯುಕ್ತಾಶ್ರಯದಲ್ಲಿ ಏ.14ರಂದು ಆನ್‌ಲೈನ್ ಆಸ್ತಿ ನೋಂದಣಿಗೆ ಪರಿಚಯಿಸಲಾಗುತ್ತಿರುವ 'ಕಾವೇರಿ 2.0' ಎಂಬ ಹೊಸ ತಂತ್ರಾಂಶ ಕುರಿತು ಅರಿವು ಶಿಬಿರ ಆಯೋಜಿಸಲಾಗಿದೆ ಎಂದು ಕ್ರೆಡಾಯ್ ಮೈಸೂರು ಕೇಂದ್ರದ ಅಧ್ಯಕ್ಷ ಡಿ.ಶ್ರೀಹರಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ವಿಶ್ವೇಶ್ವರನಗರದ ಅಕ್ಕಮಹಾದೇವಿ ರಸ್ತೆಯ ಎಂಬಿಸಿಟಿ ಸಭಾಂಗಣದಲ್ಲಿ ಅಂದು ಬೆಳಗ್ಗೆ 10ಕ್ಕೆ ಅರಿವು ಶಿಬಿರ ನಡೆಯಲಿದೆ. ಸಂಪನ್ಮೂಲ ವ್ಯಕ್ತಿಗಳು ಪಾಲ್ಗೊಂಡು ನೂತನ ತಂತ್ರಾಂಶದ ಕುರಿತು ಮಾಹಿತಿ ಒದಗಿಸಲಿದ್ದಾರೆ. ತಂತ್ರಾಂಶದ ಉದ್ದೇಶ ಹಾಗೂ ಅದರ ಬಳಕೆಯ ಬಗ್ಗೆ ಮಾಹಿತಿ ದೊರೆಯುವ ಈ ಶಿಬಿರದಲ್ಲಿ ಬಿಲ್ಡರ್ಸ್, ಡೆವಲಪರ್ಸ್, ವಕೀಲರು, ಪತ್ರ ಬರಹಗಾರರು, ಸ್ಥಿರಾಸ್ತಿದಾರರು ಹಾಗೂ ಸಾರ್ವಜನಿಕರು ಪಾಲ್ಗೊಳ್ಳಬಹುದು. ಪ್ರವೇಶ ಉಚಿತವಿದ್ದು, ಮುಂಗಡವಾಗಿ ಬಂದು ಸ್ಥಳದಲ್ಲೇ ನೋಂದಣಿ ಮಾಡಿಕೊಳ್ಳಬಹುದು ಎಂದರು.

ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರಾದ ಡಾ.ಬಿ.ಆರ್.ಮಮತ ಶಿಬಿರ ಉದ್ಘಾಟಿಸಿ, ತಂತ್ರಾಂಶದ ಬಗ್ಗೆ ಬೆಳಕು ಚೆಲ್ಲಲಿದ್ದಾರೆ. ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಸಹಾಯಕ ನೋಂದಣಿ ಮಹಾಪರಿವೀಕ್ಷಕ ಹೆಚ್.ಎಲ್. ಪ್ರಭಾಕರ್, ಜಿಲ್ಲಾ ನೋಂದಣಾಧಿಕಾರಿ ಬಿ.ಎಂ.ಮೋಹನ್‌ಕುಮಾರ್ ಪಂಡಿತ್ ಸೇರಿದಂತೆ ಇನ್ನಿತರ ವಿಷಯ ತಜ್ಞರು ತಂತ್ರಾಂಶ ಬಳಕೆಯ ವಿಧಾನ ಕುರಿತು ವಿಚಾರ ಮಂಡಿಸಲಿದ್ದಾರೆ ಎಂದು ತಿಳಿಸಿದರು. ಈ ನೂತನ ತಂತ್ರಾಂಶವನ್ನು ರಾಜ್ಯ ಸರ್ಕಾರ ಅಭಿವೃದ್ಧಿಪಡಿಸಿದೆ. ಬೆಳಗಾವಿಯಲ್ಲಿ ಈಗಾಗಲೇ ಇದರ ಪ್ರಾಯೋಗಿಕ ಬಳಕೆಗೆ ಅವಕಾಶ ಕಲ್ಪಿಸಲಾಗಿದೆ. ಇದಾದ ಬಳಿಕ ಮಂಡ್ಯ ಮತ್ತು ಚಾಮರಾಜನಗರದ ಜಿಲ್ಲೆಗಳಲ್ಲಿಯೂ ಬಳಕೆಗೆ ಅನುಮತಿ ನೀಡಲಾಗಿದೆ. 15 ದಿನಗಳಲ್ಲಿ ಮೈಸೂರು ಜಿಲ್ಲೆಯಲ್ಲಿಯೂ ಈ ತಂತ್ರಾಂಶ ಬಳಕೆ ಬರುವ ಮಾಹಿತಿ ಇದೆ. ಅರಿವು ಕಾರ್ಯಕ್ರಮ ನಡೆಯುವ ಸಭಾಂಗಣವು 288 ಮಂದಿ ಆಸೀನರಾಗುವ ಸಾಮರ್ಥ್ಯ ಹೊಂದಿದ್ದು, ಆಸಕ್ತರು ಮುಂಗಡವಾಗಿ ಕಾರ್ಯಕ್ರಮದ ದಿನದಂದು ನೋಂದಣಿ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 70193 05529 ಅನ್ನು ಸಂಪರ್ಕಿಸಬಹುದು ಎಂದು ಹೇಳಿದರು.

ಬಿಐಎ ಮೈಸೂರು ಕೇಂದ್ರದ ಅಧ್ಯಕ್ಷ ನಾಗರಾಜ್ ವಿ.ಬೈರಿ, ಕಾರ್ಯದರ್ಶಿ ಕೆ.ಎಸ್.ಬಾಲಾಜಿ, ಕ್ರೆಡಾಯ್ ಮೈಸೂರು ಕೇಂದ್ರದ ನಿಕಟಪೂರ್ವ ಅಧ್ಯಕ್ಷ ಎನ್.ಎಸ್.ಮುರಳೀಧರ, ಕಾರ್ಯದರ್ಶಿ ಎಲ್.ಅರುಣ್‌ಪಂಡಿತ್, ಯೂತ್ ವಿಂಗ್‌ನ ಸಂಚಾಲಕ ಘನಶ್ಯಾಮ್ ಮುರಳಿ ಗೋಷ್ಠಿಯಲ್ಲಿದ್ದರು.

ವಿವಿಧ ಕ್ಷೇತ್ರಗಳಲ್ಲಿ ಇಫ್ತಿಯಾರ್ ಕೂಟ



ಮೈಸೂರು,ಏ.12(ಪಿಎಂ)- ರಂಜಾನ್ ಹಬ್ಬದ ಪ್ರಯುಕ್ತ ಮೈಸೂರು ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ಇಫ್ತಿಯಾರ್ ಕೂಟ ಆಯೋಜಿಸಲಾಗುತ್ತಿದೆ ಎಂದು ಜೆಡಿಎಸ್ ಮುಖಂಡ ಅಯೂಬ್ ಖಾನ್ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಏ.21ರಂದು ಹುಣಸೂರು ಕ್ಷೇತ್ರ, 22 ರಂದು ಚಾಮುಂಡೇಶ್ವರಿ ಕ್ಷೇತ್ರ, 23ರಂದು ತಿ.ನರಸೀಪುರ ಕ್ಷೇತ್ರದಲ್ಲಿ ಇಫ್ತಿಯಾರ್ ಕೂಟ ಹಮ್ಮಿಕೊಳ್ಳಲಾಗುವುದು. ಈ ಎಲ್ಲಾ ಕ್ಷೇತ್ರಗಳಲ್ಲಿ ಇಫ್ತಿಯಾರ್ ಕೂಟ ಆಯೋಜಿಸುವ ಸ್ಥಳ ಗುರುತಿಸಿ, ಚುನಾವಣಾ ಆಯೋಗದ ಅನುಮತಿ ಪಡೆಯಲಾಗುವುದು ಎಂದರು.

189 ಕ್ಷೇತ್ರಗಳಿಗೆ ಬಿಜೆಪಿಯ ಅಭ್ಯರ್ಥಿಗಳ ಆಯ್ಕೆ ಪಟ್ಟಿ ಬಿಡುಗಡೆ ಬಳಿಕ ಆ ಪಕ್ಷದಲ್ಲಿ ದೊಡ್ಡ ಗೊಂದಲ ಸೃಷ್ಟಿಯಾಗಿದ್ದು, ಇದು ಜೆಡಿಎಸ್‌ಗೆ ಲಾಭವಾಗಲಿದೆ. ಬಿಜೆಪಿ ಟಿಕೆಟ್ ವಂಚಿತರಲ್ಲಿ 10ರಿಂದ 11 ಮಂದಿ ಜೆಡಿಎಸ್‌ನತ್ತ ಮುಖ ಮಾಡಿದ್ದಾರೆ. ನಾನು ಎನ್‌ಆರ್ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾಗಿ ನಾಳೆ ನಾಮಪತ್ರ ಸಲ್ಲಿಸುತ್ತಿದ್ದೇನೆ. ಆ ಬಳಿಕ ಪಕ್ಷದ ವರಿಷ್ಠರು ಯಾವ ತೀರ್ಮಾನ ಕೈಗೊಂಡರೂ ಅದಕ್ಕೆ ಬದ್ಧನಾಗುತ್ತೇನೆ ಎಂದು ತಿಳಿಸಿದರು. ಜೆಡಿಎಸ್ ಮುಖಂಡರಾದ ಎಸ್.ಪ್ರಕಾಶ್‌ಪ್ರಿಯದರ್ಶನ್, ಸರ್ದಾರ್ ಅಹಮ್ಮದ್, ಗಿರೀಶ್, ಇನಾಯತ್ ಉಲ್ಲಾ ಗೋಷ್ಠಿಯಲ್ಲಿದ್ದರು.



ಭಾರತೀಯ ವೈದ್ಯಕೀಯ ಸಂಘ, ರಾಜ್ಯ ಶಾಖೆ ಅಧ್ಯಕ್ಷ ಡಾ. ಶಿವಕುಮಾರ್ ಬಿ. ಲಕ್ಕೋಳ್ ಮೈಸೂರಿನ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಭಾರತೀಯ ವೈದ್ಯಕೀಯ ಸಂಘ, ಮೈಸೂರು ಶಾಖೆಗೆ ಭೇಟಿ ನೀಡಿದ್ದರು. ಈ ವೇಳೆ ಐಎಂಎ ಅಧ್ಯಕ್ಷ ಡಾ.ವೈ.ಎಂ. ಶಿವಕುಮಾರ್, ಕರ್ನಾಟಕ ರಾಜ್ಯ ಶಾಖೆ ಸಹಾಯಕ ಕಾರ್ಯದರ್ಶಿ ಡಾ.ಲಕ್ಷ್ಮಣ್ ಡಿ.ಬಕಳೆ, ರಾಜ್ಯ ಉಪಾಧ್ಯಕ್ಷ ಡಾ.ಪ್ರಸನ್ನಶಂಕರ್, ವಿಭಾಗೀಯ ಸಮನ್ವಯಾಧಿಕಾರಿ ಡಾ. ಸರ್ವೇಶ ರಾಜೇ ಅರಸ್, ಜಿಲ್ಲಾ ಸಹಕಾರ್ಯದರ್ಶಿ ಡಾ.ಬಿ.ಎನ್. ಆನಂದರವಿ, ರಾಜ್ಯ ಶಾಖೆಯ ಕಟ್ಟಡ ಸಮಿತಿ ಅಧ್ಯಕ್ಷ ಡಾ. ಎಚ್.ಎಲ್.ಕೃಷ್ಣೇಗೌಡ, ಮಾಜಿ ಅಧ್ಯಕ್ಷೆ ಡಾ. ಸುಜಾತ ಎಸ್. ರಾವ್, ಕೇಂದ್ರ ಪರಿಷತ್ ಸದಸ್ಯ ಡಾ. ಸುರೇಶ್ ರುದ್ರಪ್ಪ, ಅಧ್ಯಕ್ಷ ಚುನಾಯಿತ ಡಾ.ಎಂ.ಎಸ್. ಜಯಂತ್, ಉಪಾಧ್ಯಕ್ಷ ಡಾ.ಚಂದ್ರಬಾನ್‌ಸಿಂಗ್, ಜಂಟಿ ಕಾರ್ಯದರ್ಶಿ ಡಾ.ಸೋಮಸುಂದರ್, ಖಜಾಂಚಿ ಡಾ.ಬಿ.ಎನ್.ಶಿವಶಂಕರ್ ಉಪಸ್ಥಿತರಿದ್ದರು.

ಪಿಹೆಚ್.ಡಿ ಪದವಿ

ಮೈಸೂರು, ಏ.12-ಡಾ.ಲ್ಯಾನ್ಸಿ ಡಿಸೋಜಾ



ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿ ಎಸ್.ಅನಿಲ್ ಕುಮಾರ್ ಅವರು ಸಾದರಪಡಿಸಿದ 'ಅಪರಾಧ ಮತ್ತು ಅಪರಾಧ ತಡೆಗಟ್ಟುವಲ್ಲಿ ಪೋಷಕರು ಮತ್ತು ಶಿಕ್ಷಣ ಸಂಸ್ಥೆಗಳ ಸಾಮಾಜಿಕ ಜವಾಬ್ದಾರಿ- ಒಂದು ಅಪರಾಧ ಶಾಸ್ತ್ರದ ಅಧ್ಯಯನ' ಮಹಾಪ್ರಬಂಧವನ್ನು ಅಪರಾಧಶಾಸ್ತ್ರ ಮತ್ತು ನ್ಯಾಯ ವಿಜ್ಞಾನ ವಿಷಯದಲ್ಲಿ ಪಿಎಚ್.ಡಿ ಪದವಿಗಾಗಿ ಮೈಸೂರು ವಿವಿ ಅಂಗೀಕರಿಸಿದೆ. ಅವರು ಪ್ರಸ್ತುತ ಮೈಸೂರಿನ ಮಹಾರಾಜ ಕಾಲೇಜಿನ ಅಪರಾಧಶಾಸ್ತ್ರ ಮತ್ತು ನ್ಯಾಯ ವಿಜ್ಞಾನ ವಿಭಾಗದಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಮೈಸೂರು ವಿವಿ ನಿವೃತ್ತ ಅಧೀಕ್ಷಕ ಲೇ.ಎಸ್.ಎನ್. ಶಿವಣ್ಣ ಮತ್ತು ಎನ್‌ಐಇ ಕಾಲೇಜು ನಿವೃತ್ತ ಸಹಾಯಕ ಗ್ರಂಥಪಾಲಕಿ ಬಿ.ಜಿ. ಪದ್ಮರಾಣಿ ಅವರ ಪುತ್ರ.

ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ; ಕಾಂಗ್ರೆಸ್ ಮುಖಂಡ ಸಿರಾಜ್ ವಿಶ್ವಾಸ



ಮೈಸೂರು,ಏ.12(ಪಿಎಂ)- ಈ ಬಾರಿ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರದ ಚುಕ್ಕಾಣಿ ಹಿಡಿಯುವ ವಿಶ್ವಾಸವಿದ್ದು, ಹೆಚ್‌ಡಿ ಕೋಟೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಅನಿಲ್‌ಚಿಕ್ಕಮಾದು ಅವರನ್ನು ಕ್ಷೇತ್ರದ ಮತದಾರರು ಬೆಂಬಲಿಸಬೇಕೆಂದು ಹೆಚ್‌ಡಿ ಕೋಟೆಯ ಕಾಂಗ್ರೆಸ್ ಮುಖಂಡ ಸಿರಾಜ್ ಕೋರಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೂಲತಃ ಕೇರಳದವನಾದ ನಾನು ಕಳೆದ 7 ವರ್ಷಗಳಿಂದ ಹೆಚ್‌ಡಿ ಕೋಟೆಯಲ್ಲಿ ನೆಲೆಸಿ ಈ ಭಾಗದಲ್ಲಿ ಸಮಾಜ ಸೇವಾ ಚಟುವಟಿಕೆ ನಡೆಸುತ್ತಿದ್ದೇನೆ. ಯಾವುದೇ ಜಾತಿ, ಧರ್ಮ ಮತ್ತು ಪಕ್ಷ ಭೇದವಿಲ್ಲದೆ ಸಮಾಜ ಸೇವೆ ಮಾಡುತ್ತಿದ್ದೇನೆ. ಹೆಚ್‌ಡಿ ಕೋಟೆ ಹಾಗೂ ಸರಗೂರು ಹಿಂದುಳಿದ ಭಾಗವಾಗಿದ್ದು, ಈಗಾಗಲೇ ಕ್ಷೇತ್ರದ ಹಾಲಿ ಶಾಸಕರು ಅನೇಕ ಅಭಿವೃದ್ಧಿ ಕಾರ್ಯಗಳ ಮೂಲಕ ಸುಧಾರಣೆ ತಂದಿದ್ದಾರೆ. ಇತ್ತೀಚೆಗೆ ಕಾಂಗ್ರೆಸ್ ಸೇರ್ಪಡೆಯಾಗಿದ್ದೇನೆ. ಸದ್ಯಕ್ಕೆ ಯಾವುದೇ ಚುನಾವಣೆಯಲ್ಲಿ ಸ್ಪರ್ಧಿಸುವ ಆಕಾಂಕ್ಷೆ ಇಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಹೆಚ್‌ಡಿ ಕೋಟೆ ಪುರಸಭಾ ಸದಸ್ಯ ಪ್ರೇಮ್‌ಸಾಗರ್, ಮುಖಂಡರಾದ ಪ್ರಸನ್ನ, ಪ್ರಕಾಶ್, ಎಸ್.ಮರಿದೇವಯ್ಯ ಗೋಷ್ಠಿಯಲ್ಲಿದ್ದರು.

ಡಾ.ಕೆ.ಲೀಲಾಪ್ರಕಾಶ್ ಅವರ ಕೃತಿಗಳ ಲೋಕಾರ್ಪಣೆ ಸಮಾರಂಭ

ಮೈಸೂರು, ಏ. 12- ವಿದ್ಯುತ್ ಪ್ರಕಾಶನ ಹಾಗೂ ಕನ್ನಡ ಸಾಹಿತ್ಯ ಕಲಾಕೂಟದ ಸಂಯುಕ್ತ ಆಶ್ರಯದಲ್ಲಿ ಏ. 15 ರಂದು ಸಂಜೆ 4.30 ಗಂಟೆಗೆ ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಡಾ. ಕೆ. ಲೀಲಾ ಪ್ರಕಾಶ್ ಅವರ 'ಸಂಸ್ಕೃತ ಭಾಷೆ ಒಂದು ಪಕ್ಷಿನೋಟ (ಅನುವಾದ), ಲೇಖನಾಭಿನಂದ, ಮುನ್ನುಡಿ-ಹೊನ್ನುಡಿ ಕೃತಿಗಳನ್ನು ಆಸ್ಥಾನ ವಿದ್ವಾನ್ ಹಾಗೂ ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್ ಲೋಕಾರ್ಪಣೆ ಮಾಡಲಿದ್ದಾರೆ. ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಾಹಿತಿ ಡಾ. ಹೆಚ್.ವಿ. ನಾಗರಾಜರಾವ್, ಡಾ. ನೀಲಗಿರಿ ಎಂ. ತಳವಾರ್, ಡಾ. ಹೆಚ್.ಎ. ಪಾರ್ಶ್ವನಾಥ್ ಕೃತಿಗಳನ್ನು ಕುರಿತು ಮಾತನಾಡಲಿದ್ದಾರೆ. ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ. ಚಂದ್ರಶೇಖರ್ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ.

ಸುಧಾರಿತ ಸೌಂದರ್ಯವರ್ಧಕ ಚಿಕಿತ್ಸೆ ಕುರಿತು ಕಾರ್ಯಾಗಾರ



ಮೈಸೂರು, ಏ.12(ಎಂಟಿವೈ)- ಬ್ಯೂಟಿಷಿಯನ್ನರಿಗಾಗಿ ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ್ದ ಸುಧಾರಿತ ಸೌಂದರ್ಯವರ್ಧಕ ಚಿಕಿತ್ಸೆ ಕುರಿತ ಕಾರ್ಯಾಗಾರದಲ್ಲಿ ಹಲವು ಬ್ಯೂಟಿಷಿಯನ್ ಪಾಲ್ಗೊಂಡು ಪ್ರಾತ್ಯಕ್ಷಿಕೆ ವೀಕ್ಷಣೆಯೊಂದಿಗೆ ಚಿಕಿತ್ಸಾ ವಿಧಾನಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಮೈಸೂರು ಬ್ಯೂಟಿಷಿಯನ್ಸ್ ವೆಲ್‌ಫೇರ್ ಅಸೋಸಿಯೇಷನ್, ಬೆಂಗಳೂರಿನ ಸೊಫಿಸ್ಟಿಕ್ ಅಕಾಡೆಮಿ ಹಾಗೂ ಶ್ರೀನಿವಾಸ ಗ್ಲಾಮರ್ ಸ್ಟೋರ್ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಸುಧಾರಿತ ಸೌಂದರ್ಯವರ್ಧಕ ಚಿಕಿತ್ಸೆ ಕುರಿತ ಕಾರ್ಯಾಗಾರದಲ್ಲಿ ಪರಿಣಿತರಿಂದ ಪ್ರಾತ್ಯಕ್ಷಿಕೆ ಏರ್ಪಡಿಸಲಾಗಿತ್ತು. ಮಾಡೆಲ್‌ಗಳಿಗೆ ಮೇಕಪ್ ಮಾಡುವ ವಿಧಾನ, ಯಾವ ಕಂಪನಿಗಳ ಸೌಂದರ್ಯವರ್ಧಕ ಬಳಸಬೇಕು. ಸೌಂದರ್ಯವರ್ಧಕ ಬಳಕೆ ಯಿಂದ ಯಾವುದೇ ದುಷ್ಪರಿಣಾಮ ಬೀರದಂತೆ ಕಟ್ಟೆಚ್ಚರ ವಹಿಸುವುದರೊಂದಿಗೆ ಗುಣಮಟ್ಟದ ವಸ್ತುಗಳನ್ನು ಬಳಸಬೇಕು. ಬೆಳಕಿಗೆ ಅನುಗುಣವಾಗಿ ಮೇಕಪ್ ಸುಂದರವಾಗಿ ಕಾಣುವಂತೆ ಏನೆಲ್ಲಾ ಮಾಡಬೇಕು. ಸ್ವಚ್ಛತೆ, ಆರೋಗ್ಯ ಕಾಪಾಡಿಕೊಳ್ಳುವ ಸಂಬಂಧವೂ ಸಲಹೆ ನೀಡಲಾಯಿತು.

ಮೈಸೂರು ಬ್ಯೂಟಿಷಿಯನ್ಸ್ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷೆ ಕೆ.ವೇದಾವತಿ ಎನ್.ರೈ ಮಾತನಾಡಿ, ನಮ್ಮ ಅಸೋಸಿಯೇಷನ್ ಸದಸ್ಯರಿಗೆ ಕಾಲಕಾಲಕ್ಕೆ ಕೌಶಲ್ಯ ವೃದ್ಧಿಸಿಕೊಳ್ಳುವುದಕ್ಕಾಗಿ ಕಾರ್ಯಾಗಾರ ಆಯೋಜಿಸುತ್ತಾ ಬಂದಿದ್ದೇವೆ. ಈ ಬಾರಿ ಸುಧಾರಿತ ಸೌಂದರ್ಯವರ್ಧಕ ಚಿಕಿತ್ಸೆ ಬಗ್ಗೆ ಮಾಹಿತಿ ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಅನುತಮ್ ಸಂಸ್ಥಾಪಕರಾದ ಡಾ.ನೀಲಿಮಾ ಶರ್ಮಾ, ಡಾ.ನಮ್ರತಾ ಮಾತನಾಡಿದರು. ಕಾರ್ಯಾಗಾರದಲ್ಲಿ ಬಿಬಿ ಗ್ಲೋ, ಹೇರ್ ಎಕ್ಸ್‌ಟೆನ್ಸನ್ಸ್, ಮೈಕ್ರೋಬ್ಲೇಡಿಂಗ್ ಮತ್ತು ಪರ್ಮನೆಂಟ್ ಮೇಕಪ್ ಕುರಿತಂತೆ ಸೊಫಿಸ್ಟಿಕ್ ಅಕಾಡೆಮಿ ಸಂಸ್ಥಾಪಕ ಸುಪ್ರೀತ್ ಬಿ.ಬೆಳಗಾಂ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಸಂಘಮಿತ್ರ, ಮಾಧವಿ, ಉಷಾ, ಬ್ಯೂಟಿಷಿಯನ್ ಅಸೋಸಿಯೇಷನ್ ಕಾರ್ಯದರ್ಶಿ ಎಂ.ಎ.ಸಬೀನಾ, ಜಂಟಿ ಕಾರ್ಯದರ್ಶಿ ಸಪ್ನ, ಖಜಾಂಚಿ ಪ್ರತಿಭಾಶೆಟ್ಟಿ, ಸದಸ್ಯರಾದ ಆರ್.ಮಾಲಿನಿ, ಸಸ್ರೀನ್, ಅಹಲ್ಯ, ತರಬೇತುದಾರರಾದ ಉಷಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ವರುಣಾ ಜೆಡಿಎಸ್ ಟಿಕೆಟ್‌ಗೆ ಹೆಚ್.ಎಸ್.ರುದ್ರಸ್ವಾಮಿ ಬೇಡಿಕೆ

ಮೈಸೂರು, ಏ.12(ಎಂಟಿವೈ)- ವರುಣಾ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಜೆಡಿಎಸ್ ವರಿಷ್ಠರು ಟಿಕೆಟ್ ನೀಡಬೇಕೆಂದು ಪಕ್ಷದ ಮುಖಂಡ ಹೆಚ್.ಎಸ್.ರುದ್ರಸ್ವಾಮಿ ಮನವಿ ಮಾಡಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ವರುಣಾ ಕ್ಷೇತ್ರದ ಸೋಮೇಶ್ವರಪುರದ ದಿ.ಶಿವಬಸಪ್ಪ ಅವರು 2006ರ ಚಾಮುಂಡೇಶ್ವರಿ ಕ್ಷೇತ್ರದ ಉಪ ಚುನಾವಣೆಯಲ್ಲಿ ಸಿದ್ದರಾಮಯ್ಯ ಅವರ ವಿರುದ್ಧ ಸ್ಪರ್ಧಿಸಿ ಕೇವಲ 257 ಮತಗಳ ಅಂತರದಿಂದ ಪರಾಭವಗೊಂಡಿದ್ದರು. ನಾನು ಕೂಡ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಸೇವೆ ಸಲ್ಲಿಸುತ್ತಿದ್ದೇನೆ. ವೃತ್ತಿಯಲ್ಲಿ ಗುತ್ತಿಗೆದಾರರಾಗಿ ಸೇವೆ ಸಲ್ಲಿಸುತ್ತಿದ್ದೇನೆ. ಅಲ್ಲದೆ, ವೀರಶೈವ ಮಹಾಸಭಾ ಮೈಸೂರು ತಾಲೂಕು ಸಮಿತಿ ಅಧ್ಯಕ್ಷನಾಗಿ ಆರು ವರ್ಷ ಸೇವೆ ಸಲ್ಲಿಸಿದ್ದು, ಎಲ್ಲ ವರ್ಗದವರ ಬೆಂಬಲವಿದೆ. ಆದ್ದರಿಂದ ಈ ಬಾರಿ ಪಕ್ಷದ ವರಿಷ್ಠರು ತಮಗೆ ಟಿಕೆಟ್ ನೀಡಬೇಕೆಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಪಕ್ಷದ ಮುಖಂಡರಾದ ಎಸ್. ಪ್ರಕಾಶ್ ಪ್ರಿಯದರ್ಶನ್, ಹೊಸಕೋಟೆ ರಾಜೇಶ್, ಶಿವಪ್ರಕಾಶ್ ಇದ್ದರು.

ಮತದಾನ ಮಾಡಲು ಅಗತ್ಯ ದಾಖಲೆಗಳನ್ನು ಹಾಜರುಪಡಿಸಿ

ಮೈಸೂರು,ಏ.12(ಆರ್‌ಕೆ)–ಮೇ 10ರಂದು ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಮತ ಚಲಾಯಿಸಲು ಮತದಾರರ ಗುರುತಿನ ಚೀಟಿ ಅಥವಾ



ಈ ಕೆಳಕಂಡ 12 ದಾಖಲಾತಿಗಳ ಪೈಕಿ ಯಾವುದಾದರೂ ಒಂದನ್ನು ಹಾಜರುಪಡಿಸಬೇಕು. ಆಧಾರ್ ಕಾರ್ಡ್, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಜಾಬ್ ಕಾರ್ಡ್, ಬ್ಯಾಂಕ್/ಪೋಸ್ಟ್ ಆಫೀಸ್ ಪಾಸ್‌ಬುಕ್, ಕಾರ್ಮಿಕ ಇಲಾಖೆ ನೀಡಿರುವ ಆರೋಗ್ಯ ವಿಮೆ ಸ್ಮಾರ್ಟ್ ಕಾರ್ಡ್, ಡ್ರೈವಿಂಗ್ ಲೈಸೆನ್ಸ್, ಪಾನ್ ಕಾರ್ಡ್, ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾದಿಂದ ನೀಡಲಾದ ಸ್ಮಾರ್ಟ್ ಕಾರ್ಡ್, ಪಿಂಚಣಿ ಕಾರ್ಡ್, ಕೇಂದ್ರ/ರಾಜ್ಯ ಸರ್ಕಾರಿ ನೌಕರರ ಸೇವಾ ಗುರುತಿನ ಪತ್ರ, ಸಂಸದ, ಶಾಸಕರಿಗೆ ನೀಡಿರುವ ಗುರುತಿನ ಪತ್ರ ಹಾಗೂ ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದಿಂದ ನೀಡಲಾದ ಯುಡಿಪಿಡಿ ಕಾರ್ಡ್‌ಗಳ ಪೈಕಿ ಯಾವುದಾದರೂ ಒಂದು ದಾಖಲಾತಿಯನ್ನು ತಂದು ಮತದಾನ ಮಾಡಬಹುದು.

ಪ್ರಚಾರಕ್ಕೆ ಮಕ್ಕಳನ್ನು ಬಳಸಿಕೊಂಡರೆ ಕಠಿಣ ಶಿಕ್ಷೆ

ಬೆಂಗಳೂರು: 2023ರ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಚುನಾವಣಾ ಕಾರ್ಯ ಹಾಗೂ ಪ್ರಚಾರ ಕಾರ್ಯದಲ್ಲಿ ಮಕ್ಕಳ ಬಳಕೆಯನ್ನು ನಿಷೇಧಿಸಲಾಗಿದೆ.

ರಾಜಕೀಯ ಪಕ್ಷಗಳ ಮೆರವಣಿಗೆ, ಸಾರ್ವಜನಿಕ ಭಾಷಣ, ಮನೆ ಮನೆಗೆ ಭೇಟಿ ನೀಡುವುದು, ಪಕ್ಷದ ಚಿಹ್ನೆಯಿರುವ ಪುಸ್ತಕ ಮತ್ತು ಬಟ್ಟೆಗಳನ್ನು ಹಂಚುವುದು, ಕರಪತ್ರ ಹಂಚುವುದು ಮುಂತಾದ ಚಟುವಟಿಕೆಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಂಡಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಬೆಂಗಳೂರು ನಗರ ಎಡಿಸಿ ಕೆ.ಎ.ದಯಾನಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಏ.13ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ. ಏ.20 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಏ.21 ನಾಮಪತ್ರ ಪರಿಶೀಲನೆ ನಡೆಲಿದ್ದು, ಏ.24 ನಾಮಪತ್ರ ವಾಪಸ್ಸಿಗೆ ಕೊನೆಯ ದಿನವಾಗಿದೆ. ಮೇ 10ರಂದು ಚುನಾವಣೆ ನಡೆಯಲಿದ್ದು, ಮೇ 13ಕ್ಕೆ ಫಲಿತಾಂಶ ಪ್ರಕಟವಾಗಲಿದೆ. ಒಂದೇ ಹಂತದಲ್ಲಿ ಮತದಾನ ನಡೆಯಲಿದೆ ಎಂದು ಈಗಾಗಲೇ ಚುನಾವಣಾ ಆಯೋಗ ತಿಳಿಸಿದೆ.

ಈ ಬಾರಿ ಸೋತರೆ ಮತ್ತೆ ಸ್ಪರ್ಧಿಸಲ್ಲ

ಎನ್.ಆರ್. ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸಂದೇಶ್‌ಸ್ವಾಮಿ ಭಾವುಕ ನುಡಿ



ಮೈಸೂರು,ಏ.12(ಜಿಎ)–ಕಳೆದ ಎರಡು ಬಾರಿ ನನ್ನನ್ನು ಸೋಲಿಸಿದ್ದೀರಿ. ಈ ಚುನಾವಣೆಯಲ್ಲಿ ನಾನು ಮತ್ತೆ ಸೋತರೆ, ಮುಂದೆಂದೂ ಸ್ಪರ್ಧೆ ಮಾಡುವುದಿಲ್ಲ ಎಂದು ನರಸಿಂಹರಾಜ (ಎನ್.ಆರ್.) ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮಾಜಿ ಮೇಯರ್ ಸಂದೇಶ್‌ಸ್ವಾಮಿ ಭಾವುಕರಾಗಿ ನುಡಿದರು.

ಎನ್.ಆರ್.ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಘೋಷಣೆಯಾದ ಬೆನ್ನಲ್ಲೇ ಕಾರ್ಯಕರ್ತರ ಜೊತೆ ಸಭೆ ನಡೆಸಿದ ಸಂದೇಶ್ ಸ್ವಾಮಿ, ಕಾರ್ಯಕರ್ತರು ಈ ಬಾರಿ ಹುಮ್ಮಸ್ಸಿನಿಂದ ಕೆಲಸ ಮಾಡಬೇಕು. ಯಾರೂ ಆತ್ಮವಿಶ್ವಾಸ ಕಳೆದುಕೊಳ್ಳಬಾರದು. ಈ ಬಾರಿ ನನಗೆ ಒಂದು ಅವಕಾಶ ಮಾಡಿಕೊಟ್ಟರೆ ನಾನು ಸತ್ತರೂ ಕೂಡ ನಾನು ಪ್ರತಿನಿಧಿಸಿದ್ದ ಕುರುಹು ಎನ್‌ಆರ್ ಕ್ಷೇತ್ರದಲ್ಲಿ ಉಳಿಯಬೇಕು ಹಾಗೆ ಕೆಲಸ ಮಾಡುವ ಬಯಕೆ ಹೊಂದಿದ್ದೇನೆ. ನನಗೆ ಈ ಬಾರಿ ಒಂದು ಅವಕಾಶ ಮಾಡಿಕೊಡಿ ಎಂದು ಭಾವುಕರಾಗಿ ಮತಯಾಚನೆ ಮಾಡಿದರು.

ಕ್ಷೇತ್ರದ ಹಾಲಿ ಶಾಸಕರ ಬಗ್ಗೆ ಅವರ ಸಮುದಾಯದವರಿಂದಲೇ ವಿರೋಧ ಇದೆ. ಅವರು ಒಳ್ಳೆಯ ಕೆಲಸ ಕಾರ್ಯಗಳನ್ನು ಮಾಡಿದ್ದರೆ, ಜನರ ಜೊತೆ ಉತ್ತಮವಾಗಿ ಸ್ಪಂದಿಸುವ ಕೆಲಸ ಮಾಡಿದ್ದರೆ ಏಕೆ ಚುನಾವಣಾ ನಿವೃತ್ತಿ ಘೋಷಿಸಲು ಮುಂದಾಗುತ್ತಿದ್ದರು. ಅವರು ಐದು ಬಾರಿ ಗೆದ್ದಿದ್ದರೂ ಕೂಡ ಕ್ಷೇತ್ರವನ್ನು ಇನ್ನೂ ಸ್ಲಂ ಮುಕ್ತ ಮಾಡಿಲ್ಲ. ವಸತಿ, ಆರೋಗ್ಯ, ಶಿಕ್ಷಣ ಸಮಸ್ಯೆಗಳು ಕ್ಷೇತ್ರದ ದೊಡ್ಡ ಸಮಸ್ಯೆಯಾಗಿವೆ. ಜನ ಇದನ್ನು ಅರ್ಥ ಮಾಡಿಕೊಂಡು ಹೊಸ ಮುಖಗಳಿಗೆ ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿದರು.



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಇನ್ಸ್‌ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಇಂಜಿನಿಯರ್ ಹೆಚ್.ಗುರುಪಸಾದ್ ಅವರು 'ಎ.ಸಿ.ಮೋಟಾರ್ಸ್ ಫಾರ್ ಇಂಡಸ್ಟ್ರಿಯಲ್ ಅಪ್ಲಿಕೇಷನ್ಸ್' ಕುರಿತು ಉಪನ್ಯಾಸ ನೀಡಿದರು. ಈ ವೇಳೆ ಇನ್ಸ್‌ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಬಿ.ಎಸ್. ಪ್ರಭಾಕರ, ಗೌರವ ಕಾರ್ಯದರ್ಶಿ ಎಚ್.ಎಸ್.ಸುರೇಶ್‌ಬಾಬು, ಕಾರ್ಯದರ್ಶಿ ಡಾ.ಆರ್.ದೀಪು ಹಾಗೂ ಕಾರ್ಯಕ್ರಮ ಸಂಯೋಜಕ ಕೆ.ಬಿ.ಭಾಸ್ಕರ್ ಉಪಸ್ಥಿತರಿದ್ದರು.

ರೂಪ–ಸಿಂಧೂರಿ ಪ್ರಕರಣ: ಹೈಕೋರ್ಟ್ ತಡೆ

ಬೆಂಗಳೂರು,ಏ.12–ಐಪಿಎಸ್ ಅಧಿಕಾರಿ ಡಿ.ರೂಪ ಅವರು ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ವಿರುದ್ಧ ಯಾವುದೇ ಮಾನಹಾನಿಕರ ಹೇಳಿಕೆಗಳನ್ನು ನೀಡದಂತೆ ವಿಚಾರಣಾ ನ್ಯಾಯಾಲಯ ನೀಡಿರುವ ಆದೇಶಕ್ಕೆ ಹೈಕೋರ್ಟ್ ತಡೆ ನೀಡಿದೆ.



ಈ ಸಂಬಂಧ ಐಪಿಎಸ್ ಅಧಿಕಾರಿ ಡಿ.ರೂಪ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಶ್ರೀನಿವಾಸ ಹರೀಶ್ ಕುಮಾರ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಪುರಸ್ಕರಿಸಿದೆ. 'ಡಿ. ರೂಪ ಅವರು ಮಾನಹಾನಿಕರ ಹೇಳಿಕೆಗಳನ್ನು ನೀಡದಂತೆ ನಿರ್ಬಂಧ ವಿಧಿಸಬೇಕು' ಎಂದು ಕೋರಿ ವಿಚಾರಣಾ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ್ದ ನ್ಯಾಯಾಲಯ ಪ್ರತಿಬಂಧಕಾದೇಶ ನೀಡಿತ್ತು. 'ಈ ಆದೇಶ ಏಕಪಕ್ಷೀಯವಾಗಿದೆ' ಎಂದು ಆಕ್ಷೇಪಿಸಿ ಪ್ರಶ್ನಿಸಿ ರೂಪಾ ಹೈಕೋರ್ಟ್ ಮೆಟ್ಟಿಲೇರಿದ್ದರು.

ಚಿನ್ನ ಕಳ್ಳಸಾಗಣೆ ಪ್ರಕರಣ: ಪಿಣರಾಯಿ ವಿರುದ್ಧ ಇಡಿ ಸಲ್ಲಿಸಿದ್ದ ಅರ್ಜಿ ವಜಾ

ಕೊಚ್ಚಿ: ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಕೇರಳದ ಮುಖ್ಯಮಂತ್ರಿ ಪಿಣರಾಯಿ



ವಿಜಯನ್ ಸೇರಿದಂತೆ ಇತರ ರಾಜಕಾರಣಿಗಳು ಶಾಮೀಲಾಗಿದ್ದಾರೆ ಎಂಬ ಆರೋಪದ ಕುರಿತು ತನಿಖೆ ನಡೆಸಬೇಕೆಂದು ಕೋರಿ ಕಸ್ಟಮ್ಸ್ ಮತ್ತು ಜಾರಿ ನಿರ್ದೇಶನಾಲಯವು (ಇ.ಡಿ) ಸಲ್ಲಿಸಿರುವ ಮನವಿಯನ್ನು ಕೇರಳ ಹೈಕೋರ್ಟ್ ಬುಧವಾರ ವಜಾಗೊಳಿಸಿದೆ.

ಪ್ರಕರಣದ ಪ್ರಮುಖ ಆರೋಪಿಗಳಲ್ಲಿ ಒಬ್ಬರಾಗಿದ್ದ ಸ್ವಪ್ನಾ ಸುರೇಶ್ ಅವರನ್ನು ನೇಮಿಸಿಕೊಂಡಿದ್ದ ಹೈರೇಂಜ್ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ಇಂಡಿಯಾದ (ಎಚ್‌ಆರ್‌ಡಿಎಸ್) ಸಂಸ್ಥಾಪಕ ಕಾರ್ಯದರ್ಶಿ ಅಜಿ ಕೃಷ್ಣನ್ ಅವರ ಅರ್ಜಿಯನ್ನು ನ್ಯಾಯಮೂರ್ತಿ ಬೆಚು ಕುರಿಯನ್ ಥಾಮಸ್ ತಿರಸ್ಕರಿಸಿದ್ದಾರೆ. ನ್ಯಾಯಮೂರ್ತಿಗಳು ಮನವಿಯನ್ನು ವಜಾಗೊಳಿಸಿರುವುದಾಗಿ ಪ್ರಕರಣಕ್ಕೆ ಸಂಬಂಧಿಸಿದ ವಕೀಲರು ದೃಢಪಡಿಸಿದ್ದಾರೆ.

ನಿಧನ

ಮಚ್ಚರಂಡ ಬಿ ಐಯ್ಯಣ್ಣ



ಮೈಸೂರು, ಏ.12– ಮೈಸೂರಿನ ವಿಜಯನಗರ 2ನೇ ಹಂತದ ನಿವಾಸಿ ಮಚ್ಚರಂಡ ಬಿ ಐಯ್ಯಣ್ಣ(40) ಅವರು ಇಂದು ತಮ್ಮ ನಿವಾಸದಲ್ಲಿ ನಿಧನರಾದರು. ಅನಾರೋಗ್ಯದಿಂದ ಬಳಲುತ್ತಿದ್ದ ದಿವಂಗತರು ಚಿಕಿತ್ಸೆ ಫಲಕಾರಿಯಾಗದೆ ನಿಧನರಾಗಿದ್ದು, ತಂದೆ–ತಾಯಿ, ಇಬ್ಬರು ಸಹೋದರರು ಸೇರಿದಂತೆ ಅಪಾರ ಬಂಧು–ವರ್ಗ ಅಗಲಿದ್ದಾರೆ. ಬುಧವಾರ ಸಂಜೆ ಗೋಕುಲಂನಲ್ಲಿರುವ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕೃಷ್ಣರಾಜ ಕ್ಷೇತ್ರದ ಶಾಸಕ ಎಸ್.ಎ.ರಾಮದಾಸ್‌ಗೆ ಟಿಕೆಟ್ ಘೋಷಣೆ ವಿಳಂಬ

ಬೆಂಬಲಿಗರು, ಅಭಿಮಾನಿಗಳ ಆಕ್ರೋಶ; ವಿಷ ಸೇವಿಸಿ ಆತ್ಮಹತ್ಯೆ ಯತ್ನ

ಮೈಸೂರು, ಏ.12(ಎಸ್‌ಪಿಎನ್)–



ಮೊದಲನೇ ಪಟ್ಟಿಯಲ್ಲಿ ಶಾಸಕ ಎಸ್.ಎ.ರಾಮದಾಸ್ ಅವರಿಗೆ ಟಿಕೆಟ್ ಘೋಷಣೆ ಮಾಡದ ಬಿಜೆಪಿ ಹೈಕಮಾಂಡ್ ವಿರುದ್ಧ ಮಹಿಳೆಯರು ಸೇರಿದಂತೆ ಕೆ.ಆರ್ ಕ್ಷೇತ್ರದ ನೂರಾರು ಮಂದಿ ಬಿಜೆಪಿ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರೆ, ಬೆಂಬಲಿಗನೋರ್ವ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ನಡೆದಿದೆ.



ವಿದ್ಯಾರಣ್ಯಪುರಂನಲ್ಲಿರುವ ಶಾಸಕ ಎಸ್.ಎ.ರಾಮದಾಸ್ ಮನೆ ಎದುರು ಬುಧವಾರ ಸಂಜೆ ಜಮಾಯಿಸಿದ ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳು ಬಿಜೆಪಿ ಹೈಕಮಾಂಡ್ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ಹೊರಹಾಕಿದರು. ಕೆ.ಆರ್ ಕ್ಷೇತ್ರದ ಜನಪ್ರಿಯ ಶಾಸಕ ಎಸ್.ಎ. ರಾಮದಾಸ್ ಅವರಿಗೆ ಮೊದಲ ಪಟ್ಟಿಯಲ್ಲಿ ಟಿಕೆಟ್ ಘೋಷಣೆ ಮಾಡದಿರುವುದೇಕೆ ಎಂದು ಪ್ರಶ್ನಿಸಿದರು.

ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಲ್ಲಿ ಕೆ.ಆರ್.ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡಿದ್ದಾರೆ. ನೀರಿನ ಸಮಸ್ಯೆಯನ್ನು ಬಗೆಹರಿಸಿದ್ದಾರೆ. ಹತ್ತಾರು ಅಭಿವೃದ್ಧಿ ಕಾರ್ಯಕ್ರಮಗಳಾಗಿವೆ. ಆದರೆ ಬಿಜೆಪಿ ಹೈಕಮಾಂಡ್ ಟಿಕೆಟ್ ನೀಡುವಾಗ ಯಾವ ಮಾನದಂಡವನ್ನು ಅನುಸರಿಸಿದ್ದಾರೆ ಎಂಬುದನ್ನು ತಿಳಿಸಬೇಕು. ಸಚಿವ ಸ್ಥಾನ ನೀಡದೆ ಅನ್ಯಾಯ ಮಾಡಿದರು. ಅದರಂತೆ ಈಗ ಟಿಕೆಟ್ ನೀಡದೆ ಮೋಸ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಉಗ್ರ ಹೋರಾಟ: ಶಾಸಕ ಎಸ್.ಎ. ರಾಮದಾಸ್ ಅವರಿಗೆ ಬಿಜೆಪಿ ಟಿಕೆಟ್ ಘೋಷಣೆ ಮಾಡದಿದ್ದರೆ, ಉಗ್ರ ಹೋರಾಟ ನಡೆಸಲಾಗುವುದು. ವಿಧಾನಸೌಧಕ್ಕೆ ಮುತ್ತಿಗೆ ಹಾಕಲಾಗುವುದು. ಕೆ.ಆರ್ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡಿದ ಶಾಸಕರಿಗೆ ಅನ್ಯಾಯ ಮಾಡಬೇಡಿ, 2ನೇ ಪಟ್ಟಿಯಲ್ಲಾದರೂ ಟಿಕೆಟ್ ಘೋಷಣೆ ಮಾಡಿ ಎಂದು ಒತ್ತಾಯಿಸಿದರು.

ರಾಮದಾಸ್ ಪರ ಘೋಷಣೆ: ಇದೇ ವೇಳೆ ರಾಮದಾಸ್ ಪರ ಘೋಷಣೆ ಕೂಗಿದ ಕಾರ್ಯಕರ್ತರು ಅಭಿಮಾನ ಮೆರೆದರು. ರಾಮದಾಸ್ ಹೊರತು ಬೇರೆ ಯಾರಿಗಾದರೂ ಟಿಕೆಟ್ ಘೋಷಣೆ ಮಾಡಿದರೆ, ಅದರ ಪರಿಣಾಮ ಎದುರಿಸಬೇಕಾಗುತ್ತದೆ. ಅಂತಹ ಸಂದರ್ಭ ಬಂದರೆ, ಅವರನ್ನು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವಂತೆ ಮನವಿ ಮಾಡಿ ಅವರನ್ನು ಗೆಲ್ಲಿಸುತ್ತೇವೆ ಎಂದು ಎಚ್ಚರಿಕೆ ನೀಡಿದರಲ್ಲದೆ ಕೊರೊನಾ ಸಂದರ್ಭದಲ್ಲಿ ಮನೆ ಮನೆಗೆ ಭೇಟಿ ನೀಡಿ ಸೋಂಕಿತರ ಜೀವ ಉಳಿಸಲು ಶ್ರಮಿಸಿದ್ದಾರೆ. ರಾಮದಾಸ್ ಅವರೇ ಮತ್ತೊಮ್ಮೆ ಕ್ಷೇತ್ರದ ಶಾಸಕರಾಗಬೇಕು ಎಂದರು.

ಶಾಸಕರು ಕ್ಷೇತ್ರದಲ್ಲಿಲ್ಲ: ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದ ವೇಳೆಯಲ್ಲಿ ಕ್ಷೇತ್ರದ ಬಿಜೆಪಿ ಅಧ್ಯಕ್ಷ ವಡಿವೇಲ್ ಸ್ಥಳಕ್ಕೆ ಭೇಟಿ ನೀಡಿ, ಮೊದಲ ಪಟ್ಟಿಯಲ್ಲಿ ರಾಮದಾಸ್ ಅವರಿಗೆ ಟಿಕೆಟ್ ಘೋಷಣೆಯಾಗದ ಹಿನ್ನೆಲೆಯಲ್ಲಿ ಬೇಸರದಿಂದ ಅವರು ಕ್ಷೇತ್ರದಿಂದ ಹೊರಗಿದ್ದಾರೆ. 2ನೇ ಪಟ್ಟಿಯಲ್ಲಿ ಹೆಸರು ಘೋಷಣೆಯಾಗುವ ತನಕ ತಾಳ್ಮೆಯಿಂದ ಇರುವಂತೆ ಮಹಿಳಾ ಕಾರ್ಯಕರ್ತೆಯರಲ್ಲಿ ಮನವಿ ಮಾಡಿ ಸಮಾಧಾನಗೊಳಿಸಿದರು.

> **ಶಾಸಕ ಎಸ್.ಎ.ರಾಮದಾಸ್‌ಗೆ ಟಿಕೆಟ್ ನೀಡದ ಹಿನ್ನೆಲೆಯಲ್ಲಿ ಅವರ ಬೆಂಬಲಿಗ ಅನಿರುದ್ಧ್, ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದರು. ಈ ವೇಳೆ ಸ್ಥಳದಲ್ಲೇ ಇದ್ದ ಪೊಲೀಸರು ಆತನಿಂದ ವಿಷದ ಬಾಟಲಿಯನ್ನು ವಶಪಡಿಸಿಕೊಂಡರಲ್ಲದೆ ಆತನನ್ನು ಸಮಾಧಾನಪಡಿಸಿದರು.**

ವರುಣಾದಲ್ಲಿ ಬಿಜೆಪಿ ಅಭ್ಯರ್ಥಿ ಸೋಮಣ್ಣ ಮಣಿಸಲು ರಹಸ್ಯ ಸ್ಥಳದಲ್ಲಿ ಸಿದ್ದರಾಮಯ್ಯ ತಂತ್ರಗಾರಿಕೆ

ಬೆಂಗಳೂರು, ಏ.12– ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ನಂತರ ಹಾಲಿ ಕರ್ನಾಟಕ ವಿಧಾನಸಭೆ ಚುನಾವಣೆಯ ಕಾವು ಮತ್ತಷ್ಟು ಹೆಚ್ಚಾಗಿದೆ. ಅದರಲ್ಲೂ ವರುಣಾ ಕ್ಷೇತ್ರ ಈ ಬಾರಿ ಭಾರೀ ಕುತೂಹಲ ಕೆರಳಿಸಿದೆ. ಈ ಕ್ಷೇತ್ರದಲ್ಲಿ ಘಟಾನುಘಟಿ ನಾಯಕರಾದ ಕಾಂಗ್ರೆಸ್‌ನ ಸಿದ್ದರಾಮಯ್ಯ ಮತ್ತು ಬಿಜೆಪಿಯ ವಿ ಸೋಮಣ್ಣ ನಡುವೆ ತೀವ್ರ ಹೋರಾಟ ನಡೆಯಲಿದೆ. ಬಿಜೆಪಿ ಸೋಮಣ್ಣ ಅವರನ್ನು ವರುಣಾದಲ್ಲಿ ಕಣಕ್ಕಿಳಿಸುತ್ತಿದ್ದಂತೆ ಎಚ್ಚೆತ್ತ ಸಿದ್ದರಾಮಯ್ಯ ಮತ್ತು ಆಪ್ತರು ತಂತ್ರಗಾರಿಕೆ ಹೆಣೆಯಲು ಆರಂಭಿಸಿದ್ದಾರೆ. ರಹಸ್ಯ ಸ್ಥಳದಲ್ಲಿ ಆಪ್ತರೊಂದಿಗೆ ಸಿದ್ದರಾಮಯ್ಯ ಮಾತುಕತೆ ನಡೆಸುತ್ತಿದ್ದಾರೆ.

ಬಿಜೆಪಿ ಹೈಕಮಾಂಡ್ ಸಚಿವ ಸೋಮಣ್ಣಗೆ ಚಾಮರಾಜನಗರ ಮತ್ತು ವರುಣಾ ಕ್ಷೇತ್ರದ ಟಿಕೆಟ್ ಘೋಷಣೆ ಮಾಡಿದೆ. ಸೋಮಣ್ಣಗೆ ಈ ಎರಡು ಕ್ಷೇತ್ರಗಳು ಹೊಸದಾಗಿದ್ದು, ಗೆಲುವಿಗಾಗಿ ತಂತ್ರಗಾರಿಕೆ ಹೆಣೆಯಲು ಸಜ್ಜಾಗುತ್ತಿದ್ದಾರೆ. ಇತ್ತ ವರುಣಾದಲ್ಲಿ ಬಿಜೆಪಿ, ಪ್ರತಿಸ್ಪರ್ಧಿಯಾಗಿ ಸೋಮಣ್ಣರನ್ನು ಕಣಕ್ಕಿಳಿಸುತ್ತಿದ್ದಂತೆ ಎಚ್ಚೆತ್ತ ಕಾಂಗ್ರೆಸ್ ಅಭ್ಯರ್ಥಿ ಸಿದ್ದರಾಮಯ್ಯ ಮತ್ತು ತಂಡ ಭಾರೀ ತಂತ್ರಗಾರಿಕೆ ಹೆಣೆಯಲು ಆರಂಭಿಸಿದ್ದಾರೆ.



ಸಿದ್ದರಾಮಯ್ಯ ಮತ್ತು ಆಪ್ತರಾದ ಮಾಜಿ ಗೃಹಸಚಿವ ಕೆಜೆ ಜಾರ್ಜ್, ಭೈರತಿ ಸುರೇಶ್ ಸೇರಿದಂತೆ ಮತ್ತಿತರರು ರಹಸ್ಯ ಸ್ಥಳದಲ್ಲಿ ಮಾತುಕತೆ ನಡೆಸುತ್ತಿದ್ದಾರೆ. ಕೆಲವು ಕ್ಷೇತ್ರಗಳ ಟಿಕೆಟ್ ಹಂಚಿಕೆ ಸಂಬಂಧ ಆಪ್ತರೊಂದಿಗೆ ಚರ್ಚೆ ನಡೆಸಲಾಗುತ್ತಿದೆ. ಮಾತ್ರವಲ್ಲದೆ, ಸಿದ್ದರಾಮಯ್ಯ ಎರಡನೇ ಕ್ಷೇತ್ರವಾಗಿ ಕೋಲಾರದಲ್ಲಿ ಸ್ಪರ್ಧಿಸಲು ಮನಸ್ಸು ಮಾಡಿದ್ದಾರೆ. ಹೈಕಮಾಂಡ್ ಕೋಲಾರದ ಟಿಕೆಟ್ ನೀಡಿದರೆ ಮುಂದೆ ತೆಗೆದುಕೊಳ್ಳಬೇಕಾದ ನಿರ್ಧಾರಗಳ ಬಗ್ಗೆಯೂ ಚರ್ಚೆ ನಡೆಸುತ್ತಿದ್ದಾರೆ. ಸದ್ಯ ಸಿದ್ದರಾಮಯ್ಯ ಆಪ್ತರೊಂದಿಗಿನ ಚರ್ಚೆ ತೀವ್ರ ಕುತೂಹಲ ಮೂಡಿಸಿದೆ. ರಾಜಕೀಯ ತಂತ್ರಗಾರಿಕೆ ಮೂಲಕ ಸೋಮಣ್ಣ ಅವರನ್ನು ಮಣಿಸುವಲ್ಲಿ ಸಿದ್ದರಾಮಯ್ಯ ಅವರು ಯಶಸ್ವಿಯಾಗುತ್ತಾರಾ ಅಥವಾ 2018ರಲ್ಲಿ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಅವರನ್ನು ಜೆಡಿಎಸ್‌ನ ಜಿಟಿ ದೇವೇಗೌಡ ಅವರು ಸೋಲಿಸಿದಂತೆ ಈ ಬಾರಿಯ ಚುನಾವಣೆಯಲ್ಲಿ ಸೋಮಣ್ಣ ಅವರು ಸೋಲಿಸುತ್ತಾರಾ ಎಂಬುದನ್ನು ಕಾದುನೋಡಬೇಕಿದೆ.

ಬಿಜೆಪಿಯಿಂದ 'ನಂದಿನಿ' ನಂತರ 'ಅಮುಲ್' ಮುಳುಗಡೆ

ಬೆಂಗಳೂರು: 'ಪ್ರಧಾನಿ ಮೋದಿಯವರ ಆಪ್ತ ಬಳಗದಲ್ಲಿರುವ ಅಂಬಾನಿಯ ಕಣ್ಣು ದೇಶದ ಹಾಲಿನ ಮೇಲೆ ಬಿದ್ದಿದೆ. ಬಿಜೆಪಿಯವರು ಅದಾನಿ, ಅಂಬಾನಿಗಳ ವ್ಯವಹಾರದ ಪರವಾಗಿದ್ದಾರೆ. ಹೀಗಾಗಿ ನಂದಿನಿಯನ್ನು ಮೊದಲು ಮುಳುಗಿಸಿ ನಂತರ ಅಮುಲ್ ಮುಳುಗಿಸುತ್ತಾರೆ' ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಕಿಡಿಕಾರಿದ್ದಾರೆ.

ಕೇಂದ್ರ ಮತ್ತು ರಾಜ್ಯಗಳಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ, ರಾಜ್ಯದ ಹಾಲು ಉತ್ಪಾದಕರ ಬೆನ್ನೆಲುಬು ಮುರಿಯಲು ಪ್ರಯತ್ನಿಸುತ್ತಿದೆ ಎಂದು 2020ರಿಂದಲೂ ನಾನು ಹೇಳುತ್ತಲೇ ಬಂದಿದ್ದೇನೆ ಎಂದರು.

ಸದನದಲ್ಲಿಯೂ ಪ್ರಸ್ತಾಪಿಸಿದ್ದೇನೆ. ನನ್ನ ಸಲಹೆ, ಎಚ್ಚರಿಕೆಯನ್ನು ಪರಿಗಣಿಸುವ ಬದಲು ರೈತರನ್ನು ಶತ್ರುಗಳೆಂದು ಭಾವಿಸಿ, ಅವರ ಆರ್ಥಿಕ ಚೈತನ್ಯ ಮುರಿದು ಹಾಕಲು ಸನ್ನದ್ಧವಾಗಿ ನಿಂತಿದೆ ಎಂದಿದ್ದಾರೆ. ಹಾಲು ಮಹಾಮಂಡಲಗಳನ್ನು ಒಗ್ಗೂಡಿಸುವುದಾಗಿ ಅಮಿತ್ ಶಾ ಹೇಳಿದ್ದರು. ಅದರ ಭಾಗವಾಗಿ ಈಗ ರಾಜ್ಯಕ್ಕೆ ಅಮುಲ್ ವಕ್ಕರಿಸಿದೆ. ಈಗ ನಂದಿನಿ ಆತಂಕ ಎದುರಿಸುತ್ತಿದೆ. ಮೋದಿ ಮತ್ತು ಶಾ ನಮ್ಮ ನಂದಿನಿಯನ್ನಷ್ಟೆ ಅಲ್ಲ, ಅಮುಲ್‌ನ್ನೂ ಮುಳುಗಿಸಲು ಯೋಜನೆ ಹಾಕಿಕೊಂಡಿರುವಂತಿದೆ ಎಂದು ಹೇಳಿದ್ದಾರೆ. ಬಿಜೆಪಿಯವರು ಪಶುಪಾಲಕರ ಪರವಾಗಿದ್ದರೆ ಹಿಂಡಿ ಮತ್ತಿತರ ಪಶು ಆಹಾರಗಳ ಮೇಲೆ ವಿಧಿಸುತ್ತಿರುವ ಜಿಎಸ್‌ಟಿ ಯಾಕೆ ರದ್ದು ಮಾಡಿಲ್ಲ. ಪ್ರತಿ ಲೀಟರ್ ಹಾಲಿಗೆ ಕೊಡುವ ಪ್ರೋತ್ಸಾಹಧನವನ್ನು ಬಿಜೆಪಿ ಅಧಿಕಾರಕ್ಕೆ ಬಂದ ಬಳಿಕ ಯಾಕೆ ಹೆಚ್ಚು ಮಾಡಲಿಲ್ಲ. ಮಕ್ಕಳಿಗೆ ಹಾಲು ಕೊಡುವುದನ್ನು ನಿಲ್ಲಿಸಿರುವುದು ಏಕೆ. ಮಕ್ಕಳ ಹಾಲಿಗೆ ಬಿಡುಗಡೆ ಮಾಡಬೇಕಾದ ಅನುದಾನ ನಿಲ್ಲಿಸಿರುವುದು ಏಕೆ' ಎಂದು ಪ್ರಶ್ನಿಸಿದ್ದಾರೆ.

ವರನಟ ಡಾ.ರಾಜ್‌ಕುಮಾರ್ 17ನೇ ವರ್ಷದ ಸ್ಮರಣೆ



ಬೆಂಗಳೂರು, ಏ.12– ಇಂದು(ಏ.12) ಕನ್ನಡದ ವರನಟ ನಟಸಾರ್ವಭೌಮ ಡಾ.ರಾಜ್‌ಕುಮಾರ್ ಅವರ 17ನೇ ವರ್ಷದ ಪುಣ್ಯತಿಥಿ ಹಿನ್ನೆಲೆಯಲ್ಲಿ ಸಾವಿರಾರು ಅಭಿಮಾನಿಗಳು ಸಾಮಾಜಿಕ ಜಾಲತಾಣಗಳಲ್ಲಿ ರಾಜ್‌ಕುಮಾರ್ ಅವರನ್ನು ಸ್ಮರಿಸಿದ್ದಾರೆ.

ಅಲ್ಲದೇ ಬೆಂಗಳೂರಿನ ಕಂಠೀರವ ಸ್ಟುಡಿಯೋ ಬಳಿಯ ರಾಜ್ ಸಮಾಧಿಗೆ ಡಾ.ರಾಜ್ ಕುಟುಂಬ ಸೇರಿದಂತೆ ಅನೇಕ ಅಭಿಮಾನಿಗಳು ಆಗಮಿಸಿ ಪೂಜೆ ಸಲ್ಲಿಸಿದರು.

ಟ್ವೀಟ್ ಮೂಲಕವೂ ಅಪ್ಪನನ್ನು ನೆನೆದಿರುವ ರಾಘವೇಂದ್ರ ರಾಜಕುಮಾರ್ ಅವರು ಹಳೆಯ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಇದರಲ್ಲಿ ರಾಜ್‌ಕುಮಾರ್ ಅವರ ಜೊತೆಗೆ ಕುಟುಂಬದ ಸದಸ್ಯರು ಇರುವ ಸಂಗ್ರಹ ಚಿತ್ರಗಳಿವೆ. ಸಿಎಂ ಬಸವರಾಜ ಬೊಮ್ಮಾಯಿ ಅವರು, ಕೋಟ್ಯಾಂತರ ಅಭಿಮಾನಿಗಳ ಹೃದಯಮಂದಿರದಲ್ಲಿ ಸದಾ ಚಿರಸ್ಥಾಯಿಯಾಗಿರುವ ನಾಡಿನ ಹೆಮ್ಮೆ,ಕಲಾಸರಸ್ವತಿಯ ವರಪುತ್ರ, ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪುರಸ್ಕೃತ, ವರನಟ, ಡಾ॥ ರಾಜ್‌ಕುಮಾರ್‌ರವರ ಪುಣ್ಯಸ್ಮರಣೆಯಂದು ಅವರಿಗೆ ಅಭಿಮಾನಪೂರ್ವಕ ನಮನಗಳು ಎಂದಿದ್ದಾರೆ.

ಮಾಜಿ ಸಿಎಂ ಸಿದ್ದರಾಮಯ್ಯ ಅವರು, ಡಾ.ರಾಜ್‌ಕುಮಾರ್ ಅವರ ಸಾಟಿಯಿಲ್ಲದ ಕಲಾ ಪ್ರತಿಭೆ, ನಾಡಿನ ನೆಲ–ಜಲ–ಭಾಷೆಯ ಮೇಲಿನ ಅಭಿಮಾನ ಮತ್ತು ಸಾಮಾಜಿಕ ಕಳಕಳಿ ನಮಗೆಲ್ಲ ಸದಾ ದಾರಿದೀಪ. ಈ ಪುಣ್ಯಜೀವಿಯ ಪುಣ್ಯಸ್ಮರಣೆಯಂದು ನನ್ನ ಗೌರವ ನಮನಗಳು ಎಂದಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು, ಡಾ.ರಾಜ್‌ಕುಮಾರ್ ಎಂಬ ಹೆಸರು ಕನ್ನಡಿಗರ ಹೆಗ್ಗುರುತು. ನಟನೆಯ ಜೊತೆಗೆ ಸಾಮಾಜಿಕ ಕಳಕಳಿಯೊಂದಿಗೆ ಜನಮನ ಗೆದ್ದ ನಟಸಾರ್ವಭೌಮ ನಮ್ಮ ಅಣ್ಣಾವ್ರು, ಕರ್ನಾಟಕ ರತ್ನ ಡಾ. ರಾಜ್‌ಕುಮಾರ್ ಅವರ ಪುಣ್ಯಸ್ಮರಣಾ ದಿನದಂದು ಹೃದಯಾಂತರಾಳದ ನಮನಗಳು ಎಂದಿದ್ದಾರೆ. ಅಲ್ಲದೇ ಅನೇಕ ನಟ ನಟಿಯರು ಅಭಿಮಾನಿಗಳು, ರಾಜಕಾರಣಿಗಳು, ಉದ್ಯಮಿಗಳು, ಯುವಕ–ಯುವತಿಯರು ಡಾ.ರಾಜ್ ಅವರನ್ನು ಸ್ಮರಿಸಿದ್ದಾರೆ.

ಭಾಸ್ಕರ್ ರಾವ್‌ಗೆ ಟಿಕೆಟ್ ನೀಡಿದಕ್ಕೆ ಆಕ್ರೋಶ: ಸೈಲೆಂಟ್ ಸುನೀಲ್ ಬೆಂಬಲಿಗರಿಂದ ಬಿಜೆಪಿ ಕಚೇರಿ ಎದುರು ಗಲಾಟೆ

ಬೆಂಗಳೂರು, ಏ.12– ಸೈಲೆಂಟ್ ಸುನೀಲ್‌ಗೆ ಟಿಕೆಟ್ ಕೈತಪ್ಪಿದ ಹಿನ್ನೆಲೆ ಮಲ್ಲೇಶ್ವರಂನಲ್ಲಿರುವ ರಾಜ್ಯ ಬಿಜೆಪಿ ಕಚೇರಿಯಲ್ಲಿ ಬೆಂಬಲಿಗರಿಂದ ಗಲಾಟೆ ಮಾಡಲಾಗಿದೆ. ಭಾಸ್ಕರ್‌ರಾವ್‌ಗೆ ಟಿಕೆಟ್ ನೀಡಿದಕ್ಕೆ ಆಕ್ರೋಶ ವ್ಯಕ್ತಪಡಿಸಿದ್ದು, ಚಾಮರಾಜಪೇಟೆ ಕ್ಷೇತ್ರಕ್ಕೆ ಅನ್ಯಾಯ ಆಗಿದೆ ಎಂದು ಗಲಾಟೆ ಮಾಡಲಾಗಿದೆ. ಒಂದು ಕಾಲದಲ್ಲಿ ರೌಡಿಸಂ ಜಗತ್ತಲ್ಲಿ ಸದ್ದು ಮಾಡಿದ್ದವರು ಇದೀಗ ಏಕಾಏಕಿ ಸಮಾಜ ಸೇವೆ ಮಂತ್ರ ಜಪಿಸಿ ರಾಜಕೀಯ ಪ್ರವೇಶಕ್ಕೆ ಮುಂದಾಗಿದ್ದರು. ಅದರಲ್ಲೂ ಬೆಂಗಳೂರಿನ ರೌಡಿ ಶೀಟರ್ ಸೈಲೆಂಟ್ ಸುನೀಲ ಸೈಲೆಂಟ್ ಆಗಿಯೇ ಪಾಲಿಟಿಕ್ಸ್‌ಗೆ ಪ್ರವೇಶಿಸಲು ಚಾಮರಾಜಪೇಟೆ ಕ್ಷೇತ್ರದಿಂದ ಕಣಕ್ಕಿಳಿಯ ತಯಾರಿ ನಡೆಸಿದ್ದರು. ಸೈಲೆಂಟ್ ಸುನೀಲ್ ರಾಜಕೀಯಕ್ಕೆ ಬರಲು ತಯಾರಿ ನಡೆಸುತ್ತಿದ್ದರು. ಇದೇ ಕಾರಣಕ್ಕೆ ಸುತ್ತಲು ರೌಡಿಗಳನ್ನು ಹಾಕಿಕೊಂಡು ತಿರುಗುತ್ತಿದ್ದವರು ಎಂಎಲ್‌ಎ, ಎಂಪಿಗಳೊಂದಿಗೆ ತಿರುಗುತ್ತಿದ್ದರು.

ತಾನೊಬ್ಬ ರೌಡಿ ಎನ್ನುವ ಪಟ್ಟ ಹೊಂದಿದ್ದರೆ ಸಮಾಜದಲ್ಲಿ ಕೊನೆಯ ತನಕವೂ ರೌಡಿಯಾಗಿಯೇ ಇರಬೇಕಾಗುತ್ತದೆ. ಅದರೆ ಅದೇ ರೌಡಿ ಎನ್ನುವ ಹಣೆಪಟ್ಟಿಯ ಬದಲು ರಾಜಕೀಯ ನಾಯಕ ಎಂದು ಬದಲಾದರೆ ಯಾವುದೇ ಆತಂಕ ಇರುವುದಿಲ್ಲ ಎನ್ನುವ ನಿಲುವಿಗೆ ಬಂದಿರುವಂತಿತ್ತು.

ಆದರೆ ಯಾವಾಗ ಸುನೀಲ್ ಬಿಜೆಪಿ ನಾಯಕರೊಂದಿಗೆ ಕಾಣಿಸಿಕೊಂಡರೋ ಅಂದಿನಿಂದ ವಿಪಕ್ಷಗಳಿಗೆ ಅಸ್ತ್ರವೊಂದು ಸಿಕ್ಕಂತಾಗಿತ್ತು. ಸೈಲೆಂಟ್ ಸುನೀಲ್ ಪಕ್ಷ ಸೇರುತ್ತಿರುವ ಬಗ್ಗೆ ಬಿಜೆಪಿಯನ್ನು ತೀವ್ರ ತರಾಟೆಗೆ ತೆಗೆದುಕೊಂಡಿತ್ತು. ರೌಡಿ ಮೋರ್ಚಾ ತೆರೆಯುತ್ತಿದ್ದಾರೆ ಎಂಬಿತ್ಯಾದಿ ಟೀಕೆಗಳನ್ನು ಕಾಂಗ್ರೆಸ್ ನಡೆಸಿತ್ತು.

ರಾಜಕೀಯಕ್ಕೆ ಎಂಟ್ರಿ ಕೊಡುತ್ತಿರುವುದು ಪಕ್ಕಾವಾಗುತ್ತಿದ್ದಂತೆ ಬಿಜೆಪಿ ಸದಸ್ಯತ್ವವನ್ನು ಬೆಂಗಳೂರು ಕೇಂದ್ರ ಬಿಜೆಪಿ ಘಟಕ ರದ್ದುಗೊಳಿಸಿತ್ತು. ಸುನೀಲ್ ಬಿಜೆಪಿ ಸೇರಿದ್ದ ಬಗ್ಗೆ ಫೋಟೋ ವೈರಲ್ ಬೆನ್ನಲ್ಲೇ ಈ ಕ್ರಮ ಕೈಗೊಳ್ಳಲಾಗಿದ್ದು, ಸುನೀಲ್ ಹೆಸರಿನ ಸದಸ್ಯತ್ವಕ್ಕೂ ಬಿಜೆಪಿಗೂ ಸಂಬಂಧವೇ ಇಲ್ಲ ಎಂದು ಬೆಂಗಳೂರು ಕೇಂದ್ರ ಬಿಜೆಪಿ ಅಧ್ಯಕ್ಷ ಮಂಜುನಾಥ್ ಸ್ಪಷ್ಟನೆ ನೀಡಿದ್ದರು.

ಎಲ್ಲ ಪಕ್ಷಗಳನ್ನೂ ಜೊತೆಗೆ ಕೊಂಡೊಯ್ಯುತ್ತೇವೆ

ನಿತೀಶ್‌ಕುಮಾರ್, ತೇಜಸ್ವಿ ಭೇಟಿ ಬಳಿಕ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ



ನವದೆಹಲಿ: ಬಿಹಾರ ಮುಖ್ಯಮಂತ್ರಿ ನಿತೀಶ್‌ಕುಮಾರ್ ಮತ್ತು ಉಪಮುಖ್ಯಮಂತ್ರಿ ತೇಜಸ್ವಿ ಯಾದವ್ ಅವರು ಬುಧವಾರ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ್ದು, ಎಲ್ಲಾ ಪ್ರತಿಪಕ್ಷಗಳನ್ನು ಬಿಜೆಪಿ ವಿರುದ್ಧ ಒಗ್ಗೂಡಿಸುವುದಾಗಿ ವಾಗ್ದಾನ ಮಾಡಿದ್ದಾರೆ.

2024ರ ಸಾರ್ವತ್ರಿಕ ಚುನಾವಣೆಗೂ ಮುನ್ನ ಪ್ರತಿಪಕ್ಷಗಳ ಒಗ್ಗಟ್ಟಿನ ಮಾತುಕತೆಯ ನಡುವೆಯೇ ಮಹಾಘಟಬಂಧನ್ ನಾಯಕರಾದ ನಿತೀಶ್ ಕುಮಾರ್ ಮತ್ತು ತೇಜಸ್ವಿ ಯಾದವ್ ಅವರು ಇಂದು ಖರ್ಗೆ ಅವರ ನಿವಾಸದಲ್ಲಿ ಸಭೆ ನಡೆಸಿದರು.

ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ ಅವರು, ಇದು 'ಐತಿಹಾಸಿಕ ಸಭೆ' ಎಂದು ಬಣ್ಣಿಸಿದರು. ಮುಂಬರುವ ಚುನಾವಣೆಗಾಗಿ ಎಲ್ಲ ವಿರೋಧ ಪಕ್ಷಗಳನ್ನು ಒಗ್ಗೂಡಿಸುವ ಗುರಿ ಹೊಂದಿರುವುದಾಗಿ ತಿಳಿಸಿದರು.

ನಂತರ ಮಾತನಾಡಿದ ರಾಹುಲ್ ಗಾಂಧಿ, ವಿರೋಧ ಪಕ್ಷಗಳನ್ನು ಒಂದುಗೂಡಿಸಲು 'ಐತಿಹಾಸಿಕ ಹೆಜ್ಜೆ' ತೆಗೆದುಕೊಳ್ಳಲಾಗಿದೆ. ಇದು ಒಂದು ಪ್ರಕ್ರಿಯೆ, ದೇಶಕ್ಕಾಗಿ ವಿರೋಧ ಪಕ್ಷದ ದೃಷ್ಟಿಕೋನವನ್ನು ಇದು ರೂಪಿಸುತ್ತದೆ" ಎಂದರು.

ಈ ಸೈದ್ಧಾಂತಿಕ ಹೋರಾಟದಲ್ಲಿ ಎಲ್ಲ ಪ್ರತಿಪಕ್ಷಗಳನ್ನೂ ಜೊತೆಗೆ ಕೊಂಡೊಯ್ಯುತ್ತೇವೆ. ಕೇಂದ್ರೀಯ ಸಂಸ್ಥೆಗಳ ಮೇಲಿನ ದಾಳಿಗಳ ವಿರುದ್ಧ ಒಗ್ಗಟ್ಟಿನಿಂದ ಹೋರಾಡುತ್ತೇವೆ ಎಂದು ರಾಹುಲ್ ಗಾಂಧಿ ತಿಳಿಸಿದರು. ಇನ್ನು ಸಾಧ್ಯವಾದಷ್ಟು ಎಲ್ಲಾ ಪ್ರತಿಪಕ್ಷಗಳನ್ನು ಒಗ್ಗೂಡಿಸುವುದು ಮತ್ತು ಜತೆಗೆ ಕೆಲಸ ಮಾಡುವ ಪ್ರಯತ್ನವಾಗಿದೆ ಎಂದು ಬಿಹಾರ ಸಿಎಂ ನಿತೀಶ್ ಕುಮಾರ್ ಹೇಳಿದ್ದಾರೆ.

ಬಿಜೆಪಿಯವರು ಮತದಾರರ ಪಟ್ಟಿಯಿಂದ ಮತ ಕದಿಯುತ್ತಿದ್ದಾರೆ

- ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ವಾಗ್ದಾಳಿ
- ಚುನಾವಣಾ ಆಯೋಗದ ಕಣ್ತಪ್ಪಿಸಿ ಮತ ಕದಿಯುವ ಷಡ್ಯಂತರ

ಬೆಂಗಳೂರು, ಏ.12(ಕೆಎಂಶಿ)–ಚಿನ್ನ, ಹಣ, ಹಣ್ಣು, ಕುರಿ, ಮೇಕೆ, ಹಸು, ಚಪ್ಪಲಿ ಕದಿಯುವವರನ್ನು ನೋಡಿದ್ದೇವೆ. ಆದರೆ ಬಿಜೆಪಿಯವರು ಮತ ಕದಿಯುತ್ತಾರೆ ಎಂದು ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಬಿಜೆಪಿಯು ಖಾಸಗಿ ಸಂಸ್ಥೆ ಮೂಲಕ 8600 ನಕಲಿ ಬೂತ್ ಅಧಿಕಾರಿಗಳನ್ನು ನೇಮಿಸಿ ಅಕ್ರಮವಾಗಿ ಮತದಾರರ ಮಾಹಿತಿ ಸಂಗ್ರಹಿಸಿ, ಅಕ್ರಮವಾಗಿ ಮತದಾರರ ಹೆಸರನ್ನು ಮತದಾರ ಪಟ್ಟಿಯಿಂದ ಕೈಬಿಡಲಾಗಿತ್ತು. ಇಡೀ ರಾಜ್ಯದಲ್ಲಿ ಲಕ್ಷಾಂತರ ಹೆಸರುಗಳನ್ನು ಅಕ್ರಮವಾಗಿ ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದ್ದು, ಆದರೆ ಚುನಾವಣಾ ಆಯೋಗ ಕೇವಲ 3 ಕ್ಷೇತ್ರಗಳಲ್ಲಿ ಮಾತ್ರ ಗಮನ ಹರಿಸಿತ್ತು. ಚುನಾವಣಾ ಆಯೋಗದ ಕಣ್ಣು ಮುಚ್ಚಿಸಿ ಬಿಜೆಪಿಯವರಿಂದ ಪಟ್ಟಿ ಪಡೆದು ಹೆಚ್ಚುವರಿ ಮತ ಸೇರಿಸಲು ಯತ್ನಿಸಲಾಗುತ್ತಿದೆ. ಮಹದೇವಪುರ ಕ್ಷೇತ್ರದ ಅಕ್ರಮ ಇಂದು ನಿಮ್ಮ ಮುಂದೆ ಇಡುತ್ತಿದ್ದೇವೆ. ಒಂದು ಮತವನ್ನು 2–3 ಕಡೆ ಸೇರಿಸಲಾಗಿದೆ. ಒಂದೇ ಹೆಸರು, ತಂದೆ ಹೆಸರು ಎಲ್ಲಾ ಒಂದೇ ಆಗಿದ್ದು, ಮತದಾರರ ಫೋಟೋ ಮಾತ್ರ ಬೇರೆ ಬೇರೆ. ನಮ್ಮ ಬಳಿ 42,222 ಅಕ್ರಮ ಹೆಸರು ಸೇರಿಸಿರುವ ದಾಖಲೆ ಇವೆ. ಚುನಾವಣಾ ಆಯೋಗದ ಅಧಿಕಾರಿಗಳು ಇದರಲ್ಲಿ ಶಾಮೀಲಾಗಿದ್ದಾರೆ. ಫಾರಂ 6,7, 8 ಯಾವುದೂ ಇಲ್ಲದೇ ಈ ಹೆಸರು ಸೇರಿಸಲಾಗಿದೆ. ಚುನಾವಣಾಧಿಕಾರಿಗಳು ಹೊಸ ಮತದಾರರ ಸೇರ್ಪಡೆ ಅಭಿಯಾನದ ಹೆಸರಲ್ಲಿ ಈ ಅಕ್ರಮ ಮಾಡಿದ್ದಾರೆ.

ಈ ಅಕ್ರಮದ ಬಗ್ಗೆ ಆಯೋಗಕ್ಕೆ ದಾಖಲೆಗಳನ್ನು ನೀಡುತ್ತಿದ್ದೇವೆ. ಮಹದೇವಪುರ ಕ್ಷೇತ್ರದ ಅರ್ಧಭಾಗ ಪರಿಶೀಲನೆ ಮಾಡಿದ್ದು, 40 ಸಾವಿರ ಹೆಸರು ಅಕ್ರಮ ಸೇರ್ಪಡೆ ಬೆಳಕಿಗೆ ಬಂದಿದೆ. ಒಬ್ಬನೇ ಮತದಾರನ ಒಂದೇ ಫೋಟೋ ಇರುವ ಎರಡು ಮತಗಳಿವೆ. ಬೇರೆ ಬೇರೆಯ ಎರಡು ಮೂರು ಬೂತ್‌ಗಳಲ್ಲಿ ಇವರ ಮತ ಸೇರಿಸಲಾಗಿದೆ. ಚುನಾವಣಾ ಆಯೋಗಕ್ಕೆ ನಾವು ಮತ್ತೊಂದು ಅಧಿಕೃತ ದೂರು ನೀಡುತ್ತೇವೆ. ಆಯೋಗ ಕೂಡಲೇ ಎಆರ್‌ಓ, ಬಿಎಲ್‌ಓ ವಿರುದ್ಧ ಎಫ್‌ಐಆರ್ ದಾಖಲಿಸಬೇಕು. ಈ ಕ್ಷೇತ್ರದ ಮತದಾರರ ಪಟ್ಟಿ ಮತ್ತೊಮ್ಮೆ ಪರಿಷ್ಕರಣೆ ಆಗಬೇಕು. ಇದು ಸೂಕ್ಷ್ಮ ವಿಚಾರವಾಗಿದ್ದು, ನಕಲಿ ಅರ್ಜಿಗಳ ಮೂಲಕ ಈ ಅಕ್ರಮ ಮಾಡಲಾಗಿದೆ.

ಪಕ್ಷದ ಅಧ್ಯಕ್ಷನಾಗಿ ನನಗೆ ಜವಾಬ್ದಾರಿ ಇದೆ. ನಾನು ಗಾಳಿಯಲ್ಲಿ ಗುಂಡು ಹೊಡೆಯುವ ಕೆಲಸ ಮಾಡುವುದಿಲ್ಲ. ದಾಖಲೆ ಸಮೇತ ಆರೋಪ ಮಾಡುತ್ತಿದ್ದೇನೆ. ಯಾರೆಲ್ಲಾ 2 ಮತಗಳನ್ನು ಹೊಂದಿದ್ದಾರೆ, ಇದಕ್ಕೆ ಕುಮ್ಮಕ್ಕು ನೀಡಿರುವ ಅಧಿಕಾರಿಗಳನ್ನು ಬಂಧಿಸಿ ಕೇಸ್ ದಾಖಲಿಸಬೇಕು. ಬೆಂಗಳೂರಿನ ಎಲ್ಲ ಕ್ಷೇತ್ರಗಳಲ್ಲಿ ಈ ಅಕ್ರಮ ನಡೆಯುತ್ತಿವೆ. ಈ ವಿಚಾರವಾಗಿ ನಾವೇ ತನಿಖೆ ಮಾಡಿದ್ದೇವೆ. ನಮ್ಮ ಬೂತ್ ಏಜೆಂಟರು ಈ ಬಗ್ಗೆ ಪರಿಶೀಲಿಸಿ ಅಕ್ರಮ ಬಯಲು ಮಾಡಿದ್ದಾರೆ. ಒಂದು ಕ್ಷೇತ್ರದಲ್ಲಿ 1 ಲಕ್ಷ ಬೋಗಸ್ ಮತ ಸೇರಿಸಲಾಗಿದೆ. ಚುನಾವಣೆ ಸೋಲಿನ ಭಯದಲ್ಲಿ ಈ ರೀತಿ ಅಕ್ರಮ ಮಾಡುತ್ತಿದ್ದಾರೆ. ಕೇಂದ್ರ ಹಾಗೂ ರಾಜ್ಯ ಚುನಾವಣಾ ಆಯೋಗ ಈ ಬಗ್ಗೆ ಪರಿಶೀಲನೆ ನಡೆಸಬೇಕು. ಇದಕ್ಕಾಗಿ ಪ್ರತ್ಯೇಕ ತಂಡ ಕಳುಹಿಸಬೇಕು. ಚುನಾವಣಾ ಆಯೋಗದ ಘನತೆ ಉಳಿಸಿಕೊಳ್ಳಬೇಕು ಎಂದರು.

ಕನಕಪುರಕ್ಕೆ ಸಾಮ್ರಾಟ್ ಅಶೋಕ್ ಅವರು ಬರುತ್ತಿದ್ದಾರೆ ಎಂಬ ಪ್ರಶ್ನೆ ಕೇಳಿದಾಗ, ಸಾಮ್ರಾಟ್ ಆದರೂ ಬರಲಿ, ಚಕ್ರವರ್ತಿಯಾದರೂ ಬರಲಿ, ಕಾರ್ಯಕರ್ತರಾದರೂ ಬರಲಿ. ಆತಿಥ್ಯ ನೀಡುವುದರಲ್ಲಿ ಕನಕಪುರ ಖ್ಯಾತಿ ಪಡೆದಿದೆ. 30–40 ವರ್ಷಗಳ ಹಿಂದೆಯೇ ಒಳ್ಳೊಳ್ಳೆ ಮಿಲ್ಟ್ರಿ ಹೊಟೇಲ್‌ಗಳನ್ನು ತೆರೆದಿದ್ದಾರೆ. ಅವರು ಬಂದು ಊಟ ಮಾಡಿಕೊಂಡು ಹೋಗಬಹುದು. ಬಿಜೆಪಿಯವರು ಯುಪಿ ಮಾಡೆಲ್ ಆದರೂ ಮಾಡಲಿ, ಗುಜರಾತ್ ಮಾಡೆಲ್ ಆದರೂ ಮಾಡಲಿ. ಅವರಿಗೆ ಶುಭವಾಗಲಿ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ನೀವು ರಾಜ್ಯ ಪ್ರವಾಸ ಮಾಡುವುದನ್ನು ತಪ್ಪಿಸಲು ಈ ತಂತ್ರ ರೂಪಿಸಿದ್ದಾರೆ ಎಂದು ಕೇಳಿದಾಗ, ನಾನು ನಾಮಪತ್ರ ಸಲ್ಲಿಸುವ ದಿನ ಹಾಗೂ ಮತ್ತೊಂದು ದಿನ ಹೋಗಿ ಪ್ರಚಾರ ಮಾಡುತ್ತೇನೆ. ಅವರಿಗೆ ನನ್ನನ್ನು ಹಾಗೂ ಸಿದ್ದರಾಮಯ್ಯ ಅವರನ್ನು ಕಂಡರೆ ಎಷ್ಟು ಭಯವಿದೆ, ಹೇಗೆ ಗಢಗಢನೆ ನಡುಗುತ್ತಿದ್ದಾರೆ ಎಂದು ತಿಳಿದಿದೆ. ಅವರು ಏನಾದರೂ ತಂತ್ರ ಮಾಡಲಿ. ತಂತ್ರಗಾರಿಕೆಯಲ್ಲಿ ನಾವು ಹಿಂದೆ ಉಳಿದಿಲ್ಲ. ಯಾರು ಪ್ರಬಲರು, ಯಾರು ದುರ್ಬಲರು ಎಂದು ಚುನಾವಣೆ ಫಲಿತಾಂಶ ಹೊರಬಂದ ನಂತರ ತಿಳಿಯುತ್ತದೆ. ಬಿಜೆಪಿಯವರು ಕಳೆದ ಮೂರ್ನಾಲ್ಕು ವರ್ಷಗಳಿಂದ ಇಡಿ, ಐಟಿ, ಸಿಬಿಐ ಪ್ರಕರಣಗಳ ಮೂಲಕ ನನಗೆ ಕಿರುಕುಳ ನೀಡುತ್ತಲೇ ಇದ್ದಾರೆ. ನನಗೆ ನಿತ್ಯ ನೋಟೀಸ್ ಬರುತ್ತಲೇ ಇವೆ. ನನ್ನ ಬೆಂಬಲಕ್ಕೆ ರಾಜ್ಯದ ಜನ ಇದ್ದಾರೆ ಎಂದರು.

ಸಿದ್ದರಾಮಯ್ಯ ಮತ್ತೆ ಸಿಎಂ ಆದರೆ ಜನರಿಗೆ ನೆಮ್ಮದಿ

ವ್ಯಾಸರಾಜಪುರದಲ್ಲಿ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಕಾರ್ಡ್ ವಿತರಣೆ



ತಿ.ನರಸೀಪುರ, ಏ.12– ರಾಜ್ಯದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯನವರು ಆಯ್ಕೆಯಾದಲ್ಲಿ ಮಾತ್ರ ಬಡವರು, ದಲಿತರು ಹಾಗೂ ಎಲ್ಲ ವರ್ಗದ ಜನರು ನೆಮ್ಮದಿಯ ಜೀವನ ಸಾಗಿಸಲು ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಅಭಿಪ್ರಾಯಪಟ್ಟಿದ್ದಾರೆ.

ತಾಲೂಕಿನ ವ್ಯಾಸರಾಜಪುರ ಗ್ರಾಮದ ಡಾ.ಬಾಬು ಜಗಜೀವನರಾಂ ಭವನದಲ್ಲಿ ಕರೆಯಲಾಗಿದ್ದ ಆದಿ ಜಾಂಬವ ಜನಾಂಗದ ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಕಾರ್ಡ್ ವಿತರಿಸಿ, ಡಾ.ಎಚ್.ಸಿ. ಮಹದೇವಪ್ಪ ರವರ ಪರ ಮತಯಾಚಿಸಿ ಅವರು ಮಾತನಾಡಿದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಜಾತ್ಯಾತೀತ ಹಾಗೂ ಪ್ರಶ್ನಾತೀತ ನಾಯಕರಾಗಿದ್ದು ಅವರು ಈ ಬಾರಿ ರಾಜ್ಯದ ಮುಖ್ಯಮಂತ್ರಿಯಾಗಬೇಕು. ಹಾಗಾದಾಗ ಮಾತ್ರವೇ ದೀನ ದಲಿತರು ಮತ್ತು ಹಿಂದುಳಿದವರ ಅಭಿವೃದ್ಧಿ ಸಾಧ್ಯವಾಗಲಿದ್ದು ಅವರನ್ನು ಮುಖ್ಯ ಮಂತ್ರಿ ಮಾಡಲು ಎಲ್ಲ ವರ್ಗದ ಸಮುದಾಯ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕು.ತಿ.ನರಸೀಪುರ ಕ್ಷೇತ್ರದಿಂದ ಸ್ಪರ್ಧಿಸಿರುವ ಡಾ.ಎಚ್.ಸಿ.ಮಹದೇವಪ್ಪರನ್ನು ಗೆಲ್ಲಿಸಿಕೊಡಬೇಕೆಂದು ಮನವಿ ಮಾಡಿದರು.

ಒಳ ಮೀಸಲಾತಿಯ ನಾಟಕ: ಒಳ ಮೀಸಲಾತಿ ಜಾರಿಗೆ ತರುತ್ತೇವೆಂದು ಬಿಜೆಪಿ ಸರ್ಕಾರದವರು ಆಡಿದ ನಾಟಕ ಎಂತಹದ್ದೆಂದರೆ ಕಳೆದ ಮೂರು ವರ್ಷಗಳಿಂದ ಅದರ ಬಗ್ಗೆ ಚಕಾರವೆತ್ತದ ಅವರು ಚುನಾವಣೆ ಸಮೀಪಿಸುತ್ತಿದ್ದ ವೇಳೆ ಸರ್ಕಾರ ಬೀಳುವ ಸಮಯದಲ್ಲಿ ಕ್ಯಾಬಿನೆಟ್ ಮೀಟಿಂಗ್‌ನಲ್ಲಿ ಜಾರಿ ಮಾಡುತ್ತೇವೆಂದು ರೆಷ್ಯುಲೇಷನ್ ಮಾಡಿದರು. ಇವರು ಆಡಿದ ನಾಟಕ ಎಂತಹ ದಡ್ಡನಿಗೂ ಅರ್ಥವಾಗುತ್ತದೆ. ಸದಾಶಿವ ವರದಿ ಬಗ್ಗೆ ಚರ್ಚಿಸಲು ಸರ್ವಪಕ್ಷ ಸದಸ್ಯರ ಸಭೆ ಕರೆಯಬೇಕು, ಅಲ್ಲಿ ಚರ್ಚೆ ನಡೆದು ಪೂರ್ಣ ಪ್ರಮಾಣದ ಒಪ್ಪಿಗೆ ಪಡೆದು ಅದನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಬೇಕು. ಅಲ್ಲಿ ಕೇಂದ್ರ ಸರ್ಕಾರ ಮೀಸಲಾತಿಗೆ ಒಪ್ಪಿಗೆ ಸೂಚಿಸಬೇಕು. ಆದರೆ ಇದ್ಯಾವ ಪ್ರಕ್ರಿಯೆಗಳು ನಡೆದಿಲ್ಲ. ಅವರ ಸಚಿವ ಸಂಪುಟದ ಮಾಧುಸ್ವಾಮಿಯವರೇ ಸದಾಶಿವ ಆಯೋಗಕ್ಕೆ ಒಪ್ಪಿಗೆ ಸೂಚಿಸಿಲ್ಲ ಎಂದು ಹೇಳಿದ್ದಾರೆ. ಹಾಗಾಗಿ ಸದಾಶಿವ ಆಯೋಗ ಜಾರಿಗೆ ಬರುವುದಿಲ್ಲ. ಮೀಸಲಾತಿ ಪ್ರಕಟ ಕೇವಲ ಜನರ ಮೂಗಿಗೆ ತುಪ್ಪ ಸವರುವ ಕೆಲಸ ಎಂದು ವ್ಯಂಗ್ಯವಾಡಿದರು.

ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಸಮಿತಿ ವಕ್ತಾರ ಹುಣಸೂರು ಬಸವಣ್ಣ, ತಾ.ಪಂ. ಮಾಜಿ ಸದಸ್ಯರಾದ ಕೆಬ್ಬೆ ಶಿವಸ್ವಾಮಿ, ಜವರಯ್ಯ, ರಂಗಪ್ಪ, ಗ್ರಾಪಂ ಸದಸ್ಯ ವಿಜಾಪುರ ಶಿವಶಂಕರ್, ವಕೀಲ ರಂಗನಾಥ್, ಗ್ರಾಪಂ ಮಾಜಿ ಸದಸ್ಯೆ ಭಾಗ್ಯ, ಸಿದ್ದರಾಜು, ಜ್ಞಾನೇಶ್, ಶಿವರಾಜ್, ಲಕ್ಷ್ಮಣ, ಅಣ್ಣಯ್ಯ, ನಿಂಗರಾಜು, ಮಲ್ಲೇಶ್, ರಮೇಶ್, ಸಂದೀಪ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

> ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ನೀಡುವ ಮೂಲಕ ಮತ್ತೊಮ್ಮೆ ಸಿದ್ದರಾಮಯ್ಯನವರನ್ನು ಮುಖ್ಯಮಂತ್ರಿ ಮಾಡಬೇಕಿದೆ. ಕ್ಷೇತ್ರದಿಂದ ಅಭಿವೃದ್ಧಿಯ ಹರಿಕಾರರಾಗಿರುವ ಡಾ.ಎಚ್.ಸಿ. ಮಹದೇವಪ್ಪನವರು ಸ್ಪರ್ಧಿಸಿದ್ದು, ಅವರ ಗೆಲುವು ತಂದು ಕೊಡುವ ಜವಾಬ್ದಾರಿ ನಮ್ಮ ಸಮಾಜದ ಮೇಲಿದೆ. ಸಚಿವರಾಗಿದ್ದ ವೇಳೆ ಸಮುದಾಯಕ್ಕೆ ಮಹದೇವಪ್ಪ ನೀಡಿರುವ ಕೊಡುಗೆ ಮರೆಯುವಂತಿಲ್ಲ. ಹಾಗಾಗಿ ಅವರ ಋಣ ತೀರಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಕಳೆದ ಚುನಾವಣೆಯಲ್ಲಿ ಆಗಿದ್ದ ವ್ಯತ್ಯಾಸವನ್ನು ಸರಿಪಡಿಸಿಕೊಂಡು ಈ ಚುನಾವಣೆಯಲ್ಲಿ ಮಹದೇವಪ್ಪರನ್ನು ಗೆಲ್ಲಿಸುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬೋಣ
>
> —ಹುಣಸೂರು ಬಸವಣ್ಣ, ಕಾಂಗ್ರೆಸ್ ವಕ್ತಾರ.

800 ಮುಸ್ಲಿಂ ಕುಟುಂಬಗಳಿಗೆ ಆಹಾರ ಕಿಟ್ ವಿತರಣೆ



ಕೆ.ಆರ್.ನಗರ, ಏ.12– ಅಲ್ಲಾ ಹೇಳಿದಂತೆ ಸರ್ವರನ್ನು ಸಮನಾಗಿ ಕಾಣುವ ಮತ್ತು ತನ್ನ ಸಂಪಾದನೆಯಲ್ಲಿ ಒಂದಿಷ್ಟು ಹಣವನ್ನು ಹಸಿದವರಿಗೆ ಸಹಾಯ ಮಾಡಿ ಎಂಬ ಆದೇಶವನ್ನು ಪಾಲಿಸುತ್ತಾ ಬಂದಿರುವ ನಾನು ನಮ್ಮ ಸಮುದಾಯದ ಪಟ್ಟಣದ ಮುಸ್ಲಿಂರಿಗೆ 13 ಪದಾರ್ಥಗಳನ್ನೊಳಗೊಂಡ ಆಹಾರ ಕಿಟ್ ಅನ್ನು ವಿತರಿಸುತ್ತಿದ್ದೇನೆ ಎಂದು ಸಮಾಜ ಸೇವಕ ಮೂಳೆತಜ್ಞ ಡಾ॥ ಮೆಹಬೂಬ್‌ಖಾನ್ ಹೇಳಿದರು

ಪಟ್ಟಣದ ಆರ್.ಕೆ.ಎಫ್ ಸಮುದಾಯ ಭವನದಲ್ಲಿ 800 ಮುಸ್ಲಿಂ ಕುಟುಂಬಗಳಿಗೆ ಆಹಾರ ಕಿಟ್ ವಿತರಿಸಿ ಮಾತನಾಡಿದ ಅವರು, 10 ಕೆ.ಜಿ ಅಕ್ಕಿ, ಎಣ್ಣೆ, ಬೇಳೆ, ಮಸಾಲೆ ಪದಾರ್ಥ ಸೇರಿದಂತೆ ವಿವಿಧ ಬಗೆಯ 13 ಪದಾರ್ಥಗಳನ್ನು ಪ್ರತಿ ವರ್ಷದಂತೆ ಈ ವರ್ಷವು ವಿತರಿಸುತ್ತಿದ್ದು, ತಿಂಗಳ ಪೂರ್ತಿ ಉಪವಾಸವಿರುವ ನನ್ನ ಸಮುದಾಯಕ್ಕೆ ಆ ಅಲ್ಲಾ ಒಳ್ಳೆಯದು ಮಾಡಲಿ ಎಂದು ಪ್ರಾರ್ಥಿಸಿದರು.

ನಾನು ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೇ ಬಡವರಿಗೆ ಸಹಾಯ ಮಾಡುತ್ತ ಬಂದಿದ್ದೇನೆ. ಕೆಲವರು ಉದ್ದೇಶಪೂರ್ವಕವಾಗಿ ಆಸೆ ಆಕಾಂಕ್ಷೆಗಳನ್ನು ಇಟ್ಟುಕೊಂಡು ಸಹಾಯ ಮಾಡುತ್ತಾರೆ ಎಂದ ಅವರು, ಇದೇ ಸಂದರ್ಭದಲ್ಲಿ ರಾಜ್ಯಕ್ಕೆ ಮಳೆ ಬೆಳೆ ಆಗುವುದರ ಜೊತೆಗೆ ಜನರು ಸಂವೃದ್ಧಿಯಿಂದ ಸಾಮರಸ್ಯ ಜೀವನ ಸಾಗಿಸಲ್ಲಿ ಎಂದು ಪ್ರಾರ್ಥಿಸುತ್ತೇನೆ ಎಂದರು. ಈ ಸಂದರ್ಭದಲ್ಲಿ ಮಾಜಿ ಪುರಸಭಾ ಸದಸ್ಯ ಸೈಯದ್ ಅಸ್ಲಾಂ, ಎಜದ್ ಅಹಮದ್, ಸಾಕೀರ್, ನಜಿಬ್ ಹುಸೇನ್, ಮೋಹನ್‌ರಾವ್ ಸೇರಿದಂತೆ ಇನ್ನಿತರರು ಹಾಜರಿದ್ದರು.

ನಗರಸಭಾ ಪಕ್ಷೇತರ ಸದಸ್ಯೆ ಬಿಜೆಪಿ ಪಕ್ಷ ಸೇರ್ಪಡೆ



ನಂಜನಗೂಡು, ಏ.12– ಬಿಜೆಪಿ ಪಕ್ಷ ಒಳಮೀಸಲಾತಿಯನ್ನು ಜಾರಿಗೊಳಿಸಿರುವುದನ್ನು ಮೆಚ್ಚಿ ಪಕ್ಷೇತರರಾಗಿ ಆಯ್ಕೆಯಾಗಿದ್ದ ನಗರಸಭಾ ಸದಸ್ಯೆ ಮಂಗಳಮ್ಮನವರು ಶಾಸಕ ಬಿ.ಹರ್ಷವರ್ಧನ್ ನೇತೃತ್ವದಲ್ಲಿ ಬಿಜೆಪಿ ಪಕ್ಷವನ್ನು ಸೇರ್ಪಡೆಗೊಂಡರು.

ನಗರದ ಅಶೋಕಪುರಂ ಬಡಾವಣೆಯ ಮಂಗಳಮ್ಮ ಅವರ ನಿವಾಸಕ್ಕೆ ತೆರಳಿದ ಶಾಸಕ ಬಿ.ಹರ್ಷವರ್ಧನ್ ಬಿಜೆಪಿ ಪಕ್ಷದ ಶಾಲು ಹೊದಿಸುವ ಮೂಲಕ ಪಕ್ಷಕ್ಕೆ ಆತ್ಮೀಯವಾಗಿ ಬರಮಾಡಿಕೊಂಡರು. ನಂತರ ಮಾತನಾಡಿದ ಶಾಸಕರು, ಬಿಜೆಪಿ ಸರ್ಕಾರ ಎಡಗೈ ಸಮುದಾಯದ ಮಾದಿಗ ಜನಾಂಗಕ್ಕೆ ದಶಕಗಳ ಕನಸಾಗಿದ್ದ ಒಳಮೀಸಲಾತಿಯನ್ನು ಜಾರಿಗೊಳಿಸಿರುವುದು ಸಂತೋಷವಾಗಿದೆ. ವಿರೋಧ ಪಕ್ಷಗಳವರು ಚುನಾವಣಾ ಸಮಯದಲ್ಲಿ ಒಳಮೀಸಲಾತಿಯನ್ನು ನೀಡುವುದಾಗಿ ಹೇಳಿ ಸಮುದಾಯವನ್ನು ಬಳಸಿಕೊಂಡು ವಂಚನೆ ಎಸಗುತ್ತಿತ್ತು. ಆದರೆ ಬಿಜೆಪಿ ಪಕ್ಷ ಒಳಮೀಸಲಾತಿಯನ್ನು ಜಾರಿಗೊಳಿಸಿ ರಾಜ್ಯಪಾಲರ ಅಂಕಿತ ಹಾಕಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ ಎಂದರು.

ಈ ಕಾರ್ಯವನ್ನು ಮೆಚ್ಚಿ ನಗರಸಭಾ ಪಕ್ಷೇತರ ಸದಸ್ಯೆಯಾದ ಮಂಗಳಮ್ಮ ಪಕ್ಷ ಸೇರ್ಪಡೆಗೊಂಡಿರುವುದು ಪಕ್ಷಕ್ಕೆ ಆನೆ ಬಲ ಬಂದಂತಾಗಿದೆ. ಈ ಚುನಾವಣೆಯಲ್ಲಿ ಪಕ್ಷದ ಪರವಾಗಿ ಕೆಲಸ ಮಾಡುವ ಮೂಲಕ ಬಿಜೆಪಿ ಗೆಲುವಿಗೆ ಶ್ರಮಿಸಲಿದ್ದಾರೆ ಎಂದರು.

ನಗರಸಭಾ ಸದಸ್ಯೆ ಮಂಗಳಮ್ಮ ಮಾತನಾಡಿ, ಬಿಜೆಪಿ ಪಕ್ಷ ಮಾದಿಗ ಸಮುದಾಯಕ್ಕೆ ಒಳಮೀಸಲಾತಿ ಜಾರಿಗೊಳಿಸಿರುವುದನ್ನು ಮೆಚ್ಚಿ ಬಿಜೆಪಿ ಪಕ್ಷಕ್ಕೆ ಬೆಂಬಲ ನೀಡಿ ಶಾಸಕ ಬಿ.ಹರ್ಷವರ್ಧನ್‌ರವರನ್ನು ಗೆಲ್ಲಿಸುವ ಸಲುವಾಗಿ ಪಕ್ಷ ಸೇರ್ಪಡೆಗೊಂಡಿದ್ದೇನೆ ಎಂದರು.

ಇದೇ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯರಾದ ಸಿ.ಚಿಕ್ಕರಂಗನಾಯಕ, ಬಿಜೆಪಿ ನಗರಾಧ್ಯಕ್ಷ ಶ್ರೀನಿವಾಸರೆಡ್ಡಿ, ನಗರಸಭಾ ಸದಸ್ಯರಾದ ಮಹದೇವಪ್ರಸಾದ್, ಬಾಲಚಂದ್ರ, ಮುಖಂಡರಾದ ಮುರುಗೇಶ್, ಸಿದ್ದರಾಜು, ಕುಮಾರ್, ಆನಂದ್, ವಾಸು, ಲೋಕೇಶ್, ಹೇಮಂತ್, ಮನೀಶ್, ಬಸಪ್ಪ ಸೇರಿದಂತೆ ಹಲವಾರು ಮುಖಂಡರು ಇದ್ದರು.

ಸ್ಥಳೀಯನಾದ ನನಗೆ ಕ್ಷೇತ್ರದ ಜನರ ಬೆಂಬಲವಿದೆ...

ಬಿಜೆಪಿ ಅಭ್ಯರ್ಥಿ ಡಾ.ರೇವಣ್ಣ ಶ್ರೀ ಗುಂಜಾನರಸಿಂಹ ಸ್ವಾಮಿಗೆ ಪೂಜೆ



ತಿ.ನರಸೀಪುರ.ಏ.12– ಕ್ಷೇತ್ರದ ಮಹಾ ಜನತೆಯ ಆಶಯಕ್ಕೆ ಪೂರಕವಾಗಿ ಸ್ಥಳೀಯ ಅಭ್ಯರ್ಥಿಗೆ ಬಿಜೆಪಿ ಟಿಕೆಟ್ ನೀಡಿದ್ದು ಪಕ್ಷಾತೀತವಾಗಿ ಜನತೆ ನನ್ನನ್ನು ಬೆಂಬಲಿಸಲಿದ್ದಾರೆ ಎಂದು ತಿ.ನರಸೀಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ರೇವಣ್ಣ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಹೈಕಮಾಂಡ್ ಟಿಕೆಟ್ ಘೋಷಣೆ ಮಾಡಿದ ಹಿನ್ನೆಲೆಯಲ್ಲಿ ಬುಧವಾರ ತಮ್ಮ ಅಪಾರ ಅಭಿಮಾನಿ ಕಾರ್ಯಕರ್ತರೊಂದಿಗೆ ಶ್ರೀ ಗುಂಜಾನರಸಿಂಹ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ನಂತರ ಪತ್ರಕರ್ತರೊಂದಿಗೆ ಅವರು ಮಾತನಾಡಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ ಬೊಮ್ಮಾಯಿ ಹಾಗೂ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರು ಸ್ಥಳೀಯ ವ್ಯಕ್ತಿಯಾದ ನನಗೆ ಸೇವೆಯನ್ನು ಗುರುತಿಸಿ ತಿ.ನರಸೀಪುರ ಕ್ಷೇತ್ರಕ್ಕೆ ಅಭ್ಯರ್ಥಿಯನ್ನಾಗಿ ಮಾಡಿದ್ದಾರೆ. ಕ್ಷೇತ್ರದ ಮಹಾ ಜನತೆಯ ಆಕಾಂಕ್ಷೆ ಸಹ ಸ್ಥಳೀಯ ವ್ಯಕ್ತಿಯೇ ಅಭ್ಯರ್ಥಿ ಆಗಬೇಕೆಂಬುದಾಗಿತ್ತು ಹಾಗಾಗಿ ಜನತೆ ನನಗೆ ಆಶೀರ್ವಾದ ಮಾಡಿದರೆ ದಿನದ 24 ಗಂಟೆಯೂ ತಾಲೂಕಿನ ಜನತೆಯ ಸೇವೆ ಮಾಡಲು ಸಿದ್ಧನಿದ್ದೇನೆ ಎಂದರು.

ಈ ಹಿಂದೆ ಪಕ್ಷಕ್ಕೆ ಸೇರ್ಪಡೆಯಾದಾಗ ಗ್ರಾಮಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಗ್ರಾಮಸ್ಥರು ಪ್ರೀತಿ ವಿಶ್ವಾಸದಿಂದ ಸ್ವಾಗತ ಮಾಡಿದ್ದರು. ಸ್ಥಳೀಯರು ಅಭ್ಯರ್ಥಿಯಾದರೇ ನಾವೆಲ್ಲರೂ ಪಕ್ಷಾತೀತವಾಗಿ ಜಾತ್ಯಾತೀತವಾಗಿ ಬೆಂಬಲ ನೀಡುತ್ತೇವೆ ಎಂದು ಭರವಸೆ ನೀಡಿದ್ದರು.ಅದರಂತೆ ಈಗ ಸ್ಥಳೀಯನಾದ ನನಗೆ ಟಿಕೆಟ್ ದೊರಕಿದೆ.ಕ್ಷೇತ್ರದ ಜನತೆಯ ಸಹಕಾರದಿಂದ ಈ ಬಾರಿ ಕ್ಷೇತ್ರದಲ್ಲಿ ಬಿಜೆಪಿ ಪಕ್ಷ ಗೆದ್ದು ಇತಿಹಾಸ ನಿರ್ಮಾಣ ಮಾಡಲಿದೆ ಎಂದರು.

ಕ್ಷೇತ್ರದ ಮತದಾರರು ಪ್ರಬುದ್ಧರು, ವಿಚಾರವಂತರು!: ಚುನಾವಣೆ ಎಂದ ಮೇಲೆ ಸೋಲು ಗೆಲುವು ಸಹಜ.ನಮ್ಮ ಕ್ಷೇತ್ರದ ಮತದಾರರು ಪ್ರಬುದ್ಧರಿದ್ದಾರೆ, ವಿಚಾರವಂತರು, ಬುದ್ಧಿವಂತರಿದ್ದಾರೆ, ಅವರು ಈ ಹಿಂದೆ ನಡೆದ ಚುನಾವಣೆಯಲ್ಲಿ ತೆಗೆದುಕೊಂಡಿರುವ ನಿರ್ಧಾರಗಳನ್ನು ಗಮನಿಸಿದಾಗ ಯಾವುದೇ ಆಮಿಷಗಳಿಗೆ ಬಲಿಯಾಗದೇ ಅಭ್ಯರ್ಥಿ ಆಯ್ಕೆ ಮಾಡಿದ್ದಾರೆ. ಹಾಗಾಗಿ ಅವರಿಗೆ ಬೇಕಿರುವುದು ದಿನದ 24 ಗಂಟೆಯೂ ಪ್ರಾಮಾಣಿಕವಾಗಿ ಕೆಲಸ ಮಾಡುವ ಜನಪ್ರತಿನಿಧಿ.ಈ ಬಾರಿ ಖಂಡಿತ ಬದಲಾವಣೆಯಾಗಲಿದ್ದು ಕ್ಷೇತ್ರದ ಜನತೆ ನನಗೆ ಆಶೀರ್ವಾದ ಮಾಡಲಿದ್ದಾರೆ ಎಂದು ಭರವಸೆ ವ್ಯಕ್ತಪಡಿಸಿದರು.

ಟಿಕೆಟ್ ಆಕಾಂಕ್ಷಿಗಳ ವಿಶ್ವಾಸ ಪಡೆಯುತ್ತೇನೆ: ಕ್ಷೇತ್ರದ ಅಭ್ಯರ್ಥಿಯಾಗುವ ಆಶಯ ಹೊಂದಿದ್ದ ಡಾ.ಭಾರತೀಶಂಕರ್, ದಾಸಯ್ಯ, ಸಿ.ರಮೇಶ್, ಕರೋಹಟ್ಟಿ ಮಹದೇವಯ್ಯ ಅವರು ಪಕ್ಷ ಕಟ್ಟಿದಂತಹ ಹಿರಿಯ ನಾಯಕರು. ಇವರೆಲ್ಲರ ವಿಶ್ವಾಸ ಪಡೆಯುತ್ತೇನೆ. ಕ್ಷೇತ್ರವನ್ನು ಬಿಜೆಪಿ ತೆಕ್ಕೆಗೆ ಪಡೆಯಲು ಇವರೆಲ್ಲರ ಸಹಕಾರ ಪಡೆದು ಎಲ್ಲರೂ ಒಗ್ಗಟ್ಟಿನಿಂದ ವರಿಷ್ಠರ ಸೂಚನೆ ಮೇರೆಗೆ ಕೆಲಸ ಮಾಡುತ್ತೇವೆ ಎಂದು ರೇವಣ್ಣ ತಿಳಿಸಿದರು.

ಕ್ಷೇತ್ರಾಧ್ಯಕ್ಷ ಕೆ.ಸಿ.ಲೋಕೇಶ್ ನಾಯಕ್, ತಾಪಂ ಮಾಜಿ ಸದಸ್ಯರಾದ ಬಸವರಾಜು, ಪುರಸಭಾ ಸದಸ್ಯ ಎಸ್.ಕೆಕಿರಣ್, ಕೈಬೆಹುಂಡಿ ಶಿವಕುಮಾರ್, ಶ್ರೀ ಸಾಯಿ ಮೊಬೈಲ್ ಮಾದೇಶ್, ಯುವ ಮೋರ್ಚಾ ಅಧ್ಯಕ್ಷ ಶಿವು, ಉಪಾಧ್ಯಕ್ಷ ಸಿ.ಬಿ ಹುಂಡಿ ಸಿದ್ದು, ಎಸ್‌ಟಿ ಮೋರ್ಚಾ ಉಪಾಧ್ಯಕ್ಷ ಮಹೇಶ್, ಶಕ್ತಿ ಕೇಂದ್ರದ ಅಧ್ಯಕ್ಷ ಅರವಿಂದ, ಪುಟ್ಟಸ್ವಾಮಿ, ಮುಖಂಡರಾದ ಎಸ್‌ಎಮ್‌ಆರ್ ಪ್ರಕಾಶ್, ನಂದನ್, ಸಿದ್ದರಾಜು, ವಿರೂಪಾಕ್ಷ, ಶಿವು, ಶೇಖರಪ್ಪ, ಹರೀಶ್, ಜಾಲಹಳ್ಳಿ ಯೋಗೇಶ್, ದಯಾನಂದ್, ಪಟೇಲ್, ರಂಗಸ್ವಾಮಿ, ಮೂರ್ತಿ, ನಿಖಿಲ್, ಸಂತೋಷ್, ಗಿರೀಶ್, ನಟೇಶ್, ನಿವೃತ್ತ ಅಧಿಕಾರಿ ನಿಂಗಯ್ಯ, ಶಿವಣ್ಣ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಯುವ ಮುಖಂಡರು ಹಾಜರಿದ್ದರು.

ತಾಲೂಕಿನ ಜನರು ಹರೀಶ್‌ಗೌಡರ ಕೈ ಬಿಡಲ್ಲ

ಜಿಪಂ ಮಾಜಿ ಸದಸ್ಯೆ ಲಲಿತಾ ಜಿ.ಟಿ.ದೇವೇಗೌಡ ವಿಶ್ವಾಸ



ಹುಣಸೂರು, ಏ.12– ಹುಣಸೂರು ತಾಲೂಕಿನ ಜನತೆ ಜಿ.ಡಿ.ಹರೀಶ್‌ಗೌಡರ ಕೈ ಬಿಡುವುದಿಲ್ಲ ಎಂಬ ನಂಬಿಕೆ ಇದೆ. ಆದರೆ ಪಕ್ಷದ ನಿಷ್ಠಾವಂತ ಕಾರ್ಯಕರ್ತರು ತಳಮಟ್ಟದಲ್ಲಿ ಶ್ರಮಿಸಬೇಕಿದೆ ಎಂದು ಜಿ.ಪಂ ಮಾಜಿ ಸದಸ್ಯೆ ಲಲಿತಾ ಜಿ.ಟಿ.ದೇವೇಗೌಡ ಮನವಿ ಮಾಡಿದರು.

ತಾಲೂಕಿನ ಉಂಡವಾಡಿ ಗ್ರಾಮದ ಜೆಡಿಎಸ್ ಕಾರ್ಯಕರ್ತರ ಚುನಾವಣೆ ಸಭೆಯಲ್ಲಿ ಮಾತನಾಡಿದ ಅವರು, ಜೆಡಿಎಸ್ ಪಕ್ಷದಲ್ಲಿ ದುಡಿಯುವ ಯುವ ಮನಸ್ಸುಗಳು ಉತ್ಸಾಹದಿಂದ ಮುಂದೆ ಬರುತ್ತಿದ್ದು, ಪಕ್ಷಕ್ಕೆ ಬಲ ಬಂದಂತಾಗಿದೆ. ತಾಲೂಕಿನ ಸಮಗ್ರ ಅಭಿವೃದ್ಧಿಗೆ ಪಣತೊಟ್ಟು ನಿಂತಿರುವ ಹರೀಶ್ ಗೌಡ ಗೆಲುವಿಗೆ ನಿಮ್ಮೆಲ್ಲರ ಸಹಕಾರ ಅಗತ್ಯವಿದೆ ಎಂದರು.

ರಾಜ್ಯದಲ್ಲಿ ಕುಮಾರಸ್ವಾಮಿಯವರು ಮುಖ್ಯಮಂತ್ರಿ ಆಗಲಿದ್ದು, ಜಿಲ್ಲೆ ಮತ್ತು ತಾಲೂಕಿನ ಅಭಿವೃದ್ಧಿ ಶರವೇಗದಲ್ಲಿ ಸಾಗಲಿದೆ. ಜಿ.ಟಿ.ದೇವೇಗೌಡರು ಕೂಡ ಸಚಿವರಾಗಲಿದ್ದು, ನಿಮ್ಮ ಕೈಗೆ ಅಧಿಕಾರ ಸಿಗಲಿದೆ. ಇತ್ತೀಚೆಗೆ ನಮ್ಮ ಪಕ್ಷಕ್ಕೆ ಎಲ್ಲೆಡೆ ಉತ್ತಮ ಸ್ಪಂದನೆ ಇದೆ. ಅದು ನಮ್ಮ ಗೆಲುವಿಗೆ ಸಹಕಾರಿಯಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಗ್ರಾಮದ ಶ್ರೀನಿವಾಸ್ ಶಿವಣ್ಣ, ಬಾಚಹಳ್ಳಿ ಶ್ರೀನಿವಾಸ್, ರಾಮಕೃಷ್ಣೇಗೌಡ, ಉಂಡವಾಡಿ ಮಾದೇವ್, ಸತೀಶ್ ಪಾಪಣ್ಣ, ವೆಂಕಟೇಶ ಕದಂಬ, ಕಿರಜಾಜಿ ಮಹದೇವ್, ಉಂಡವಾಡಿ ಸಿ. ಚಂದ್ರೇಗೌಡ, ಶಂಕರ್ ಇನ್ನೂ ಹಲವಾರು ಮುಖಂಡರು ಇದ್ದರು.



ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಸರಗೂರು ಪೋಲೀಸರು ಹಾಗೂ ಸಿಐಎಸ್‌ಎಫ್ ತಂಡ ಪಥ ಸಂಚಲನ ನಡೆಸಿದರು. ಹುಣಸೂರು ಡಿವೈಎಸ್ಪಿ ಎಂ.ಕೆ. ಮಹೇಶ್, ಸಬ್ ಇನ್ಸ್‌ಪೆಕ್ಟರ್ ಎಂ.ಲಕ್ಷ್ಮಿಕಾಂತ್, ಶಬ್ಬೀರ್ ಹುಸೇನ್, ಶ್ರವಣ ದಾಸ್ ರೆಡ್ಡಿ, ರವಿಶಂಕರ್ ಸೇರಿದಂತೆ ಸರಗೂರು ಪೊಲೀಸ್ ಠಾಣಾ ಸಿಬ್ಬಂದಿ ಭಾಗವಹಿಸಿದ್ದರು.

ಎಂ.ರಾಜು ನೇಮಕ



ನಂಜನಗೂಡು, ಏ.12– ಕಾಂಗ್ರೆಸ್ ಸಮಿತಿ ಯಂಗ್ ಬ್ರಿಗೇಡ್ ಸೇವಾದಳದ ತಾಲೂಕು ಅಧ್ಯಕ್ಷರಾಗಿ ಎಂ.ರಾಜು ಅವರನ್ನು ನೇಮಕಗೊಳಿಸಿ ಕೆಪಿಸಿಸಿ ಸೇವಾದಳ ಯಂಗ್ ಬ್ರಿಗೇಡ್ ಅಧ್ಯಕ್ಷ ಪಿ.ಕೆ.ಜುನೈದ್ ಆದೇಶ ಹೊರಡಿಸಿದ್ದಾರೆ ಎಂದು ಪಕ್ಷದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ರಂಗೋಲಿ ಸ್ಪರ್ಧೆ, ಸೆಲ್ಫಿ, ಜಾಥಾದ ಮೂಲಕ ಮತದಾನದ ಬಗ್ಗೆ ಜಾಗೃತಿ



ಹೆಚ್.ಡಿ.ಕೋಟೆ, ಏ.12– ತಾಲೂಕು ಚುನಾವಣಾಧಿಕಾರಿಗಳಿಂದ ಜಾಗೃತ ಮತದಾರರ– ಪ್ರಜಾಪ್ರಭುತ್ವದ ನೇತಾರ ಅಭಿಯಾನ ಜಾಥಾ ಕಾರ್ಯಕ್ರಮ ಪಟ್ಟಣದಲ್ಲಿ ನಡೆಯಿತು. ಮತದಾರರಲ್ಲಿ ಅರಿವು ಮೂಡಿಸುವ ಸಲುವಾಗಿ ಪ್ರತಿನಿತ್ಯ ರಂಗೋಲಿ ಸ್ಪರ್ಧೆ, ಸೆಲ್ಫಿ ಪಾಯಿಂಟ್ ಮತ್ತು ಜಾಥಾಗಳನ್ನು ನಡೆಸಲಾಗುವುದು.

ತಹಸೀಲ್ದಾರ್ ಕಚೇರಿ, ತಾಲೂಕು ಪಂಚಾಯಿತಿ, ಪುರಸಭಾ ಹಾಗೂ ಗ್ರಾಮ ಪಂಚಾಯಿತಿ ವತಿಯಿಂದ ನಡೆದ ಅಭಿಯಾನ ಕಾರ್ಯಕ್ರಮ ಪುರಸಭಾ ಆವರಣದಿಂದ ತಹಸೀಲ್ದಾರ್ ಪಿ.ಎನ್. ಮಹೇಶ್, ಇಓ ಜೆರಾಲ್ಡ್ ರಾಜೇಶ್ ಹಾಗೂ ಪುರಸಭಾ ಮುಖ್ಯಾಧಿಕಾರಿ ಪಿ.ಸುರೇಶ್ ನೇತೃತ್ವದಲ್ಲಿ ಪುರಸಭಾ ನೌಕರರು ಹಾಗೂ ಸಿಬ್ಬಂದಿಗಳು, ಗ್ರಾಮ ಪಂಚಾಯಿತಿ ನೌಕರರು ಮತ್ತು ತಾಲೂಕು ಪಂಚಾಯಿತಿ ನೌಕರರ ಜೊತೆ ನಡೆಯಿತು.

ಮೊದಲಿಗೆ ಪುರಸಭಾ ಆವರಣದಲ್ಲಿ ಪ್ರಜಾಪ್ರಭುತ್ವದ ಪ್ರತಿಜ್ಞಾ ವಿಧಿ ಬೋಧಿಸಿ ನಂತರ ಬಾಪೂಜಿ ವೃತ್ತ ಹಾಗೂ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದ ಮುಂಭಾಗ ಮಾನವ ಸರಪಳಿ ನಿರ್ಮಿಸಿ ಅಲ್ಲೂ ಕೂಡ ಪ್ರತಿಜ್ಞಾ ವಿಧಿ ಬೋಧಿಸುವ ಮೂಲಕ ಜನರಲ್ಲಿ ಮತದಾನದ ಬಗ್ಗೆ ಅರಿವು ಮೂಡಿಸಿದರು.

ಇದೇ ಸಂದರ್ಭದಲ್ಲಿ ತಹಸೀಲ್ದಾರ್ ಪಿ. ಎನ್.ಮಹೇಶ್ ಮಾತನಾಡಿ, ಕಡ್ಡಾಯವಾಗಿ ಮತದಾನದಲ್ಲಿ ಪ್ರತಿಯೊಬ್ಬರೂ ಭಾಗಿಯಾಗಿ ಶೇಕಡ ನೂರರಷ್ಟು ಮತದಾನ ಆಗಬೇಕು ಎಂಬುದು ಸರ್ಕಾರದ ಉದ್ದೇಶ. ಹಾಗಾಗಿ ಈಗಾಗಲೇ ತಾಲೂಕಿನ ಪ್ರತಿಯೊಂದು ಗ್ರಾಮಗಳಲ್ಲಿ ಗ್ರಾಮ ಪಂಚಾಯಿತಿ ಹಾಗೂ ಕಂದಾಯ ಇಲಾಖೆಯ ಸಹಯೋಗದಲ್ಲಿ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಲಾಗಿದೆ. ಅದೇ ರೀತಿ ಸರಗೂರು ಪಟ್ಟಣ ಪಂಚಾಯಿತಿ ಹಾಗೂ ಎಚ್.ಡಿ.ಕೋಟೆ ಪುರಸಭಾ ವ್ಯಾಪ್ತಿಯಲ್ಲಿ ಗೋಡೆ ಬರಹ, ಕರಪತ್ರ ಹಂಚಿಕೆ ಮಾಡಿ ಜನರಲ್ಲಿ ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿ ಮತದಾನ ಮಾಡಬೇಕು ಎಂಬುದು ಅಭಿಯಾನದ ಉದ್ದೇಶ ಎಂದು ತಿಳಿಸಿದರು.

ಇಓ ಜೆರಾಲ್ಡ್ ರಾಜೇಶ್ ಮಾತನಾಡಿ, ಎಚ್.ಡಿ.ಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ 39 ಗ್ರಾಮ ಪಂಚಾಯಿತಿ, ಒಂದು ಪಟ್ಟಣ ಪಂಚಾಯಿತಿ ಹಾಗೂ ಒಂದು ಪುರಸಭೆಯಲ್ಲಿ ನಿರಂತರವಾಗಿ ಜಾಗೃತಿ ಅಭಿಯಾನ ಮಾಡಲಾಗುತ್ತದೆ, ಯಾವ ಬೂತ್‌ನಲ್ಲಿ ಕಡಿಮೆ ಮತದಾನ ಆಗಿದೆ ಅಲ್ಲಿ ಶೇಕಡಾ 80 ರಷ್ಟು ಹೆಚ್ಚುವರಿಯಾಗಿ ಮತದಾನ ಆಗಬೇಕು ಎಂಬುದು ನಮ್ಮ ಗುರಿಯಾಗಿರುತ್ತದೆ, ಪ್ರತಿಯೊಬ್ಬರೂ ಮತದಾನ ಮಾಡಬೇಕು ಎಂಬುದು ನಮ್ಮ ಉದ್ದೇಶವಾಗಿದೆ.

ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ, ಪುರಸಭಾ ಹಾಗೂ ಪಟ್ಟಣ ಪಂಚಾಯಿತಿ ವತಿಯಿಂದ ಮತದಾನ ಮುಗಿಯುವವರೆಗೂ ನಿರಂತರವಾಗಿ ಮತದಾರರಲ್ಲಿ ರಂಗೋಲಿ ಸ್ಪರ್ಧೆ, ಸೆಲ್ಫಿ ಪಾಯಿಂಟ್ ಮಾಡುವ ಮೂಲಕ ಜಾಗೃತಿ ಮೂಡಿಸಲಾಗುತ್ತದೆ. ಹಾಗಾಗಿ ಮತದಾರರ ಪಟ್ಟಿಯಲ್ಲಿ ಇರುವ ಎಲ್ಲರೂ ಮತದಾನದಲ್ಲಿ ಬಿಗಿಯಾಗಿ ಶೇಕಡಾ ನೂರರಷ್ಟು ಮತದಾನ ಮಾಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಪುರಸಭಾ ಮುಖ್ಯಾಧಿಕಾರಿ ಪಿ.ಸುರೇಶ್ ಮಾತನಾಡಿದರು. ಇದೇ ಸಂದರ್ಭದಲ್ಲಿ ಗ್ರೇಡ್–2 ತಹಸೀಲ್ದಾರ್ ಸಣ್ಣರಾಮಪ್ಪ, ಎಇಓ ರಂಗಸ್ವಾಮಿ, ಕಿರಣ್, ಕಂದಾಯ ಅಧಿಕಾರಿ ಮಹೇಶ್, ಗ್ರಾಮ ಲೆಕ್ಕಾಧಿಕಾರಿ ರಾಜೇಶ್, ಪುರಸಭಾ ಕಂದಾಯ ಅಧಿಕಾರಿ ಜಯಶೀಲಾ, ಮಹದೇವಸ್ವಾಮಿ, ಸುಬ್ರಹ್ಮಣ್ಯ, ಕನ್ನಡ ಪ್ರಮೋದ್, ಗ್ರಾಪಂ ನೌಕರರು, ಪುರಸಭಾ ನೌಕರರು ಇದ್ದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1 ಪ್ರವೀಣ (ಕ): ಬೆ.10.30ಕ್ಕೆ, ಗುರುದೇವ್ ಹೊಯ್ಸಳ (ಕ): ಮ.1.05ಕ್ಕೆ, ದಸರಾ (ತೆ): ಮ.3.45ಕ್ಕೆ, ರಾವಣಾಸುರ (ತೆ): ಸಂ.6.55ಕ್ಕೆ, ರಾ.9.45ಕ್ಕೆ.

ಸ್ಕ್ರೀನ್ 2 ದಿ ಸೂಪರ್ ಮಾರಿಯೋ ಬ್ರದರ್ಸ್ ಮೂವಿ (3ಡಿ)(ಇಂ): ಬೆ.11ಕ್ಕೆ, ಮ.1.05ಕ್ಕೆ, ಮ.3.10ಕ್ಕೆ, ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಸಂ.5.10ಕ್ಕೆ, ರಾ.7.30ಕ್ಕೆ, ರಾ.9.45ಕ್ಕೆ.

ಸ್ಕ್ರೀನ್ 3 ರಾಮಾಚಾರಿ 2.0 (ಕ): ಬೆ.10.45ಕ್ಕೆ, ಆಗಸ್ಟ್ 16 1947(ತ): ಮ.1.30ಕ್ಕೆ, ಪೆಂಟಗನ್ (ಕ): ಸಂ.4.20ಕ್ಕೆ, ಗುಮ್ರಾಹ್ (ಹಿಂ): ರಾ.7.30ಕ್ಕೆ, ರಾ.10.10ಕ್ಕೆ.

ಸ್ಕ್ರೀನ್ 4 ಗುರುದೇವ್ ಹೊಯ್ಸಳ (ಕ): ಬೆ.10.50ಕ್ಕೆ, ರಾ.7.40ಕ್ಕೆ, ರಾ.10.15ಕ್ಕೆ, ವೀರಂ (ಕ): ಮ.1.30ಕ್ಕೆ, ಸಂ.4.35ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1 ಗುರುದೇವ್ ಹೊಯ್ಸಳ (ಕ): ಬೆ.10.20ಕ್ಕೆ, ವೀರಂ (ಕ): ಮ.1.05ಕ್ಕೆ, ರಾ.7.15ಕ್ಕೆ, ರಾವಣಾಸುರ (ತೆ): ಸಂ.4.20ಕ್ಕೆ, ರಾ.10.30ಕ್ಕೆ.

ಸ್ಕ್ರೀನ್ 2 ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಬೆ.10.25ಕ್ಕೆ, ದಿ ಸೂಪರ್ ಮಾರಿಯೋ ಬ್ರದರ್ಸ್ ಮೂವಿ (3ಡಿ)(ಇಂ): ಮ.12.45ಕ್ಕೆ, ಸಂ.5.40ಕ್ಕೆ, ರಾ.7.50ಕ್ಕೆ, ರಾಮಾಚಾರಿ 2.0(ಕ): ಮ.2.55ಕ್ಕೆ, ದಸರಾ (ತೆ): ರಾ.10ಕ್ಕೆ.

ಸ್ಕ್ರೀನ್ 3 ವೀರಂ (ಕ): ಬೆ.10.10ಕ್ಕೆ, ರಾವಣಾಸುರ (ತೆ): ಮ.1.25ಕ್ಕೆ, ಗುರುದೇವ ಹೊಯ್ಸಳ (ಕ): ಸಂ.4.20ಕ್ಕೆ, ರಾ.9.50ಕ್ಕೆ, ನಮ್ ನಾಣಿ ಮದುವೆ ಪ್ರಸಂಗ (ಕ): ರಾ.7.05ಕ್ಕೆ.

ಸ್ಕ್ರೀನ್ 4 ಪ್ರವೀಣ (ಕ): ಬೆ.11.10ಕ್ಕೆ, ಗುರುದೇವ ಹೊಯ್ಸಳ (ಕ): ಮ.1.45ಕ್ಕೆ, ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಸಂ.4.30ಕ್ಕೆ, ರಾ.10.20ಕ್ಕೆ, ಪೆಂಟಗನ್ (ಕ): ಸಂ.6.50ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, 1 ರಾಬರಿ ಕಥೆ (ಕ): ಸಂ.4.50ಕ್ಕೆ, ಚೌಕಾಬಾರ (ಕ): ರಾ.7.50ಕ್ಕೆ, ಕ್ರಿಡ್ 3 (ಇಂ): ಬೆ.11.35ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, ತುರಮುಖಂ (ಮ): ರಾ.10.30ಕ್ಕೆ, ಅಜಿಲನ್ ಕಿಂಗ್ ಆಫ್ ದಿ ಓಷನ್ (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಸ್ಕ್ರೀಮ್ 6 (ಇಂ): ಮ.2.45ಕ್ಕೆ, ರಾ.7.45ಕ್ಕೆ, 65 (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ರಾವಣಸುರ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಹೊಯ್ಸಳ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಓನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪ್ರದರ್ಶನ ಇರುವುದಿಲ್ಲ	
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ರಾವಣಸುರ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ವೀರಂ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
1947 (ತ)	4 ಪ್ರದರ್ಶನಗಳು
ಸಂಗಂ	
ರಾವಣಸುರ (ತೆ)	4 ಪ್ರದರ್ಶನಗಳು
ಲಿಡೋ	
ಕಬ್ಜ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ವೀರಂ (ಕ)	4 ಪ್ರದರ್ಶನಗಳು
ಪ್ರಭಾ	
ವೀರಂ (ಕ)	4 ಪ್ರದರ್ಶನಗಳು

ಇದು ನನ್ನ ರಾಜಕೀಯ ಜೀವನದ ಕೊನೆ ಚುನಾವಣೆ: ವಿಜಯಶಂಕರ್



ಪಿರಿಯಾಪಟ್ಟಣ, ಏ.12– ನನ್ನ ಮೇಲೆ ನಂಬಿಕೆ ಇಟ್ಟು ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಘೋಷಿಸಿದ ಕೇಂದ್ರ, ರಾಜ್ಯ, ಜಿಲ್ಲಾ ಮತ್ತು ತಾಲೂಕು ಸಮಿತಿಗೆ ನಾನು ಆಭಾರಿಯಾಗಿದ್ದೇನೆ ಎಂದು ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮಾಜಿ ಸಚಿವ ಸಿ.ಎಚ್. ವಿಜಯಶಂಕರ್ ಹೇಳಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಪಕ್ಷದ ಮುಖಂಡರಿಂದ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ಇದು ನನ್ನ ರಾಜಕೀಯ ಜೀವನದ ಕೊನೆ ಚುನಾವಣೆಯಾಗಿದ್ದು ತಾಲೂಕಿನಾದ್ಯಂತ ಪ್ರಚಾರ ಕೈಗೊಂಡ ವೇಳೆ ಮತದಾರರಿಂದ ಅಭೂತಪೂರ್ವ ಬೆಂಬಲ ವ್ಯಕ್ತವಾಗುತ್ತಿದೆ, ತಾಲೂಕಿನ ಜನತೆ ಈ ಬಾರಿ ಬದಲಾವಣೆ ಬಯಸಿ ನನ್ನ ಗೆಲುವಿಗೆ ಸಹಕರಿಸಲಿದ್ದಾರೆ. ಈ ಮೂಲಕ ಸಂಸತ್ ಚುನಾವಣೆಯಲ್ಲಿ ಸತತ ಮೂರು ಬಾರಿ ಸೋಲುಂಡ ನನ್ನ 14 ವರ್ಷಗಳ ರಾಜಕೀಯ ವನವಾಸ ಅಂತ್ಯವಾಗುವ ಭರವಸೆ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಾನು ಯಾವುದೇ ಲಾಬಿಯ ಹಿಂದೆಯಿಲ್ಲ. ರಿಯಲ್ ಎಸ್ಟೇಟ್, ಮೈನಿಂಗ್ ನನಗೆ ಗೊತ್ತಿಲ್ಲ. ಅದಕ್ಕೂ ನನಗೂ ಯಾವುದೇ ಸಂಬಂಧವಿಲ್ಲ. ರೈತರು ಬಡವರ ಜನಸಾಮಾನ್ಯರ ಪರ ಅಧಿಕಾರವಧಿಯಲ್ಲಿ ಶುದ್ಧ ಆಡಳಿತ ನೀಡಿದ್ದೇನೆ, 2009 ರಲ್ಲಿ ಸಂಸತ್ ಚುನಾವಣೆಯಲ್ಲಿ ಸೋತ ಬಳಿಕ ಬಿ.ಎಸ್. ಯಡಿಯೂರಪ್ಪ ಅವರು ವಿಧಾನಪರಿಷತ್ ಸದಸ್ಯನಾಗಿ ಮಾಡಿ ಅರಣ್ಯ ಸಚಿವನಾಗಿ ಕರ್ತವ್ಯ ನಿರ್ವಹಿಸಲು ಅವಕಾಶ ಮಾಡಿಕೊಟ್ಟರು. ನನ್ನ ಎಲ್ಲಾ ಚುನಾವಣೆಗಳಲ್ಲೂ ಧರ್ಮದ ಆಧಾರದ ಮೇಲೆ ಚುನಾವಣಾ ಕಣದಲ್ಲಿದ್ದೇನೆ, ಪಕ್ಷದಲ್ಲಿನ ಹಿರಿತನ ಹಾಗೂ ಸಾಮಾಜಿಕ ನ್ಯಾಯದ ಆಧಾರದ ಮೇಲೆ ಪಕ್ಷ ನನ್ನನ್ನು ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದು ಪಕ್ಷದ ಪ್ರತಿಯೊಬ್ಬರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಮೂಲಕ ಸಂಘಟನೆಗೆ ಒತ್ತು ನೀಡುತ್ತೇನೆ ಎಂದರು.

ತಾಲೂಕು ಅಧ್ಯಕ್ಷ ಎಂ.ಎಂ. ರಾಜೇಗೌಡ ಅವರು ಮಾತನಾಡಿ, ನಾವು ಯಾರನ್ನು ಗೆಲ್ಲಿಸಲು ಅಥವಾ ಸೋಲಿಸಲು ಚುನಾವಣೆ ಎದುರಿಸುತ್ತಿಲ್ಲ ನಮ್ಮ ಅಭ್ಯರ್ಥಿಯ ಪರ ಮತ ಕೇಳಿ ಗೆಲುವಿಗೆ ಶ್ರಮವಹಿಸಲಿದ್ದೇವೆ ಎಂದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಸ್.ಸಿ.ಬಸವರಾಜ್, ಡಬ್ಲ್ಯೂಎಸ್‌ಎಸ್‌ಬಿ ನಿರ್ದೇಶಕ ಆರ್.ಟಿ. ಸತೀಶ್, ತಂಬಾಕು ಮಂಡಳಿ ನಿರ್ದೇಶಕ ವಿಕ್ರಮ್ ರಾಜ್, ಜಿಲ್ಲಾ ಉಪಾಧ್ಯಕ್ಷ ಅಣ್ಣಪ್ಪ, ಓಬಿಸಿ ಜಿಲ್ಲಾ ಉಪಾಧ್ಯಕ್ಷ ಲೋಕಪಾಲಯ್ಯ, ಜಿಲ್ಲಾ ಕಾರ್ಯದರ್ಶಿ ಕಿರಣ್ ಜಯರಾಮೇಗೌಡ, ತಾಲೂಕು ಮಾಜಿ ಅಧ್ಯಕ್ಷ ಪಿ.ಜೆ. ರವಿ, ಪ್ರಧಾನ ಕಾರ್ಯದರ್ಶಿ ವೀರಭದ್ರ, ಪುರಸಭಾ ಸದಸ್ಯೆ ನಳಿನಿ, ಚುನಾವಣಾ ಉಸ್ತುವಾರಿ ಸುನಿಲ್ ಸುಬ್ರಮಣ್ಯ ಇದ್ದರು.



ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಕಾರ್ಯದರ್ಶಿಯಾಗಿ ಟಿ.ನರಸೀಪುರ ತಾಲೂಕಿನ ಗೋಪಾಲಪುರದ ಮಹೇಶ್ ಅವರನ್ನು ನೇಮಕ ಮಾಡಿ ಆದೇಶ ಪತ್ರವನ್ನು ಜಿಲ್ಲಾಧ್ಯಕ್ಷ ಬಿ.ಜೆ. ವಿಜಯ್‌ಕುಮಾರ್ ನೀಡಿದರು. ಕಾಂಗ್ರೆಸ್ ವಕ್ತಾರ ಹುಣಸೂರು ಬಸವಣ್ಣ ಇದ್ದಾರೆ

ಡಾ.ರಾಜ್ ವ್ಯಕ್ತಿತ್ವ ಎಲ್ಲರಿಗೂ ಮಾದರಿ



ಮೈಸೂರು,ಏ.12–ಚಾಮುಂಡಿಪುರಂ ವೃತ್ತದಲ್ಲಿ ವಿಶ್ವಮಾನವ ಡಾ.ರಾಜಕುಮಾರ್ ಸೇವಾ ಸಮಿತಿ ವತಿಯಿಂದ ವರನಟ ಡಾ. ರಾಜಕುಮಾರ್ ಅವರ 17ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಡಾ.ರಾಜ್ ನೆನಪು ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ಕನ್ನಡದ ಮೇರುನಟ ಡಾ.ರಾಜಕುಮಾರ್ ಅವರಿಗೆ ಪದ್ಮಭೂಷಣ, ದಾದಾಸಾಹೇಬ್ ಫಾಲ್ಕೆ, ಕರ್ನಾಟಕ ರತ್ನ ಹೀಗೆ ಹಲವಾರು ಅತ್ಯುನ್ನತ ಗೌರವ–ಪ್ರಶಸ್ತಿಗಳು ಲಭಿಸಿರುವುದು ಅವರ ವೃತ್ತಿ ಬದುಕಿನ ಸಾಧನೆಗೆ ಕೈಗನ್ನಡಿಯಾಗಿವೆ. ಜೀವಿತದ ಕೊನೆಯವರೆಗೂ ಅಭಿಮಾನಿಗಳನ್ನು ದೇವರೆಂದೇ ನಂಬಿದ ಹಾಗೂ ಸತ್ಯ, ನಿಷ್ಠೆ, ಸಾಮಾಜಿಕ ಬದ್ಧತೆ ಮೇಳೈಸಿಕೊಂಡ ವ್ಯಕ್ತಿತ್ವದ ಡಾ.ರಾಜ್‌ರ ಬಗ್ಗೆ ಜನರಿಗೆ ತಿಳಿಸುವ ಉದ್ದೇಶದಿಂದ ಸರಕಾರ ಡಾ.ರಾಜ್‌ಕುಮಾರ್ ಜಯಂತಿಯನ್ನು ಎರಡು ವರ್ಷಗಳಿಂದ ಆಚರಿಸಿಕೊಂಡು ಬರುತ್ತಿದೆ. ಅವರ ಆದರ್ಶಗಳನ್ನು ನಾವೆಲ್ಲ ಅರ್ಥಪೂರ್ಣವಾಗಿ ಅನುಸರಿಸೋಣ ಎಂದು ನಗರ ಪಾಲಿಕೆ ಸದಸ್ಯ ಮಾವಿ ರಾಮಪ್ರಸಾದ್ ತಿಳಿಸಿದರು.

ಸರಳ, ಸಜ್ಜನ, ನಿಷ್ಠಾವಂತ, ಪ್ರಾಮಾಣಿಕ ಕಲಾವಿದ ಹಾಗೂ ಎಲ್ಲ ಸಮುದಾಯದ ಜನರ ಪ್ರೀತಿಗೆ ಪಾತ್ರರಾದ ಡಾ.ರಾಜಕುಮಾರ್ ಅವರ ವ್ಯಕ್ತಿತ್ವ ಎಲ್ಲರಿಗೂ ಮಾದರಿಯಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಹೇಳಿದರು.

ಅವರು, ತಮ್ಮ ನಟನೆಯ ಮೂಲಕ ಮನೆ ಮಾತಾಗಿ, ಕೋಟ್ಯಾಂತರ ಅಭಿಮಾನಿ ದೇವರ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆದುಕೊಂಡಿದ್ದಾರೆ. ಡಾ.ರಾಜಕುಮಾರ್ ವೃತ್ತಿ ಬದುಕು ನಮಗೆಲ್ಲರಿಗೂ ಮಾದರಿಯಾಗುವಂತಹದ್ದು. ಅವರ ಜೀವನದ ಆದರ್ಶಗಳನ್ನು ತಿಳಿದು ನಮ್ಮ ಜೀವನದಲ್ಲೂ ಅನುಕರಣೆ ಮಾಡಿಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಬಂಗಾರದ ಮನುಷ್ಯ ನಟನೆಗಾಗಿ ಸನ್ಮಾನ ಸ್ವೀಕರಿಸುತ್ತಾ, ನಿಮ್ಮಿಂದಲೇ ನಾನು ಎಂದು ಡಾ.ರಾಜಕುಮಾರ್ ಸದಾ ಜನರನ್ನು ನೆನೆಯುತ್ತಿದ್ದರು. ಸರಳವಾಗಿ ಜೀವಿಸಿದ ಅವರು ಎಂದೂ ದುರಹಂಕಾರ, ಶ್ರೀಮಂತಿಕೆಯ ಅಹಂಕಾರ ತೋರಲಿಲ್ಲ. ಕನ್ನಡ ನಾಡಿನ ಸಾಂಸ್ಕೃತಿಕ ರಾಯಭಾರಿ ಎಂದು ಕರೆಯಲ್ಪಡುವ ಡಾ.ರಾಜಕುಮಾರ್ ಅವರ ಸರಳ ನಡೆ–ನುಡಿಯು ಎಲ್ಲರಿಗೂ ಮಾದರಿಯಾಗಿದೆ ಎಂದರು. ಡಾ. ರಾಜಕುಮಾರ್ ಅಭಿಮಾನಿ ಬಳಗದ ಸಂಸ್ಥಾಪಕ ಅಧ್ಯಕ್ಷರಾದ ರಾಮೇಗೌಡ, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಅಪೂರ್ವ ಸುರೇಶ್, ವಿಶ್ವಮಾನವ ಡಾ.ರಾಜ್ ಅಭಿಮಾನಿ ಬಳಗದ ಅಧ್ಯಕ್ಷ ಸೇತುರಾವ್, ಉಪಾಧ್ಯಕ್ಷರಾದ ರಮೇಶ್, ಕಾರ್ಯದರ್ಶಿ ಸುಚೇಂದ್ರ, ರಾಜೇಂದ್ರ, ರಾಕೇಶ್ ಇನ್ನಿತರರು ಉಪಸ್ಥಿತರಿದ್ದರು.

'ಬಾಲಂಗೋಚಿ ಪುಟಾಣಿಗಳ ಪುಂಡಾಟ' ಶಿಬಿರಕ್ಕೆ ಚಾಲನೆ



ಮೈಸೂರು, ಏ.12(ಜಿಎ)–ಮಕ್ಕಳಿಗೆ ಆಟ ಪಾಠದ ಜೊತೆಗೆ ಕೃಷಿ ಚಟುವಟಿಕೆಯ ಬಗ್ಗೆಯೂ ಅರಿವು ಮೂಡಿಸಬೇಕು ಎಂದು ಕರ್ನಾಟಕ ಕಾವಲು ಪಡೆ ರಾಜ್ಯಾಧ್ಯಕ್ಷ ಎಂ.ಮೋಹನ್ ಕುಮಾರ್‌ಗೌಡ ಅಭಿಪ್ರಾಯಪಟ್ಟರು.

ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ಕುವೆಂಪು ರಂಗಮಂದಿರದಲ್ಲಿ ಅದಮ್ಯ ರಂಗಶಾಲೆ ವತಿಯಿಂದ ಆಯೋಜಿಸಿರುವ 'ಬಾಲಂಗೋಚಿ ಪುಟಾಣಿಗಳ ಪುಂಡಾಟ' ಬೇಸಿಗೆ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಮಕ್ಕಳಿಗೆ ಮಣ್ಣಿನ ಜೊತೆ ಆಟವಾಡುವುದು ಗೊತ್ತಿಲ್ಲ. ಎಲ್ಲರೂ ಮೊಬೈಲ್‌ನಲ್ಲಿ ಮುಳುಗಿರುತ್ತಾರೆ. ಒಂದು ಕಾಲದಲ್ಲಿ ಮೊಬೈಲ್ ಅನ್ನು ಎಲ್ಲಾ ಶಾಲೆಗಳಲ್ಲಿ ನಿಷೇಧ ಮಾಡಲಾಗಿತ್ತು. ಆದರೆ, ಕೊರೊನಾ ಮಹಾಮಾರಿಯಿಂದ ಮಕ್ಕಳು ಶಾಲೆಗೆ ತೆರಳದಂತಾಗಿ ಮೊಬೈಲ್‌ನಲ್ಲಿ ಪಾಠ ಮಾಡುವ ಕ್ರಮ ಆರಂಭವಾಯಿತು ಎಂದರು.

ಕಾಲಕ್ರಮೇಣ ಕೊರೊನಾ ಕ್ಷೀಣಿಸಿದ್ದರು. ಪೋಷಕರು ಮಕ್ಕಳಿಂದ ಮೊಬೈಲ್ ದೂರ ಮಾಡುತ್ತಿಲ್ಲ. ಓದುವುದಕ್ಕೆ ಹೆಚ್ಚು ಒತ್ತಡ ಹಾಕುತ್ತಿದ್ದು, ಒಂದು ಕೊಠಡಿಯಲ್ಲಿ ಅವನ್ನು ಕೂಡಿ ಹಾಕುತ್ತಿದ್ದಾರೆ. ಇದರಿಂದ ಅವರು ಯಾರ ಸಂಪರ್ಕವಿಲ್ಲದೆ ಬೆಳೆಯುತ್ತಿದ್ದಾರೆ. ಈ ರೀತಿಯ ಶಿಬಿರಗಳಲ್ಲಿ ಮಕ್ಕಳು ತೊಡಗಿಕೊಳ್ಳುವುದರಿಂದ ಅವರಲ್ಲಿ ನಾಟಕ, ಸಂಗೀತ ಸೇರಿದಂತೆ ಇತರ ಕಲೆಗಳ ಬಗ್ಗೆ ಪರಿಚಯವಾಗುತ್ತದೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ನಿವೃತ್ತ ಉಪನಿರ್ದೇಶಕಿ ಮಂಜುಳಾ ಮಿರ್ಲೆ ಮಾತನಾಡಿ, ರಂಗಭೂಮಿಯಿಂದ ಮಕ್ಕಳಲ್ಲಿ ಧೈರ್ಯ, ಸಹಕಾರ ಮನೋಭಾವದ ಹಾಗೂ ಮನರಂಜನೆ ಜೊತೆಗೆ ಸಮಾಜದ ಮೌಲ್ಯಗಳನ್ನು ಕಲಿಸುತ್ತದೆ ಎಂದರು. ನಂತರ ಉಮಾಶ್ರೀ ಮಧು ಮಳವಳ್ಳಿ ಅವರ ನಿರ್ದೇಶನದ 'ಗುಡ್ಡದಿಲಿಗಳ ಕತೆ' ನಾಟಕವನ್ನು ಮಕ್ಕಳು ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಅದಮ್ಯ ರಂಗಶಾಲೆ ಗೌರವ ಕಾರ್ಯದರ್ಶಿ ಟಿ.ಸತೀಶ್ ಜವರೇಗೌಡ, ಕಾರ್ಯದರ್ಶಿ ಚಂದ್ರುಗೌಡ ಹಾಗೂ ಪೋಷಕರು ಇದ್ದರು.

ದೆಹಲಿಯಲ್ಲಿ ಜೆಪಿ ನಡ್ಡಾ ಭೇಟಿ ಮಾಡಿದ ಜಗದೀಶ್ ಶೆಟ್ಟರ್

ನವದೆಹಲಿ: ಮೇ 10 ರಂದು ನಡೆಯಲಿರುವ ವಿಧಾನ ಸಭಾ ಚುನಾವಣೆಯಲ್ಲಿ ತಮ್ಮನ್ನು ಕಣಕ್ಕಿಳಿಸದಿರುವ ಪಕ್ಷದ ನಿರ್ಧಾರದ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಜಗದೀಶ್ ಶೆಟ್ಟರ್ ಅವರು ಬುಧವಾರ ಪಕ್ಷದ ಅಧ್ಯಕ್ಷ ಜೆಪಿ ನಡ್ಡಾ ಅವರನ್ನು ಭೇಟಿ ಮಾಡಿದ್ದಾರೆ.

ಟಿಕೆಟ್ ಕೈತಪ್ಪುವ ಸಾಧ್ಯತೆ ಹಿನ್ನೆಲೆಯಲ್ಲಿ ಜಗದೀಶ್ ಶೆಟ್ಟರ್ ಅವರು ಇಂದು ದಿಢೀರ್ ದೆಹಲಿಗೆ ತೆರಳಿದ್ದು, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರೊಂದಿಗೆ ಜೆಪಿ ನಡ್ಡಾ ಅವರನ್ನು ಅವರ ನಿವಾಸದಲ್ಲಿ ಭೇಟಿ ಮಾಡಿದ್ದಾರೆ.

ನಡ್ಡಾ ಭೇಟಿ ಬಳಿಕ ಮಾತನಾಡಿದ ಶೆಟ್ಟರ್, ಜೆಪಿ ನಡ್ಡಾ ಅವರೊಂದಿಗೆ ನನ್ನ ಭಾವನೆ ಹಂಚಿಕೊಂಡಿದ್ದೇನೆ. ಅವರು ಎಲ್ಲವನ್ನೂ ಆಲಿಸಿದ್ದಾರೆ. ಕಳೆದ ಚುನಾವಣೆಯಲ್ಲಿ ಸ್ಪರ್ಧಿಸಿದ್ದು, ಈ ಬಾರಿಯೂ ಚುನಾವಣೆಗೆ ಸ್ಪರ್ಧಿಸಬೇಕು ಎಂಬುದು ನನ್ನ ಆಶಯ ಎಂದಿದ್ದಾರೆ.

ಹುಬ್ಬಳ್ಳಿ–ಧಾರವಾಡ ಸೆಂಟ್ರಲ್‌ನ ಹಾಲಿ ಶಾಸಕರಾಗಿರುವ ಶೆಟ್ಟರ್ ಅವರಿಗೆ ನಿನ್ನೆ ಕರೆ ಮಾಡಿದ್ದ ಬಿಜೆಪಿ ವರಿಷ್ಠರು, ಚುನಾವಣೆಗೆ ನೀವು ಸ್ಪರ್ಧಿಸಬೇಡಿ. ಬೇರೆಯವರಿಗೆ ಅವಕಾಶ ನೀಡುವಂತೆ ಸಲಹೆ ನೀಡಿದ್ದರು. ಇದಕ್ಕೆ ಒಪ್ಪದ ಶೆಟ್ಟರ್ ಅವರು, ಮತ್ತೊಮ್ಮೆ ಚುನಾವಣೆಗೆ ಸ್ಪರ್ಧಿಸಲು ಅವಕಾಶ ನೀಡುವಂತೆ ಮನವಿ ಮಾಡಿದ್ದರು. ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಅದರಲ್ಲಿ ಶೆಟ್ಟರ್‌ಗೆ ಟಿಕೆಟ್ ಘೋಷಿಸಿಲ್ಲ.

ರಾಜ್ಯದಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ

ಬೆಂಗಳೂರು, ಏ.12 (ಕೆಎಂಶಿ)– ರಾಜ್ಯದ 189 ಕ್ಷೇತ್ರಗಳಿಗೆ ಅಭ್ಯರ್ಥಿಗಳ



ಘೋಷಣೆಯಾಗಿದ್ದು, ಈ ಎಲ್ಲರೂ ಆಯ್ಕೆಯಾಗಿ ಬಿಜೆಪಿ ಅಧಿಕಾರಕ್ಕೆ ಬರುವ ವಿಶ್ವಾಸವಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಇಂದಿಲ್ಲಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಹುತೇಕ ಎಲ್ಲ ಕ್ಷೇತ್ರಗಳಲ್ಲಿ ಒಮ್ಮತದ ಸ್ವಾಗತ ದೊರೆತಿದೆ. ಕೆಲವು ಅಸಮಧಾನಿತರ ಜೊತೆ ಮಾತುಕತೆ ನಡೆದಿದೆ. ಲಕ್ಷ್ಮಣ ಸವದಿ ಅವರೊಂದಿಗೆ ಮಾತಾಡಿದ್ದು, ಯಾವುದೇ ದುಡುಕಿನ ನಿರ್ಧಾರ ಕೈಗೊಳ್ಳಬಾರದು ಎಂದು ತಿಳಿಸಿರುವುದಾಗಿ ಹೇಳಿದರು. ಸವದಿ ಜೊತೆ ಭಾವನಾತ್ಮಕವಾದ ಸಂಬಂಧ ಇದೆ. ಅವರ ಜೊತೆ ನಿರಂತರವಾಗಿ ಸಂಪರ್ಕದಲ್ಲಿದ್ದು, ಅವರು ಕಷ್ಟದಲ್ಲಿದ್ದಾಗ ಪಕ್ಷ ಕೈ ಹಿಡಿದಿದೆ. ಮುಂದೆಯೂ ಅವರ ಕೈ ಹಿಡಿಯುತ್ತದೆ. ಅವರ ಗೌರವ ಕಾಪಾಡಲು ಒಳ್ಳೆಯ ನಿರ್ಧಾರ ಮಾಡಲಾಗುತ್ತದೆ. ಅವರಿಗೆ ಮುಂದೆ ಒಳ್ಳೆಯ ಭವಿಷ್ಯ ಇದೆ ಎಂದರು.

ಬೊಮ್ಮಾಯಿ ಅವರು ಕಾಂಗ್ರೆಸ್‌ಗೆ ಸೇರುತ್ತಿದ್ದರು ಎಂಬ ಸವದಿ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ಈ ವಿಚಾರ ಅಪ್ರಸ್ತುತ. ನಾನು ನನ್ನ ಮನೆಯಲ್ಲಿ ಮಾತ್ರ ಕೂತಿದ್ದೆ. ನಾನು ಯಾವ ಪಕ್ಷಕ್ಕೂ ಹೋಗಿರಲಿಲ್ಲ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಅನಂತಕುಮಾರ್, ಸಿ.ಸಿ.ಪಾಟೀಲ್, ಸವದಿ ಬಂದಿದ್ದು ನಿಜ. ಆದರೆ ಕಾಂಗ್ರೆಸ್‌ಗೆ ನಾನು ಹೋಗುತ್ತಿರಲಿಲ್ಲ. ಮಹತ್ವಾಕಾಂಕ್ಷೆಗಳು ಇರಲಿಲ್ಲ ಎಂದರು.

ಕನಕಪುರ, ವರುಣಾಗೆ ಸಂತೋಷ್, ಪ್ರಹ್ಲಾದ್ ಜೋಷಿಗೆ ಆಹ್ವಾನ!!

ಬೆಂಗಳೂರು, ಏ.12(ಕೆಎಂಶಿ)–ಕನಕಪುರ ಹಾಗೂ ವರುಣಾ ಕ್ಷೇತ್ರದಲ್ಲಿ ಬಿ.ಎಲ್. ಸಂತೋಷ್ ಹಾಗೂ ಪ್ರಹ್ಲಾದ್ ಜೋಶಿ ಅವರನ್ನು ಸ್ಪರ್ಧೆಗೆ ಆಹ್ವಾನಿಸುತ್ತೇವೆ. ಪಂಥಾಹ್ವಾನ ಸ್ವೀಕರಿಸುವರೇ ಎಂದು ಕಾಂಗ್ರೆಸ್ ವ್ಯಂಗ್ಯವಾಗಿ ಟೀಕಿಸಿದೆ. ಬಿಜೆಪಿ ಟಿಕೆಟ್ ಹಂಚಿಕೆ ವಿಚಾರ ಪ್ರಸ್ತಾಪಿಸಿ ಟ್ವೀಟ್ ಮಾಡಿರುವ ಕಾಂಗ್ರೆಸ್, ನಾಗಪುರದ ವಂಶದವರು ಇತರರನ್ನು ಹೊಂಡಕ್ಕೆ ತಳ್ಳಿ, ಆಳ ನೋಡುವ ಬದಲು ತಾವೇ ಮುಂದೆ ನಿಂತು ಸಾಮರ್ಥ್ಯ ತೋರಲಿ ಎಂದಿದೆ. ಬಿ.ಎಲ್ ಸಂತೋಷ್ ತೆರೆಮರೆಯಿಂದ ಹೊರಬಂದು ಚುನಾವಣೆಗೆ ಸ್ಪರ್ಧಿಸಿ ಸಾಮರ್ಥ್ಯ ನಿರೂಪಿಸಲಿ ಎಂದು ತಿಳಿಸಿದೆ. ಚಿತ್ತಾಪುರ ಕ್ಷೇತ್ರದಲ್ಲಿ ಬಿಜೆಪಿ ಸರ್ಕಾರದಲ್ಲೇ ಗಡಿಪಾರು ಆಗಿದ್ದ, ಅನ್ನಭಾಗ್ಯದ ಅಕ್ಕಿ ಕಳ್ಳಸಾಗಣೆಯ ಆರೋಪಿ, ರೌಡಿ ಶೀಟರ್ ಮಣಿಕಂಠ ರಾಠೋಡ್‌ಗೆ ಟಿಕೆಟ್ ಕೊಡುವ ಮೂಲಕ ಬಿಜೆಪಿ ರೌಡಿ ಮೋರ್ಚಾಕ್ಕೂ ಮನ್ನಣೆ ನೀಡಿದೆ. ಬಿಜೆಪಿಯ ಟಿಕೆಟ್‌ಗೆ 'ಗಡಿಪಾರು' ಆಗಿರುವುದೇ ಬಹುಮುಖ್ಯ ಮಾನದಂಡ ಎಂಬುದನ್ನು ದೆಹಲಿನಿಂದ ಇಲ್ಲಿಯವರೆಗೆ ನಿರೂಪಿಸಿದೆ ಎಂದು ಕುಟುಕಿದೆ.

ಕಾಂಗ್ರೆಸ್ ವ್ಯಂಗ್ಯ

ಸಿದ್ಧ ಸಮಾಧಿ ಯೋಗ: ಉಚಿತ ಪರಿಚಯ ಕಾರ್ಯಕ್ರಮ

ಮೈಸೂರು,ಏ.12–ಮೈಸೂರಿನ ಋಷಿ ಸಂಸ್ಕೃತಿ ವಿದ್ಯಾಕೇಂದ್ರದಲ್ಲಿ ಏ. 16ರಂದು ಸಂಜೆ 6.30ಕ್ಕೆ ಸಿದ್ಧ ಸಮಾಧಿ ಯೋಗದ ಬಗ್ಗೆ ಉಚಿತ ಪರಿಚಯ ಕಾರ್ಯಕ್ರಮ ಏರ್ಪಡಿಸಲಾಗಿದೆ. ಏ.17ರಿಂದ 14 ದಿನಗಳ ಸಿದ್ಧ ಸಮಾಧಿ ಯೋಗ ಶಿಬಿರ ಆರಂಭವಾಗಲಿದೆ. ಮಾಹಿತಿಗೆ ಮೊ. 9448458050, 8618762110.